ಸಂಪುಟ: 22, ಸಂಚಿಕೆ: 179, ಪುಟಗಳು: 8, ಬುಧವಾರ, 9 ಏಪ್ರಿಲ್ 2025 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...




**ಸುಭಾಷಿತ**

ಜಗಳ ಮಾಡಲು ಬಂದವನ ಎದುರು ಮೌನವಾಗು. ಅದು ಜಗಳದ ಬಾಗಿಲನ್ನು ಮುಚ್ಚುತ್ತದೆ.

। ಎ.ಆರ್.ಕೃಷ್ಣ ಶಾಸ್ತ್ರಿ

**ಪಂಚಾಂಗ**

(ಬುಧವಾರ 9 ಏಪ್ರಿಲ್-2025)

- ಶ್ರೀ ವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ವಸಂತ ಋತು
- ಚೈತ್ರ ಮಾಸ, ಶುಕ್ಲ ಪಕ್ಷ
- ತಿಥಿ: ತೃತೀಯ
- ನಕ್ಷತ್ರ: ಪುಷ್ಯ
- ರಾಹುಕಾಲ: 12 : 27 PM 01 : 53 PM
- ಗುಳಿಕಕಾಲ: 11 : 01 AM 12 : 27 PM
- ಯಮಗಂಡಕಾಲ : 08 : 10 AM 09 : 36 AM

## ಸಂಕ್ಷಿಪ್ತ ಸುದ್ದಿ

### ರೈಲ್ವೆ ಹಳಿ ಮೇಲೆ ಮಲಗಿ ರೀಲ್ಸ್ ಮಾಡಲು ಹೋದ ಯುವಕ



**ಉತ್ತರ ಪ್ರದೇಶ:** ಈಗಿನ ಯುವಕ ಯುವತಿಯರಲ್ಲಿ ರೀಲ್ಸ್ ಕ್ರೇಜ್ ಹೆಚ್ಚಾಗಿದೆ. ಸೋಷಿಯಲ್ ಮೀಡಿಯಾದಲ್ಲಿ ಫೇಮಸ್ ಆಗುವ ಸಲುವಾಗಿ ರೀಲ್ಸ್ ಮಾಡಿ ನಾನಾ ರೀತಿಯ ಸಾಹಸಗಳನ್ನು ಮಾಡುತ್ತಿರುತ್ತಾರೆ. ಇದೀಗ ಇಲ್ಲೊಬ್ಬ ಯುವಕನು ರೀಲ್ಸ್ ಕ್ರೇಜ್ ಗೆ ಬಿದ್ದು ಎದುರಿಗೆ ರೈಲು ಬರುತ್ತಿದ್ದರೂ ರೈಲ್ವೆ ಹಳಿ ಮೇಲೆ ಮಲಗಿ ರೀಲ್ಸ್ ಮಾಡಿದ್ದು ಪ್ರಾಣಾಪಯದಿಂದ ಪಾರಾಗಿದ್ದಾನೆ. ಈ ಘಟನೆಯೂ ಉತ್ತರ ಪ್ರದೇಶದ ಉನ್ನಾವೋ ಜಿಲ್ಲೆಯ ಕುಸುಂಬಿ ರೈಲ್ವೆ ನಿಲ್ದಾಣ ದಲ್ಲಿ ನಡೆದಿದೆ. ಸೋಶಿಯಲ್ ಮೀಡಿಯಾದಲ್ಲಿ ಈ ವಿಡಿಯೋ ಸಿಕ್ಕಾಪಟ್ಟೆ ವೈರಲ್ ಆಗುತ್ತಿದ್ದಂತೆ ನೆಟ್ಟಿಗರು ತರಾಟೆಗೆ ತೆಗೆದುಕೊಂಡಿದ್ದಾರೆ. ಏಪ್ರಿಲ್ 7 ರಂದು sachin gupta ಹೆಸರಿನ ಖಾತೆಯಲ್ಲಿ ಈ ವಿಡಿಯೋವನ್ನು ಶೇರ್ ಮಾಡಿಕೊಳ್ಳಲಾಗಿದೆ. ಪುಟ 2

### ಬೇರೆ ಬೇರೆ ಧರ್ಮ ಎಂದು ಮದುವೆಗೆ ನಿರಾಕರಣೆ



**ಉತ್ತರ ಪ್ರದೇಶ:** ಬೇರೆ ಬೇರೆ ಧರ್ಮದವರೆಂದು ಇಬ್ಬರ ಮದುವೆಗೆ ಎರಡೂ ಕುಟುಂಬಗಳು ನಿರಾಕರಿಸಿದ್ದಕ್ಕೆ ಯುವಕ ಪ್ರೇಯಸಿಯ ದುಪಟ್ಟಾದಲ್ಲೇ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ.

» **ಪ್ರೇಯಸಿಯ ದುಪಟ್ಟಾದಲ್ಲೇ ನೇಣುಬಿಗಿದುಕೊಂಡು ಯುವಕ ಆತ್ಮಹತ್ಯೆ**

ಕುರ್ದಿಖೇಡ ಗ್ರಾಮದ ಕಾಡಿನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಮೃತನನ್ನು ಸಮ್ರೇಜ್ ಎಂದು ಗುರುತಿಸಲಾಗಿದೆ. ಈತ ಹಮೀದ್ ಅಲಿಯಾಸ್ ಭೂರಾ ಎಂಬವರ ಪುತ್ರನಾಗಿದ್ದು, ಈತ ಮುಸ್ಲಿಂ ಸಮುದಾಯಕ್ಕೆ ಸೇರಿದವನಾಗಿದ್ದು, ಸ್ಥಳೀಯ ನಿವಾಸಿಯಾಗಿದ್ದಾನೆ. ಸಮ್ರೇಜ್ ಮೃತದೇಹ ಮರದಲ್ಲಿ ನೇತಾಡುತ್ತಿತ್ತು. ಈ ಘಟನೆ ಸುತ್ತ ವಿಡಿಯೋವೊಂದು ಪುಟ 2

## ಯಾಸಿನ್ ಭಟ್ಕಳ್ ಸೇರಿ ಐವರ ಮರಣದಂಡನೆ ಶಿಕ್ಷೆ ಎತ್ತಿಹಿಡಿದ ಹೈಕೋರ್ಟ್



**ತೆಲಂಗಾಣ:** ಹೈದರಾಬಾದ್ ನಲ್ಲಿ 2013ರಲ್ಲಿ ನಡೆದ ಬಾಂಬ್ ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾಸಿನ್ ಭಟ್ಕಳ್ ಸೇರಿ ಐವರು ಅಪರಾಧಿಗಳಿಗೆ ನೀಡಿದ್ದ ಮರಣದಂಡನೆಯ ಶಿಕ್ಷೆಯನ್ನು ತೆಲಂಗಾಣ ಹೈಕೋರ್ಟ್ ಎತ್ತಿಹಿಡಿದಿದೆ. ನಿಷೇಧಿತ ಭಯೋತ್ಪಾದಕ ಸಂಘಟನೆ ಇಂಡಿಯನ್ ಮುಜಾಹಿದ್ದೀನ್‌ನ ಐವರು ಭಯೋತ್ಪಾದಕರ ಮರಣದಂಡನೆ ಶಿಕ್ಷೆಯನ್ನು ತೆಲಂಗಾಣ ಹೈಕೋರ್ಟ್ ಮಂಗಳವಾರ ಎತ್ತಿಹಿಡಿದಿದೆ. ಈ ಭಯೋತ್ಪಾದಕರು 2013 ರ ಹೈದರಾಬಾದ್ ಬಾಂಬ್ ಸ್ಫೋಟ ಪ್ರಕರಣದಲ್ಲಿ ಭಾಗಿಯಾಗಿದ್ದರು, ಇದರಲ್ಲಿ 18 ಜನರು ಸಾವನ್ನಪ್ಪಿದ್ದರು ಮತ್ತು 131 ಜನರು ಗಾಯಗೊಂಡಿದ್ದರು.

ನ್ಯಾಯಮೂರ್ತಿಗಳಾದ ಲಕ್ಷ್ಮಣ್ ಮತ್ತು ಪಿ. ಶ್ರೀ ಸುಧಾ ಅವರ ಪೀಠವು, ಐಎಂ ಭಯೋತ್ಪಾದಕರು ಸಲ್ಲಿಸಿದ್ದ ಕ್ರಿಮಿನಲ್ ಪರಿಷ್ಕರಣಾ ಮೇಲ್ಮನವಿಯನ್ನು ವಜಾಗೊಳಿಸಿ, ಎನ್‌ಐಎ ನ್ಯಾಯಾಲಯದ ತೀರ್ಪನ್ನು ಎತ್ತಿಹಿಡಿದಿದೆ. ವಿಚಾರಣಾ ನ್ಯಾಯಾಲಯ ವಿಧಿಸಿದ ಶಿಕ್ಷೆಯನ್ನು ದೃಢಪಡಿಸಲಾಗಿದೆ ಎಂದು ಪೀಠ ಹೇಳಿದೆ.

ಇದಕ್ಕೂ ಮೊದಲು ಡಿಸೆಂಬರ್ 13, 2016 ರಂದು ಐಎಂ ಸಹ ಸಂಸ್ಥಾಪಕ ಮೊಹಮ್ಮದ್ ಅಹ್ಮದ್ ಸಿದ್ದಿಬಾಪಾ ಅಲಿಯಾಸ್ ಯಾಸಿನ್ ಭಟ್ಕಳ್, ಪಾಕಿಸ್ತಾನಿ ಪ್ರಜೆ ಜಿಯಾ-ಉರ್-ರೆಹಮಾನ್ ಅಲಿಯಾಸ್ ವಕಾಸ್, ಅಸಾದುಲ್ಲಾ ಅಖ್ತರ್ ಅಲಿಯಾಸ್ ಮೊನ್ಹಾ ಹದ್ದಿ ಸೇರಿದಂತೆ ಐವರು ಸದಸ್ಯರನ್ನು ಎನ್‌ಐಎ ನ್ಯಾಯಾಲಯ ದೋಷಿ ಎಂದು ಘೋಷಿಸಿತ್ತು.

ಶೇಖ್ ಫೆಬ್ರವರಿ 21, 2013 ರಂದು ನಗರದ ಜನದಟ್ಟಣೆಯ ಶಾಪಿಂಗ್ ಪ್ರದೇಶವಾದ ದಿಲ್‌ಸುಖ್‌ನಗರದಲ್ಲಿ ಎರಡು ಮಾರಕ ಸ್ಫೋಟಗಳು ಸಂಭವಿಸಿದವು. ಆರೋಪಿಗಳಲ್ಲಿ ಒಬ್ಬರ ವಕೀಲರು ವರದಿಗಾರರಿಗೆ ತಿಳಿಸಿದ್ದು, ತೀರ್ಪಿನ ವಿರುದ್ಧ ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸುವುದಾಗಿ ತಿಳಿಸಿದ್ದಾರೆ.

ಘಟನೆ ಏನು ಫೆಬ್ರವರಿ 21, 2013 ರಂದು ನಗರದ ಜನದಟ್ಟಣೆಯ ಶಾಪಿಂಗ್ ಪ್ರದೇಶವಾದ ದಿಲ್‌ಸುಖ್‌ನಗರದಲ್ಲಿ ಎರಡು ಮಾರಕ ಸ್ಫೋಟಗಳು ಸಂಭವಿಸಿದ್ದವು. ಪುಟ 2

# ರಾಜ್ಯದಲ್ಲಿ ಬೆಲೆ ಏರಿಕೆ ಕಾಲ

## ಏಕಾಏಕಿ ಮಕ್ಕಳ ಶಾಲಾ ಫೀಸ್‌ನಲ್ಲಿ ಶೇ. 50ರಷ್ಟು ಏರಿಕೆ

**ದೇವನಹಳ್ಳಿ:** ಕರ್ನಾಟಕದಲ್ಲಿ ಈಗಾಗಲೇ ಅಗತ್ಯ ದಿನ ಬಳಕೆಯ ವಸ್ತುಗಳಾದ ಹಾಲು, ಗ್ಯಾಸ್, ಪೆಟ್ರೋಲ್, ಡಿಸೇಲ್ ಸೇರಿದಂತೆ ವಿವಿಧ ಸರಕು ಮತ್ತು ಸೇವೆಗಳ ದರ ಏರಿಕೆ ಮಾಡಲಾಗಿದೆ. ಈ ಬೆಲೆ ಏರಿಕೆಯಿಂದ ಕಂಗಲಾಗಿರುವ ಜನರಿಗೆ ಇದೀಗ ಮತ್ತೊಂದು ಶಾಕ್ ಎದುರಾಗಿದೆ. ತಮ್ಮ ಮಕ್ಕಳನ್ನ ಖಾಸಗಿ ಶಾಲೆಗೆ ಸೇರಿಸಿರುವ ಪೋಷಕರಿಗೆ ಏಕಾಏಕಿ ಸಾವಿರಾರು ರೂ ಶುಲ್ಕ ಹೆಚ್ಚಳ ಮಾಡಲಾಗಿದ್ದು, ಕೆಲ ಖಾಸಗಿ ಶಾಲೆಗಳ ವಿರುದ್ಧ ಪೋಷಕರು ಆಕ್ರೋಶ ಹೊರ ಹಾಕಿದ್ದಾರೆ.

**ಏಕಾಏಕಿ ಫೀಸ್ ಹೆಚ್ಚಳ: ಶಾಲೆಗೆ ಮುತ್ತಿಗೆ ಹಾಕಿದ ಪೋಷಕರು:** ಖಾಸಗಿ ಶಾಲೆಯಲ್ಲಿ ಏಕಾಏಕಿ ಶುಲ್ಕ ಹೆಚ್ಚಳದಿಂದ ಆಕ್ರೋಶಗೊಂಡ ಪೋಷಕರು ಬೆಂಗಳೂರು ಉತ್ತರ ತಾಲೂಕಿನ ಹೊಸಹಳ್ಳಿ ಗ್ರಾಮದ ಎಂವಿಎಂ ಶಾಲೆಗೆ ಮುತ್ತಿಗೆ ಹಾಕಿ ಆಡಳಿತ ಮಂಡಳಿಯನ್ನು ತರಾಟೆಗೆ ತೆಗೆದುಕೊಂಡಿರುವಂತಹ ಘಟನೆ ನಡೆದಿದೆ. ಅಂದಹಾಗೆ ಎಂವಿಎಂ ಶಾಲೆಯಲ್ಲಿ ಸುಮಾರು 850 ಕ್ಕೂ ಹೆಚ್ಚು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದು, ಕಳೆದ ಭಾರಿಗಿಂತ ಈ ಭಾರಿ ಶಾಲೆಯ ಫೀಸ್ ಹೆಚ್ಚಳ ಮಾಡಿದ್ದಾರಂತೆ.



ಹಳೆಯ ಮಕ್ಕಳ ಶಾಲಾ ಶುಲ್ಕದ ಮೇಲೆ ಶೇ 50 ರಷ್ಟು ಶುಲ್ಕವನ್ನ ಹೆಚ್ಚಳ ಮಾಡಲಾಗಿದ್ದು, ಈಗಾಗಲೇ ಬೆಲೆ ಏರಿಕೆಯಿಂದ ಕಂಗೆಟ್ಟಿರುವ ನಮಗೆ ಶಾಲಾ ಆಡಳಿತ ಮಂಡಳಿ ಫೀಸ್ ಹೆಚ್ಚಳ ಮಾಡಿದ್ದಾರೆ ಅಂತ ಶಾಲೆ ವಿರುದ್ಧ ಕಿಡಿಕಾರಿದ್ದಾರೆ. ಅಲ್ಲದೆ ಶಾಲೆಯ ಬಳಿ ಜಮಾಯಿಸಿದ್ದ ಪೋಷಕರು ಏಕಾಏಕಿ ಫೀಸ್ 20 ರಿಂದ 25 ಸಾವಿರ ರೂ ಹೆಚ್ಚಳ ಮಾಡಿರುವುದನ್ನ ಖಂಡಿಸಿ ಆಡಳಿತ ಮಂಡಳಿ ವಿರುದ್ಧ ಗರಂ ಆದರು. ಈ ವೇಳೆ ಶಾಲಾ ಆಡಳಿತ ಮಂಡಳಿ ಹಾಗೂ ಪೋಷಕರ ನಡುವೆ ಮಾತಿನ ಚಕಮಕಿ ಉಂಟಾಗಿದೆ. ಪುಟ 2

## ಆನ್‌ಲೈನ್ ಬೆಟ್ಟಿಂಗ್ ಗೇಮಿಂಗ್ ಆ್ಯಪ್‌ಗೆ ಕಡಿವಾಣ

**ಬೆಂಗಳೂರು:** ಆನ್ ಲೈನ್ ಗೇಮಿಂಗ್ ಮತ್ತು ಬೆಟ್ಟಿಂಗ್ ಕೇವಲ ನಗರ ಪ್ರದೇಶದಲ್ಲಿ ಮಾತ್ರವಲ್ಲ, ಗ್ರಾಮೀಣ ಪ್ರದೇಶದಲ್ಲೂ ಹರಡಿಕೊಳ್ಳುತ್ತಿದೆ. ಹೀಗಾಗಿ ಈ ಆ ಯಪ್ ಗಳಿಗೆ ಶೀಘ್ರದಲ್ಲೇ ಹೊಸ ಮಾನದಂಡ ತರಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಆನ್ ಲೈನ್ ಗೇಮಿಂಗ್ ಮತ್ತು ಬೆಟ್ಟಿಂಗ್‌ಗೆ ಕಡಿವಾಣ ಹಾಕಲು ಹೊಸ ಕಾನೂನು ತರುವ ಬಗ್ಗೆ ಚರ್ಚೆ ನಡೆದಿದೆ. ಇವುಗಳಿಂದ ದುರಾಸೆಗೆ ಬೀಳದಂತೆ ನಮ್ಮ ಜನರನ್ನು ಹೇಗೆ ಸಂರಕ್ಷಣೆ ಮಾಡಬೇಕು ಎಂಬುವುದರ ಬಗ್ಗೆ ಸಭೆ ನಡೆಸಿದ್ದೇವೆ ಎಂದು ಹೇಳಿದ್ದಾರೆ.

ಈಗಾಗಲೇ ಕಾಯ್ದೆಗಳು ಇವೆ. ಆದರೆ



ಕಾಯ್ದೆಗಳನ್ನ ಸಮರ್ಪಕವಾಗಿ ಜಾರಿ ಮಾಡಬೇಕು ಮತ್ತು ಹೆಚ್ಚುವರಿ ಕಾಯ್ದೆಗಳನ್ನ ಸೇರಿಸುವ ಬಗ್ಗೆ ಚರ್ಚೆ ನಡೆದಿದೆ. ಪುಟ 2

## ಪ್ರವಾಸ ಹೋಗೋ ಮುನ್ನ ಎಚ್ಚರ

### ಪೊಲೀಸರ ಈ ಸಲಹೆ ಸೂಚನೆಗಳನ್ನು ಗಮನಿಸಿ

**ಬೆಂಗಳೂರು:** ಬೇಸಗೆ ರಜೆಯ ಸಂದರ್ಭದಲ್ಲಿ ಬೆಂಗಳೂರು ನಿವಾಸಿಗಳು ಮನೆಯ ಭದ್ರತೆ ಬಗ್ಗೆ ಸಾಕಷ್ಟು ಎಚ್ಚರದಿಂದ ಇರಬೇಕು ಎಂದು ಬೆಂಗಳೂರು ಪೊಲೀಸ್ ಆಯುಕ್ತ ಬಿ ದಯಾನಂದ್ ಸಲಹೆ ನೀಡಿದ್ದಾರೆ. ನಗರದಲ್ಲಿ ಇತ್ತೀಚೆಗೆ ನಡೆದ ಅಪರಾಧ ಕೃತ್ಯಗಳ ಮತ್ತು ಕಳ್ಳತನ ಪ್ರಕರಣಗಳ ಬಗ್ಗೆ ಪತ್ರಿಕಾಗೋಷ್ಠಿ ಮೂಲಕ ಮಾಹಿತಿ ನೀಡಿದ ಅವರು, ಸಾರ್ವಜನಿಕರು ಏನೇನು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಬಗ್ಗೆ ಸಲಹೆಯನ್ನೂ ನೀಡಿದ್ದಾರೆ. ವಿಶೇಷವಾಗಿ, ಮನೆಗೆ ಬೀಗ ಹಾಕಿ ಊರಿಗೆ ಅಥವಾ ಪ್ರವಾಸಕ್ಕೆ ತೆರಳುವ ಮುನ್ನ ಬೆಂಗಳೂರು ನಿವಾಸಿಗಳು ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಅವರು ಸೂಚನೆ ನೀಡಿದ್ದಾರೆ.

ದೀರ್ಘ ಅವಧಿಗೆ ಪ್ರವಾಸ ತೆರಳುವ ಸಂದರ್ಭದಲ್ಲಿ ಮನೆಯಲ್ಲಿ ಬೆಲೆಬಾಳುವ ವಸ್ತುಗಳನ್ನು ಇಡಬೇಡಿ. ಅವುಗಳನ್ನು ಬ್ಯಾಂಕಿನಲ್ಲಿ ಅಥವಾ ಲಾಕರ್‌ಗಳಲ್ಲಿ ಇಡುವುದು ಸೂಕ್ತ ಎಂದು ಅವರ ಸಲಹೆ ನೀಡಿದ್ದಾರೆ.



**ಹೆಚ್ಚು ದಿನ ಪ್ರವಾಸ ಹೋಗುವುದಿದ್ದರೆ ಪೊಲೀಸರಿಗೆ ಮಾಹಿತಿ ನೀಡಿ:** ಮನೆಗೆ ಗುಣಮಟ್ಟದ ಬೀಗ ಅಳವಡಿಸಬೇಕು. ಸಿಸಿಟಿವಿ ಕ್ಯಾಮೆರಾ ಅಳವಡಿಸಿಕೊಳ್ಳಿ. ಬೀಗದ ಕೀಯನ್ನು ಮನೆ ಪಕ್ಕದಲ್ಲಿ ಎಲ್ಲೋ ಇಟ್ಟು ಹೋಗುವ ಅಭ್ಯಾಸ ಮಾಡಬೇಡಿ. ಒಂದಕ್ಕಿಂತ ಹೆಚ್ಚು ದಿನ ಪ್ರವಾಸ ಹೋಗುವುದಿದ್ದರೆ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿ ತೆರಳಿ. ಇಂಥ ಸಂದರ್ಭದಲ್ಲಿ ಆ ಪ್ರದೇಶದಲ್ಲಿ ಗಸ್ತು ನಡೆಸುವುದು ಪೊಲೀಸರಿಗೂ ಸುಲಭವಾಗುತ್ತದೆ ಎಂದು ದಯಾನಂದ್ ಹೇಳಿದ್ದಾರೆ.

ಕಷ್ಟಪಟ್ಟು ಸಂಪಾದಿಸಿದ ಹಣ, ಚಿನ್ನವನ್ನು ಒಂದು ಸಣ್ಣ ಅಜಾಗರೂಕತೆಯಿಂದ ಕಳೆದುಕೊಳ್ಳಬೇಡಿ. ಕಳ್ಳರು ಕೇವಲ ಹೊರಗಿನಿಂದ ಬರುವವರಷ್ಟೇ ಅಲ್ಲ, ಮನೆಯಲ್ಲಿಯೂ ಇರಬಹುದು. ಹೀಗಾಗಿ ಮನೆ ಕೆಲಸದವರನ್ನು ನೇಮಿಸಿಕೊಳ್ಳುವ ಮುನ್ನ ಅವರ ಪೂರ್ವಾಪರವನ್ನು ಪುಟ 2

## ಬಳ್ಳಾರಿಯಲ್ಲಿ ಮತ್ತೊಂದು ಮನಿ ಡಬ್ಲಿಂಗ್ ಸ್ಕ್ಯಾಮ್ 50 ಕೋಟಿಗೂ ಹೆಚ್ಚು ವಂಚನೆ!

**ಬಳ್ಳಾರಿ:** ನಗದರಲ್ಲಿ ಮತ್ತೊಂದು ಮನಿ ಡಬ್ಲಿಂಗ್ ಸ್ಕ್ಯಾಮ್ ಪ್ರಕರಣ ಬೆಳಕಿಗೆ ಬಂದಿದೆ. ಅಮಾಯಕ ಜನರಿಂದ ಕೋಟ್ಯಂತರ ರೂ ಲೂಟಿ ಮಾಡಿ ಆರೋಪಿ ಪರಾರಿ ಆಗಿರುವಂತಹ ಘಟನೆ ನಗರದಲ್ಲಿ ನಡೆದಿದೆ. ವಿಶ್ವನಾಥ್ ಎಂಬಾತನಿಂದ ಜನರಿಗೆ ಮೋಸ ಮಾಡಲಾಗಿದೆ. ಕಡಿಮೆ ಹಣ ಕೊಟ್ಟವರಿಗೆ ಕಡಿಮೆ ಬಡ್ಡಿ ಮತ್ತು ಹೆಚ್ಚು ಹಣ ಕೊಟ್ಟವರಿಗೆ ಹೆಚ್ಚು ಬಡ್ಡಿ ಎಂದು ನಂಬಿಸಿ ಮೋಸ ಮಾಡಲಾಗಿದೆ. ಅಂದಾಜು 50 ಕೋಟಿಗೂ ಹೆಚ್ಚು ಹಣ ಪಡೆದು ವಂಚನೆ ಮಾಡಿರುವ ಆರೋಪ ಕೇಳಿಬಂದಿದೆ. ಸದ್ಯ ಬ್ರೂಸ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ನಮಗೆ ನ್ಯಾಯ ಕೊಡಿಸಿ ಎಂದು ಜನರು ಒತ್ತಾಯಿಸಿದ್ದಾರೆ. ಪುಟ 2

## ದ್ವಿತೀಯ ಪಿಯುಸಿ ಫಲಿತಾಂಶ ಐದು ಆತ್ಮಹತ್ಯೆ ಕೇಸ್

**ಬೆಂಗಳೂರು:** ಕರ್ನಾಟಕ ದ್ವಿತೀಯ ಪಿಯು ಪಿಯುಸಿ ಪರೀಕ್ಷೆ ಫಲಿತಾಂಶ ಮಂಗಳವಾರ ಪ್ರಕಟಗೊಂಡಿದ್ದು ಒಟ್ಟಾರೆಯಾಗಿ ಶೇಕಡ 73.45 ರಷ್ಟು ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಮತ್ತೊಂದೆಡೆ, ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಎರಡು ಹಾಗೂ ಮೂರನೆಯ ಪರೀಕ್ಷೆಗೆ ಶುಲ್ಕರಹಿತ



ವ್ಯವಸ್ಥೆ ಮಾಡಲಾಗುವುದು ಎಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಭರವಸೆ ನೀಡಿದ್ದಾರೆ. ಇಷ್ಟಾದರೂ, ಅನುತ್ತೀರ್ಣಗೊಂಡ ಹಾಗೂ ನಿರೀಕ್ಷಿಸಿದ ಅಂಕ ಬಂದಿಲ್ಲವೆಂದು ನೊಂದ ಐವರು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡ ಘಟನೆ ಹಲವು ಜಿಲ್ಲೆಗಳಲ್ಲಿ ನಡೆದಿದೆ.

ಒಟ್ಟಾರೆಯಾಗಿ, ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಫೇಲ್ ಆದ ಹಾಗೂ ಫೇಲ್ ಆಗುವ ಭಯದಲ್ಲಿ ಕರ್ನಾಟಕದಾದ್ಯಂತ ಐವರು ವಿದ್ಯಾರ್ಥಿನಿಯರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಮೈಸೂರು ಜಿಲ್ಲೆಯ ಒಂಟಿಕೊಪ್ಪಲ್ಲಿನ ಸರ್ಕಾರಿ ಕಾಲೇಜಿನ ವಿದ್ಯಾರ್ಥಿನಿ ಐಶ್ವರ್ಯಾ ಆತ್ಮಹತ್ಯೆಗೆ ಶರಣಾಗಿದ್ದಾರೆ.

## ಮುಂಬೈ ಉಗ್ರ ದಾಳಿಯ ಆರೋಪಿ ತಹವ್ವುರ್ ರಾಣಾ ಅಮೆರಿಕದಿಂದ ಭಾರತಕ್ಕೆ ಶೀಘ್ರ ಹಸ್ತಾಂತರ

**ವಾಷಿಂಗ್ಟನ್:** ಮುಂಬೈನಲ್ಲಿ 2008ರ ನವೆಂಬರ್ 26ರಂದು ನಡೆದ ಭಯೋತ್ಪಾದಕ ದಾಳಿಯ ಆರೋಪಿ ತಹವ್ವುರ್ ರಾಣಾ ನನ್ನು ಶೀಘ್ರದಲ್ಲೇ ಅಮೆರಿಕದಿಂದ ಭಾರತಕ್ಕೆ ಹಸ್ತಾಂತರ ಮಾಡಬಹುದು. ಭಾರತದ ತನಿಖಾ ಸಂಸ್ಥೆಗಳ ತಂಡ ಅಮೆರಿಕ ತಲುಪಿದೆ. ತಂಡವು ಅಮೆರಿಕದ ಅಧಿಕಾರಿಗಳೊಂದಿಗೆ ಎಲ್ಲಾ ದಾಖಲೆಗಳು ಮತ್ತು ಕಾನೂನು ಔಪಚಾರಿಕತೆಗಳನ್ನು ಪೂರ್ಣಗೊಳಿಸುವಲ್ಲಿ ನಿರತವಾಗಿದೆ. ಮೂಲಗಳ ಪ್ರಕಾರ, ತಹವ್ವುರ್ ರಾಣಾ ಅವರನ್ನು ಶೀಘ್ರದಲ್ಲೇ ಗಡಿಪಾರು ಮಾಡುವ ಸಾಧ್ಯತೆ ಹೆಚ್ಚು.

ರಾಣಾ ಬುಧವಾರ ಭಾರತಕ್ಕೆ ಬರುತ್ತಿಲ್ಲ ಮತ್ತು ಹಸ್ತಾಂತರ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿದುಬಂದಿದೆ. ಆತನ ಹಸ್ತಾಂತರಕ್ಕೆ ಸಂಬಂಧಿಸಿದ ಎಲ್ಲಾ ಕಾಗದಪತ್ರಗಳು ಅಮೆರಿಕದೊಂದಿಗೆ ಪೂರ್ಣಗೊಂಡಿವೆ. ಭಾರತೀಯ ಏಜೆನ್ಸಿಗಳು ಎಲ್ಲಾ ಅಗತ್ಯ ದಾಖಲೆಗಳನ್ನು ಅಮೆರಿಕದ ನ್ಯಾಯಾಲಯಕ್ಕೆ ಸಲ್ಲಿಸಿವೆ ಮತ್ತು ನ್ಯಾಯಾಲಯದಿಂದ ಅನುಮತಿಯನ್ನೂ ಪಡೆದಿವೆ.



ಅಮೆರಿಕ ಕೂಡ ಇದಕ್ಕೆ ಒಪ್ಪಿಗೆ ನೀಡಿದೆ. ಈಗ ಯಾವುದೇ ಸಮಯದಲ್ಲಿ ಭಯೋತ್ಪಾದಕ ತಹವ್ವುರ್ ರಾಣಾ ಭಾರತಕ್ಕೆ ಬರಬಹುದು. ರಾಣಾ ಭಾರತಕ್ಕೆ ಬಂದರೆ ಅವರನ್ನು ಎಲ್ಲಿ ಇಡಲಾಗುತ್ತದೆ ಇದಕ್ಕೆ ಎರಡು ಆಯ್ಕೆಗಳಿವೆ. ಮೊದಲನೆಯದು ದೆಹಲಿಯ ತಿಹಾರ್ ಜೈಲು ಮತ್ತು ಎರಡನೆಯದು ಮುಂಬೈನ ಆರ್ಥರ್ ರಸ್ತೆ ಜೈಲು. ಈ ಎರಡೂ ಸ್ಥಳಗಳಲ್ಲಿ ಸಿದ್ಧತೆಗಳು ಪೂರ್ಣಗೊಂಡಿವೆ.

ಅಂತಿಮ ನಿರ್ಧಾರ ಇನ್ನಷ್ಟೇ ತೆಗೆದುಕೊಳ್ಳಬೇಕಾಗಿದೆ. ಈಗ ತಹವ್ವುರ್ ರಾಣಾನನ್ನು ಭಾರತಕ್ಕೆ ಕರೆತರುವುದನ್ನು ಯಾರೂ ತಡೆಯಲು ಸಾಧ್ಯವಿಲ್ಲ. ಅಮೆರಿಕದ ಸುಪ್ರೀಂ ಕೋರ್ಟ್ ತನ್ನ ಎಲ್ಲಾ ಬಾಗಿಲುಗಳನ್ನು ಮುಚ್ಚಿದೆ. ಇತ್ತೀಚೆಗೆ, ಮುಂಬೈ ಭಯೋತ್ಪಾದಕ ದಾಳಿಯ ಅಪರಾಧಿ ತಹವ್ವುರ್ ರಾಣಾ ಭಾರತಕ್ಕೆ ಹಸ್ತಾಂತರಿಸುವುದನ್ನು ತಡೆಹಿಡಿಯುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಅಮೆರಿಕ ಸುಪ್ರೀಂ ಕೋರ್ಟ್ ತಿರಸ್ಕರಿಸಿತ್ತು.

ಇದು ಅವರನ್ನು ಭಾರತೀಯ ಅಧಿಕಾರಿಗಳಿಗೆ ಹಸ್ತಾಂತರಿಸುವಲ್ಲಿನ ಮತ್ತೊಂದು ಅಡಚಣೆಯನ್ನು ತೆಗೆದುಹಾಕಿತು. ಡೊನಾಲ್ಡ್ ಟ್ರಂಪ್ ಅಧಿಕಾರಕ್ಕೆ ಬಂದ ತಕ್ಷಣ, ತಹವ್ವುರ್ ರಾಣಾನನ್ನು ಭಾರತಕ್ಕೆ ಗಡಿಪಾರು ಮಾಡಲು ಅನುಮೋದನೆ ನೀಡಿದರು.

**ರಾಣಾ ಯಾರು ಮತ್ತು ಅವನಿಗೆ ಪಾಕಿಸ್ತಾನದ ಜೊತೆ ಏನು ಸಂಬಂಧ:** ವಾಸ್ತವವಾಗಿ, ತಹವ್ವುರ್ ರಾಣಾ ಪಾಕಿಸ್ತಾನಿ ಮೂಲದ ಕೆನಡಾದ ಪ್ರಜೆ. ಅವನ ವಯಸ್ಸು 64. ಭಯೋತ್ಪಾದಕ ರಾಣಾ ಪ್ರಸ್ತುತ ಪುಟ 2

### ದಾಂಡೇಲಿ ಮನೆಯಲ್ಲಿತ್ತು 14 ಕೋಟಿ ರೂ. ನಕಲಿ ನೋಟು

## ರಾಶಿ ರಾಶಿ ಕರೆನ್ಸಿ ನೋಡಿ ಪೊಲೀಸರೇ ಶಾಕ್

**ಕಾರವಾರ:** ಬಾಗಿಲು ತೆರೆದಿದ್ದ ಮನೆ, ಒಳಗೆ ಹಣ್ಣು-ತರಕಾರಿ ರೀತಿಯಲ್ಲಿ ಬಿದ್ದಿರುವ ಕಂತೆ ಕಂತೆ ನೋಟುಗಳು. ವಿಷಯ ತಿಳಿದು ಮನೆಯಿಂದ ಹೊರ ಬಾರದ ಜನರು. ಇಂಥದ್ದೊಂದು ಸನ್ನಿವೇಶಕ್ಕೆ ಸಾಕ್ಷಿಯಾಗಿದ್ದು ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ನಗರದ ಗಾಂಧಿನಗರ ಬಡಾವಣೆ. ಗಾಂಧಿನಗರದ ನೂರಜಾನ್ ಜುಂಜುವಾಡ್ಕರ ಎಂಬವವರ ಮನೆಯೊಂದರಲ್ಲಿ ಗೋವಾ ಮೂಲದ ಅರ್ಷದ್ ಖಾನ್ ಎಂಬಾತ ಬಾಡಿಗೆದಾರನಾಗಿ ವಾಸ್ತವ್ಯವಿದ್ದ. ಕಳೆದ



ಒಂದು ತಿಂಗಳಿನಿಂದ ಈತ ಆ ಮನೆಯಲ್ಲಿ ಇಲ್ಲದೇ ಇರುವುದನ್ನು ಗಮನಿಸಿ ಮತ್ತು ಆ ಮನೆಯ ಹಿಂಬದಿಯ ಬಾಗಿಲ ಚಿಲಕ ಸರಿ ಹಾಕದೇ ಇರುವುದನ್ನು ತಿಳಿದು, ಪೊಲೀಸರಿಗೆ ಸ್ಥಳೀಯರು ಮಾಹಿತಿ ನೀಡಿದ್ದರು. ದಾಂಡೇಲಿ ನಗರ ಠಾಣೆಯ ಪೊಲೀಸರು ಮನೆಗೆ ಬಂದು ಬಾಗಿಲು ತೆರೆಯುತ್ತಿದ್ದಂತೆಯೇ, 500 ರೂ. ಮುಖ ಬೆಲೆಯ ಕಂತೆ ಕಂತೆ ನೋಟುಗಳು ಕಾಣಿವೆ. ಒಮ್ಮೆಲೇ ದಂಗಾದ ಪೊಲೀಸರು ಸ್ಥಳಕ್ಕೆ ಹಿರಿಯ ಪೊಲೀಸರನ್ನು ಕರೆಸಿದ್ದಾರೆ. ಕೂಡಲೇ ಮನೆ ಮಾಲೀಕರುವ ಬಾಡಿಗೆ ಮನೆಯಲ್ಲಿ ವಾಸವಿದ್ದ ವ್ಯಕ್ತಿಗೆ ಕರೆ ಮಾಡಿದ್ದಾರೆ. ಆತ ಬೇರೆ ಕಡೆ ಇದ್ದಿದ್ದರಿಂದ ಸೋಮವಾರ ರಾತ್ರಿಯಿಂದ ಮಂಗಳವಾರ ಬೆಳಗಿನ ಜಾವದ ವರೆಗೆ ನೋಟನ್ನು ತಮ್ಮ ಸುಪರ್ದಿಯಲ್ಲಿ ಇಟ್ಟುಕೊಂಡಿದ್ದಾರೆ. ಪುಟ 2

# ಸರ್ಕಾರಿ ಜಮೀನು ಒತ್ತುವರಿ ಆರೋಪ: ಕುಮಾರಸ್ವಾಮಿಗೆ ಬಿಗ್ ಶಾಕ್ ಕೊಟ್ಟ ಸರ್ಕಾರ!

**ಬೆಂಗಳೂರು:** ಬಿಡದಿಯ ಕೇತಗಾನಹಳ್ಳಿ ಬಳಿ ಸರ್ಕಾರಿ ಜಮೀನು ಒತ್ತುವರಿ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿಗೆ ರಾಜ್ಯ ಸರ್ಕಾರ ಶಾಕ್ ಕೊಟ್ಟಿದೆ. ಕುಮಾರಸ್ವಾಮಿ ವಿರುದ್ಧ ಬಲವಂತದ ಕ್ರಮಕೈಗೊಳ್ಳುವುದಿಲ್ಲವೆಂಬ ಮುಚ್ಚಳಿಕೆಯನ್ನು ರಾಜ್ಯ ಸರ್ಕಾರ ಹಿಂಪಡೆದುಕೊಂಡಿದೆ. ಇನ್ನು ಈ 6 ಎಕರೆ ಒತ್ತುವರಿ ತೆರವು ನೋಟಿಸ್ ಪ್ರಶ್ನಿಸಿ ಕುಮಾರಸ್ವಾಮಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎನ್.ಎಸ್.ಸಂಜಯಗೌಡ ಅವರಿದ್ದ ಹೈಕೋರ್ಟ್ ಪೀಠ, ಒತ್ತುವರಿ ಜಮೀನಿಗೆ ಸಂಬಂಧಿಸಿದ ಸರ್ಕಾರದ ಬಳಿ ಇರುವ ದಾಖಲೆಗಳನ್ನು ಒಂದು ವಾರದಲ್ಲಿ ತಹಸೀಲ್ದಾರ್ ಹೆಚ್ ಡಿ ಕುಮಾರಸ್ವಾಮಿಗೆ ನೀಡಬೇಕು. ಅದಾದ 2 ವಾರಗಳಲ್ಲಿ ತಹಸೀಲ್ದಾರ್ ನೋಟಿಸ್ ಗೆ ಹೆಚ್ ಡಿಕೆ ಉತ್ತರಿಸಬೇಕೆಂದು ಸೂಚಿಸಿದೆ. 6 ಎಕರೆ ಒತ್ತುವರಿ ತೆರವು ನೋಟಿಸ್ ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಹೈಕೋರ್ಟ್ ಏಪ್ರಿಲ್ 08 ವಿಚಾರಣೆ ನಡೆಸಿದ್ದು, ಕಾಯ್ದೆ ತಿದ್ದುಪಡಿಯ ಸಂವಿಧಾನಬದ್ಧತೆ ಪ್ರಶ್ನಿಸುವುದಾಗಿ ಕುಮಾರಸ್ವಾಮಿ ಪರ ವಕೀಲ ವಾದ ಮಂಡಿಸಿದ್ದಾರೆ. ಹೀಗಾಗಿ ಮುಚ್ಚಳಿಕೆ ಹಿಂಪಡೆಯುವುದಾಗಿ ಎಎಜಿ ಕಿರಣ್ ರೋಣ್ ಕೋರ್ಟ್ ಗೆ ತಿಳಿಸಿದ್ದಾರೆ. ಇನ್ನು 1 ವಾರದಲ್ಲಿ ತಹಶೀಲ್ದಾರ್ , ಕುಮಾರಸ್ವಾಮಿಗೆ ದಾಖಲೆಗಳನ್ನು ಒದಗಿಸಬೇಕು. ಅದಾದ 2 ವಾರಗಳಲ್ಲಿ ಕುಮಾರಸ್ವಾಮಿ, ತಹಶೀಲ್ದಾರ್‌ಗೆ ಉತ್ತರಿಸಬೇಕು ಎಂದು ನ್ಯಾಯಮೂರ್ತಿ ಎನ್ ಎಸ್ ಸಂಜಯಗೌಡ ಅವರಿದ್ದ ಹೈಕೋರ್ಟ್ ಪೀಠ ಹೇಳಿದೆ. ಸಮಾಜ ಪರಿವರ್ತನಾ ಸಮುದಾಯದ ಪರ ಹಿರಿಯ ವಕೀಲ ಎಸ್. ಬಸವರಾಜು ವಾದ ಮಂಡಿಸಿದ್ದು, ಕುಮಾರಸ್ವಾಮಿಗೆ ಮಧ್ಯಂತರ ರಿಲೀಫ್ ವಿಸ್ತರಿಸದಂತೆ ವಾದ ಮಂಡಿಸಿದ್ದರು. ಬಿಡದಿಯ ಕೇತಗಾನಹಳ್ಳಿ ಬಳಿ 6 ಎಕರೆ ಸರ್ಕಾರಿ ಭೂಮಿಯನ್ನು ಅಕ್ರಮವಾಗಿ ಒತ್ತುವರಿಯಾಗಿದೆ ಎಂದು ಆರೋಪ ಕೇಳಿ ಬಂದಿತ್ತು. ಈ ಸಂಬಂಧ ಕರ್ನಾಟಕ ಹೈಕೋರ್ಟ್, ಒತ್ತುವರಿ ಜಮೀನು ತೆರವು ಕಾರ್ಯಾಚರಣೆ ಮಾಡಲು ಆದೇಶಿಸಿತ್ತು. ಆದರೂ ಕಂದಾಯ ಇಲಾಖೆ ವಿಳಂಬ ಮಾಡಿತ್ತು. ಈ ಹಿನ್ನೆಲೆಯಲ್ಲಿ ಹೈಕೋರ್ಟ್ , ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿತ್ತು. ಕೂಡಲೇ ಒತ್ತುವರಿ ತೆರವು ಮಾಡದಿದ್ದರೆ ನಿಮ್ಮನ್ನು ಜೈಲಿಗೆ ಕಳುಹಿಸಬೇಕಾಗುತ್ತೆ ಎಂದು ಎಚ್ಚರಿಕೆ ನೀಡಿತ್ತು. ಇದರಿಂದ ಎಚ್ಚೆತ್ತುಕೊಂಡ ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ರಾಮನಗರ ಜಿಲ್ಲಾಡಳಿತ ಕೇತನಹಳ್ಳಿ ಬಳಿ ಇರುವ ಕುಮಾರಸ್ವಾಮಿ ತೋಟದ ನಿವಾಸ ಸುತ್ತಾಮುತ್ತ ಸರ್ವೆ ಕಾರ್ಯ ನಡೆಸಿತ್ತು. ಎಚ್.ಡಿ. ಕುಮಾರಸ್ವಾಮಿ ಒಡೆತನದ ತೋಟದಲ್ಲಿ ಸರಕಾರಿ ಭೂಮಿ ಒತ್ತುವರಿ ಜಾಗವನ್ನು ಗುರುತಿಸಿ ಈಗಾಗಲೇ ಮಾರ್ಕಿಂಗ್ ಮಾಡಲಾಗಿದೆ. ಸರ್ವೆ ನಂಬರ್ 7, 8, 9 ರಲ್ಲಿ ಸುಮಾರು 11 ಎಕರೆಯಷ್ಟು ಸರಕಾರಿ ಭೂಮಿ ಒತ್ತುವರಿಯಾಗಿದ್ದು, ಈ ಜಾಗಕ್ಕೆ ಜಿಲ್ಲಾಡಳಿತ ಮಾರ್ಕಿಂಗ್ ಪ್ರಕ್ರಿಯೆ ಪೂರ್ಣಗೊಳಿಸಿದೆ. ಅಲ್ಲದೇ ಕುಮಾರಸ್ವಾಮಿ ಅವರ ತೋಟದ ಹಿಂಭಾಗದ ಹಾಗೂ ಆಸುಪಾಸಿನಲ್ಲಿ ಒತ್ತುವರಿ ಜಾಗದ ಮಾರ್ಕಿಂಗ್ ಮಾಡಲಾಗಿದ್ದು, ಕಬ್ಬಿಣದ ರಾಡುಗಳಲ್ಲಿ ಕೆಂಪು ಬಣ್ಣದ ಬಟ್ಟೆಯನ್ನು ಕಟ್ಟಿ ಅತಿಕ್ರಮಣ ಜಾಗ ಗುರುತು ಮಾಡಲಾಗಿದೆ.

# ಕೊಕ್ಕನೂರ ಆಂಜನೇಯ ಉತ್ಸವದಲ್ಲಿ ಗಮನ ಸೆಳೆದ ಗರಿ ಗರಿ ನೋಟಿನ ಪಲ್ಲಕ್ಕಿ

**ದಾವಣಗೆರೆ:** ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಕೊಕ್ಕನೂರ ಆಂಜನೇಯ ಸ್ವಾಮಿ ಪುಣ್ಯಕ್ಷೇತ್ರದ ಐತಿಹಾಸಿಕ ಕೊಕ್ಕನೂರ ಆಂಜನೇಯ ಉತ್ಸವ ವೈಭವದಿಂದ ನೆರವೇರಿತು. ಗರಿ ಗರಿ ನೋಟಿನ ಪಲ್ಲಕ್ಕಿ ಉತ್ಸವ ಗಮನ ಸೆಳೆಯಿತು. ಸಾವಿರಾರು ಭಕ್ತರು ಪಲ್ಲಕ್ಕಿಗೆ ನೋಟು ನೀಡಿ ಹರಕೆ ಸಮರ್ಪಣೆ ಮಾಡಿದರು. ಆಂಜನೇಯಸ್ವಾಮಿ, ಕೊಮಾರನಹಳ್ಳಿ ಬೀರದೇವರು, ದುರ್ಗಾಂಭಾ, ಮಾತಂಗ್ಯೆಮ್ಮ ದೇವಿಯ ಪಲ್ಲಕ್ಕಿಗಳು ಗ್ರಾಮದ ಪ್ರತಿಯೊಂದು ಮನೆಗೆ ತೆರಳಿದವು. ಹರಕೆ ಹೊತ್ತ ಭಕ್ತರು ಹತ್ತು, ಇಪ್ಪತ್ತು, ಐವತ್ತು, ನೂರು, ಇನ್ನೂರು ಹಾಗೂ ಐದು ನೂರು ಮುಖ ಬೆಲೆಯ ನೋಟುಗಳ ಹಾರ ಹಾಕಿ ಭಕ್ತ ಸಮರ್ಪಣೆ ಮಾಡಿದರು. ಆಂಜನೇಯ ಸ್ವಾಮಿ ಪಲ್ಲಕ್ಕಿಗೆ 14.80 ಲಕ್ಷ ರೂ. ಸೇರಿ ಒಟ್ಟು 15.69 ಲಕ್ಷ ರೂ. ಹಣ ಸಂಗ್ರಹವಾಗಿದೆ.

## ಧರ್ಮಸ್ಥಳದಲ್ಲಿ ಆಣೆ ಪ್ರಮಾಣ ಮಾಡಲು ಸಿದ್ಧ

# ಚಲುವರಾಯಸ್ವಾಮಿಗೆ ಸವಾಲ್‌ಗೆ ಹೆಚ್‌ಡಿಕೆ ಪ್ರತಿಕ್ರಿಯೆ




**ಮಂಡ್ಯ:** ನಾನು ಸಿಎಂ ಆಗುವಾಗ ಚಲುವರಾಯಸ್ವಾಮಿ ನೋಡಿಕೊಂಡು ಎಂಎಲ್‌ಎಗಳು ಬಂದ್ರಾ? ಅಥವಾ ನನ್ನ ನೋಡಿಕೊಂಡು ಬಂದ್ರಾ? ಅನ್ನೋದಕ್ಕೆ ಧರ್ಮಸ್ಥಳದಲ್ಲಿ ಆಣೆ-ಪ್ರಮಾಣ ಮಾಡಲು ಸಿದ್ಧ ಎಂದು ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ.

ಕುಮಾರಸ್ವಾಮಿ ಸಿಎಂ ಆಗಲು ನಾನು ಕಾರಣ ಇಲ್ಲ ಎಂದರೆ ಧರ್ಮಸ್ಥಳಕ್ಕೆ ಬಂದು ಆಣೆ-ಪ್ರಮಾಣ ಮಾಡಲಿ ಎಂದು ಸಚಿವ ಚಲುವರಾಯಸ್ವಾಮಿ ಸವಾಲು ಹಾಕಿದ್ದ ವಿಚಾರಕ್ಕೆ ಮಂಡ್ಯದಲ್ಲಿ ಮಾತನಾಡಿದ ಅವರು, ನಾನು ಆಣೆ ಮಾಡಲು ತಯಾರಿದ್ದೇನೆ. ನಾನು ಸಿಎಂ ಆಗುವಾಗ ಚಲುವರಾಯಸ್ವಾಮಿ ನೋಡಿ ಎಂಎಲ್ ಎಗಳು ಬಂದ್ರಾ ಏನು ಅಂತ. ಇದು ಸುಳ್ಳು ಚಲುವರಾಯಸ್ವಾಮಿಯನ್ನ ಮಂತ್ರಿ ಮಾಡಲು ಶ್ರಮ ಹಾಕಿದ್ದೇನೆ ಎಂದು ತಿಳಿಸಿದ್ದಾರೆ.

ತಾನು ಮಂತ್ರಿ ಆಗಲು ಚಲುವರಾಯಸ್ವಾಮಿ ಮಧ್ಯರಾತ್ರಿ ಮೂರು ಗಂಟೆವರೆಗೆ ನನ್ನನ್ನ ಬಿಟ್ಟಿಲ್ಲ. ಅವರನ್ನ ಮಂತ್ರಿ ಮಾಡಲು 50 ಜನ ಶಾಸಕರನ್ನು ಸೇರಿಸಿದ್ದೆ. ನಾನು ಪಟ್ಟಿರುವ ಶ್ರಮವನ್ನು ಚಲುವರಾಯಸ್ವಾಮಿ ಮರೆಯಬಾರದು ಎಂದು ಕೇಂದ್ರ ಸಚಿವರು ಹೇಳಿದ್ದಾರೆ. ಇನ್ನೂ ಚಲುವರಾಯಸ್ವಾಮಿಗೆ ಇರುವ ಚಟಗಳು ನನಗೆ ಇಲ್ಲ, ಮಂಡ್ಯದಲ್ಲಿ ಕೇಳಿದ್ರೆ ಚಲುವರಾಯಸ್ವಾಮಿ ಚಟಗಳ ಬಗ್ಗೆ ಹೇಳುತ್ತಾರೆ. ಚಲುವರಾಯಸ್ವಾಮಿ ಎಷ್ಟು ಮನೆ ಹಾಳು ಮಾಡಿದ್ದಾರೆ ಎಂದು ಎಲ್ಲರಿಗೂ ಗೊತ್ತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

ಇದಕ್ಕೂ ಮುನ್ನ ಮಂಡ್ಯದಲ್ಲಿ ಮಾತನಾಡಿದ್ದ ಸಚಿವ ಚಲುವರಾಯಸ್ವಾಮಿ, ಕುಮಾರಸ್ವಾಮಿ ಅವರನ್ನು ಮೊದಲ ಬಾರಿಗೆ ಸಿಎಂ ಮಾಡಲು ನಾನು ಶ್ರಮಪಟ್ಟಿದ್ದೇನೆ. ಒಂದು ವೇಳೆ ನಾನು ಶ್ರಮಪಡದೇ ಅವರ ಸ್ವಂತ ಶ್ರಮದಿಂದ ಸಿಎಂ ಆಗಿದ್ದೇನೆ ಎನ್ನುವುದಾದರೆ ಧರ್ಮಸ್ಥಳಕ್ಕೆ ಬಂದು ಆಣೆ ಪ್ರಮಾಣ ಮಾಡಲಿ ಎಂದು ಕುಮಾರಸ್ವಾಮಿ ಅವರಿಗೆ ಸವಾಲು ಹಾಕಿದ್ದರು.

ಕುಮಾರಸ್ವಾಮಿ ಅವರು ಮೊದಲ ಬಾರಿಗೆ ಸಿಎಂ ಆಗುವಾಗ ನಾನು ಎಲ್ಲರನ್ನೂ ಒಗ್ಗೂಡಿಸಿದ್ದೇನೆ. ಸ್ವತಃ ದೇವೇಗೌಡರೇ ನನ್ನ ಈ ವಿಚಾರವಾಗಿ ಬೈದಿದ್ದಾರೆ. ನಾನು ಕುಮಾರಸ್ವಾಮಿ ಸಿಎಂ ಆಗಲು ಶ್ರಮ ಪಟ್ಟಿದ್ದೇನೆ. ನಾವು ಅವರೊಟ್ಟಿಗೆ ರಾತ್ರಿ ಎಲ್ಲಾ ಇದ್ದಿದ್ದು, ಅವರನ್ನು ಸಿಎಂ ಮಾಡಲು ಹೊರತು ಬೇರೆಯಾವ ವಿಚಾರಕ್ಕೂ ಅಲ್ಲ. ನಾನು ಅವರನ್ನು ಸಿಎಂ ಮಾಡಲು ಶ್ರಮ ಪಟ್ಟಿಲ್ಲ ಎನ್ನುವುದಾದರೆ ಧರ್ಮಸ್ಥಳಕ್ಕೆ ಬಂದು ಆಣೆ ಪ್ರಮಾಣ ಮಾಡಲಿ ಅಂತ ಆಹ್ವಾನ ನೀಡಿದ್ದರು.

ಮುಂದುವರೆದು.. ನನ್ನಿಂದ ಅವರ ಆರೋಗ್ಯ ಹಾಳಾಗಿಲ್ಲ. ಅವರ ವೈಯಕ್ತಿಕ ಸಮಸ್ಯೆಗಳಿಂದ ನಿದ್ದೆ ಮಾಡದೇ ಅವರ ಆರೋಗ್ಯ ಹಾಳಾಗಿದೆ. ಅವರ ಚಟಗಳ ಬಗ್ಗೆ ಆತ್ಮಸಾಕ್ಷಿ ಮಾಡಿಕೊಳ್ಳಲಿ. ಬೇಕಿದ್ದರೆ ಅವರು ಹಾಗೂ ನಾನು ಇಬ್ಬರೇ ಕೂತು ಸ್ವಚರಿತ್ರೆಗಳ ಬಗ್ಗೆ ಬಹಿರಂಗ ಚರ್ಚೆ ಮಾಡೋಣ ಬರಲು ಹೇಳಿ ಎಂದು ಚಲುವರಾಯಸ್ವಾಮಿ ಪಂಥಾಹ್ವಾನ ನೀಡಿದ್ದರು.

## ಪರ ಯುವತಿಯೊಂದಿಗೆ ಪತಿ ಲವ್ವಿಡವ್ವಿ

# ಪ್ರಾಣ ಬಿಟ್ಟ ಹೆಂಡ್ತಿ!

**ಬೆಂಗಳೂರು:** ಪತಿ ಬೇರೆ ಯುವತಿ ಜೊತೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದಕ್ಕೆ ಮನನೊಂದು ಪತ್ನಿ ಆತ್ಮಹತ್ಯೆ ಮಾಡಿಕೊಂಡಿರುವ ಬೆಂಗಳೂರಿನ ಹೆಬ್ಬಾಳದ ಕನಕನಗರದಲ್ಲಿ ನಡೆದಿದೆ. ಎರಡು ವರ್ಷದಿಂದ ಅಷ್ಟೇ ಮದುವೆಯಾಗಿದ್ದ ಬಾಹರ್ ಅಸ್ಮಾ (29) ನೇಣಿಗೆ ಶರಣಾಗಿದ್ದಾಳೆ. ಕಳೆದ ಎರಡು ವರ್ಷಗಳ ಹಿಂದೆ ಬಾಹರ್ ಅಸ್ಮಾ, ಬಶೀರ್ ವುಲ್ಲಾ ಎಂಬಾತನನ್ನು ಮದುವೆ ಆಗಿದ್ದರು. ಆದರೆ ಪತಿ ಬಶೀರ್ ವುಲ್ಲಾ ಬೇರೆ ಯುವತಿ ಜೊತೆಗೆ ಅನೈತಿಕ ಸಂಬಂಧ ಇಟ್ಟುಕೊಂಡಿದ್ದ ಎನ್ನಲಾಗಿದೆ. ಇದಕ್ಕೆ ಬೇಸರಗೊಂಡ ಪತ್ನಿ ಬಾಹರ್ ಅಸ್ಮಾ ಆತ್ಮಹತ್ಯೆಗೆ ಶರಣಾಗಿದ್ದಾಳೆ ಎಂದು ಆಕೆಯ ಪೋಷಕರು ಆರೋಪಿಸಿದ್ದಾರೆ.




ಮೃತ ಬಾಹರ್ ಅಸ್ಮಾ ಅವರ ಕುಟುಂಬಸ್ಥರಿಂದ ನನ್ನ ಮಗಳ ಕೊಲೆಯಾಗಿದೆ ಎಂದು ಆರೋಪ ಮಾಡುತ್ತಿದ್ದಾರೆ. ಮಗಳನ್ನು ಕೊಲೆ ಮಾಡಿ ನೇಣಿಗೆ ಹಾಕಲಾಗಿದೆ ಎಂದು ಪತಿ ಬಶೀರ್ ವುಲ್ಲಾ ವಿರುದ್ಧ ಅಸ್ಮಾ ಕುಟುಂಬಸ್ಥರು ಆರೋಪ ಮಾಡಿದ್ದಾರೆ. ಈ ಘಟನೆ ಸಂಬಂಧ ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಾಹರ್ ಅಸ್ಮಾ ಸುರ ಸುಂದರಿಯಾಗಿದ್ದಾಳೆ. ಆದ್ರೆ, ಪತಿ ಬಶೀರ್ ವುಲ್ಲಾಗೆ ಬೇರೆ ತನ್ನ ಹೆಂಡತಿ ಎಷ್ಟೇ ಸುಂದರವಾಗಿದ್ದರೂ ಪರ ಯುವತಿ ಜೊತೆಗೆ ಅನೈತಿಕ ಸಂಬಂಧ ಹೊಂದಿದ್ದ ಎಂದು ಆರೋಪಿಸಲಾಗಿದ್ದು, ಸದ್ಯ ಪೊಲೀಸರು, ಪತಿ ಬಶೀರ್ ವುಲ್ಲಾನನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸಿದ್ದಾರೆ.

# 2ನೇ ವಿಮಾನ ನಿಲ್ದಾಣಕ್ಕೆ ಬಿಡದಿಯಲ್ಲಿ 5,000 ಎಕ್ರೆ: ಜಮೀನು ಕೊಟ್ರೆ ಆಗುತ್ತಾ? ಯಾರ ಒತ್ತಡ ಅನ್ನೋದು ಗೊತ್ತಿಲ್ಲ

**ಬೆಂಗಳೂರು:** 2ನೇ ವಿಮಾನ ನಿಲ್ದಾಣಕ್ಕೆ ಬಿಡದಿಯಲ್ಲಿ 5,000 ಎಕ್ರೆ ಜಮೀನು ಕೊಟ್ರೆ ಆಗುತ್ತಾ? ಬೆಟ್ಟಗುಡ್ಡ ಇದ್ಯಾ? ಗಾಳಿ ಹೆಚ್ಚಾಗಿದ್ಯಾ ಅನ್ನೋದನ್ನು ನೋಡುತ್ತಾರೆ ಎಂದು ಗೃಹ ಸಚಿವ ಜಿ.ಪರಮೇಶ್ವರ್ ಹೇಳಿದರು.



ಬೆಂಗಳೂರಿನಲ್ಲಿ ಮಾತನಾಡಿದ ಅವರು, ಎರಡನೇ ವಿಮಾನ ನಿಲ್ದಾಣಕ್ಕೆ ಸ್ಥಳ ನಿಗದಿ ವಿಚಾರದಲ್ಲಿ ನಾವು ಏನು ಹೇಳಬೇಕು ಅದನ್ನ ಹೇಳಿದ್ದೇವೆ. ಈ ಹಿಂದೆ ಬಿಡದಿಯಲ್ಲಿ ಆಗಲ್ಲ ಎಂದು ತಾಂತ್ರಿಕ ಸಮಿತಿ ಹೇಳಿತ್ತು. ಆಗ ದೇವನಹಳ್ಳಿಗೆ ಶಿಫ್ಟ್ ಮಾಡಿದ್ದೆವು. ಈಗ ಮತ್ತೆ ಬಿಡದಿ ಭಾಗದಲ್ಲಿ ಆಗುತ್ತಾ? ಇಲ್ಲವಾ? ಏನು ಹೇಳುತ್ತಾರೆ ಎನ್ನುವುದನ್ನು ನೋಡಬೇಕು. ತಾಂತ್ರಿಕವಾಗಿ ಸಮಸ್ಯೆಯಿದ್ದು, ಅದಕ್ಕೆ ಒತ್ತಡ ಹಾಕಿದರೆ ಬದಲಾವಣೆ ಮಾಡಲು ಆಗುತ್ತಾ ಎಂದು ಪ್ರಶ್ನಿಸಿದರು. ಎರಡನೇ ವಿಮಾನ ನಿಲ್ದಾಣಕ್ಕೆ ನೆಲಮಂಗಲ, ಬಿಡದಿ ಎರಡು ಸ್ಥಳಗಳನ್ನ ಗುರುತಿಸಿದ್ದಾರೆ. ಟೆಕ್ನಿಕಲ್ ಕಮಿಟಿ ಏನು ರಿಪೋರ್ಟ್ ಕೊಡುತ್ತಾರೆ ನೋಡೋಣ. ಫಿಸಿಬಲಿಟಿ ರಿಪೋರ್ಟ್ ಕೊಟ್ಟ ಬಳಿಕ ಗೊತ್ತಾಗುತ್ತದೆ. ಯಾರ ಒತ್ತಡದ ಬಗ್ಗೆಯೂ ನನಗೆ ಗೊತ್ತಿಲ್ಲ. ಆದರೆ ಹಾಗೆ ಮಾಡಲು ಬರಲ್ಲ ಎಂದು ಹೇಳಿದರು.

# ಪಕ್ಷ ಸಂಘಟನೆಗೆ ಒತ್ತು

## ಪಕ್ಷದ ಎಲ್ಲಾ ಘಟಕಗಳ ಬಲವರ್ಧನೆ ಬಗ್ಗೆ ಚರ್ಚೆ



**ಅಹಮದಾಬಾದ್:** ಕಳೆದ ಬೆಳಗಾವಿ ಅಧಿವೇಶನದ ವೇಳೆ ಈ ವರ್ಷವನ್ನು ಸಂಘಟನೆಯ ವರ್ಷ ಎಂದು ಸೂಚನೆ ನೀಡಲಾಗಿತ್ತು. ಬ್ಲಾಕ್, ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಪಕ್ಷವನ್ನು ಇನ್ನಷ್ಟು ಬಲಪಡಿಸುವ ಬಗ್ಗೆ ಅಹಮದಾಬಾದ್ ಅಧಿವೇಶನದಲ್ಲಿ ಚರ್ಚೆ ನಡೆಸಲಾಗುತ್ತದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಎಐಸಿಸಿ ಅಧಿವೇಶನದಲ್ಲಿ ಭಾಗವಹಿಸಲು ಗುಜರಾತ್ ನ ಅಹಮದಬಾದ್‌ಗೆ ತೆರಳಿರುವ ಡಿಸಿಎಂ ಡಿ.ಕೆ ಶಿವಕುಮಾರ್ ಅವರು ಮಾಧ್ಯಮಗಳಿಗೆ ಮಂಗಳವಾರ ಪ್ರತಿಕ್ರಿಯೆ ನೀಡಿದರು. ಪಕ್ಷ ಸಂಘಟನೆಯ ವಿಚಾರದಲ್ಲಿ ಒಂದೊಂದೇ ಬದಲಾವಣೆಗಳನ್ನು ತರಲಾಗುತ್ತಿದೆ. ಕಾಂಗ್ರೆಸ್ ಪಕ್ಷ ಕಾರ್ಯಕರ್ತರ ಪಕ್ಷವಾಗಿ ಇನ್ನೂ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ನಾವೆಲ್ಲರು ಚರ್ಚೆ ನಡೆಸಿ ಒಟ್ಟಿಗೆ ಕೆಲಸ ಮಾಡುವುದಕ್ಕೆ ಈ ಸಮಾವೇಶ ಮುನ್ನುಡಿ ಎಂದು ಹೇಳಿದರು.

ಮಲ್ಲಿಕಾರ್ಜುನ ಖರ್ಗೆ ಅವರು ಹಾಗೂ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಹಲವಾರು ವಿಚಾರಗಳು ಸೇರಿದಂತೆ ಪಕ್ಷದ ಎಲ್ಲಾ ಘಟಕಗಳ ಬಲವರ್ಧನೆ ಬಗ್ಗೆ ಚರ್ಚೆ ಮಾಡಲಾಗುವುದು. ಕಳೆದ ವಾರ ದೆಹಲಿಯಲ್ಲಿ ಜಿಲ್ಲಾ ಮಟ್ಟದ ಅಧ್ಯಕ್ಷರ ಸಭೆ ನಡೆಸಲಾಗಿತ್ತು. 1924 ರಲ್ಲಿ ಮಹಾತ್ಮ ಗಾಂಧಿ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಜವಾಬ್ದಾರಿ ತೆಗೆದುಕೊಂಡು 100 ವರ್ಷಗಳು ಸಂದಿವೆ. ಗಾಂಧಿ ಅವರು ಏಕ ನಾಯಕತ್ವದಲ್ಲಿ ನಂಬಿಕೆ ಇಟ್ಟವರಲ್ಲ. ಸಾಮೂಹಿಕ ನಾಯಕತ್ವದಲ್ಲಿ ನಂಬಿಕೆಯಿಟ್ಟು ನಡೆದವರು ಎಂದು ತಿಳಿಸಿದರು.

ಕಾಂಗ್ರೆಸ್ಸಿನ ಗೆಲುವು ಗುಜರಾತಿನಿಂದ ಪ್ರಾರಂಭವಾಗಲಿದೆಯೇ ಎಂದು ಕೇಳಿದಾಗ, ಹೌದು ಖಂಡಿತವಾಗಿಯೂ ಆಗಲಿದೆ. ಜೊತೆಗೂಡುವುದು ಆರಂಭ, ಜೊತೆಗೂಡಿ ನಡೆಯುವುದು ಪ್ರಗತಿ ಎನ್ನುವ ಮಾತನ್ನು ನಾನು ಪುನರುಚ್ಚರಿಸುತ್ತೇನೆ ಎಂದರು.

ಬಿಜೆಪಿ ಜನಾಕ್ರೋಶ ಯಾತ್ರೆಯ ಬಗ್ಗೆ ಕೇಳಿದಾಗ, ಜೆಪಿಯವರ ಜನಾಕ್ರೋಶ ಯಾತ್ರೆಯನ್ನು ಸ್ವಾಗತಿಸುತ್ತೇನೆ. ಪೆಟ್ರೋಲ್, ಡಿಸೇಲ್, ಅಡುಗೆ ಅನಿಲ ಬೆಲೆ ಏರಿಕೆ ಮಾಡಿರುವ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಜನರಿಗೆ ಇರುವ ಆಕ್ರೋಶ ಈ ಯಾತ್ರೆ ಮೂಲಕ ರಾಜ್ಯ ಬಿಜೆಪಿ ನಾಯಕರಿಗೆ ಅರ್ಥವಾಗಲಿ. ಅವರ ಸರ್ಕಾರದ ವಿರುದ್ಧವೇ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ಮಾಡುವಂತಾಗಿದೆ ಎಂದು ವ್ಯಂಗ್ಯವಾಡಿದರು.

# ವಿಧಾನಸೌಧ ಒಳಗೆ ಹೋಗಿ ನೋಡ್ಬೇಕಾ?

## ಆನ್‌ಲೈನ್ ಬುಕ್ಕಿಂಗ್ ಮಾಡಿ ಟಿಕೆಟ್ ಖರೀದಿಸಿ ರೌಂಡ್ಸ್ ಹಾಕಿ



**ಬೆಂಗಳೂರು:** ವಿಧಾನಸೌಧ ಒಳಗೆ ಹೋಗಿ ನೋಡ್ಬೇಕಾ? ಹಣ ಕಟ್ಟಿ ನೋಡ್ಕೊಂಡು ರೌಂಡ್ ಹಾಕಿ ಬನ್ನಿ. ಇನ್ಮುಂದೆ ವಿಧಾನಸೌಧದ ಪ್ರವಾಸೋದ್ಯಮಕ್ಕೆ ಅವಕಾಶ ಕಲ್ಪಿಸಲಾಗ್ತಿದೆ.

ರಾಷ್ಟ್ರಪತಿ ಭವನ ಮಾದರಿಯಲ್ಲಿ ಗೈಡೆಡ್ ಟೂರ್ ವ್ಯವಸ್ಥೆ ಕಲ್ಪಿಸಲು ರಾಜ್ಯ ಸರ್ಕಾರ ಮುಂದಾಗಿದ್ದು, ರಜಾ ದಿನಗಳಲ್ಲಿ ಬೆಳಗ್ಗೆ 8ರಿಂದ ಸಂಜೆ 6 ಗಂಟೆ ತನಕ ವಿಧಾನಸೌಧದೊಳಗೆ ಹೋಗಿ ನೋಡಬಹುದು. ಆನ್ ಲೈನ್ ಮೂಲಕ ಬುಕ್ ಮಾಡಿ, ದುಡ್ಡು ಕಟ್ಟಿ ವಿಧಾನಸೌಧ ರೌಂಡ್ ಹಾಕಬಹುದು. ಇದೇ ಮೊದಲ ಬಾರಿಗೆ Guided Tour ವ್ಯವಸ್ಥೆ ತರುತ್ತಿದ್ದು, ಪ್ರವಾಸೋದ್ಯಮ ಇಲಾಖೆ ಪ್ರಸ್ತಾಪಕ್ಕೆ ಒಪ್ಪಿಗೆ ನೀಡಿ ಡಿಪಿಎಆರ್ ಅಧಿಕೃತ ಆದೇಶ ಹೊರಡಿಸಿದೆ.

ಆನ್‌ಲೈನ್ ಬುಕ್ಕಿಂಗ್, ಆನ್‌ಲೈನ್ ಟಿಕೆಟ್ ಖರೀದಿ ಮಾಡಬಹುದು. ತಲಾ 30 ಜನರ ಟೀಂ ಮಾಡಿಕೊಂಡು ಹೋಗಬಹುದು. ಪ್ರವಾಸೋದ್ಯಮ ಇಲಾಖೆಯಿಂದಲೇ ಟೂರಿಸ್ಟ್ ಆಫೀಸರ್ ನೇಮಕ ಮಾಡಿರುತ್ತಾರೆ. ಆಯಾ ದಿನವೇ ವಿಧಾನಸೌಧ ಭದ್ರತಾ ಸಿಬ್ಬಂದಿ ವಿಭಾಗಕ್ಕೆ ಪ್ರವಾಸಿಗರ ಭೇಟಿ, ಸಂಖ್ಯೆ ವಿವರ ಸಲ್ಲಿಸಬೇಕು.

ಪ್ರವಾಸಿಗರ ಗುರುತಿನ ಚೀಟಿ ಚೆಕ್ ಮಾಡಿ, ಆನ್‌ಲೈನ್ ಟಿಕೆಟ್ ಇದ್ದವರಿಗೆ ವಿಧಾನಸೌಧಕ್ಕೆ ಪ್ರವೇಶಕ್ಕೆ ಅವಕಾಶ ಇರಲಿದೆ. ಪ್ರವೇಶ ಶುಲ್ಕವನ್ನ ನಿಗದಿ ಮಾಡಲಿರುವ ಪ್ರವಾಸೋದ್ಯಮ ಇಲಾಖೆ, ಯಾವಾಗಿನಿಂದ ಜಾರಿ, ಯಾವ ಪೋರ್ಟಲ್ ಮೂಲಕ ಟಿಕೆಟ್ ಪಡೆಯಬೇಕೆಂಬ ಮಾರ್ಗಸೂಚಿಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಿದೆ.

# ಪಾಸಾದವರಿಗೆ ವಿಶ್ ಮಾಡಿ, ಫೇಲ್ ಆದವರಿಗೆ ಧೈರ್ಯ ತುಂಬಿದ ಸಿಎಂ

**ಬೆಂಗಳೂರು:** ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳು. ಪರಿಶ್ರಮ ಮತ್ತು ನಿರಂತರ ಅಭ್ಯಾಸ ನಿಮ್ಮನ್ನು ಯಶಸ್ಸಿನ ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿ ಎಂದು ಹಾರೈಸುತ್ತೇನೆ ಅಂತಾ ಸಿಎಂ ಸಿದ್ದರಾಮಯ್ಯ ವಿಶ್ ಮಾಡಿದ್ದಾರೆ.



ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಮಕ್ಕಳು ನಿರಾಶೆ, ಆತಂಕಕ್ಕೆ ಒಳಗಾಗಿ ದುಡುಕಿನ ನಿರ್ಧಾರ ತೆಗೆದುಕೊಳ್ಳುವುದು ಬೇಡ. ಬದುಕು ದೊಡ್ಡದು, ಮತ್ತೆ ಪರೀಕ್ಷೆ ಎದುರಿಸಿ ಹೆಚ್ಚಿನ ಅಂಕದ ಜೊತೆಗೆ ಪಾಸಾಗುವ ಅವಕಾಶ ಖಂಡಿತಾ ಸಿಗಲಿದೆ. ಹತಾಶೆಯ ಕೈಗೆ ಬುದ್ದಿ ಕೊಡದೆ ಸಂಯಮದಿಂದ ವರ್ತಿಸಿ ಎಂದು ಟ್ವೀಟ್ ಮೂಲಕ ಸ್ಥೈರ್ಯ ತುಂಬಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ಎಲ್ಲಾ ವಿದ್ಯಾರ್ಥಿಗಳಿಗೆ ಅಭಿನಂದನೆಗಳು. ಪರಿಶ್ರಮ ಮತ್ತು ನಿರಂತರ ಅಭ್ಯಾಸ ನಿಮ್ಮನ್ನು ಯಶಸ್ಸಿನ ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯಲಿ ಎಂದು ಹಾರೈಸುತ್ತೇನೆ.

ವಿವಿಧ ವಿಭಾಗಗಳಲ್ಲಿ ರ್‍ಯಾಂಕ್ ಪಡೆದಿರುವ ಎಲ್.ಆರ್.ಸಂಜನಾ ಬಾಯಿ, ಅಮೂಲ್ಯ ಕಾಮತ್, ದೀಕ್ಷಾ.ಆರ್ ಹಾಗೂ ದೀಪಶ್ರೀ ಈ ನಾಲ್ವರು ಹೆಣ್ಣುಮಕ್ಕಳಿಗೆ ಹೃದಯಪೂರ್ವಕ ಅಭಿನಂದನೆಗಳು. ನಿಮ್ಮ ಸಾಧನೆ ಇತರರಿಗೆ ಸ್ಫೂರ್ತಿಯಾಗಲಿ ಎಂದಿದ್ದಾರೆ ಸಿಎಂ.

ಮೊದಲನೇ ಪುಟದಿಂದ...

## ಎತ್ತಿಹಿಡಿದ ಹೈಕೋರ್ಟ್

ಮೊದಲ ಸ್ಫೋಟ ಬಸ್ ನಿಲ್ದಾಣದಲ್ಲಿ ಮತ್ತು ಎರಡನೆಯದು ದಿಲ್‌ಸುಖ್‌ನಗರದ ತಿನಿಸು ಮಳಿಗೆ (ಎ1 ಮಿರ್ಚಿ ಸೆಂಟರ್) ಬಳಿ ಸಂಭವಿಸಿತ್ತು. ಈ ಪ್ರಕರಣವು ಭಯೋತ್ಪಾದಕ ಚಟುವಟಿಕೆಯನ್ನು ಒಳಗೊಂಡಿರುವುದರಿಂದ ಎನ್‌ಐಎ ತನಿಖೆಯನ್ನು ವಹಿಸಿಕೊಂಡಿದೆ ಎಂದು ಪ್ರಾಸಿಕ್ಯೂಷನ್ ವಕೀಲರು ಹೈಕೋರ್ಟ್‌ನಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಆದಾಗ್ಯೂ, ಆರಂಭದಲ್ಲಿ ಇದನ್ನು ನಗರ ಪೊಲೀಸರ ವಿಶೇಷ ತನಿಖಾ ತಂಡ ತನಿಖೆ ನಡೆಸಿತು. ಪ್ರಮುಖ ಆರೋಪಿ ರಿಯಾಜ್ ಭಟ್ಕಳ್ ಪಾಕಿಸ್ತಾನದಲ್ಲಿ ತಲೆಮರೆಸಿಕೊಂಡಿದ್ದಾನೆ.

ಎನ್ ಐಎ 4,000 ಪುಟಗಳ ಚಾರ್ಜ್‌ಶೀಟ್ ಸಲ್ಲಿಸಿತ್ತು ಇದನ್ನು ಅಪರೂಪದಲ್ಲೇ ಅಪರೂಪದ ಪ್ರಕರಣ ಎಂದು ಬಣ್ಣಿಸಿ, ಐದು ಅಪರಾಧಿಗಳಿಗೆ ಮರಣದಂಡನೆ ವಿಧಿಸಿ ಎನ್‌ಐಎ ವಿಶೇಷ ನ್ಯಾಯಾಲಯ ತೀರ್ಪು ನೀಡಿತ್ತು. ಅಪರಾಧಿಗಳು ಸಲ್ಲಿಸಿದ್ದ ಮೇಲ್ಮನವಿಗಳನ್ನು ಆಲಿಸಿದ ನಂತರ, ಹೈಕೋರ್ಟ್ ಐದು ಐಎಂ ಭಯೋತ್ಪಾದಕರ ಮರಣದಂಡನೆಯನ್ನು ಎತ್ತಿಹಿಡಿಯಿತು. ಎನ್ ಐಎ 4,000 ಪುಟಗಳ ಆರೋಪಪಟ್ಟಿಯನ್ನು ಸಲ್ಲಿಸಿತ್ತು.

## ಬೆಲೆ ಏರಿಕೆ ಕಾಲ

**ಶಿಕ್ಷಣ ಇಲಾಖೆ ಕಣ್ಮುಚ್ಚಿ ಕುಳಿತಿದೆ: ಪೋಷಕರು ಆಕ್ರೋಶ:** ಅಂದಹಾಗೆ ಎಲ್ಕೆಜಿಗೆ ಈ ಹಿಂದೆ 75 ಸಾವಿರ ರೂ ತೆಗೆದುಕೊಂಡಿದ್ದ ಶಾಲಾ ಆಡಳಿತ ಮಂಡಳಿ ಮುಂದಿನ ಭಾರಿ ಶುಲ್ಕ ಹೆಚ್ಚಳವಾಗಲ್ಲ ಅಂತ ಹೇಳಿದ್ರಂತೆ. ಆದರೆ ಈ ಭಾರಿ ಮಕ್ಕಳ ಶಾಲಾ ಶುಲ್ಕವನ್ನ 20 ಸಾವಿರ ರೂ. ಹೆಚ್ಚಳ ಮಾಡಿದ್ದು, ಪೋಷಕರ ಆಕ್ರೋಶಕ್ಕೆ ಕಾರಣವಾಗಿದೆ. ಜೊತೆಗೆ ಮಕ್ಕಳ ವ್ಯಾನ್ ಶುಲ್ಕ ಕೂಡ ಹೆಚ್ಚಳ ಮಾಡಿರುವ ಎಂವಿಎಂ ಶಾಲೆ ಪೋಷಕರ ಜೇಬಿಗೆ ಕತ್ತರಿ ಹಾಕಿದ್ದು, ಈ ಬಗ್ಗೆ ಶಿಕ್ಷಣ ಇಲಾಖೆ ಕಣ್ಮುಚ್ಚಿ ಕುಳಿತಿದೆ ಅಂತ ಪೋಷಕರಾದ ಶಂಕರ್ ಎಂಬುವವರು ಆಕ್ರೋಶ ಹೊರ ಹಾಕಿದ್ದಾರೆ.

ಇನ್ನೂ ಜಾಸ್ತಿ ಏನಾದರೂ ಪ್ರಶ್ನೆ ಮಾಡಿದರೆ ಶಾಲೆ ಆಡಳಿತ ಮಂಡಳಿ ಬೇಕಿದ್ದರೆ ಓದಿಸಿ ಇಲ್ಲಂದರೆ ಸರ್ಕಾರಿ ಶಾಲೆಗಳಿಗೆ ಸೇರಿಸಿ ಅಂತಿದ್ದಾರೆ ಎಂದು ಪೋಷಕರು ಆರೋಪಿಸಿದ್ದಾರೆ. ಜೊತೆಗೆ ಪೋಷಕರಿಗೆ ಶಾಲೆಯ ಶುಲ್ಕದ ಜೊತೆಗೆ ಬುಕ್ಸ್, ಬ್ಯಾಗ್ ಸೇರಿದಂತೆ ಎಲ್ಲದಕ್ಕೂ ಹೆಚ್ಚುವರಿಯಾಗಿ ಹಣ ತೆಗೆದುಕೊಳ್ತಿದ್ದು ಇದೀಗ ಈ ವರ್ಷ ಹೆಚ್ಚುವರಿ ಶುಲ್ಕ ನಿಗದಿ ಮಾಡಲಾಗಿದ್ದು, ಶಿಕ್ಷಣ ಇಲಾಖೆ ಖಾಸಗಿ ಶಾಲೆಗಳಿಗೆ ಇಂತಿಷ್ಟು ಅಂತ ಫೀಸ್ ನಿಗದಿ ಮಾಡುವಂತೆ ಪೋಷಕರು ಆಗ್ರಹಿಸಿದ್ದಾರೆ. ಇನ್ನೂ ಈ ಬಗ್ಗೆ ಶಾಲೆ ಆಡಳಿತ ಮಂಡಳಿಯವರನ್ನ ಕೇಳಲು ಮುಂದಾದರೆ ಅವರು ಪ್ರತಿಕ್ರಿಯೆ ನೀಡದೆ ಪೋಷಕರ ಬಳಿ ಮಾತನಾಡುತ್ತೇವೆ ಎಂದಿದ್ದಾರೆ.

ಜನರು ಒಂದ್ಕಡೆ ಬೆಲೆ ಏರಿಕೆ ಬಿಸಿಯಲ್ಲಿರುವಾಗಲೇ ಇದೀಗ ಕೆಲ ಖಾಸಗಿ ಶಾಲೆಗಳು ಶುಲ್ಕ ಹೆಚ್ಚಳ ಮಾಡಿರುವುದು ಪೋಷಕರಿಗೆ ಗಾಯದ ಮೇಲೆ ಬರೆ ಎಳೆದಂತಾಗಿದೆ. ಇನ್ನೂ ಈ ನಿಟ್ಟಿನಲ್ಲಿ ಶಿಕ್ಷಣ ಇಲಾಖೆ ಎಚ್ಚೆತ್ತು ಪೋಷಕರ ಬಳಿ ಹಗಲು ದರೋಡೆ ಮಾಡಲು ಹೊರಟಿರುವ ಕೆಲ ಖಾಸಗಿ ಶಾಲೆಗಳಿಗೆ ಬಿಸಿ ಮುಟ್ಟಿಸುವ ಕೆಲಸ ಮಾಡಬೇಕಿದೆ.

## ಆ್ಯಪ್‌ಗೆ ಕಡಿವಾಣ

ಗೇಮಿಂಗ್ ಇಂಡಸ್ಟ್ರಿ ಮತ್ತು ಸಾರ್ವಜನಿಕರು, ಗೃಹ ಇಲಾಖೆ ಮತ್ತು ಕಾನೂನು ಇಲಾಖೆಯಿಂದ ಸಲಹೆ ಪಡೆದು ಒಂದು ಡ್ರಾಫ್ಟ್ ರೆಡಿ ಮಾಡಲು ಗೃಹ ಸಚಿವರು ಆದೇಶ ಕೊಡಲಾಗಿದೆ.

ಆನ್ ಲೈನ್ ಬೆಟ್ಟಿಂಗ್ ಮತ್ತು ಗೇಮಿಂಗ್ ಆ ಯಪ್ ಗಳಿಗೆ ಶೀಘ್ರದಲ್ಲೇ ಕೆಲ ಮಾನದಂಡಗಳನ್ನು ತರಲಾಗುತ್ತದೆ. ಗೇಮಿಂಗ್ ಆ ಯಪ್ ಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರಕ್ಕೆ ಕಷ್ಟದ ಕೆಲಸ. ಕೇವಲ ನಮ್ಮ ದೇಶ ಅಷ್ಟೇ ಅಲ್ಲ, ಬೇರೆ ದೇಶದ ಗೇಮಿಂಗ್ ಆ ಯಪ್ ಗಳು ಇವೆ. ಕಾನೂನು ಬಾಹಿರವಾಗಿರುವುದನ್ನು ಮೊದಲು ನಿಷೇಧ ಮಾಡಬೇಕು. ಲೀಗಲ್ ಆಗಿ ಇದ್ದರೆ ನಿಯಂತ್ರಣ ಹೇಗೆ ಮಾಡಬೇಕೆಂದು ಚರ್ಚೆ ಮಾಡಲಾಗುವುದು ಎಂದು ಹೇಳಿದ್ದಾರೆ.

**ಐಪಿಎಲ್ ಬೆಟ್ಟಿಂಗ್ ದಂಧೆ ನಡೆಸುತ್ತಿದ್ದ ಇಬ್ಬರ ಬಂಧನ:** ಐಪಿಎಲ್ ಬೆಟ್ಟಿಂಗ್ ದಂಧೆ ನಡೆಸುತ್ತಿದ್ದ ಇಬ್ಬರನ್ನು ಯಾದಗಿರಿ ಜಿಲ್ಲೆಯ ಶಹಾಪುರ ಪೋಲಿಸರು ಅರೆಸ್ಟ್ ಮಾಡಿದ್ದಾರೆ. ಸುರಪುರ ತಾಲೂಕಿನ ಕಕ್ಕಸಗೇರಾ ತಾಂಡಾದ ಪುಂಡಲೀಕ ಮತ್ತು ಏವೂರು ತಾಂಡಾದ ಹರಿಪ್ರಸಾದ್ ಬಂಧಿತರು. ಮೂರು ಮೊಬೈಲ್ ಸಹಿತ 6.99 ಲಕ್ಷ ರೂ. ನಗದು ಜಪ್ತಿ ಮಾಡಲಾಗಿದೆ. ಶಹಾಪುರ ಪೊಲೀಸ್ ಠಾಣೆಯಲ್ಲಿ ಇಬ್ಬರ ವಿರುದ್ಧ ಕೇಸ್ ದಾಖಲಾಗಿದೆ.

ಯಾದಗಿರಿ ಜಿಲ್ಲೆಯ ಶಹಾಪುರ ಪಟ್ಟಣದ ಮಡಿವಾಳೇಶ್ವರ ಏರಿಯಾದಲ್ಲಿ ಘಟನೆ ನಡೆದೆ. RCB ಹಾಗೂ ಮುಂಬೈ ಇಂಡಿಯನ್ಸ್ ಪಂದ್ಯದ ವೇಳೆ Cric365DAY ಆಯಪ್ ನಲ್ಲಿ ಬೆಟ್ಟಿಂಗ್ ದಂಧೆಯಲ್ಲಿ ಇಬ್ಬರು ದಂಧೆಕೋರರು ತೊಡಗಿದ್ದರು. ಈ ವೇಳೆ ಇನ್‌ಸ್ಪೆಕ್ಟರ್ ಎಸ್ ಎಂ ಪಾಟೀಲ್ ನೇತೃತ್ವದಲ್ಲಿ ದಾಳಿ ಮಾಡಿ ಬಂಧಿಸಲಾಗಿದೆ.

## ಐದು ಆತ್ಮಹತ್ಯೆ ಕೇಸ್

ಇನ್ನೊಂದು ಕಡೆ, ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲೂಕಿನ ಅಗಸನೂರು ಎಂಬಲ್ಲಿ ವಿಜಯಲಕ್ಷ್ಮಿ ಸಿರಗುಪ್ಪದ ಎಂಬವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಫೇಲಾದ ವಿಷಯ ತಿಳಿದು ಆಘಾತಕ್ಕೊಳಗಾದ, ಕೃಪಾ ಎಂಬ ವಿದ್ಯಾರ್ಥಿನಿ ಕೂಡ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಈಕೆ ದಾವಣಗೆರೆ ಖಾಸಗಿ ಕಾಲೇಜಿನಲ್ಲಿ ವಿಜ್ಞಾನ ವಿಷಯದಲ್ಲಿ ಪಿಯುಸಿ ವ್ಯಾಸಂಗ ಮಾಡಿದ್ದಳು.

ಹಾವೇರಿಯ ಹಂಸಬಾವಿ ಠಾಣಾ ವ್ಯಾಪ್ತಿಯ ಪಿಯುಸಿ ವಿದ್ಯಾರ್ಥಿ ಕಾವ್ಯ ಬಸಪ್ಪ ಲಮಾಣಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡಿದ್ದಕ್ಕೆ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸದ್ಯ, ಘಟನೆ ಸಂಬಂಧಪಟ್ಟ ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

**ಫಲಿತಾಂಶ ಪ್ರಕಟವಾಗುವುದಕ್ಕೂ ಮೊದಲೇ ವಿದ್ಯಾರ್ಥಿನಿ ಆತ್ಮಹತ್ಯೆ:** ಬೆಂಗಳೂರಿನಲ್ಲಿ ವಿದ್ಯಾರ್ಥಿನಿಯೊಬ್ಬಳು ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ಪ್ರಕಟವಾಗುವುದಕ್ಕೂ ಕೆಲವೇ ಗಂಟೆಗಳ ಮುನ್ನ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ವಿದ್ಯಾರಣ್ಯಪುರದ ಸಪ್ತಗಿರಿ ಲೇಔಟ್‌ನ ಅಪಾರ್ಟ್‌ಮೆಂಟ್ ಒಂದರಲ್ಲಿ ಈ ಘಟನೆ ಸಂಭವಿಸಿದೆ. ಅಪಾರ್ಟ್‌ಮೆಂಟ್ ಮಾಡಿಯಿಂದ ಹಾರಿ ಆಕೆ ಆತ್ಮಹತ್ಯೆಗೆ ಶರಣಾಗಿದ್ದಾಳೆ. ಪಿಯುಸಿ ಫಲಿತಾಂಶದಲ್ಲಿ ಅನುತ್ತೀರ್ಣಗೊಳ್ಳಬಹುದು ಎಂಬ ಭಯದಿಂದ ವಿದ್ಯಾರ್ಥಿನಿ ಕೃತ್ಯ ಎಸಗಿದ್ದಾಳೆ ಎನ್ನಲಾಗಿದೆ. ವಿದ್ಯಾರಣ್ಯಪುರ ಪೊಲೀಸರು ಅಸಾಹಜ ಸಾವು ಪ್ರಕರಣ ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

ಮಂಗಳವಾರ ಪ್ರಕಟಗೊಂಡ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಒಟ್ಟಾರೆಯಾಗಿ ಬಾಲಕಿಯರೇ ಮೇಲುಗೈ ಸಾಧಿಸಿದ್ದರು. ಉಡುಪಿ ಜಿಲ್ಲೆ ಪ್ರಥಮ ಸ್ಥಾನಗಳಿಸಿದ್ದರೆ, ದಕ್ಷಿಣ ಕನ್ನಡ ದ್ವಿತೀಯ ಹಾಗೂ ಯಾದಗಿರಿ ಜಿಲ್ಲೆ ಕೊನೆಯ ಸ್ಥಾನ ಪಡೆದಿತ್ತು.

ವಿಜ್ಞಾನ ವಿಷಯದಲ್ಲಿ ಮಂಗಳೂರಿನ ಅಮೂಲ್ಯ ಕಾಮತ್ ಮೊದಲ ಸ್ಥಾನ ಪಡೆದಿದ್ದಾರೆ. ಕಾಮರ್ಸ್ ವಿಭಾಗದಲ್ಲಿ ದಕ್ಷಿಣ ಕನ್ನಡದ ದೀಪಶ್ರೀ ಮೊದಲ ರಾಂಕ್ ಹಾಗೂ ಕಲಾವಿ ಭಾಗದಲ್ಲಿ ಬಳ್ಳಾರಿ ಜಿಲ್ಲೆಯ ಸಂಜನಾಬಾಯಿ ಮೊದಲ ಸ್ಥಾನ ಪಡೆದಿದ್ದಾರೆ.

## 50 ಕೋಟಿಗೂ ಹೆಚ್ಚು ವಂಚನೆ!

**ಹೊಸ ಹೊಸ ಸ್ಕೀಂಗಳ ಮೂಲಕ ಜನರಿಗೆ ಆಮಿಷ:** ವಾಸವಿ ಸ್ವಗೃಹ ಹೋಮ್ ನೀಡ್ಸ್ ಆ ಯಂಡ್ ಕನ್ಸಲ್ಟನ್ಸ್ ಹೆಸರಲ್ಲಿ ವಿಶ್ವನಾಥ್ ಜನರ ಬಳಿ ಹಣ ಪಡೆದು ವಂಚನೆ ಮಾಡಿದ್ದಾರೆ. ಮೂರು ವರ್ಷದ ಹಿಂದೆ ವಿಶ್ವನಾಥ ಕಿರಾಣಿ ಅಂಗಡಿ ಹಾಕಿದ್ದರು. ಐದು ಸಾವಿರ ರೂ ಕಿರಾಣಿ ಪಡೆದರೆ ಎರಡು ಸಾವಿರ ರೂ ಮೌಲ್ಯದ ಅಡುಗೆ ಎಣ್ಣೆ ಕೊಡುವುದಾಗಿ ಮೊದಲು ಆಮಿಷ ಒಡ್ಡಿದ್ದರಂತೆ. ಹದಿನೈದು ಸಾವಿರ ರೂ ಕೊಟ್ಟರೆ ತಿಂಗಳ ನಂತರ 20 ಸಾವಿರ ರೂ ಕೊಡುವುದಾಗಿ ಮತ್ತು ಲಕ್ಷ ಲಕ್ಷ ಹಣ ಕೊಟ್ಟವರಿಗೆ 40% ಬಡ್ಡಿ ಕೊಡುವುದಾಗಿ ನಂಬಿಸಿ ಮೋಸ ಮಾಡಲಾಗಿದೆ.

ಬಳಿಕ ಎರಡು ತಿಂಗಳ ಕಿರಾಣಿ ತೆಗೆದುಕೊಂಡರೆ ಒಂದು ತಿಂಗಳ ಕಿರಾಣಿ ಉಚಿತ ಕೊಟ್ಟಿದ್ದನಂತೆ. ಹೀಗೆ ಮಾಡುತ್ತ ನಿಧಾನಕ್ಕೆ ಜನರ ವಿಶ್ವಾಸ ಗಳಿಸಿದ ವಿಶ್ವನಾಥ್ , ಹಲವು ಸ್ಕೀಂಗಳನ್ನ ನೀಡಿ ಮೊದಲಿಗೆ ಆಮಿಷವೊಡ್ಡಿ ಜನರಿಂದ ಹಣ ವಸೂಲಿ ಮಾಡಿದ್ದಾರೆ. ಕಿರಾಣಿ ಅಂಗಡಿ ಮಾಲೀಕಕನ್ನು ನಂಬಿದ ಜನರು ಒಬ್ಬೊಬ್ಬರು ಮೂರು ಲಕ್ಷ, ಐದು ಲಕ್ಷ ಹೀಗೆ ಹತ್ತು ಲಕ್ಷದವರೆಗೆ ಹಣ ಹೂಡಿಕೆ ಮಾಡಿದ್ದಾರೆ. ಸುಮಾರು 50 ಕೋಟಿಗೂ ಹೆಚ್ಚು ಹಣ ಪಡೆದು ವಂಚಿಸಲಾಗಿದೆ ಎಂದು ಆರೋಪಿಸಲಾಗಿದೆ.

ಸದ್ಯ ವಂಚನೆ ಪ್ರಕರಣ ದಾಖಲಾಗುತ್ತಿದ್ದಂತೆ ಮನೆಗೆ ಬೀಗ ಹಾಕಿ ವಿಶ್ವನಾಥ್ ಪರಾರಿಯಾಗಿದ್ದಾರೆ. ನಮ್ಮಹಣಕ್ಕೆ ಯಾರು ಗ್ಯಾರಂಟಿ ಅಂತಾ ಜನರು ಅಳಲು ತೊಡಿಕೊಂಡಿದ್ದು, ಬ್ರೂಸ್ ಪೇಟೆ ಪೊಲೀಸ್ ಠಾಣೆ ಮುಂದೆ ಜಮಾಯಿಸಿದ್ದಾರೆ. ನ್ಯಾಯ ಕೊಡಿಸುವಂತೆ ಆಗ್ರಹಿಸಿದ್ದಾರೆ.

## ಹೋಗೋ ಮುನ್ನ ಎಚ್ಚರ

ಸರಿಯಾಗಿ ತಿಳಿದುಕೊಳ್ಳಿ. ಮನೆಯಲ್ಲಿ ಎಲ್ಲಿಂದರಲ್ಲಿ ಕೆಲಸದವರನ್ನು ಓಡಾಡಲು ಬಿಡಬೇಡಿ. ಬೆಲೆಬಾಳುವ ವಸ್ತುಗಳನ್ನು ಅವರಿಗೆ ಕಾಣುವಂತೆ ಇಡುವುದು, ಪ್ರದರ್ಶಿಸುವುದು ಮಾಡಬೇಡಿ ಎಂದು ಪೊಲೀಸ್ ಆಯುಕ್ತರು ಸಲಹೆಗಳನ್ನು ನೀಡಿದ್ದಾರೆ.

ಬೆಂಗಳೂರಿನಲ್ಲಿ ಇತ್ತೀಚಿನ ದಿನಗಳಲ್ಲಿ ಮನೆಗಳ್ಳತನ ಪ್ರಕರಣಗಳು ಹೆಚ್ಚಾಗುತ್ತಿವೆ. ಕೆಲವು ದಿನಗಳ ಹಿಂದಷ್ಟೇ ಭರ್ಜರಿ ಕಾರ್ಯಾಚರಣೆ ನಡೆಸಿದ್ದ ಪೊಲೀಸರು ನೇಪಾಳಿ ಗ್ಯಾಂಗನ್ನು ಬಂಧಿಸಿದ್ದರು. ಈ ಗ್ಯಾಂಗ್ ಮನೆಗೆ ನುಗ್ಗಿ ಚಿನ್ನ, ಬೆಳ್ಳಿ ಹಾಗೂ ಇತರ ಆಭರಣ ವಸ್ತುಗಳನ್ನು ಕಳವು ಮಾಡುತ್ತಿತ್ತು. ಇದೀಗ ಬೇಸಿಗೆ ರಜೆ ಸಂದರ್ಭದಲ್ಲಿ ಇಂತಹ ಗ್ಯಾಂಗ್??ಗಳು ಇನ್ನಷ್ಟು ಸಕ್ರಿಯವಾಗುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಪೊಲೀಸರು ಸಾರ್ವಜನಿಕರಿಗೆ ಸಲಹೆ ಸೂಚನೆಗಳನ್ನು ನೀಡಿದ್ದಾರೆ.

## ಪೊಲೀಸರೇ ಶಾಕ್

ಬೆಳಗ್ಗೆ ಅನುಮಾನ ಬಂದು ಮನೆ ಮಾಲೀಕರು ಕೆಲ ನೋಟುಗಳನ್ನು ಕಂತೆಯಿಂದ ಬಿಡಿಸಿ ನೋಡಿದಾಗ, 500 ರೂ. ಮುಖಬೆಲೆಯ ರಿವರ್ಸ್ ಬ್ಯಾಂಕ್ ಆಫ್ ಇಂಡಿಯಾ ಎಂಬ ಬರಹ ಇರುವ ಮತ್ತು ಗವರ್ನರ್ ಸಹಿ ಇಲ್ಲದೆ ಇರುವ, ಜೊತೆಗೆ ನೋಟಿಗೆ ಸಂಖ್ಯೆಯಿರುವ ಜಾಗದಲ್ಲಿ ಸೊನ್ನೆಯನಷ್ಟೇ ನಮೂದಿಸಿರುವ ನೋಟುಗಳು ಪತ್ತೆಯಾಗಿವೆ. ''ಮೂವಿ ಶೂಟಿಂಗ್ ಪರ್ಪಸ್ ಓನ್ಲಿ'' ಎಂದು ಬರೆದಿರುವ ಶೈನಿಂಗ್ ಪೇಪರಿನಲ್ಲಿ ಮುದ್ರಿತ 500 ಮುಖಬೆಲೆಯ ನಕಲಿ ಐವತ್ತು ನೋಟುಗಳ ಬಂಡಲ್ ಇದೆ ಎಂಬುವುದು ದೃಢವಾಗಿದೆ. ಇನ್ನು ಅಂದಾಜು 14 ಕೋಟಿ ರೂಪಾಯಿ ನಕಲಿ ನೋಟುಗಳು ಪತ್ತೆಯಾಗಿದ್ದು, ಅವುಗಳನ್ನು ಸದ್ಯ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಕೋಟಿಗಟ್ಟಲೇ ನಕಲಿ ನೋಟು ಸಿಕ್ಕಿರುವ ಸಂಬಂಧ ಆ ಮನೆಯಲ್ಲಿ ಬಾಡಿಗೆದಾರನಾಗಿದ್ದ ಅರ್ಷದ್ ಖಾನ್?ನನ್ನು ವಶಕ್ಕೆ ಪಡೆಯಲು ದಾಂಡೇಲಿ ಪೊಲೀಸರು ಕ್ರಮ ಆರಂಭಿಸಿದ್ದಾರೆ. ಈಗಾಗಲೇ ಅರ್ಷದ್ ಖಾನ್?ನನ್ನು ಪೊಲೀಸರು ಸಂಪರ್ಕಿಸಿದ್ದು, ಆತ ಗೋವಾದಲ್ಲಿ ಇದ್ದು ಬರುವುದಾಗಿ ಮಾಹಿತಿ ನೀಡಿದ್ದಾನೆ ಎನ್ನಲಾಗಿದೆ. ಈ ಹಿಂದೆ ಸಹ ದಾಂಡೇಲಿಯಲ್ಲಿ ನಕಲಿ ಕರೆನ್ಸಿ ನೋಟು ಪತ್ತೆಯಾಗಿದ್ದು ಸದ್ದು ಮಾಡಿತ್ತು. ಸದ್ಯ ಮತ್ತೆ ಕೋಟಿಗಟ್ಟಲೇ ನಕಲಿ ನೋಟು ಪತ್ತೆಯಾಗಿದ್ದು, ಇದರ ಹಿಂದಿನ ಅಸಲಿ ಸತ್ಯವಾದರೂ ಏನು ಎಂಬ ಚರ್ಚೆ ಸಾರ್ವಜನಿಕರಲ್ಲಿ ಜೋರಾಗಿದೆ.

ಸದ್ಯ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ ನಾರಾಯಣ್, ದಾಂಡೇಲಿ ಡಿವೈಎಸ್ಪಿ ನೇತೃತ್ವದಲ್ಲಿ ತನಿಖೆ ನಡೆಸಲು ಸೂಚನೆ ನೀಡಿದ್ದಾರೆ. ಇನ್ನು ಈ ನೋಟು ಚಿತ್ರೀಕರಣಕ್ಕೆ ಬಳಕೆ ಮಾಡಲು ಮುದ್ರಿಸಲಾಗಿತ್ತೇ, ಇಲ್ಲವೇ ಮಾರುಕಟ್ಟೆಯಲ್ಲಿ ಚಲಾವಣೆ ಮಾಡಲು ಮುದ್ರಿಸಲಾಗಿತ್ತೇ ಎನ್ನುವುದರ ಬಗ್ಗೆ ಸಮಗ್ರ ತನಿಖೆಯಿಂದ ಸತ್ಯಾಂಶ ಹೊರಬರಬೇಕಾಗಿದೆ.

## ಯುವಕ

ಈ ಯುವಕನನ್ನು ರಂಜೀತ್ ಚೌರಾಸಿಯಾ ಎಂದು ಗುರುತಿಸಲಾಗಿದೆ. ಹೌದು, ಯುವಕನೊಬ್ಬನು ರೈಲ್ವೆ ಹಳಿ ಮೇಲೆ ಮಲಗಿರುವುರೊಂದಿಗೆ ವಿಡಿಯೋ ಆರಂಭವಾಗುತ್ತದೆ. ಈ ವೇಳೆಯಲ್ಲಿ ರೀಲ್ಸ್ ಮಾಡಲು ಮೊಬೈಲ್ ಕ್ಯಾಮೆರಾ ಆನ್ ಮಾಡಿ ಎದುರಿಗೆ ಹಿಡಿದಿದ್ದಾನೆ. ಆದರೆ ಮುಂಭಾಗದಲ್ಲಿ ರೈಲು ಬರುತ್ತಿದ್ದಂತೆ ಸ್ವಲ್ಪವು ಅಲುಗಾಡದೇ ಹಾಗೆಯೇ ಮಲಗಿದ್ದಾನೆ. ರೈಲು ಹೋದ ಬಳಿಕ ಹಳಿಗಳ ಮೇಲಿಂದ ಎದ್ದು ಹೋಗಿರುವುದನ್ನು ಕಾಣಬಹುದು.

ಈ ರೀಲ್ಸ್ ವಿಡಿಯೋವನ್ನು ಸೋಶಿಯಲ್ ಮೀಡಿಯಾದಲ್ಲಿ ಅಪ್ಲೋಡ್ ಮಾಡಿದ್ದು ವೈರಲ್ ಆಗುತ್ತಿದ್ದಂತೆ ರೈಲ್ವೆ ಹಳಿಗಳಲ್ಲಿ ಸುರಕ್ಷತೆಗೆ ಅಡ್ಡಿಪಡಿಸಿದ ಹಿನ್ನಲೆಯಲ್ಲಿ ರೈಲ್ವೆ ಪೊಲೀಸರು ಯುವಕನ ವಿರುದ್ಧ ಪ್ರಕರಣ ದಾಖಲಿಸಿ ಬಂಧಿಸಿದ್ದಾರೆ. ಈ ವಿಡಿಯೋವು ಈಗಾಗಲೇ ಒಂದು ಮಿಲಿಯನ್ ಗೂ ಅಧಿಕ ವೀಕ್ಷಣೆ ಕಂಡಿದ್ದು ನೆಟ್ಟಿಗರು ಕಾಮೆಂಟ್ ಗಳನ್ನು ಮಾಡಿದ್ದಾರೆ.

ಬಳಕೆದಾರರೊಬ್ಬರು, 'ರೀಲ್ಸ್ ಹುಚ್ಚಿಗೆ ಈ ರೀತಿ ಅಪಾಯಕಾರಿ ವಿಡಿಯೋ ಚಿತ್ರೀಕರಿಸಿ ಜೀವ ಕಳೆದುಕೊಳ್ಳಬೇಡಿ' ಎಂದಿದ್ದಾರೆ. ಮತ್ತೊಬ್ಬರು, 'ಹಾಲಿವುಡ್ ಚಿತ್ರ ನಿರ್ಮಾಪಕರು ಈ ರೀತಿ ಮಾಡಿದರೆ ಅದು ಕಲೆ. ಭೌತಶಾಸ್ತ್ರ ಪ್ರಾಧ್ಯಾಪಕರು ಮಾಡಿದರೆ ಅದು ಉತ್ತಮ ಶಿಕ್ಷಕ, ಆದರೆ ಬಡ ಬಿಹಾರಿ ಯುವಕ ಈ ರೀತಿ ಮಾಡಿದ್ರೆ, ಆತನಿಗೆ ಜೈಲೇ ಗತಿ' ಎಂದು ವ್ಯಂಗ್ಯವಾಗಿ ಕಾಮೆಂಟ್ ಮಾಡಿದ್ದಾರೆ. ಇನ್ನೊಬ್ಬರು, 'ಫೇಮಸ್ ಆಗುವ ಹುಚ್ಚು ಈ ರೀತಿ ಮಾಡಿಸುತ್ತದೆ' ಎಂದಿದ್ದಾರೆ. ಇನ್ನು ಕೆಲವರು 'ಅಪಾಯಕಾರಿ ರೀಲ್ಸ್ ಮಾಡುವವರ ವಿರುದ್ಧ ಪೊಲೀಸರೇ ಕ್ರಮ ಕೈಗೊಳ್ಳಿ' ಎಂದು ಪ್ರತಿಕ್ರಿಯಿಸಿದ್ದಾರೆ.

## ಶೀಘ್ರ ಹಸ್ತಾಂತರ

ಲಾಸ್ ಏಂಜಲೀಸ್‌ನಲ್ಲಿರುವ 'ಮೆಟ್ರೋಪಾಲಿಟನ್ ಡಿಟೆನ್ಷನ್ ಸೆಂಟರ್'ನಲ್ಲಿದ್ದಾನೆ.

ಈತ ಪಾಕಿಸ್ತಾನಿ-ಅಮೆರಿಕನ್ ಭಯೋತ್ಪಾದಕ ಡೇವಿಡ್ ಕೋಲ್ಮನ್ ಹೆಡ್ಲಿ ಜೊತೆ ಸಂಬಂಧ ಹೊಂದಿದ್ದಾನೆ. 2008 ರ ನವೆಂಬರ್ 26 ರಂದು (26/11) ನಡೆದ ದಾಳಿಯ ಪ್ರಮುಖ ಸಂಚುಕೋರರಲ್ಲಿ ಹೆಡ್ಲಿ ಒಬ್ಬ. ತಹಾವೂರ್ ರಾಣಾನನ್ನು ಅಮೆರಿಕದಲ್ಲಿ ಡೆನ್ಮಾರ್ಕ್‌ನಲ್ಲಿ ನಡೆದ ಭಯೋತ್ಪಾದಕ ಪಿತೂರಿಗೆ ಸಹಾಯ ಮಾಡಿದ ಒಂದು ಆರೋಪ ಮತ್ತು ಮುಂಬೈ ದಾಳಿಗೆ ಕಾರಣವಾದ ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆಯಾದ ಲಷ್ಕರ್-ಎ-ತೊಯ್ಬಾಗೆ ಬೆಂಬಲ ನೀಡಿದ ಒಂದು ಆರೋಪದ ಮೇಲೆ ದೋಷಿ ಎಂದು ಘೋಷಿಸಲಾಯಿತು. ಮುಂಬೈ ದಾಳಿಗೆ ಲಷ್ಕರ್ ಹೊಣೆ.

2008 ರ ಮುಂಬೈ ಭಯೋತ್ಪಾದಕ ದಾಳಿಯಲ್ಲಿ ಆರು ಅಮೆರಿಕನ್ನರು ಸೇರಿದಂತೆ ಒಟ್ಟು 166 ಜನರು ಸಾವನ್ನಪ್ಪಿದ್ದರು. ಈ ದಾಳಿಗಳನ್ನು 10 ಪಾಕಿಸ್ತಾನಿ ಭಯೋತ್ಪಾದಕರು ನಡೆಸಿದ್ದಾರೆ.

## ನಿರಾಕರಣೆ

ಹರಿದಾಡಿದ್ದು, ಯುವತಿ ಆತನನ್ನು ತಬ್ಬಿ ಅಳುತ್ತಿರುವುದನ್ನು ಕಾಣಬಹುದು. ದಲಿತ ಸಮುದಾಯದ ಹುಡುಗಿಯೊಂದಿಗೆ ಸಮ್ರೇಜ್ ದೀರ್ಘಕಾಲದ ಸಂಬಂಧದಲ್ಲಿದ್ದ. ಅವರ ಅಂತರ್ಧರ್ಮೀಯ ಸಂಬಂಧವನ್ನು ಎರಡೂ ಕುಟುಂಬಗಳು ನಿರಾಕರಿಸಿದ್ದವು. ಹುಡುಗಿ ಇತ್ತೀಚೆಗೆ ಬೇರೊಬ್ಬರೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡ ನಂತರ ವಿಷಯ ಉಲ್ಬಣಗೊಂಡಿತ್ತು.

ಆಕೆಯಿಂದ ದೂರ ಹೋಗಿರುವುದು ಮತ್ತು ಕುಟುಂಬದ ಒತ್ತಡದಿಂದ ಮನನೊಂದ ಸಮ್ರೇಜ್ ತಡರಾತ್ರಿ ಆಕೆಗೆ ಮನೆಯಿಂದ ಹೊರಬರಲು ಹೇಳಿದ್ದ, ಇಬ್ಬರೂ ಕಾಡಿನ ದಾರಿ ಹಿಡಿದರು. ಇಬ್ಬರೂ ಮಾತನಾಡುತ್ತಿರುವಾಗ ವಾಗ್ವಾದ ತೀವ್ರವಾಗಿ ಕೋಪದಲ್ಲಿ ಆತ ಪ್ರೇಯಸಿಯ ದುಪಟ್ಟಾವನ್ನು ಎಳೆದುಕೊಂಡು ಹೋಗಿ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಶವವನ್ನು ನೋಡಿದ ಗ್ರಾಮಸ್ಥರು ಸ್ಥಳಕ್ಕೆ ಧಾವಿಸಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಸ್ಥಳಕ್ಕೆ ಆಗಮಿಸಿದ ಪೊಲೀಸರು ಸಮ್ರೇಜ್ ಅವರ ಮೊಬೈಲ್ ಫೋನ್ ಮತ್ತು ಮೋಟಾರ್ ಸೈಕಲ್ ಅನ್ನು ಸ್ಥಳದಿಂದ ವಶಪಡಿಸಿಕೊಂಡರು. ತನಿಖೆಯ ಭಾಗವಾಗಿ ಯುವತಿಯನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಈ ಪರಿಸ್ಥಿತಿಗೆ ನೇರವಾಗಿ ಅಥವಾ ಪರೋಕ್ಷವಾಗಿ ಹಲವು ಮಂದಿ ಕಾರಣೀಭೂತರಾಗಿದ್ದಾರೆ, ಅವರ ವಿರುದ್ಧ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆಯೇ ಎಂಬುದನ್ನು ಪೊಲೀಸರು ಇನ್ನೂ ಸ್ಪಷ್ಟಪಡಿಸಿಲ್ಲ.

# ಡಿ.ಸಿ.ಆರ್.ಇ ಪ್ರೊಲೀಸ್ ಠಾಣೆಗಳ ನೂತನ ವಾಹನಗಳಿಗೆ ಚಾಲನೆ



**ಬೆಂಗಳೂರು:** ಡಿ.ಸಿ.ಆರ್.ಇ ಪೊಲೀಸ್ ಠಾಣೆಗಳಿಗೆ ನೂತನ 30 ದ್ವಿಚಕ್ರ ವಾಹನ ಹಾಗೂ 20 ನಾಲ್ಕು ಚಕ್ರ ವಾಹನಗಳನ್ನು ನೀಡಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಇಂದು ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಹಮ್ಮಿಕೊಳ್ಳಲಾಗಿದ್ದ ಡಿ.ಸಿ.ಆರ್.ಇ ಪೊಲೀಸ್ ಠಾಣೆಗಳ ನೂತನ ವಾಹನಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ವಾಹನಗಳಿಗೆ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಮಾತನಾಡಿದ ಗೃಹ ಸಚಿವರು, ರಾಜ್ಯದಲ್ಲಿ ಎಸ್.ಸಿ/ಎಸ್‌ಟಿ ದೌರ್ಜನ್ಯ ಕಾಯ್ದೆಗಳನ್ನು ದಾಖಲಿಸಲು ಪ್ರತ್ಯೇಕವಾಗಿ ರಾಜ್ಯಾದ್ಯಂತ ಸೃಜಿಸಲಾಗಿರುವ ಡಿ.ಸಿ.ಆರ್.ಇ ಪೊಲೀಸ್ ಠಾಣೆಗಳಿಗೆ ವಾಹನಗಳನ್ನು ವಿತರಿಸಲಾಗಿದೆ ಎಂದರು. ಸಮಾಜ ಕಲ್ಯಾಣ ಕಲ್ಯಾಣ ಇಲಾಖೆ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಪೊಲೀಸ್ ಮಹಾನಿರ್ದೇಶಕ ಮತ್ತು ಪೊಲೀಸ್ ಮಹಾನಿರೀಕ್ಷಕ ಡಾ.ಅಲೋಕ್ ಮೋಹನ್, ಸಿ.ಐ.ಡಿ. ವಿಭಾಗದ ಪೊಲೀಸ್ ಮಹಾನಿರ್ದೇಶಕ ಡಾ.ಎಂ.ಎ.ಸಲೀಂ, ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಆರ್.ಹಿತೇಂದ್ರ, ನಾಗರಿಕ ಹಕ್ಕುಗಳ ಜಾರಿ ನಿರ್ದೇಶನಾಲಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಜೆ. ಅರುಣ್ ಚಕ್ರವರ್ತಿ, ಅಪರಾಧ ಮತ್ತು ತಾಂತ್ರಿಕ ಸೇವೆಗಳ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿದೇಶಕ ಪಿ.ಹರಿಶೇಖರನ್, ಆಡಳಿತ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಸೌಮೇಂದು ಮುಖರ್ಜಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟ ಶೇ.73.45 ವಿದ್ಯಾರ್ಥಿಗಳು ಉತ್ತೀರ್ಣ

**ಬೆಂಗಳೂರು:** ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು, ಶೇಕಡ 73.45 ರಷ್ಟು ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಉಡುಪಿ ಜಿಲ್ಲೆಯು ಶೇಕಡ 93.90 ರಷ್ಟು ಫಲಿತಾಂಶ ಪಡೆಯುವ ಮೂಲಕ ಪ್ರಥಮ ಸ್ಥಾನದಲ್ಲಿದೆ, ದಕ್ಷಿಣ ಕನ್ನಡ ಶೇಕಡ 93.57 ರಷ್ಟು ಪಡೆಯುವ ಮೂಲಕ ದ್ವಿತೀಯ ಸ್ಥಾನದಲ್ಲಿದ್ದು, ಬೆಂಗಳೂರು ದಕ್ಷಿಣ ಶೇ 85.36ರಷ್ಟು ಪಡೆದು ತೃತೀಯ ಸ್ಥಾನದಲ್ಲಿದೆ. ಯಾದಗಿರಿ ಜಿಲ್ಲೆಯು ಶೇಕಡ 48.45 ರಷ್ಟು ಪಡೆಯುವ ಮೂಲಕ ಕೊನೆಯ ಸ್ಥಾನದಲ್ಲಿದೆ.

ಕಲಾ, ವಾಣಿಜ್ಯ, ವಿಜ್ಞಾನ ವಿಭಾಗದಲ್ಲಿ ಒಟ್ಟು 6,37,805 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 4,68,439 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. 2,69,212 ಬಾಲಕಿಯರು ಉತ್ತೀರ್ಣರಾಗಿದ್ದು, 1,99,227 ಬಾಲಕರು ಉತ್ತೀರ್ಣರಾಗಿದ್ದಾರೆ. ವಿದ್ಯಾರ್ಥಿನಿಯರು ಮೇಲುಗೈ ಸಾಧಿಸಿದ್ದಾರೆ. ನಗರ ಪ್ರದೇಶದಲ್ಲಿ 5,03,300 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, ಆ ಪೈಕಿ 3,75,188 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಗ್ರಾಮಾಂತರ ಪ್ರದೇಶದಲ್ಲಿ 1,34,505 ವಿದ್ಯಾರ್ಥಿಗಳು ಪರೀಕ್ಷಗೆ ಹಾಜರಾಗಿದ್ದು ಆ ಪೈಕಿ 92,251 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ.

ದ್ವಿತೀಯ ಪಿಯುಸಿ ಪರೀಕ್ಷೆ-1ನ್ನು 2025 ಮಾರ್ಚ್ 01 ರಿಂದ ಮಾರ್ಚ್ 20 ರವರೆಗೆ ಒಟ್ಟು 1171 ಪರೀಕ್ಷಾ ಕೇಂದ್ರಗಳಲ್ಲಿ ರಾಜ್ಯಾದಂತ ನಡೆಸಲಾಗಿತ್ತು. ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಒಟ್ಟು 76 ಮೌಲ್ಯಮಾಪನ ಕೇಂದ್ರಗಳಲ್ಲಿ ಮಾರ್ಚ್ 21 ರಿಂದ ಏಪ್ರಿಲ್ 02 ರವರೆಗೆ 28,092 ಮೌಲ್ಯಮಾಪಕರಿಂದ ನಡೆಸಲಾಗಿದೆ. ದ್ವಿತೀಯ ಪಿಯುಸಿ ಫಲಿತಾಂಶಕ್ಕಾಗಿ, ವಿದ್ಯಾರ್ಥಿಗಳು https://karresults.nic.in ವೆಬ್ ಸೈಟ್‌ನಲ್ಲಿ ವೀಕ್ಷಿಸಬಹುದು. 2025ರ ದ್ವಿತೀಯ ಪಿಯುಸಿ ಪರೀಕ್ಷೆ-2 ನ್ನು 2025 ರ ಏಪ್ರಿಲ್ 24 ರಿಂದ ಮೇ 08 ನಡೆಸಲಾಗುವುದು.

2025ರ ದ್ವಿತೀಯ ಪಿಯುಸಿ ಪರೀಕ್ಷೆ-2/ ಪರೀಕ್ಷೆ-3ಕ್ಕೆ ಎಲ್ಲಾ ವರ್ಗದ ಬಾಲಕಿಯರು ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ವರ್ಗ-1ರ ಬಾಲಕರಿಗೆ ಪುನರಾವರ್ತಿತ/ಅಪೂರ್ಣ ಅಭ್ಯರ್ಥಿಯಾಗಿ ನೋಂದಾಯಿಸಿಕೊಳ್ಳಲು ಪರೀಕ್ಷಾ ಶುಲ್ಕ ಇರುವುದಿಲ್ಲ. 2025ರ ದ್ವಿತೀಯ ಪಿಯುಸಿ ಪರೀಕ್ಷೆ-3 ನ್ನು 2025 ಜೂನ್ 9 ರಿಂದ 21 ರವರೆಗೆ ನಡೆಸಲಾಗುವುದು. 2025ರ ದ್ವಿತೀಯ ಪಿಯುಸಿ ಪರೀಕ್ಷೆ-1 ಕ್ಕೆ ಹಾಜರಾತಿ ಕೊರತೆಯಿಂದ ಪರೀಕ್ಷೆ ಬರೆಯಲು ಸಾಧ್ಯವಾಗದ ವಿದ್ಯಾರ್ಥಿಗಳು ಪರೀಕ್ಷೆ-2/ಪರೀಕ್ಷೆ-3ಕ್ಕೆ ಮಂಡಲಿಯ ನಿಯಮಾನುಸಾರ ಖಾಸಗಿ ಅಭ್ಯರ್ಥಿಯಾಗಿ ನೋಂದಾಯಿಸಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ಶಾಲಾಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ ಪ್ರಕಟಣೆ ತಿಳಿಸಿದೆ.

# ಕೈಮಗ್ಗ ನೇಕಾರರಿಗೆ ಸಹಾಯಧನಕ್ಕಾಗಿ ಅರ್ಜಿ

**ಚಿಕ್ಕಬಳ್ಳಾಪುರ:** 2025-26ನೇ ಸಾಲಿಗೆ ಪ್ರಧಾನ ಮಂತ್ರಿ ಮುದ್ರಾ ಯೋಜನೆಯಡಿ ಕೈಮಗ್ಗ ನೇಕಾರರಿಗೆ ರಾಷ್ಟ್ರೀಕೃತ ಬ್ಯಾಂಕ್ ಗಳಿಂದ ಸಾಲ ಒದಗಿಸುವ ಯೋಜನೆಯನ್ನು ಜಾರಿಗೊಳಿಸಲಾಗಿರುತ್ತದೆ. ಶೇ. 6ರ ಬಡ್ಡಿ ದರದಲ್ಲಿ ಕೈಮಗ್ಗ ನೇಕಾರರಿಗೆ ಕೈಮಗ್ಗ ನೇಕಾರಿಕೆ ಚಟುವಟಿಕೆಗಳಿಗಾಗಿ ರಾಷ್ಟ್ರೀಕೃತ ಬ್ಯಾಂಕ್ ಗಳಿಂದ ಸಾಲವನ್ನು ಒದಗಿಸಲಾಗುವುದು. ಬ್ಯಾಂಕ್ ನವರು ವಿಧಿಸುವ ಸಾಲದ ಮೇಲಿನ ಗರಿಷ್ಠ ಬಡ್ಡಿ ದರ ಶೇ. 7 ರವರೆಗೆ ಸಾಲ ಮಂಜೂರಾದ ದಿನಾಂಕದಿಂದ ಮೂರು ವರ್ಷಗಳ ಅವಧಿಗೆ ಕೇಂದ್ರ ಸರ್ಕಾರವು ಬಡ್ಡಿ ಸಹಾಯಧನವಾಗಿ ನೀಡಲಿದೆ.



ಸಾಲದ ಮೊಬಲಗಿನ ಸೇ. 20 ಗರಿಷ್ಠ ರೂ. 25,000/- ಗಳನ್ನು ಮಾರ್ಜಿನ್ ಮನಿಯಾಗಿ ಕೇಂದ್ರ ಸರ್ಕಾರದಿಂದ ಮಂಜೂರು ಮಾಡಲಾಗುವುದು. ನೇಕಾರರ ಕೈಮಗ್ಗ ನೇಕಾರಿಕೆ ಚಟುವಟಿಕೆಯನ್ನು ಆಧರಿಸಿ ಈ ಯೋಜನೆಯಡಿ ಸಾಲ ಮಂಜೂರಾತಿಗೆ ನೇಕಾರರ ಅರ್ಜಿಯನ್ನು ಬ್ಯಾಂಕ್ ಗೆ ಶಿಫಾರಸ್ಸು ಮಾಡಲಾಗುವುದು.

2025-26ನೇ ಸಾಲಿಗೆ ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲ್ಲೆಗೆ 30 ಗುರಿಯನ್ನು ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಬೆಂಗಳೂರು ರವರು ನಿಗಧಿ ಪಡಿಸಿದ್ದು, ಸದರಿ ಯೋಜನೆಯಡಿ ಸಾಲ ಪಡೆಯಲು ಆಸಕ್ತಿಯಿರುವ ಜಿಲ್ಲೆಯ ಕೈಮಗ್ಗ ನೇಕಾರರು ಇಲಾಖೆಯ ಮುದ್ರಾ ಯೋಜನೆಯ ಅರ್ಜಿಯೊಂದಿಗೆ ಕೆಳಕಂಡ ದಾಖಲಾತಿಗಳ ಪ್ರತಿಗಳನ್ನು ಉಪನಿರ್ದೇಶಕರ ಕಚೇರಿ, ಕೊಠಡಿ ಸಂಖ್ಯೆ, ಎಸ್‌ಎ-14, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಕಚೇರಿಗೆ ಸಲ್ಲಿಸಲು ಕೋರಿದೆ.

**ಅಗತ್ಯ ದಾಖಲೆಗಳು:** ಕೇಂದ್ರ ಅಥವಾ ರಾಜ್ಯ ಸರ್ಕಾರಗಳು ನೀಡಿರುವ ನೇಕಾರರ ಗುರುತಿನ ಚೀಟಿ, ಚುನಾವಣಾ ಗುರುತಿನ ಚೀಟಿ, ಆಧಾರ್ ಕಾರ್ಡ್, ನೇಕಾರರು ವಾಸಿಸುವ ಸ್ಥಳದ ಕಾರ್ಯವ್ಯಾಪ್ತಿ ಹೊಂದಿರುವ ಬ್ಯಾಂಕಿನಿಂದ ನಿರಾಕ್ಷೇಪಣಾ ಪತ್ರ/ಬೇಬಾಕಿ ಪತ್ರ, ಕೈಮಗ್ಗ ನೇಕಾರಿಕೆ ಮಾಡುತ್ತಿರುವ ಬಗ್ಗೆ ಫೋಟೋ ದಾಖಲಾತಿ. ಜಿಲ್ಲೆಯ ಕೈಮಗ್ಗ ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಜನೆಯಡಿ ಪ್ರಯೋಜನವನ್ನು ಪಡೆಯಲು ಕೋರಿದೆ. ಸದರಿ ಯೋಜನೆಯಡಿ ಸೌಲಭ್ಯ ಪಡೆಯಲು ಫಲಾನುಭವಿಗಳ ಅರ್ಜಿಗಳನ್ನು ಯೋಜನೆಯ ಮಾರ್ಗಸೂಚಿಯನ್ವಯ ಪರಿಶೀಲಿಸಿ ಅರ್ಹತೆಯ ಆಧಾರದ ಮೇಲೆ ಜಿಲ್ಲೆಗೆ ನಿಗದಿಪಸಿರುವ ಗುರಿಯ ಮಿತಿಗೆ ಒಳಪಟ್ಟು ಬ್ಯಾಂಕಿಗೆ ಶಿಫಾರಸ್ಸು ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಈ ಕಚೇರಿಯ ದೂರವಾಣಿ ಸಂ: 08156-277031, 8971754927, 9986392953 ಗೆ ಸಂಪರ್ಕಿಸಬಹುದೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಜಿಲ್ಲೆಗೆ ಶೇ. 73.97ರಷ್ಟು ಫಲಿತಾಂಶ

**ಚಾಮರಾಜನಗರ:**2024-25ನೇ ಸಾಲಿನ ಮಾರ್ಚ್ 2025ರ ದ್ವಿತೀಯ ಪಿಯುಸಿ ಪರೀಕ್ಷೆ ಫಲಿತಾಂಶ ಪ್ರಕಟಗೊಂಡಿದ್ದು ಚಾಮರಾಜನಗರ ಜಿಲ್ಲೆಯು ಶೇ. 73.97ರಷ್ಟು ಫಲಿತಾಂಶ ಪಡೆದಿದ್ದು ರಾಜ್ಯದಲ್ಲಿ 13ನೇ ಸ್ಥಾನ ಪಡೆದಿದೆ.

ಹಿಂದಿನ ವರ್ಷದಲ್ಲಿ ಜಿಲ್ಲೆಯು ಶೇ.84.99 ರಷ್ಟು ಫಲಿತಾಂಶ ಪಡೆದು ರಾಜ್ಯದಲ್ಲಿ 14ನೇ ಸ್ಥಾನದಲ್ಲಿತ್ತು. ಈ ಬಾರಿ ಫಲಿತಾಂಶದಲ್ಲಿ ಸುಧಾರಣೆ ಯಾಗಿದ್ದು 13ನೇ ಸ್ಥಾನಕ್ಕೆ ಬಂದಿದೆ.

ಒಟ್ಟು 6488 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಇವರಲ್ಲಿ 4799 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಪರೀಕ್ಷೆಗೆ ಹಾಜರಾದವರಲ್ಲಿ ಬಾಲಕರ ಸಂಖ್ಯೆ 3064 ಇದ್ದು ಇವರಲ್ಲಿ 1876 ಬಾಲಕರು ತೇರ್ಗಡೆಯಾಗಿದ್ದಾರೆ. ಶೇಕಡವಾರು ಫಲಿತಾಂಶ ಶೇ. 61.23ರಷ್ಟಿದೆ. ಪರೀಕ್ಷೆಗೆ ಹಾಜರಾದವರಲ್ಲಿ ಬಾಲಕಿಯರ ಸಂಖ್ಯೆ 4028 ಇದ್ದು ಇವರಲ್ಲಿ 3059 ಬಾಲಕಿಯರು ತೇರ್ಗಡೆಯಾಗಿದ್ದಾರೆ. ಶೇಕಡವಾರು ಫಲಿತಾಂಶ ಶೇ.75.94 ರಷ್ಟಿದೆ.

ಕಲಾ ವಿಭಾಗದಲ್ಲಿ ಒಟ್ಟು 2122 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ 1122 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ಕಲಾ ವಿಭಾಗದಲ್ಲಿ ಶೇ. 62.3ರಷ್ಟು ಫಲಿತಾಂಶ ಬಂದಿದೆ. ವಾಣಿಜ್ಯ ವಿಭಾಗದಲ್ಲಿ ಒಟ್ಟು 2343 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ 1873 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ ಶೇ.79.94ರಷ್ಟು ಫಲಿತಾಂಶ ಬಂದಿದೆ. ವಿಜ್ಞಾನ ವಿಭಾಗದಲ್ಲಿ ಒಟ್ಟು 2023 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಈ ಪೈಕಿ 1604 ವಿದ್ಯಾರ್ಥಿಗಳು ತೇರ್ಗಡೆಯಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಶೇ. 79.29ರಷ್ಟು ಫಲಿತಾಂಶ ಬಂದಿದೆ.

ಪರೀಕ್ಷೆಗೆ ಹಾಜರಾದ ಪಟ್ಟಣ ಪ್ರದೇಶದ ವಿದ್ಯಾರ್ಥಿಗಳ ಸಂಖ್ಯೆ 4700. ಇವರಲ್ಲಿ ಉತ್ತೀರ್ಣರಾದವರ ಸಂಖ್ಯೆ 3463 ಇದ್ದು, ಶೇ. 73.68ರಷ್ಟು ಫಲಿತಾಂಶ ಬಂದಿದೆ. ಪರೀಕ್ಷೆಗೆ ಹಾಜರಾದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳ ಸಂಖ್ಯೆ 1788 ಇದ್ದು, ಇವರಲ್ಲಿ ಉತ್ತೀರ್ಣರಾದವರ ಸಂಖ್ಯೆ 1336 ಆಗಿದ್ದು ಶೇ.74.72ರಷ್ಟು ಫಲಿತಾಂಶ ಬಂದಿದೆ.

**ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳ ವಿವರ:** **ಕಲಾ ವಿಭಾಗ:** ಅಶ್ವಿನಿ. ಬಿ, ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 573 (ಶೇ.95.50), ಕಾವ್ಯ ಎಂ, ಸರ್ಕಾರಿ ಪದವಿ ಪೂರ್ವ ಕಾಲೇಜು, ಕಬ್ಬಳ್ಳಿ, ಪಡೆದ ಅಂಕ 573 (ಶೇ.95.50), ಮನೋಜ್ ಕುಮಾರ್, ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು, ಚಾಮರಾಜನಗರ, ಪಡೆದ ಅಂಕ 572 (ಶೇ.95.30), ಹರ್ಷಿತ ಎಂ.ಕೆ, ಸರ್ಕಾರಿ ಪದವಿ ಪೂರ್ವ ಕಾಲೇಜು, ಆಲೂರು, ಪಡೆದ ಅಂಕ 571 (ಶೇ.95.16).

**ವಾಣಿಜ್ಯ ವಿಭಾಗ:** ಮಹೇಶ್. ಎನ್, ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 589 (ಶೇ.98.16), ಸುಪ್ರೀತಾ. ಕೆ, ಬ್ರೈಟ್ ಪದವಿ ಪೂರ್ವ ಕಾಲೇಜು, ಚಾಮರಾಜನಗರ, ಪಡೆದ ಅಂಕ 586 (ಶೇ.97.66), ತನುಶ್ರೀ ಹೆಚ್., ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 584 (ಶೇ.97.33),.

**ವಿಜ್ಞಾನ ವಿಭಾಗ :** ಅಮೃತಾ. ವಿ, ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 584 (ಶೇ.97.33), ಪ್ರೀಯಾ. ಆರ್, ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 583 (ಶೇ.97.16), ಯತೀನ್ ಗೌಡ. ಪಿ, ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 583 (ಶೇ.97.16), ಜೀವನ್. ಎಸ್. ನಿಸರ್ಗ ಪದವಿ ಪೂರ್ವ ಕಾಲೇಜು, ಕೊಳ್ಳೇಗಾಲ, ಪಡೆದ ಅಂಕ 581 (ಶೇ.96.83), ಪ್ರಭಾಮಣಿ ಕೆ.ಪಿ, ಮುರುಘರಾಜೇಂದ್ರ ಪದವಿ ಪೂರ್ವ ಕಾಲೇಜು, ಮರಿಯಾಲ, ಪಡೆದ ಅಂಕ 581 (ಶೇ. 96.83), ಸಾನಿಕಾ. ಜಿ, ಶ್ರೀ ವಾಸವಿ ಪದವಿ ಪೂರ್ವ ಕಾಲೇಜು ಕೊಳ್ಳೇಗಾಲ, ಪಡೆದ ಅಂಕ 581 (ಶೇ.96.83) ಆಗಿದೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮಂಜುನಾಥ ಪ್ರಸನ್ನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಲೋಕಾಯುಕ್ತ: ದೂರು ಸ್ವೀಕರಿಸುವ ಕಾರ್ಯಕ್ರಮ

**ಮೈಸೂರು:** ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಏಪ್ರಿಲ್ 09 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕಿನ, ಕಾರ್ಯನಿರ್ವಾಹಕಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ/ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಲೋಕಾಯುಕ್ತ ಪೊಲೀಸ್ ಅದೀಕ್ಷಕರಾದ ಉದೇಶ ಟಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಂಸ ಮಾರಾಟ ನಿಷೇಧ

**ಚಾಮರಾಜನಗರ:** ಚಾಮರಾಜನಗರ ನಗರಸಭಾ ವ್ಯಾಪ್ತಿಯಲ್ಲಿ ಏಪ್ರಿಲ್ 10 ರಂದು ಮಹಾವೀರ ಜಯಂತಿ ಪ್ರಯುಕ್ತ ಪ್ರಾಣಿವಧೆ ಹಾಗೂ ಮಾಂಸ ಮಾರಾಟವನ್ನು ನಿಷೇಧಿಸಲಾಗಿದೆ.ಅಂದು ಪ್ರಾಣಿವಧೆ ಹಾಗೂ ಮಾಂಸ ಮಾರಾಟ ಮಾಡುವುದು ಕಂಡು ಬಂದಲ್ಲಿ ಅಂತಹವರ ಉದ್ದಿಮೆ ಪರವಾನಗಿ ರದ್ದುಪಡಿಸಿ ಕಾನೂನು ಕ್ರಮ ಜರುಗಿಸಲಾಗುವುದು.

# ಅರ್ಜಿಆಹ್ವಾನ

**ಮಂಡ್ಯ:** 2025-26ನೇ ಸಾಲಿಗೆ ಮಂಡ್ಯ ಜಿಲ್ಲೆಯ ಪ್ರತಿಷ್ಟಿತ ಶಾಲೆಗಳಲ್ಲಿ ಪ್ರತಿಭಾವಂತ ಪರಿಶಿಷ್ಟಜಾತಿಯ ವಿದ್ಯಾರ್ಥಿಗಳನ್ನು 6ನೇ ತರಗತಿಗೆದಾಖಲಿಸಲು ಅರ್ಹತಾ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರಅರ್ಜಿಆಹ್ವಾನಿಸಲಾಗಿದ್ದು, 5ನೇ ತರಗತಿಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದುಉತ್ತೀರ್ಣರಾಗಿರುವ ಹಾಗೂ ವಾರ್ಷಿಕ ರೂ.2.50ಲಕ್ಷಗಳ ಆದಾಯದ ಮಿತಿಯೊಳಗಿರುವ ಅರ್ಹ ಅಭ್ಯರ್ಥಿಗಳು ಇಲಾಖೆಯ ವೆಬ್ ಸೈಟ್‌ನಲ್ಲಿಏಪ್ರಿಲ್ 15 ರಿಂದ ಮೇ 3 ರವರೆಗೆಆನ್‌ಲೈನ್‌ಮೂಲಕಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರಕಛೇರಿ ಹಾಗೂ ಉಪ ನಿರ್ದೇಶಕರಕಛೇರಿ ಸಂಪರ್ಕಿಸಬಹುದುಎಂದು ಸಮಾಜಕಲ್ಯಾಣಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಏ.15 ರಿಂದ ಮೇ 14 ರ ವರೆಗೆ ಪುಸ್ತಕ ದಾಸ್ತಾನು ಪರಿಶೀಲನೆ

**ಮೈಸೂರು:** ಮೈಸೂರು ನಗರ ಕೇಂದ್ರ ಗಂಥಾಲಯ ಕಚೇರಿಯ ಅಧೀನಶಾಖಾ/ಸೇವಾ ಕೇಂದ್ರ ಗ್ರಂಥಾಲಯಗಳಲ್ಲಿ ಏಪ್ರಿಲ್ 15 ರಿಂದ ಮೇ 14 ರ ವರೆಗೆ ಪುಸ್ತಕ ದಾಸ್ತಾನು ಪರಿಶೀಲನೆಯ ಕಾರ್ಯವನ್ನು ಕೈಗೊಳ್ಳಲಾಗಿರುವ ಕಾರಣ ಸದರಿ ದಿನಾಂಕಗಳಂದು ಸಾರ್ವಜನಿಕರಿಗೆ ಗ್ರಂಥಾಲಯದ ಎರವಲು ಸೇವೆಯನ್ನು ಒದಗಿಸಲಾಗುವುದಿಲ್ಲ ಬದಲಾಗಿ ಎರವಲು ಪಡೆದ ಪುಸ್ತಕಗಳನ್ನು ಹಿಂದಿರುಗಿಸಲು ಅವಕಾಶವಿರುತ್ತದೆ. ಕಾರಣ ಸಾರ್ವಜನಿಕರು ಎರವಲು ಪಡೆದ ಪುಸ್ತಕಗಳನ್ನು ಹಿಂದಿರುಗಿಸಲು ಕೋರಲಾಗಿದೆ ಎಂದು ಮೈಸೂರು ನಗರ ಕೇಂದ್ರ ಗ್ರಂಥಾಲಯದ ಉಪನಿರ್ದೇಶಕರಾದ ಮಂಜುನಾಥ್ ಬಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಲೋಕಾಯುಕ್ತ: ದೂರು ಸ್ವೀಕರಿಸುವ ಕಾರ್ಯಕ್ರಮ

**ಮೈಸೂರು:** ಕರ್ನಾಟಕ ಲೋಕಾಯುಕ್ತ ಮೈಸೂರು ವಿಭಾಗ ಅಧಿಕಾರಿಗಳಿಂದ ಏಪ್ರಿಲ್ 09 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕಿನ, ಕಾರ್ಯನಿರ್ವಾಹಕಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ದೂರು ಸ್ವೀಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರಿ ಕಛೇರಿಗಳಲ್ಲಿ ಸಾರ್ವಜನಿಕರ ಅಧಿಕೃತ ಕೆಲಸಗಳ ಅನಗತ್ಯ ವಿಳಂಬ, ಲಂಚದ ಹಣದ ಬೇಡಿಕೆ ಇತ್ಯಾದಿ ತೊಂದರೆಗಳನ್ನು ನೀಡುತ್ತಿರುವ ಸಾರ್ವಜನಿಕ/ಸರ್ಕಾರಿ ಅಧಿಕಾರಿ/ ನೌಕರರ ವಿರುದ್ಧ ಅಗತ್ಯ ದಾಖಲಾತಿಗಳೊಡನೆ ಸಾರ್ವಜನಿಕರು ದೂರು ನೀಡಬಹುದು ಎಂದು ಲೋಕಾಯುಕ್ತ ಪೊಲೀಸ್ ಅದೀಕ್ಷಕರಾದ ಉದೇಶ ಟಿ.ಜೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 6ನೇ ತರಗತಿಗೆ ಸೇರಲು ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಂದ ಅರ್ಜಿ

**ಬೆಂ.ಗ್ರಾ:** ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025-26ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಿಗೆ 06ನೇ ತರಗತಿ(ಆಂಗ್ಲ ಮಾಧ್ಯಮ) ಸೇರ ಬಯಸುವ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಪರಿಶಿಷ್ಟ ಜಾತಿಯ ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಉನ್ನತ ಮಟ್ಟದ ಶಿಕ್ಷಣವನ್ನು ಕೊಡಿಸುವ ದೃಷ್ಟಿಯಿಂದ ರಾಜ್ಯ ಸರ್ಕಾರ ಸಮಾಜ ಕಲ್ಯಾಣ ಇಲಾಖಾ ವತಿಯಿಂದ ಪ್ರತಿಷ್ಠಿತ ಶಾಲೆಗಳನ್ನು ಗುರುತಿಸಿ, ಅಂತಹ ವಸತಿ ಶಾಲೆಗಳಿಗೆ ಅರ್ಹತಾ ಪರೀಕ್ಷೆಯ ಮೂಲಕ ಅರ್ಹ ವಿದ್ಯಾರ್ಥಿಗಳನ್ನು ದಾಖಲು ಮಾಡಿಸಿ, ಆ ವಿದ್ಯಾಸಂಸ್ಥೆಗಳು/ಶಾಲೆಗಳಿಗೆ ಭರಿಸಬೇಕಾದ ಎಲ್ಲಾ ರೀತಿ ಶುಲ್ಕ, ಸಮವಸ್ತ್ರ, ಪಠ್ಯಪುಸ್ತಕ, ಪ್ರವಾಸ ಭತ್ಯೆ ಮತ್ತು ಇತರೆ ವೆಚ್ಚಗಳನ್ನು ಹಾಗೂ ವಸತಿ ಮತ್ತು ಭೋಜನಾ ವೆಚ್ಚವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಭರಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ. ಅರ್ಜಿ ನಮೂನೆ ಮತ್ತು ವಿವರಗಳನ್ನು ಉಪ ನಿರ್ದೇಶಕ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ ಮತ್ತು ಆಯಾ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಿಂದ ಪಡೆದುಕೊಳ್ಳಬಹುದಾಗಿದ್ದು, ಆನ್ಲೈನ್ ಮೂಲಕ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಮೇ. 03 ರಂದು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ದೂ.ಸಂ.: 080-29787447, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ದೇವನಹಳ್ಳಿ ದೂ.ಸಂ.: 080- 27681784, ದೊಡ್ಡಬಳ್ಳಾಪುರ ದೂ.ಸಂ.: 080- 27623681, ನೆಲಮಂಗಲ ದೂ.ಸಂ.: 080- 27723172 ಹಾಗೂ ಹೊಸಕೋಟೆ ದೂ.ಸಂ.: 080- 27931528 ಅನ್ನು ಸಂಪರ್ಕಿಸಬಹುದಾಗಿದೆ.

# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಜಿ

**ಬೆಂ.ಗ್ರಾ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ನೆಲಮಂಗಲ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 05 ಅಂಗನವಾಡಿ ಕಾರ್ಯಕರ್ತೆ, 10 ಮಿನಿ ಅಂಗನವಾಡಿ ಕಾರ್ಯಕರ್ತೆ ಮತ್ತು 63 ಅಂಗನವಾಡಿ ಸಹಾಯಕಿಯರ ಗೌರವಸೇವೆಯ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಇಲಾಖೆಯ ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. 19 ರಿಂದ 35 ವರ್ಷದೊಳಗಿನ ಅರ್ಹ ಸ್ಥಳೀಯ ಹೆಣ್ಣುಮಕ್ಕಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳು (ದೈಹಿಕ ವಿಕಲಚೇತನರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ನೀಡಿದೆ) ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಏಪ್ರಿಲ್ 23 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಇಲಾಖಾ ವೆಬ್ಸೈಟ್ ಅಥವಾ ದೂರವಾಣಿ ಸಂಖ್ಯೆ 080-27722177 ಕ್ಕೆ ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ನೆಲಮಂಗಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ತಿಳಿಸಿದ್ದಾರೆ.

# ಶಾಖಾ ಘಾತದಿಂದ ರಕ್ಷಣೆಗೆ ಸಲಹೆ

**ಚಿಕ್ಕಬಳ್ಳಾಪುರ:** ಬಿಸಿ ಗಾಳಿಯ ಸಂದರ್ಭದಲ್ಲಿ ದೇಹದಲ್ಲಿ ನೀರಿನ ಅಂಶವು ಕಡಿಮೆಯಾದಲ್ಲಿ ಶಾಖಾಘಾತ ಅಂದರೆ ಹೀಟ್ ಸ್ಟ್ರೋಕ್ ನ ಸಾಧ್ಯತೆಯು ಅಧಿಕವಾಗಿರುತ್ತವೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಮಹೇಶ್ ಕುಮಾರ್ ತಿಳಿಸಿದರು.

**ಶಾಖಾಘಾತದ ಲಕ್ಷಣಗಳು:** ಮೂರ್ಛೆ ಹೋಗುವುದು, ಸ್ನಾಯು ಸೆಳೆತ, ರೋಗಗ್ರಸ್ತವಾಗುವಿಕೆ, ಸಿಡುಕುತನ, ತಲೆನೋವು, ಹೆಚ್ಚಾಗಿ ಬೆವರುವುದು, ಬಲಹೀನತೆ, ತಲೆ ತಿರುಗುವಿಕೆ, ಗೊಂದಲಮಯ ರೀತಿಯಲ್ಲಿ ವರ್ತಿಸುವುದು. ತ್ವರಿತ ಉಸಿರಾಟ / ಹೃದಯ ಬಡಿತ, ವಾಕರಿಕೆ ಮತ್ತು ವಾಂತಿ, ಎದ್ದೇಳಲು ಕಷ್ಟ ಪಡುವುದು. ದೇಹದ ಉಷ್ಣತೆಯು 40.5ಲಿಅ (105-ಈ) ಗೆ ಏರುವುದು.

**ಪ್ರಥಮ ಚಿಕಿತ್ಸಾ ಕ್ರಮಗಳು:** ಕುಡಿಯಲು ಆಗಾಗ್ಗೆ ನೀರನ್ನು ಕೊಡುವುದು. ವ್ಯಕ್ತಿಯು ಚೇತರಿಸಿಕೊಂಡ ನಂತರ ನೀರಿನ ಅಂಶ ಹೆಚ್ಚಾಗಿರುವ ಪದಾರ್ಥಗಳನ್ನು ನೀಡಬೇಕು. ಹೆಚ್ಚಿನ ಚಿಕಿತ್ಸೆಗೆ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ.

**ಅನುಸರಿಸಬೇಕಾದ ಕ್ರಮ:** ಆಗಾಗ್ಗೆ ನೀರನ್ನು ಕುಡಿಯುತ್ತಿರಿ, ಪ್ರಯಾಣ ಮಾಡುವ ಸಂದರ್ಭದಲ್ಲಿ ನೀರಿನ ಬಾಟಲ್‌ನ್ನು ಕೊಂಡೊಯ್ದಿರಿ, ನಿಂಬೆ ಹಣ್ಣಿನ ಷರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ರಸಗಳು ಅಥವಾ ಒ.ಆರ್.ಎಸ್. ಕುಡಿಯಿರಿ ತಾಜಾ ಹಣ್ಣುಗಳಾದ ಕಲ್ಲಂಗಡಿ, ಕಿತ್ತಳೆ ಹಣ್ಣು ಹಾಗೂ ಸೌತೇಕಾಯಿಯನ್ನು ಹೆಚ್ಚಾಗಿ ಸೇವಿಸಿರಿ. ಒಳಾಂಗಣದಲ್ಲಿದ್ದಾಗ ನೆರಳಿನ ಸ್ಥಳದಲ್ಲಿ ವಿಶ್ರಮಿಸಿ. ಕಿಟಕಿ / ಬಾಗಿಲುಗಳ ಪರದೆಗಳನ್ನು ಬಳಸಿ, ಫ್ಯಾನ್, ಏರ್ ಕೂಲರ್, ಏರ್ ಕಂಡೀಶನರ್ ಬಳಸಿ. ತಣ್ಣನೆಯ ನೀರನಲ್ಲಿ ಸ್ನಾನ ಮಾಡಿ. ಬಿಸಿಲಿನಿಂದ ರಕ್ಷಿಸಿಕೊಳ್ಳಲು ಛತ್ರಿ, ಟೋಪಿ, ಟವಲ್ ಹಾಗೂ ಇತರ ವಿಧಾನ ಬಳಸಿ.

**ಅನುಸರಿಸಬಾರದ ಕ್ರಮಗಳು:** ಮದ್ಯಪಾನ ಮಾಡದಿರಿ. ಮಧ್ಯಾಹ್ನದ ವೇಳೆ ವಿಶೇಷವಾಗಿ 12 ರಿಂದ 3 ಗಂಟೆಯವರೆಗೆ ಬಿಸಿಲಿಗೆ ಹೊರಗೆ ಹೋಗಬೇಡಿ.ಹೊರಾಂಗಣದಲ್ಲಿ ನಿರಂತರವಾಗಿ ಕೆಲಸ ಮಾಡಬೇಡಿ. ಬಿಸಿಲಿನಲ್ಲಿ ಬರಿಗಾಲಿನಲ್ಲಿ ನಡೆಯಬೇಡಿ. ಮಕ್ಕಳು ಮತ್ತು ಸಾಕು-ಪ್ರಾಣಿಗಳನ್ನು ನಿಲ್ಲಿಸಿರುವ ವಾಹನಗಳಲ್ಲಿ ಬಿಡಬೇಡಿ. ವಾಹನದ ಒಳಗಿನ ತಾಪಮಾನ ಅಪಾಯಕಾರಿಯಾಗಬಹುದು. ಹೆಚ್ಚು ಪ್ರೋಟೀನ್-ಯುಕ್ತ ಆಹಾರವನ್ನು ಹಾಗೂ ಹಳೆಯ/ತಂಗಳು ಆಹಾರವನ್ನು ಸೇವಿಸಬೇಡಿ. ಮಕ್ಕಳು ಮತ್ತು ವಯೋವೃದ್ದರಿಗಿರಲಿ ವಿಶೇಷ ಕಾಳಜಿ ಮಕ್ಕಳ ಆರೋಗ್ಯದ ಮೇಲೆ ಬೇಸಿಗೆಯ ಗವಾಮಾನ ಪರಿಣಾಮ ಬೀರದಂತೆ ಜಾಗೃತಿ ವಹಿಸಿ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಚಿಕ್ಕಬಳ್ಳಾಪುರ ಜಿಲ್ಲೆ ಅಥವಾ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಥವಾ ಉಚಿತ ಆರೋಗ್ಯ ಸಹಾಯವಾಣಿ 104 ಕ್ಕೆ ಕರೆಮಾಡಿ ಸಂಪರ್ಕಿಸಬಹುದು.

# ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯ ಮೀನುಗಾರಿಕೆ ಇಲಾಖೆ ವತಿಯಿಂದ 2020-21 ನೇ ಸಾಲಿನಿಂದ ಕೇಂದ್ರ ಪುರಸ್ಕೃತ, ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯನ್ನು ಅನುಷ್ಠಾನ ಗೊಳಿಸಲಾಗುತ್ತಿದೆ. ಚಿಕ್ಕಬಳ್ಳಾಪುರ ಜಿಲ್ಲೆಗೆ 2020-21, 2021-22, 2022-23, ಮತ್ತು 2023-24 ನೇ ಸಾಲುಗಳಲ್ಲಿ ಉಳಿಕೆಯಾಗಿರುವ ಗುರಿಗಳು ಮತ್ತು 2024-25ನೇ ಸಾಲಿನ ಹೊಸ ಗುರಿಗಳನ್ನು 2025-26 ನೇ ಸಾಲಿನಲ್ಲಿ ಅನುಷ್ಠಾನಗೊಳಿಸುವ ಉದ್ದೇಶದಿಂದ ಅರ್ಹ ಆಸಕ್ತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮೀನು ಕೃಷಿ ಕೊಳಗಳ ನಿರ್ಮಾಣ-6, ಅಕ್ವೇರಿಯಂ, ಅಲಂಕಾರಿಕ ಮೀನುಗಳ ಕಿಯೋಸ್ಕ್ ಸೇರಿದಂತೆ ಮೀನು ಕಿಯೋಸ್ಕ್ ಗಳ ನಿರ್ಮಾಣ-2, ಮಧ್ಯಮ ಆರ್.ಎ.ಎಸ್, ಬಯೋಪ್ಲಾಕ್-1, ಹೊಸ ಫಿನ್ ಫಿಶ್ ಹ್ಯಾಚರಿ ಘಟಕ ನಿರ್ಮಾಣ-2, ಸಣ್ಣ ಪ್ರಮಾಣದ ಮೀನು ಆಹಾರ ಘಟಕ-1 ಹಾಗೂ ಮೀನು ಮೌಲ್ಯವರ್ಧನ ಘಟಕ-1 ಸ್ಥಾಪಿಸಲು ಗುರಿಯನ್ನು ಹೊಂದಿದೆ. ಸದರಿ ಯೋಜನೆಯಡಿ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ 40 ರಷ್ಟು ಸಹಾಯಧನ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟವಂಗಡ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ 60 ರಷ್ಟು ಸಹಾಯಧನ ನೀಡಲಾಗುವುದು ಕೊನೆಯ ಜೂನ್ 30 ರೊಳಗೆ ಆಸಕ್ತರು ಸಂಬಂಧ ಪಟ್ಟ ತಾಲ್ಲೂಕು ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರ ಕಚೇರಿಯನ್ನು ಸಂಪರ್ಕಿಸಿ, ಅರ್ಜಿಗಳನ್ನು ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಚಿಕ್ಕಬಳ್ಳಾಪುರ ಮೀನುಗಾರಿಕೆ ಉಪ ನಿರ್ದೇಶಕರ ಮೊ.ನಂ: 9844466228, ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಮತ್ತು ಗುಡಿಬಂಡೆ ಮೀನುಗಾರಿಕೆ ಸಹಾಯಕ ನಿರ್ದೇಶಕರ ಮೊ.ನಂ:7676759249, ಚಿಂತಾಮಣಿ, ಗೌರಿಬಿದನೂರು ಮತ್ತು ಶಿಡ್ಲಘಟ್ಟ ಮೀನುಗಾರಿಕೆ ಸಹಾಯಕ ನಿರ್ದೇಶಕರು ಮೊ.ನಂ: 9740909438 ಗೆ ಸಂಪರ್ಕಿಸಬಹುದೆಂದು ಮೀನುಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ ಕಾರ್ಮಿಕರನ್ನು ಮುಖ್ಯವಾಹಿನಿಗೆ ತರಲು ಕಾರ್ಯೋನ್ಮುಖ

**ಚಿಕ್ಕಬಳ್ಳಾಪುರ :** ಬಾಲಕಾರ್ಮಿಕತೆ ನಿಷೇಧ ಮತ್ತು ನಿಯಂತ್ರಣ ಕಾಯ್ದೆಯನ್ನು ಅನುಷ್ಠಾನ ಮಾಡಲು ನೇಮಕಗೊಂಡಿರುವ ಇಲಾಖೆಗಳು ಬಾಲಕಾರ್ಮಿಕರನ್ನು ರಕ್ಷಣೆ ಮಾಡುವ ದಾಳಿಗಳಿಗೆ ತಮ್ಮ ಇಲಾಖೆಯ ವಾಹನಗಳನ್ನು ಬಳಸಿಕೊಳ್ಳಬಹುದು ಹಾಗೂ ಪೊಲೀಸ್ ರಕ್ಷಣೆ ತೆಗೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ತಿಳಿಸಿದರು.



ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿ ಸಭೆ ಮತ್ತು ಜಿಲ್ಲಾ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಬಾಲಕಾರ್ಮಿಕರು ಹಾಗೂ ಕಿಶೋರಕಾರ್ಮಿಕರ ಪತ್ತೆ ಹಾಗೂ ಪುನರ್ವಸತಿ ಕಾರ್ಯವು ನಿರಂತರವಾಗಿ ನಡೆಯುತ್ತಿದ್ದು, ದಿ:01-04-2024 ರಿಂದ ದಿ:31-03-2025 ರವರೆಗೆ ಜಿಲ್ಲೆಯಾದ್ಯಂತ ಹಲವು ತಪಾಸಣೆಗಳನ್ನು ಕೈಗೊಳ್ಳಲಾಗಿದ್ದು, ಅದರಲ್ಲಿ 39 ಮಕ್ಕಳನ್ನು ಪತ್ತೆ ಹಚ್ಚಲಾಗಿರುತ್ತದೆ. ಸದರಿ ಮಕ್ಕಳಿಗೆ ಸರ್ಕಾರದ ವತಿಯಿಂದ ಪುನರ್ವಸತಿ ಕಲ್ಪಿಸಲಾಗಿರುತ್ತದೆ ಹಾಗೂ ತಪ್ಪಿತಸ್ಥ ಮಾಲೀಕರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗಿದೆ ಎಂದು ತಿಳಿಸಿದರು. ಉಚಿತ ಮತ್ತು ಕಡ್ಡಾಯ ಶಿಕ್ಷಣ ಪ್ರತಿ ಮಗುವಿನ ಹಕ್ಕು ಹಾಗೂ ಅದನ್ನು ಪ್ರತಿ ಮಗುವಿಗೆ ದೊರಕಿಸುವುದು ಪ್ರತಿ ನಾಗರಿಕನ ಕರ್ತವ್ಯವಾಗಿರುತ್ತದೆ. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಅನ್ವಯ ಎಲ್ಲಾ ಉದ್ಯೋಗ ಮತ್ತು ಕೆಲಸ ಪ್ರಕ್ರಿಯೆಗಳಲ್ಲಿ 14 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದು ಹಾಗೂ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಉದ್ದಿಮೆಗಳಲ್ಲಿ ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಹಾಗೂ ಸಂಜ್ಞೆಯ ಅಪರಾಧವಾಗಿರುತ್ತದೆ, ಅಂತಹ ಅಪರಾಧಕ್ಕೆ 06 ತಿಂಗಳಿಂದ 02 ವರ್ಷಗಳವರೆಗೆ ಜೈಲು ಶಿಕ್ಷೆ ಅಥವಾ ರೂ.20,000ಗಳಿಂದ ರೂ.50.000ಗಳ ವರೆಗೆ ದಂಡ ಅಥವಾ ಎರಡು ಶಿಕ್ಷೆಗಳನ್ನು ವಿಧಿಸಲು ಅವಕಾಶವಿರುತ್ತದೆ. ಬಾಲಕಾರ್ಮಿಕ ಪದ್ಧತಿಯನ್ನು ಪ್ರೋತ್ಸಾಹಿಸುವ ಪೋಷಕರಿಗೂ ಸಹ ಶಿಕ್ಷೆ ವಿಧಿಸಲು ಅವಕಾಶವಿರುತ್ತದೆ. ತಪ್ಪಿತಸ್ಥ ಮಾಲೀಕರು ಪ್ರತಿ ಮಗುವಿಗೆ ರೂ.20,000 ಗಳನ್ನು ಮಕ್ಕಳ ಪುನರ್ವಸತಿಗೆ ರಚಿಸಲಾದ ಕಲ್ಯಾಣ ನಿಧಿಗೆ ಪಾವತಿಸಬೇಕು. ಇಂತಹ ಕೃತ್ಯಗಳಲ್ಲಿ ಭಾಗಿ ಯಾಗುವ ಸಂಘಟನೆಗಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಗೆ ಕರೆಮಾಡಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.ಉಚಿತ ಮತ್ತು ಕಡ್ಡಾಯ ಶಿಕ್ಷಣ ಪ್ರತಿ ಮಗುವಿನ ಹಕ್ಕು ಹಾಗೂ ಅದನ್ನು ಪ್ರತಿ ಮಗುವಿಗೆ ದೊರಕಿಸುವುದು ಪ್ರತಿ ನಾಗರಿಕನ ಕರ್ತವ್ಯವಾಗಿರಬೇಕು ಎಂದು ತಿಳಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ದತಿ ನಿರ್ಮೂಲನಾ ಆಂದೋಲನ ಭಿತ್ತಿಪತ್ರಗಳನ್ನು ಹಾಗೂ ಕರಪತ್ರಗಳನ್ನು ಬಿಡುಗಡೆಮಾಡಿದರು. ಬಾಗೇಪಲ್ಲಿ ತಾಲೂಕಿನಲ್ಲಿ ಕಟ್ಟಡ ಕಾರ್ಮಿಕರ ಮಕ್ಕಳ ವಸತಿ ಶಾಲೆ ನಿರ್ಮಾಣಕ್ಕೆ 9 ಎಕರೆ 38 ಗುಂಟೆ ಭೂಮಿಯನ್ನು ಮಂಜೂರು ಮಾಡಲಾಗಿದೆ ಎಂದು ಈ ವೇಳೆ ಜಿಲ್ಲಾಧಿಕಾರಿಗಳು ತಿಳಿಸಿದರು ಜಿಲ್ಲಾಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಜಿಲ್ಲಾ ಕಾರ್ಮಿಕ ಅಧಿಕಾರಿ ಶಬಾನಾ ಅಜ್ಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅರ್.ಕೆ ವೆಂಕಟೇಗೌಡ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮುನಿಕೆಂಪೇಗೌಡ, ರಾಜ್ಯ ಸಂಯೋಜಕರು, ಬಚ್‌ಪನ್ ಬಚಾವೋ ಆಂದೋಲನಾ, ರೇಷ್ಮೆ ಇಲಾಖೆ ಉಪನಿರ್ದೇಶಕ ಎಸ್ ಬೋಜಣ್ಣ ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ
#1, ಸಿದ್ದಯ್ಯ ಪುರಾಣಿಕ್ ರಸ್ತೆ, ಕೆ.ಹೆಚ್.ಬಿ ಕಾಲೋನಿ, ಮಾಗಡಿ ರಸ್ತೆ, ಬೆಂಗಳೂರು-560079.
ದೂರವಾಣಿ ಸಂಖ್ಯೆ: +91-80-29619801 ಇ-ಮೇಲ್: md.ksmscl@gmail.com
KSMSCL/EQPT/HFW/EMRI/NPPMIBI/RETND/04/2024-25 Dated: 08.04.2025
ಟೆಂಡರ್ ಪ್ರಕಟಣೆ
ಉಲ್ಲೇಖ: ಈ ಕಛೇರಿಯ ಟೆಂಡರ್ ಅಧಿಸೂಚನೆ ಸಂಖ್ಯೆ:
KSMSCL/EQPT/HFW/EMRI/NPPMIBI/RETND/04/2024-25 Dated: 08.04.2025
ಇ-ಟೆಂಡರಿಂಗ್ ವ್ಯವಸ್ಥೆಯಡಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯ ಪಾರದರ್ಶಕತೆ ಅಧಿನಿಯಮ 1999 ಮತ್ತು ನಿಯಮ 2000 ರಂತೆ ಈ ಕೆಳಕಂಡ ರಾಷ್ಟ್ರ ವ್ಯಾಪ್ತಿ ಇ-ಟೆಂಡರ್ ಕರೆಯಲಾಗಿದೆ.
NPPMT & BI ಕಾರ್ಯಕ್ರಮದಡಿಯಲ್ಲಿ ಉಪಕರಣಗಳು ಖರೀದಿಸಿ ಪೂರೈಸುವ ಬಗ್ಗೆ (IND-0225)
ತಾಂತ್ರಿಕ ವಿವರಣೆ, ಇ.ಎಮ್.ಡಿ, ಟೆಂಡರ್ ನಿಯಮಾವಳಿ ಹಾಗೂ ಇತರೆ ಮಾಹಿತಿಯನ್ನು ಇ-ಟೆಂಡರ್ ವ್ಯವಸ್ಥೆಯಡಿಯಲ್ಲಿ ವೆಬ್ ಸೈಟ್ ಮುಖಾಂತರ: https://kppp.karnataka.gov.in ನಲ್ಲಿ ದಿನಾಂಕ: 08.04.2025 ರಿಂದ ಟೆಂಡರ್‌ಗಳ ದಾಸ್ತಾವೇಜುಗಳನ್ನು ಡೌನ್ ಲೋಡ್ ಮಾಡಬಹುದಾಗಿದ್ದು, ಹೆಚ್ಚಿನ ವಿವರಣೆಯನ್ನು ಈ ಕಛೇರಿಯಿಂದ ಕೆಲಸದ ಅವಧಿಯಲ್ಲಿ ಪಡೆಯಬಹುದಾಗಿದೆ.
ಸಹಿ/-
ವ್ಯವಸ್ಥಾಪಕ ನಿರ್ದೇಶಕರು
ಕೆ.ಎಸ್.ಎಂ.ಎಸ್.ಸಿ.ಎಲ್, ಬೆಂಗಳೂರು
ವಾಸಾಸಂಇ/ವಾ.ಪ್ರ/129/ಎಸ್‌ಎಸ್‌ಸಿ/2025-26

## ಮತ್ತಿಘಟ್ಟದಲ್ಲಿ ಏ.9 ರಿಂದ ಜಾತ್ರಾಮಹೋತ್ಸವ

**ಹುಳಿಯಾರು:** ಹುಳಿಯಾರು-ತಿಪಟೂರು ರಸ್ತೆಯಲ್ಲಿ ಬರುವ ಹಂದನಕೆರೆ ಹೋಬಳಿಯ ಮತ್ತಿಘಟ್ಟ ಗ್ರಾಮದ ಪಾರ್ವತಮ್ಮ ದೇವಿ ಮತ್ತು ಬಸವೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವವನ್ನು ಏ.9 ರ ಬುಧವಾರದಿಂದ ಏ.16 ರ ಬುಧವಾರದವರೆವಿಗೆ ಏರ್ಪಡಿಸಲಾಗಿದೆ. ಏ.9 ರಂದು ಧ್ವಜಾವರೋಹಣ, ಅಂಕುರಾರ್ಪಣೆ, ಏ.10 ರಂದು ದಶರಥರಾಮೇಶ್ವರ ವಜ್ರದಿಂದ ಆಗಮಿಸಿ ಗಂಗಮ್ಮನವರಿಗೆ ಆರತಿ ಉತ್ಸವ, ಏ.11 ರಂದು ಅಗ್ನಿಕುಂಡ ಮಹೋತ್ಸವ, ರಾತ್ರಿ 9 ಗಂಟೆಗೆ ದೇವಿ ಮಹಾತ್ಮೆ ನಾಟಕ, ಏ.12 ರಂದು ರಾತ್ರಿ 8 ಗಂಟೆಗೆ ರಥೋತ್ಸವ, ಏ.13 ರಂದು ಅಡ್ಡಪಲ್ಲಕ್ಕಿ ಉತ್ಸವ, ಏ.14 ರಂದು ಬಸವನ ಉತ್ಸವ ನಡೆಯಲಿದೆ.= ಏ.15 ರಂದು ಸಂಜೆ 7 ಗಂಟೆಗೆ ಮಹಾದಾಸೋಹ, ಏ.16 ರಂದು ಬೆಳಗ್ಗೆ ಅವಂಭೃತ ಸ್ನಾನ, ಅಮ್ಮನವರಿಗೆ ಹೂವಿನ ಸೇವೆ ಸೇರಿದಂತೆ ವಿವಿಧ ಧಾಮಿರ್ಕ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದೆ.

## ಎಚ್.ಎಸ್.ಆದಿತ್ಯ ಪಿಯುಸಿಯಲ್ಲಿ ಟಾಪರ್

**ಹುಳಿಯಾರು:** ಹುಳಿಯಾರಿನ ವಿದ್ಯಾವಾರಿಧಿ ಇಂಡಿಪೆಂಡೆಂಟ್ ಪದವಿ ಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ ಬರೆದ ಎಚ್.ಎಸ್.ಆದಿತ್ಯ 594 ಅಂಕಗಳನ್ನು ಪಡೆಯುವ ಮೂಲಕ ಟಾಪರ್ ಆಗಿ ಹೊರಹೊಮ್ಮಿದ್ದಾರೆ. ಮಾತ್ಸ್, ಕೆಮಿಸ್ಟ್ರಿ ಹಾಗೂ ಬಯಾಲಜಿಯಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದಿದ್ದಾರೆ. ವಿದ್ಯಾರ್ಥಿಯ ಈ ಸಾಧನೆಗೆ ಕಾಲೇಜಿನ ಕಾರ್ಯದರ್ಶಿ ಕವಿತಾಕಿರಣ್ ಗ್ರಾಮೀಣ ಪ್ರದೇಶದ ವಿದ್ಯಾರ್ಥಿ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿರುವುದು ಶಾಲೆಗೆ ಹಾಗೂ ಊರಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಚಾರ್ಯ ರಂಗನಾಥ್, ವಿದ್ಯಾ ಸಂಸ್ಥೆಯ ಆಡಳಿತಧಿಕಾರಿ ಅಮಿತ್ ಸೇರಿದಂತೆ ಇತರರು ಇದ್ದಾರೆ.



## ಹುಳಿಯಾರಿನ ಸರ್ಕಾರಿ ಕಾಲೇಜಿಗೆ ಶೇ.75.09 ಫಲಿತಾಂಶ

**ಹುಳಿಯಾರು:** ಪ್ರಸಕ್ತ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಹುಳಿಯಾರು-ಕೆಂಕೆರೆ ಪದವಿ ಪೂರ್ವ ಕಾಲೇಜಿನ ಮೂರು ವಿಭಾಗಗಳ ಒಟ್ಟು 269 ವಿದ್ಯಾರ್ಥಿಗಳ ಪೈಕಿ 202 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, ಶೇಕಡವಾರು ಫಲಿತಾಂಶ ಶೇ.75.09 ಲಭ್ಯವಾಗಿದೆ. ವಿಜ್ಞಾನ ವಿಭಾಗದ 92 ವಿದ್ಯಾರ್ಥಿಗಳ ಪೈಕಿ 70 ಮಂದಿ ಉತ್ತೀರ್ಣರಾಗಿದ್ದು, 3 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 52 ವಿದ್ಯಾರ್ಥಿಗಳು ಪ್ರಥಮ ದರ್ಜೆ, 14 ವಿದ್ಯಾರ್ಥಿಗಳು ದ್ವಿತೀಯ ಹಾಗೂ 1 ವಿದ್ಯಾರ್ಥಿ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಆರ್. ಅಮೂಲ್ಯ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಯಾಗಿದ್ದಾರೆ. ವಾಣಿಜ್ಯ ವಿಭಾಗದ 107 ವಿದ್ಯಾರ್ಥಿಗಳ ಪೈಕಿ 86 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು, 22 ಮಂದಿ ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 42 ವಿದ್ಯಾರ್ಥಿಗಳು ಪ್ರಥಮ ದರ್ಜೆ, 14 ವಿದ್ಯಾರ್ಥಿಗಳು ದ್ವಿತೀಯ ಹಾಗೂ 8 ವಿದ್ಯಾರ್ಥಿಗಳು ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ನೂರ್‌ಸಲ್ಮಾ (567) ಹೆಚ್ಚು ಅಂಕಪಡೆದ ವಿದ್ಯಾರ್ಥಿಯಾಗಿದ್ದಾರೆ. ಕಲಾ ವಿಭಾಗದ 66 ವಿದ್ಯಾರ್ಥಿಗಳ ಪೈಕಿ 46 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು 12 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್, 19 ವಿದ್ಯಾರ್ಥಿಗಳು ಪ್ರಥಮ ದರ್ಜೆ, 12 ವಿದ್ಯಾರ್ಥಿಗಳು ದ್ವಿತೀಯ ದರ್ಜೆ, 3 ವಿದ್ಯಾರ್ಥಿ ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ. ಎಸ್.ಕವಿತಾ (566) ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಯಾಗಿದ್ದಾರೆ.







## ಬಾಲಕಿಯರ ಕಾಲೇಜಿಲು ಸಾಧನೆ

ಹುಳಿಯಾರು: ಹುಳಿಯಾರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಶೇ.70 ಫಲಿತಾಂಶ ಲಭಿಸಿದೆ. ಕಲಾ ವಿಭಾಗದಲ್ಲಿ 34 ಮಂದಿ ಪರೀಕ್ಷೆ ಬರೆದಿದ್ದು 22 ಮಂದಿ ಉತ್ತೀರ್ಣರಾಗಿ ಶೇ.65 ಫಲಿತಾಂಶ ಬಂದಿದೆ. ಇದರಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ 2 ಮಂದಿ, ಪ್ರಥಮ ಶ್ರೇಣಿಯಲ್ಲಿ 14 ಮಂದಿ, ದ್ವಿತೀಯ ಶ್ರೇಣಿಯಲ್ಲಿ 5 ಮಂದಿ, ತೃತೀಯ ಶ್ರೇಣಿಯಲ್ಲಿ 1 ಮಂದಿ ಉತ್ತೀರ್ಣರಾಗಿದ್ದಾರೆ. ವಾಣಿಜ್ಯ ವಿಭಾಗದಲ್ಲಿ 29 ಮಂದಿ ಪರೀಕ್ಷೆ ಬರೆದಿದ್ದು 22 ಮಂದಿ ಉತ್ತೀರ್ಣರಾಗುವ ಮೂಲಕ ಶೇ.76 ಫಲಿತಾಂಶ ಬಂದಿದೆ. ಇದರಲ್ಲಿ 5 ಮಂದಿ ಅತ್ಯುನ್ನತ ಶ್ರೇಣ, 11 ಮಂದಿ ಪ್ರಥಮ, 5 ಮಂದಿ ದ್ವಿತೀಯ, 1 ಮಂದಿ ತೃತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ಕಲಾ ವಿಭಾಗದಲ್ಲಿ ಕೆ.ಪ್ರೇಮ (524), ಸಿ.ಎನ್.ನಿರ್ಮಲ (516), ಕೆ.ಆರ್.ಹರ್ಷಿತ (487), ವಾಣಿಜ್ಯ ವಿಭಾಗದಲ್ಲಿ ಎಸ್.ಭಾವನ (555), ಹೇಮಲತಾಬಾಯಿ (555), ಎಸ್.ವಿದ್ಯಾ (538), ಇಂದಿರಾಬಾಯಿ (531) ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಾಗಿದ್ದಾರೆ.

# ವಿದ್ಯಾವಂತರು ಸಮಾಜಮುಖಿ ಕೆಲಸಗಳಲ್ಲಿ ಗುರುತಿಸಿಕೊಳ್ಳಿ



**ತುಮಕೂರು:** ಡಾಕ್ಟರೇಟ್ ಪಡೆದಿರುವ ಯುವಕರು, ವಿದ್ಯಾವಂತರು ಸಮಾಜಮುಖಿ ಕೆಲಸ ಮಾಡುವುದರಲ್ಲಿ ತಮ್ಮನ್ನು ತಾವು ಸದಾ ಚಟುವಟಿಕೆಯಿಂದ ಕೂಡಿಸಿಕೊಂಡಿರುತ್ತಾರೆ ಸಮುದಾಯ ಹಮ್ಮಿಕೊಳ್ಳುವ ಎಲ್ಲಾ ಕೆಲಸ ಕಾರ್ಯಗಳಲ್ಲಿ ಸಮಾಜ ಸೇವೆಯಲ್ಲಿ ಮುಂದೆ ನಿಂತು ಕೆಲಸ ನಿರ್ವಹಿಸುತ್ತಾರೆ ಎಂದು ಹಲವಾರು ನಿದರ್ಶನಗಳನ್ನು ನೀಡಿದರು ಹರೀಶ್ ರವರನ್ನು ಚುನಾವಣೆಯಲ್ಲಿ ಗೆಲ್ಲಿಸುವುದು ನಮ್ಮೆಲ್ಲರ ಕರ್ತವ್ಯ ಅಂದು ನಾವು ಜಯನಗರದ ವಿಪ್ರಭವನಕ್ಕೆ ಬಂದು ಮತವನ್ನು ಚಲಾಯಿಸಬೇಕು ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಉಪಾಧ್ಯಕ್ಷರಾದ ಎಂ.ಕೆ.ನಾಗರಾಜರಾವ್ ರವರು ತಿಳಿಸಿದರು.

ನಗರದ ಜಯನಗರದ ಲಕ್ಷ್ಮಿ ವೆಂಕಟೇಶ್ವರ ಸ್ವಾಮಿ ದೇವಸ್ಥಾನದ ಸಭಾಂಗಣದಲ್ಲಿ ಏ.7 ರಂದು ನಡೆದ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಇದರ ಚುನಾವಣೆ ಅಂಗವಾಗಿ ತುಮಕೂರು ಜಿಲ್ಲಾ ಪ್ರತಿನಿಧಿ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ಹರೀಶ್ ಹೆಚ್ ಕ್ರಮ ಸಂಖ್ಯೆ-3 ಇವರನ್ನು ಬೆಂಬಲಿಸುವ ಸಲುವಾಗಿ ಸಭೆಯನ್ನು ಹಮ್ಮಿಕೊಳ್ಳಲಾಗಿದೆ. ಏ.13ರಂದು ಭಾನುವಾರ ನಡೆಯಲಿರುವ ಸಭೆಗೆ ಪಾಲ್ಗೊಂಡು ಚುನಾವಣೆಯಲ್ಲಿ ಪಾಲ್ಗೊಳ್ಳಬೇಕು ಎಂದರು.

ವೇ. ಬ್ರ.ಶ್ರೀ ರಾಮಸ್ವಾಮಿ ಅಯ್ಯಂಗಾರ್ ಡಾ. ಹರೀಶ್ ರವರು ತುಮಕೂರಿನ ಬ್ರಾಹ್ಮಣ ಸಮುದಾಯದಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಲ್ಲಾ ಕಾರ್ಯಕ್ರಮಗಳಲ್ಲೂ ಸಹ ಮುಂಚೂಣಿಯಲ್ಲಿ ನಿಂತು ಕೆಲಸ ನಿರ್ವಹಿಸುತ್ತಾರೆ ಇವರನ್ನು ಬೆಂಬಲಿಸಿ ಪ್ರೋತ್ಸಾಹಿಸಿ ಚುನಾಯಿತರನ್ನಾಗಿ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ತಿಳಿಸಿದರು. ಆರ್ಯನ್ ಅಸೋಸಿಯೇಷನ್ ಕಾರ್ಯದರ್ಶಿ ಆರ್.ಎನ್. ಸತ್ಯನಾರಾಯಣ ಮಾತನಾಡಿ ಹರೀಶ್‌ರವರು ಸಮುದಾಯ ಹಮ್ಮಿಕೊಳ್ಳುವ ಸಮಾಜಮುಖಿ ಎಲ್ಲಾ ಕಾರ್ಯಗಳನ್ನು ಮುಂಚೂಣಿಯಲ್ಲಿ ನಿಂತು ಕೆಲಸ ನಿರ್ವಹಿಸುತ್ತಿದ್ದಾರೆ, ಯುವಕರನ್ನು ಪ್ರೋತ್ಸಾಹಿಸಬೇಕು ಹಾಗೂ ಬೆಂಬಲಿಸಬೇಕು ಇವರನ್ನು ಚುನಾಯಿತರನ್ನಾಗಿ ಮಾಡುವುದು ನಮ್ಮೆಲ್ಲರ ಕರ್ತವ್ಯ ಇವರು ಚುನಾಯಿತರಾದರೆ ನಮಗೆ ಹೆಮ್ಮೆಯ ವಿ?ಯ ಎಂದು ತಿಳಿಸಿದರು.

ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಉಪಾಧ್ಯಕ್ಷರಾದ ಹರೀಶ್.ಡಿಎಸ್ ಮಾತನಾಡಿ ಹರೀಶ್ ರವರು ಕೋವಿಡ್ ಸಲ್ಲಿಸಿದ ಸೇವೆಯನ್ನು ಸ್ಮರಿಸಿದ್ದರು. ಅನಂತರಾಮಯ್ಯ (ಮುಳುಕುಂಟೆ) ಇವರು ಮಾತನಾಡಿ ನಾನು ಸಹ ಎಕೆಬಿಎಂಎಸ್ ಚುನಾವಣೆಗೆ ಸ್ಪರ್ಧಿಸಿದ್ದೆ ಯುವಕರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಭಾವಿಸಿ ನಾನು ನನ್ನ ಸಲ್ಲಿಸಿದ್ದ ನನ್ನ ಉಮೇದುವಾರಿಕೆಯನ್ನು ಹಿಂತೆಗೆದುಕೊಂಡು ಹರೀಶ್ ರವರಿಗೆ ನನ್ನ ಬೆಂಬಲ ಸೂಚಿಸುತ್ತಿದ್ದೇನೆ ಹಾಗೂ ಅವರೊಂದಿಗೆ ಸಕ್ರಿಯವಾಗಿ ಪಾಲ್ಗೊಂಡು ಅವರ ಚುನಾವಣೆಯ ಗೆಲುವಿಗೆ ಶ್ರಮಿಸುತ್ತೇನೆ ಎಂದು ತಿಳಿಸಿದರು.

ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಸಂಘಟನಾ ಕಾರ್ಯದರ್ಶಿ, ಶ್ರೀ ಶ್ರೀನಿವಾಸ್(ಖಟಿಣಡಿಚಿಟಬಿಜ) ಮಾತನಾಡಿ ಹರೀಶ್ ರವರು ಚುನಾವಣೆಯಲ್ಲಿ ಅಧಿಕ ಮತ ಪಡೆದು ಗೆಲ್ಲುವುದು ಖಚಿತ ಇವರು ತಮ್ಮ ಚಿಕ್ಕವಯಸ್ಸಿನಲ್ಲಿ ಸಮಾಜಮುಖಿ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು ಇದು ನಮಗೆಲ್ಲರಿಗೂ ಆದರ್ಶಪ್ರಾಯ ಎಂದರು.

ಮುಲುಕು ನಾಡು ಸಂಘದ ಅಧ್ಯಕ್ಷರಾದ ಶ್ರೀ ವೆಂಕಟನಾರಾಯಣ ಶಾಸ್ತ್ರಿ ಸಭೆಯ ಉದ್ದೇಶಿಸಿ ಮಾತನಾಡಿ ಹರೀಶ್ ರವರು ಬ್ರಾಹ್ಮಣ ಸೇವಾ ಸಂಘದಲ್ಲಿ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸುತ್ತಿದ್ದು ಅವರ ಕಾರ್ಯ ಚಟುವಟಿಕೆಯನ್ನು ನಾವು ಬಹಳ ಹತ್ತಿರದಿಂದ ಗಮನಿಸುತ್ತಿದ್ದೇವೆ ಅವರ ಕಾರ್ಯವೈಕರಿ ಎಲ್ಲರ ಮೆಚ್ಚುಗೆಗೆ ಕಾರಣವಾಗಿದೆ ಅವರ ಕ್ರಿಯಾಶೀಲತೆಗೆ ನಾವೆಲ್ಲರೂ ತಲೆ ತೂಗಬೇಕು ಎಂದು ಸಭೆಗೆ ತಿಳಿಸಿದರು, ನಮ್ಮ ಸಂಘ ಇವರನ್ನು ಬೆಂಬಲಿಸಲಿದೆ ಎಂದು ಸಭೆಯಲ್ಲಿ ಘೋಷಿಸಿದರು.

ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಅಧ್ಯಕ್ಷರಾದ ಶ್ರೀ ಎಚ್.ಎನ್.ಚಂದ್ರಶೇಖರ್ ಮಾತನಾಡಿ ಹರೀಶ್ ಹಿರಿಯಣ್ಣ ರವರು ನಮ್ಮ ಅಭ್ಯರ್ಥಿ ಅವರು ಅಧಿಕ ಮತವನ್ನು ಪಡೆದು ಗೆಲ್ಲುವುದರಲ್ಲಿ ಯಾವುದೇ ಸಂದೇಹವಿಲ್ಲ ಈಗಾಗಲೇ ಜನರ ಅಭಿಪ್ರಾಯ ಇವರ ಪರವಾಗಿದೆ, ಅವರ ಕಾರ್ಯ ವೈಖರಿಯನ್ನು ಬಹಳ ವ?ದಿಂದ ತುಮಕೂರಿನ ಸಮುದಾಯದ ಜನ ಗಮನಿಸುತ್ತಿದ್ದಾರೆ ಎಲ್ಲರ ಮೆಚ್ಚುಗೆಗೆ ಈಗಾಗಲೇ ಅವರು ಪಾತ್ರರಾಗಿದ್ದಾರೆ ಏ.13 ರಂದು ವಿಪ್ರ ಭವನದ, ಜಯನಗರ ಇಲ್ಲಿ ನಡೆಯುವ ಚುನಾವಣೆಯಲ್ಲಿ ತಾವೆಲ್ಲರೂ ಸಕ್ರಿಯವಾಗಿ ಪಾಲ್ಗೊಂಡು ಚುನಾವಣೆಯಲ್ಲಿ ಶ್ರೀಯುತ ಹರೀಶ್ ರವರನ್ನು ಗೆಲ್ಲಿಸಬೇಕು ಎಂದು ಕರೆ ನೀಡಿದರು. ತುಮಕೂರು ಜಿಲ್ಲಾ ಬ್ರಾಹ್ಮಣ ಸಭಾದ ಖಜಾಂಚಿಯಾದ ಭಾರತಿ ಶ್ರೀನಿವಾಸ್ ಮಾತನಾಡಿ ಹರೀಶ್ ರವರನ್ನು ನಾವು ಚಿಕ್ಕವಯಸ್ಸಿನಿಂದ ನೋಡುತ್ತಿದ್ದೇವೆ ಅವರು ವೃತ್ತಿಪರರು ಯಾವುದೇ ಕಾರ್ಯವನ್ನು ಕೈಗೆತ್ತಿಕೊಂಡರೆ ಎಲ್ಲರನ್ನೂ ಜೊತೆಗೆ ಸೇರಿಸಿಕೊಂಡು ಕಾರ್ಯನಿರ್ವಹಿಸುತ್ತಾರೆ ಅವರಲ್ಲಿ ನಾವು ನಾಯಕತ್ವ ಗುಣವನ್ನು ಕಾಣುತ್ತೇವೆ ಎಂದು ಸಭೆಗೆ ತಿಳಿಸಿದರು. ಎಲ್ಲರೂ ಚುನಾವಣೆಯ ದಿನದಂದು ಮತವನ್ನು ಚಲಾಯಿಸಿ ಶ್ರೀ ಹರೀಶ್ ರವರನ್ನು ಚುನಾವನೆಯಲ್ಲಿ ಅಧಿಕ ಮತದಿಂದ ಗೆಲ್ಲಿಸಬೇಕು ಎಂದು ಸಭೆಗೆ ಕೋರಿದರು.

### ಚಿಕ್ಕಬಳ್ಳಾಪುರ ನಗರಸಭೆ

# ಮಳಿಗೆಗಳಿಗೆ ಹರಾಜು ಪ್ರಕ್ರಿಯೆ




**ಚಿಕ್ಕಬಳ್ಳಾಪುರ:** 99 ನಗರಸಭೆ ಮಳಿಗೆಗಳಿಗೆ ಹರಾಜು ಪ್ರಕ್ರಿಯೆ ಇದೇ ತಿಂಗಳ 16 ಕ್ಕೆ ನಿಗದಿಯಾಗಿದ್ದು ಈಗಿರುವ ಮಳಿಗೆಗಳ ಬಾಡಿಗೆದಾರರು ಕೂಡ ಹರಾಜಿನಲ್ಲಿ ಭಾಗವಹಿಸಬೇಕೆಂದು ಹೇಳಲಾಗಿದ್ದು ಈ ಪ್ರಕ್ರಿಯ ನಗರಸಭೆ ಮಳಿಗೆ ಬಾಡಿಗೆದಾರರಲ್ಲಿ ನಿರಾಸೆ ಉಂಟುಮಾಡಿದೆ ಎನ್ನಲಾಗಿದ್ದು ಈಗಿರುವ ಬಾಡಿಗೆದಾರರು ತಮಗೆ ಅಂಗಡಿ ನೀಡಬೇಕು ಎಸ್ ಆರ್ ವ್ಯಾಲ್ಯು ನೀಡಲು ಸಿದ್ದರಿದ್ದೇವೆ ಎನ್ನುವ ಅವರ ಮಾತಾಗಿದೆ ಎನ್ನಲಾಗಿದೆ ,ನಾವಿರುವ ಅಂಗಡಿಗಳು ಮತ್ತೆ ನಮಗೆ ಮಾಡಿಕೊಡಬೇಕೆಂಬ ಒತ್ತಾಯ ಈಗಿರುವ ನಗರಸಭೆ ಮಳಿಗೆಗಳ ಬಾಡಿಗೆದಾರರದ್ದು,ಇನ್ನು ಸೋಮವಾರ ಬೆಳಿಗ್ಗೆ ಶಾಸಕರಾದ ಪ್ರದೀಪ್ ಈಶ್ವರ್ ನಗರದ ಸಂತೆ ಮಾರುಕಟ್ಟೆಗೆ ಭೇಟಿ ನೀಡಿದರು,ಇದೇ ಸಂದರ್ಭದಲ್ಲಿ ನಗರಸಭೆ ಮಳಿಗೆಗಳ ಸಂತೆ ಮಾರುಕಟ್ಟೆ ಬಾಡಿಗೆದಾರರು ಶಾಸಕರಗೆ ವಾಸ್ತವಾಂಶ ತಿಳಿಸಿದರು ಹತ್ತಾರು ವರ್ಷಗಳಿಂದ ಮಳಿಗೆಯಲ್ಲಿ ವ್ಯವಹಾರ ನಡೆಸುತ್ತಿದ್ದೇವೆ ಇದರಿಂದಲೆ ನಮ್ಮ ಜೀವನ ನಡೆಯುತ್ತಿದೆ ಈಗ ಹರಾಜಿನಲ್ಲಿ ನೀವು ಭಾಗವಹಿಸಬೇಕು ಬೇರೆಯವರು ನಿಮ್ಮ ಅಂಗಡಿಗೆ ಬಿಡ್ ಮಾಡಿದರೆ ನಿಮಗೆ ಮತ್ತೆ ಅದೇ ಮಳಿಗೆ ಬೇಕೆಂದರೆ ಬಿಡ್ನ ಐದರಷ್ಟು ಹೆಚ್ಚುವರಿ ಒಪ್ಪಿದರೆ ನಿಮಗೆ ಮಾಡಿಕೊಡಲಾಗುವುದು ಎನ್ನುವುದು ಎಷ್ಟು ಸರಿ ಇನ್ನು ಹಲವರು ಬೇಕೆಂದೇ ಬಿಡ್ ಸಂದರ್ಭದಲ್ಲಿ ಹೆಚ್ಚು ಬಿಡ್ ಮಾಡ್ತಾರೆ,ಬಾಡಿಗೆ ಪಡೆದು ಕೆಲವೇ ತಿಂಗಳಲ್ಲಿ ಅಂಗಡಿ ಬಿಡ್ತಾರೆ ಇನ್ನು ಹತ್ತಾರು ಸಮಸ್ಯೆಗಳಿಧ್ದು ಹೀಗಿರುವಾಗ ಹಳೆಯ ಬಾಡಿಗೆದಾರರಿಗೆ ಅಂಗಡಿ ನೀಡುವ ಬದಲು ಹರಾಜಿನಲ್ಲಿ ನೀವು ಭಾಗವಹಿಸಬೇಕು ಎಂಬುದು ಸಮಂಜಸವಲ್ಲ,ಏಕಾಏಕಿ ಅಂಗಡಿ ಖಾಲಿ ಮಾಡಿ ಆಚೆ ನಡೆದರೆ ನಮ್ಮ ಜೀವನ ಬೀದಿಗೆ ಬರುತ್ತೆ,ಎಸ್ ಆರ್ ವ್ಯಾಲ್ಯೂ ಕೊಡಕ್ಕೆ ನಾವು ತಯಾರಿದ್ದೇವೆ ಎಂದೆಲ್ಲ ಬಾಡಿಗೆದಾರರು ಶಾಸಕರ ಬಳಿ ಹೇಳಿಕೊಂಡರು,ಎಲ್ಲ ವಾಸ್ತವಾಂಶಗಳ ಬಗ್ಗೆ ಶಾಸಕರಗೆ ತಿಳಿಸಲಾಗಿದ್ದು ಸಂಭಂದಪಟ್ಟವರ ಜತೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದ್ದು ಸ್ವಲ್ಪ ಸಮಾಧಾನ ತಂದಿದೆ ಎಂದು ಅಂಗಡಿ ಬಾಡಿಗೆದಾರರು ಇದೇ ಸಂದರ್ಭದಲ್ಲಿ ಹೇಳಿಕೊಂಡರು,ಇನ್ನು ಎಲ್ಲವನ್ನು ಕೇಳಿದ ಶಾಸಕರು ನಾನು ನಿಮ್ಮೊಂದಿಗೆ ಇರುತ್ತೇನೆ ಎಂದು ಅಂಗಡಿ ಬಾಡಿಗೆದಾರರಿಗೆ ಧೈರ್ಯ ತುಂಬಿದರು.ಈ ಸಂದರ್ಭದಲ್ಲಿ ಸಿಪಿ ಗುರುರಾಜ್,ಸೀತಾರಾಮ್, ಅನಿಲ್ ಕುಮಾರ್ ,ಮಂಜುನಾಥ್,ಏಕ್ಬಾಲ್, ಇಸ್ಮಾಯಿಲ್ ಲಕ್ಷ್ಮಿಪತಿ,ಹರೀಶ್,ವೆಂಕಟಸ್ವಾಮಿ, ಶಿವಕುಮಾರ್ ,ರಾಘವೇಂದ್ರ ಇತರರು ಇದ್ದರು.

## ಏರಿಕೆಯಾಗಿರುವ ಡೀಸೆಲ್ ಮಾರಾಟ ತೆರಿಗೆಯನ್ನು ಸರ್ಕಾರ ಮರುಪರಿಶೀಲಿಸಲು ಆಗ್ರಹ

**ಕೋಲಾರ:** ಡೀಸೆಲ್ ಮೇಲೆ ಏರಿಕೆ ಮಾಡಿರುವ ಮಾರಾಟ ತೆರಿಗೆಯನ್ನು ಸರ್ಕಾರ ಮರುಪರಿಶೀಲಿಸಬೇಕೆಂದು ಆಗ್ರಹಿಸಿ ದಿ ಕೋಲಾರ ಲಾರಿ ಓನರ್ಸ್ ಅಸೋಸಿಯೇಷನ್ನಿಂದ ಮುಖ್ಯಮಂತ್ರಿಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ದಿ ಕೋಲಾರ ಲಾರಿ ಓನರ್ಸ್ ಅಸೋಸಿಯೇಷನ್ ಅಧ್ಯಕ್ಷ ಎ.ಕುಮಾರ್, 1.4.2025ರ ಮಧ್ಯ ರಾತ್ರಿಯಿಂದ ಸರ್ಕಾರ ಏರಿಸಿರುವ ಡೀಸೆಲ್ ಮೇಲಿನ ಮಾರಾಟ ತೆರಿಗೆಯಿಂದ ಸರಕು ಸಾಗಾಣಿಕೆ ಉದ್ಯಮವು ತತ್ತರಿಸಿದೆ. ಸರ್ಕಾರ ಆಡಳಿತಕ್ಕೆ ಬಂದಾಗಲೇ 1.ರೂ ಇದ್ದ ತೆರಿಗೆಯನ್ನು 52 ಪೈಸೆ ಏರಿಕೆ ಮಾಡಿದ್ದು ಇದೀಗ ಏಕಾಏಕಿ 2 ರೂಗೆ ಏರಿಕೆ ಮಾಡಿರುವುದು ಗಾಯದ ಮೇಲೆ ಬರೆ ಎಳೆದಂತಾಗಿದೆ. ಇದರಿಂದಾಗಿ ಲಾರಿ ಮಾಲೀಕರು ಇಂಧನ ಏರಿಕೆಯನ್ನು ಸರಿದೂಗಿಸಲು ಕಷ್ಟಕರವಾಗಿದೆ. ಸರಕು ಸಾಗಾಣಿಕೆ ಉದ್ಯಮವು ಬೇಡಿಕೆ ಮತ್ತು ಪೂರೈಕೆ ನೆಲೆಗಟ್ಟಿನಲ್ಲಿ ಕೆಲಸ ಮಾಡುತ್ತಿದ್ದು ಹೆಚ್ಚಿನ ಜನರು ಆಸ್ತಿ ಮಾರಿ ಅಥವಾ ಸಾಲ ಪಡೆದು ಇಎಂಐ ಮೂಲಕ ಲಾರಿ ಓಡಿಸುತ್ತಿದ್ದಾರೆ. ಕೆಲವು ಲಾರಿ ಮಾಲೀಕರು ಉದ್ಯೋಗದಾತರಾಗಿದ್ದರೆ ಉಳಿದವರು ಸ್ವಯಂ ಉದ್ಯೋಗಿಗಳಾಗಿ ಜೀವನ ಮಾಡುತ್ತಿದ್ದಾರೆ. ಇಂತಹ ಸ್ಥಿತಿಯಲ್ಲಿ ಬೆಲೆ ಏರಿಕೆ ಕಷ್ಟ ಉಂಟು ಮಾಡಿದ್ದು ಬೆಲೆ ಏರಿಕೆ ಮುಗಿಯುವ ಲಕ್ಷಣಗಳು ಕಾಣುತ್ತಿಲ್ಲ. ಇದರಿಂದ ಸಾಗಾಣಿಕೆ ದರ ಕೂಡಾ ಹೆಚ್ಚಳವಾಗಿ ಸಾರ್ವಜನಿಕರಿಗೆ ಜೀವನ ನಡೆಸಲು ಸಂಕಷ್ಟ ಆಗುತ್ತದೆ. ಹೀಗಾಗಿ ಸರ್ಕಾರ ಡೀಸೆಲ್ ಮೇಲೆ ಏರಿಕೆ ಮಾಡಿರುವ ಮಾರಾಟ ತೆರಿಗೆಯನ್ನು ಮರುಪರಿಶಿಲೀಸಬೇಕೆಂದು ಕುಮಾರ್ ಮನವಿ ಮಾಡಿದರು. ದಿ ಕೋಲಾರ ಲಾರಿ ಓನರ್ಸ್ ಅಸೋಸಿಯೇಷನ್ ಕಾರ್ಯದರ್ಶಿ ಎ.ಜಿ.ಸೋಮನಾಥ್, ನಿರ್ದೇಶಕರಾದ ಬಾಷ, ಮುಜ್ಜು, ಅಕ್ರಂ, ಆಸೀಫ್,ಶ್ರೀನಿವಾಸ್, ಮುನಿರಾಜ್, ಎ.ಜಿ.ನಾರಾಯಣಸ್ವಾಮಿ ಇದ್ದರು.

ಫೋಟೋ ಕ್ಯಾಪ್ಷನ್: ಡೀಸೆಲ್ ಮೇಲೆ ಏರಿಕೆ ಮಾಡಿರುವ ಮಾರಾಟ ತೆರಿಗೆಯನ್ನು ಸರ್ಕಾರ ಮರುಪರಿಶಿಲೀಸಬೇಕೆಂದು ಆಗ್ರಹಿಸಿ ದಿ ಕೋಲಾರ ಲಾರಿ ಓನರ್ಸ್ ಅಸೋಸಿಯೇಷನ್ನಿಂದ ಡಿಸಿಗೆ ಮನವಿ ಸಲ್ಲಿಸಲಾಯಿತು.



## ಪಿ.ಯು ಫಲಿತಾಂಶ: ಎಸ್.ಎಸ್.ಪದವಿ ಪೂರ್ವ ಕಾಲೇಜು ಉತ್ತಮ ಫಲಿತಾಂಶ: ತಾಲೂಕಿಗೆ ಪ್ರಥಮ

**ತಿಪಟೂರು :** ನಗರದ ಎಸ್.ಎಸ್. ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದಲ್ಲಿ ತಾಲ್ಲೂಕಿಗೆ ಮತ್ತೆ ಪ್ರಥಮ ಸ್ಥಾನವನ್ನು ಪಡೆದಿದೆ.

ವಿಜ್ಞಾನ ವಿಭಾಗದಲ್ಲಿ ಹರಿಪ್ರೀತ್.ಎ 591 ಅಂಕಗಳೊಂದಿಗೆ ರಾಜ್ಯಕ್ಕೆ ಒಂಭತ್ತನೇ ರ್‍ಯಾಂಕ್ ಪಡೆದು ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದಿರುತ್ತಾರೆ. ರಸಾಯನಶಾಸ್ತ್ರ-100, ಗಣಿತಶಾಸ್ತ್ರ-100, ಜೀವಶಾಸ್ತ್ರ-100, ಭೌತಶಾಸ್ತ್ರ-99, ಕನ್ನಡ 97, ಹಾಗೂ ಇಂಗ್ಲೀಷ್‌ನಲ್ಲಿ 95 ಅಂಕಗಳನ್ನು ಪಡೆದಿರುತ್ತಾರೆ. ವಾಣಿಜ್ಯ ವಿಭಾಗದಲ್ಲಿ ಶ್ರೇಯಸ್ ಆರ್ಯವಿ. 589 ಅಂಕಗಳನ್ನು ಪಡೆದು ರಾಜ್ಯಕ್ಕೆ 11ನೇ ರ್‍ಯಾಂಕ್ ಪಡೆದು ತಾಲ್ಲೂಕಿಗೆ ಪ್ರಥಮಸ್ಥಾನ ಪಡೆದಿರುತ್ತಾರೆ. ಲೆಕ್ಕಶಾಸ್ತ್ರ-100, ಸಂಖ್ಯಾಶಾಸ್ತ್ರ-100, ಮೂಲಗಣಿತ 100, ವ್ಯವಹಾರ ಅಧ್ಯಯನ 99, ಕನ್ನಡ - 96, ಇಂಗ್ಲೀಷ್ ?94 ಅಂಕಗಳನ್ನುಗಳಿಸಿರುತ್ತಾರೆ, ಇದರೊಂದಿಗೆ ಸತತ ಆರನೇ ವರ್ಷವೂ ವಾಣಿಜ್ಯ ವಿಭಾಗದಲ್ಲಿ ಶೇಕಡ 100 ಫಲಿತಾಂಶ ದಾಖಲಿಸಿದೆ. ತಿಪಟೂರಿನ ಪ್ರತಿಷ್ಠಿತ ಕಾಲೇಜು ಎಂಬ ಹೆಗ್ಗಳಿಕೆ ಉಳಿಸಿಕೊಂಡಿದೆ. ಕಾಲೇಜಿನಲ್ಲಿ ಒಟ್ಟು 123 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು 52 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯಲ್ಲಿ ಹಾಗೂ 57ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಿರುತ್ತಾರೆ. ಸಂಖ್ಯಾಶಾಸ್ತ್ರದಲ್ಲಿ 15 ವಿದ್ಯಾರ್ಥಿಗಳು, ಲೆಕ್ಕಶಾಸ್ತ್ರದಲ್ಲಿ 02, ಮೂಲಗಣಿತದಲ್ಲಿ 02, ಹಾಗೂ ಕನ್ನಡ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಮತ್ತು ಜೀವಶಾಸ್ತ್ರದಲ್ಲಿ ತಲಾ ಒಂದೊಂದರಂತೆ ಒಟ್ಟು 23 ವಿದ್ಯಾರ್ಥಿಗಳು 100ಕ್ಕೆ 100 ಅಂಕಗಳನ್ನುಗಳಿಸಿ ಕಾಲೇಜಿನ ಕೀರ್ತಿ ಹೆಚ್ಚಿಸಿರುತ್ತಾರೆ.ಎಸ್.ಎಸ್. ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿಗಳ ಈ ಉತ್ತಮ ಸಾಧನೆಗಾಗಿ ಕಾಲೇಜಿನ ಕಾರ್ಯದರ್ಶಿ ಯಮುನ, ಶೈಕ್ಷಣಿಕ ಮುಖ್ಯಸ್ಥ ಡಾ.ಎ.ಎಂ.ಶಿವಣ್ಣ ಹಾಗೂ ಪ್ರಾಂಶುಪಾಲೆ ವೀಣಾಡಿ. ಸಾಧನೆ ಮಾಡಿರುವ ಎಲ್ಲಾ ವಿದ್ಯಾರ್ಥಿಗಳನ್ನು ಅಭಿನಂದಿಸಿರುತ್ತಾರೆ. ಈ ಅತ್ಯುತ್ತಮ ಫಲಿತಾಂಶಕ್ಕೆ ಸಹಕಾರ ನೀಡಿರುವ ಎಲ್ಲಾ ಪೋಷಕರು, ಉಪನ್ಯಾಸಕರು ಹಾಗೂ ಸಿಬ್ಬಂದಿಗೆ ಆಡಳಿತ ಮಂಡಳಿ ಧನ್ಯವಾದ ತಿಳಿಸಿರುತ್ತಾರೆ.

## 101 ವರ್ಷ ಪೂರೈಸಿದ ರಾಜಯೋಗಿನಿ ಬ್ರಹ್ಮಾಕುಮಾರಿ ದಾದಿ ರತನ್ ಮೋಹಿನೀಜೀ ಇನ್ನಿಲ್ಲ

ಬ್ರಹ್ಮಾಕುಮಾರಿಸ್ ಸಂಸ್ಥೆಯ ಆಡಳಿತ ಮುಖ್ಯಸ್ಥೆ ದಾದಿ ರತನ್ ಮೋಹಿನೀಜಿ ಅವರು ಇಂದು, 8 ಏಪ್ರಿಲ್ 2025 ರಂದು ಬೆಳಗ್ಗೆ 1:20 ಕ್ಕೆ ಅಹಮದಾಬಾದ್ನಲ್ಲಿ ತಮ್ಮ 101ನೇ ವಯಸ್ಸಿನಲ್ಲಿ ನಶ್ವರ ದೇಹವನ್ನು ತ್ಯಜಿಸಿದ್ದಾರೆ. ಮಾರ್ಚ್ 25, 1925 ರಂದು ಹೈದರಾಬಾದ್, ಸಿಂಧ್ನಲ್ಲಿ ಜನಿಸಿದ ದಾದೀಜಿ ಅವರು ತಮ್ಮ ಕೋಮಲ ವಯಸ್ಸಿನಿಂದಲೇ ತಮ್ಮ ಜೀವನವನ್ನು ಆಧ್ಯಾತ್ಮಿಕ ಸೇವೆಗೆ ಸಮರ್ಪಿಸಿದರು. ಅವರ ಅಚಲ ಬದ್ಧತೆ ಮತ್ತು ಆಳವಾದ ಜ್ಞಾನವು ವಿಶ್ವದಾದ್ಯಂತ ಅಸಂಖ್ಯಾತ ಆತ್ಮಗಳಿಗೆ ಮಾರ್ಗದರ್ಶನ ನೀಡಿದೆ. ಆಡಳಿತ ಮುಖ್ಯಸ್ಥರಾಗಿ, ಅವರು ದೈವಿಕ ನಾಯಕತ್ವವನ್ನು ಮೂರ್ತಿಕರಿಸಿ, ಬ್ರಹ್ಮಾಕುಮಾರಿಸ್ ಸಂಸ್ಥೆಯನ್ನು ಶಾಂತಿ ಮತ್ತು ವಿನಮ್ರತೆಯಿಂದ ಮುನ್ನಡೆಸಿದರು. ಶಾಂತಿ, ಪ್ರೀತಿ ಮತ್ತು ಜ್ಞಾನೋದಯದ ಅವರ ಪರಂಪರೆಯು ಮುಂದಿನ ಪೀಳಿಗೆಗಳಿಗೆ ಸ್ಪೂರ್ತಿ ನೀಡುತ್ತಲೇ ಇರುತ್ತದೆ. ಮೃತರಿಗೆ ಶಾಂತಿ ಸಿಗಲೆಂದು ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದೀಜಿ, ರಾಷ್ಟ್ರಪತಿಗಳಾದ ದ್ರೌಪದಿ ಮುರ್ಮರವರು ಸೇರಿದಂತೆ ಅನೇಕ ಸ್ವಾಮೀಜಿಗಳು ರಾಜಕಾರಣಿಗಳು, ರಾಜಯೋಗ ಶಿಕ್ಷಕಿಯರು ರಾಜಯೋಗ ವಿದ್ಯಾರ್ಥಿಗಳು, ಮ?ಸೂರು ಉಪವಿಭಾಗದ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜೀ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ ಜಿಲ್ಲಾ ಸಂಚಾಲಕಿ ಪ್ರಭಾಮಣೀಜೀ ಪ್ರಾಂಶುಪಾಲರಾದ ರಾಜಯೋಗಿ ಬ್ರಹ್ಮಾಕುಮಾರ ರಂಗನಾಥ ಶಾಸ್ತ್ರೀಜೀ ಓಂಶಾಂತಿ ನ್ಯೂಸ್ ಸರ್ವಿಸ್ ನ ಬಿ. ಕೆ.ಆರಾಧ್ಯಸಂತಾಪ ಸೂಚಿಸಿದ್ದಾರೆ ಮೃತರ ಪಾರ್ಥೀವ ಶರೀರವನ್ನು ಮೌಂಟ್ ಅಬು ಪರ್ವತ ಶಾಂತಿ ವನದ ಕಾನ್ಫರೆನ್ಸ್ ಹಾಲ್ನಲ್ಲಿ ಇಡಲಾಗಿದೆ. 10 ರಂದು ಸಂಸ್ಕಾರ ಮಾಡಲಾಗುವುದು ಎಂದು ಸಂಸ್ಥೆ ತಿಳಿಸಿದೆ.

## ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಪದವಿ ಪೂರ್ವ ಫಲಿತಾಂಶ

**ತಿಪಟೂರು:** 2024-25 ನೇಸಾಲಿನ ದ್ವಿತೀಯ ಪಿಯುಸಿ ಫಲಿತಾಂಶ ತಾಲ್ಲೂಕಿನ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜು ಶೇ 76ರಷ್ಟು ಫಲಿತಾಂಶವನ್ನು ಪಡೆದಿದೆ ಎಂದು ಪ್ರಾಂಶುಪಾಲ ಎಂ ಡಿ ಶಿವಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ,

ಈ ವರ್ಜದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ನಮ್ಮ ಕಾಲೇಜಿನಲ್ಲಿ 814, ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು 618 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಕಾಲೇಜಿನಲ್ಲಿ 32 ಅತ್ಯುತ್ತಮ ಶ್ರೇಣಿ, 36 ವಿದ್ಯಾರ್ಥಿಗಳು ಪ್ರಥಮ ದರ್ಜೆ, 170 ವಿದ್ಯಾರ್ಥಿಗಳು ದ್ವಿತೀಯ ದರ್ಜೆ, 56 ವಿದ್ಯಾರ್ಥಿಗಳು ಉತ್ತೀರ್ಣ ದರ್ಜೆಯಲ್ಲಿ ತೇರ್ಗಡೆಯಾಗಿದ್ದಾರೆ, ವಾಣಿಜ್ಯ ವಿಭಾಗದಲ್ಲಿ ಮೋಹಿತ್ ಆರ್ ವಿದ್ಯಾರ್ಥಿ 600 ಕ್ಕೆ 567 ಅಂಕ ಪಡೆದು ಪ್ರಥಮ ಸ್ಥಾನ ಪಡೆದಿರುತ್ತಾರೆ. ದ್ವಿತೀಯ ಸ್ಥಾನ ಧನಲಕ್ಷ್ಮಿ 562 ಅಂಕಗಳನ್ನು ಪಡೆದಿರುತ್ತಾರೆ. ವಿಜ್ಞಾನ ವಿಭಾಗದಲ್ಲಿ ಸಾಕ್ಷಿ ಎ ಎಂ 548 ಅಂಕ ಪಡೆದು ಪ್ರಥಮ ಸ್ಥಾನ ಪಡೆದರೆ ಬೈರವಿ ಟಿಎಸ್ 546 ಅಂಕ ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾರೆ ಕಲಾ ವಿಭಾಗದಲ್ಲಿ ಮಧುಶ್ರೀ ಎಚ್ ಡಿ 543 ಅಂಕ ಪಡೆದು ಪ್ರಥಮ ಸ್ಥಾನ ಪಡೆದರೆ ಸುಮಾ 526 ಹಾಗೂ ಐಶ್ವರ್ಯ 525 ಅಂಕಗಳನ್ನು ಪಡೆದಿದ್ದಾರೆ, ಉತ್ತಮ ಫಲಿತಾಂಶ ಬರಲು ಉತ್ತಮ ಬೋಧನೆ ನೀಡಿದ ಉಪನ್ಯಾಸಕರು ಮತ್ತು ಅಭಿವೃದ್ಧಿ ಸಮಿತಿಯ ಎಲ್ಲಾ ಸದಸ್ಯರಿಗೂ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



# ಮುಖ್ಯಮಂತ್ರಿ ಪದಕ ವಿಜೇತ ಬೆಳ್ಳಾವಿ ಗ್ರಾಮದ ರಾಜೇಶ್ ಅವರಿಗೆ ಅಭಿನಂದನಾ ಸಮಾರಂಭ

**ಮಾಲೂರು:** ಪೋಲಿಸ್ ಇಲಾಖೆಯ ರಾಜ್ಯ ಗುಪ್ತ ವಾರ್ತೆ ವಿಭಾಗದಲ್ಲಿ ಅವರ ಅತ್ಯುತ್ತಮ ಸೇವೆಯನ್ನು ಗುರ್ತಿಸಿ ಬೆಳ್ಳಾವಿ ಗ್ರಾಮದ ರಾಜೇಶ್ ಅವರಿಗೆ ಮುಖ್ಯಮಂತ್ರಿ ಪದಕ ಪ್ರಶಸ್ತಿ ಲಭಿಸಿರುವುದು ಸಂತಸ ತಂದಿದೆ ಎಂದು ಬೆಳ್ಳಾವಿ ವೀರ ಸಿಂಹಾಸನ ಮಠದ ಮಹಾಂತೇಶ ಶಿವಾಚಾರ್ಯ ಲಿಂಗಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಮಾಲೂರು ಪಟ್ಟಣದ ಅಂಕಪ್ಪ ಬಡಾವಣೆಯಲ್ಲಿರುವ ಅಖಿಲ ವೀರಶೈವ ಸಮಾಜದ ತಾಲೂಕು ಘಟಕದ ನೂತನ ಕಟ್ಟಡದ ಸಭಾಂಗಣದಲ್ಲಿ ಮುಖ್ಯಮಂತ್ರಿ ಪದಕ ಪ್ರಶಸ್ತಿ ಪಡೆದ ರಾಜೇಶ್ ಅವರಿಗೆ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಬೆಳ್ಳಾವಿ ಗ್ರಾಮದ ರಾಜೇಶ್ ಅವರು ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದು, ರಾಜ್ಯ ಗುಪ್ತವಾರ್ತೆ ವಿಭಾಗದಲ್ಲಿ ಗುಪ್ತಚರರಾಗಿ 11 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದಾರೆ ಮುಂದೆ ಆಗಬಹುದಾದ ಅನಾಹುತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಮಾಹಿತಿಯನ್ನು ಸಂಗ್ರಹಿಸಿ ಗುಪ್ತಚರ ಇಲಾಖೆಗೆ ನೀಡಿದ ಕಾರಣ ಬಾರಿ ಅನಾಹುತಗಳೇ ತಪ್ಪಿವೆ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಿದ ರಾಜೇಶ್ ರವರ ಸೇವೆಯು ಮತ್ತಷ್ಟು ಉತ್ತಮವಾಗಿರಲಿ ಹಲವಾರು ಪ್ರಶಸ್ತಿಗಳು ಲಭಿಸಲಿ ಎಂದು ಶುಭ ಹಾರೈಸಿದರು.



ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಂಸ್ಥಾನ ಮಠದ ತಾಲೂಕು ಘಟಕದ ಅಧ್ಯಕ್ಷ ಶಿವಶಂಕರಪ್ಪ ಮಾತನಾಡಿ ರಾಜೇಶ್ ಅವರು ವೀರಶೈವ ಸಮಾಜದವರಾಗಿದ್ದು ಬೆಳ್ಳಾವಿ ಗ್ರಾಮದಲ್ಲಿ ಹುಟ್ಟಿ ಬೆಳೆದ ಇವರು ಪೊಲೀಸ್ ಇಲಾಖೆಯಲ್ಲಿ ಗುಪ್ತಚರ ವಿಭಾಗದಲ್ಲಿ ಉತ್ತಮ ರೀತಿಯಲ್ಲಿ ಸೇವೆ ಮಾಡುತ್ತಿರುವುದರಿಂದ ಇವರಿಗೆ ಮುಖ್ಯಮಂತ್ರಿ ಪದಕ ಪ್ರಶಸ್ತಿ ಲಭಿಸಿದೆ. ಇದು ವೀರಶೈವ ಲಿಂಗಾಯತ ಸಮಾಜಕ್ಕೆ ಸಂತಸ ತಂದಿದೆ ಇವರ ಸೇವೆ ಇಲಾಖೆಗೆ ಹೆಚ್ಚಿನ ರೀತಿಯಲ್ಲಿ ಸಿಗಲಿ ಎಂದು ಶುಭ ಹಾರೈಸಿದರು. ತಾಲ್ಲೂಕಿನಲ್ಲಿ ವೀರ ಶೈವ ಸಮಾಜದ ತಾಲ್ಲೂಕು ಘಟಕದ ವತಿಯಿಂದ ಸಮಾಜದ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಕಾರ್ಯ ನಿರ್ವಹಿಸಲಾಗುತ್ತಿದೆ ಸಮಾಜದ ಎಲ್ಲರ ಸಹಕಾರ ದಿಂದ ಪಟ್ಟಣದಲ್ಲಿ ಸುಸಜ್ಜಿತ ಭವನ ನಿರ್ಮಾಣ ಮಾಡಲಾಗುತ್ತಿದೆ. ಸಮಾಜದ ಸಾಧಕರನ್ನು ಗುರುತಿಸಿ ಅಭಿನಂದಿಸಲಾಗುತ್ತಿದೆ ಮುಂಬರುವ ದಿನಗಳಲ್ಲಿ ಸಹ ಸಮಾಜದ ಎಲ್ಲಾ ಸಹಕಾರ ಹಾಗೂ ಬೆಂಬಲದಿಂದ ಉತ್ತಮ ರೀತಿಯ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ವೀರಶೈವ ಸಮಾಜದ ಪ್ರಧಾನ ಕಾರ್ಯದರ್ಶಿ ಶಶಿಧರ್, ಕಾರ್ಯದರ್ಶಿ ಸೋಮಶೇಖರ್, ಯುವ ಘಟಕದ ಅಧ್ಯಕ್ಷ ನವೀನ್, ನಿರ್ದೇಶಕರುಗಳಾದ ಉಮೇಶ್, ಶಿವರುದ್ರಪ್ಪ, ಪತ್ರಿಕಾ ಕಾರ್ಯದರ್ಶಿ ನಂಜುಂಡಪ್ಪ, ರಮೇಶ್, ಗೌರಮ್ಮ, ಉದ್ಯಮಿ ವಿಶ್ವನಾಥ್, ಮಂಜುನಾಥ್ ಹಾಗೂ ಇತರರು ಹಾಜರಿದ್ದರು.

# ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗದಿರಲಿ




**ತಿಪಟೂರು:** ಗ್ರಾಮೀಣ ಭಾಗದ ಮಧ್ಯಮ ವರ್ಗದ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗದಿರಲಿ, ಮತ್ತು ಲಕ್ಷಾಂತರ ಹಣ ಪ್ರವೇಶ ಶುಲ್ಕವಾಗಿ ಕಟ್ಟಲು ಕಷ್ಟವಾಗುತ್ತಿರುವುದನ್ನು ಗಮನಿಸಿ ತಿಪಟೂರಿನ ಹತ್ತಿರದ ಕೋಟೆನಾಯಕನಹಳ್ಳಿ ಬಳಿ ವಿದ್ಯಾರ್ಥಿಗಳಿಗೆ ಗುರುಕುಲ ಪದ್ಧತಿಯಂತೆ ಆಚಾರ, ವಿಚಾರ, ಸಂಸ್ಕೃತಿ, ಮತ್ತು ಗುಣಮಟ್ಟದ ಬೋಧನೆಯೊಂದಿಗೆ ಎಸ್ ಆರ್ ಎಸ್ ಕ್ರೋಮ್ ಪಿಯು ಕಾಲೇಜು ತೆರೆದೆವು ತೆರೆದ ಮೂರು ವರ್ಷಗಳಲ್ಲಿ ಅತ್ಯುತ್ತಮ ಫಲಿತಾಂಶ ಬಂದಿರುವುದು ತೃಪ್ತಿಕರವಾಗಿದೆ ಈ ವಿಚಾರವಾಗಿ ಪ್ರಾಂಶುಪಾಲರು ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ರುದ್ರಮುನಿ ಸ್ವಾಮೀಜಿ ತಿಳಿಸಿದರು.

ನಗರದ ಹೊರವಲಯದಲ್ಲಿರುವ ತಮ್ಮ ಸಂಸ್ಥೆಯ ಎಸ್ ಆರ್ ಎಸ್ ಕಾಲೇಜು ಆವರಣದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ ದ್ವಿತೀಯ ಪಿಯುಸಿ ವಿದ್ಯಾರ್ಥಿನಿ ಸಿ ಕೆ, ಲಕ್ಷ್ಮಿ ರಾಜ್ಯಕ್ಕೆ 10ರ್‍ಯಾಂಕ್ ಪಡೆದು ಕಾಲೇಜಿನ ಕೀರ್ತಿಪತಾಕೆ ಎತ್ತರಕ್ಕೆ ಹಾರಿಸಿದ್ದಾರೆ, ಗ್ರಾಮೀಣ ಭಾಗದ ಮಧ್ಯಮ ವರ್ಗದ ವಿದ್ಯಾರ್ಥಿನಿ ಸಾಧನೆಗೆ ಹರ್ಷ ವ್ಯಕ್ತಪಡಿಸಿದರು. ಪ್ರಾಂಶುಪಾಲ ಪ್ರಕಾಶ್ ಮಾತನಾಡಿ ನಮ್ಮ ಕಾಲೇಜು ಕಳೆದ ವರ್ಷ 87% ಫಲಿತಾಂಶ ಪಡೆದು ಈ ಬಾರಿ 90% ಫಲಿತಾಂಶ ಪಡೆದಿದೆ ಜಿಲ್ಲೆಯಲ್ಲಿ ಅತ್ಯುತ್ತಮ ಕಾಲೇಜ್ ಆಗಿ ಜನಪ್ರಿಯವಾಗಿದೆ ನಮ್ಮಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳಾದ ಸಿಇಟಿ, ಎನ್ ಇಇ ಟಿ, ಮತ್ತು ಜೆಇಇ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶವನ್ನು ನೀಡುವುದರ ಮುಖಾಂತರ ಪ್ರತಿಷ್ಠಿತ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಕಾಲೇಜುಗಳಲ್ಲಿ ನಮ್ಮ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ ಎಂದು ಹೇಳಿದರು.

ಉಪ ಪ್ರಾಂಶುಪಾಲ ಸ್ವಾಮಿ ಮಾತನಾಡಿ ಕೋವಿಡ್ ಸಂದರ್ಭದಲ್ಲಿ 5 ವಿದ್ಯಾರ್ಥಿಗಳಿಂದ ಪ್ರಾರಂಭವಾದ ಕಾಲೇಜಿನಲ್ಲಿ ಬೋಧಕರು ಮತ್ತು ಸಿಬ್ಬಂದಿ ವರ್ಗ ಯಾವುದೇ ಹಣ ಆಮಿಷಗಳಿಗೆ ಒಳಗಾಗದೆ ಶಿಕ್ಷಣಕ್ಕೆ ಆದ್ಯತೆ ನೀಡಿದೆವು, ಪರಿಣಾಮವಾಗಿ ಕಳೆದ ವರ್ಷ 97% ಫಲಿತಾಂಶ ಸಿಕ್ಕಿದ್ದು, ಈ ವರ್ಷ ದ್ವಿತೀಯ ಪಿಯುಸಿಯಲ್ಲಿ90% ಫಲಿತಾಂಶ ಸಿಕ್ಕಿದೆ ನಮ್ಮ ಕಾಲೇಜಿನಲ್ಲಿ 61 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು ವಿದ್ಯಾರ್ಥಿನಿ, ಲಕ್ಷ್ಮಿ ಸಿ ಕೆ 600 ಅಂಕಗಳಿಗೆ 590 ಅಂಕ ಪಡೆದು ರಾಜ್ಯಕ್ಕೆ ಹತ್ತನೇ ರ್‍ಯಾಂಕ್ ಗಳಿಸಿದ್ದಾರೆ, ತುಮಕೂರಿಗೆ ದ್ವಿತೀಯ ಸ್ಥಾನ ಅಲಂಕರಿಸಿದ್ದಾರೆ ಎಂದು ಹೇಳಿದರು.

ಬಾಕ್ಸ್-ತಿಪಟೂರಿನ ಪ್ರತಿಷ್ಠಿತ ಕಾಲೇಜುಗಳನ್ನು ವಿಚಾರಿಸಿ ಲಕ್ಷಗಟ್ಟಲೆ ಪ್ರವೇಶ ಶುಲ್ಕ ಕಟ್ಟಲು ಹಣವಿಲ್ಲದಿದ್ದರಿಂದ ಈ ಕಾಲೇಜನ್ನು ಆಯ್ಕೆ ಮಾಡಿಕೊಂಡೆ ಪ್ರಾಂಶುಪಾಲರು ಮತ್ತು ಉಪನ್ಯಾಸಕರು ಧೈರ್ಯ ತುಂಬಿ ಉತ್ತಮ ಬೋಧನೆ ನೀಡಿದರು ನಾನು ಮುಂದೆ ಯುಪಿಎಸ್‌ಸಿ ಪರೀಕ್ಷೆ ಬರೆಯಬೇಕೆಂದು ತೀರ್ಮಾನಿಸಿದ್ದೇನೆ, ಇಲ್ಲಿಯ ವಾತಾವರಣ ಇಲ್ಲಿನ ಬೋಧನೆ ತುಂಬಾ ಚೆನ್ನಾಗಿದೆ.

### ಮಣಿಪಾಲ ಆಸ್ಪತ್ರೆ ಮೈಸೂರಿನಲ್ಲಿಎಂಬ್ರಿಯೋ (ಭ್ರೂಣ) ಪೂಲಿಂಗ್ ಸೌಲಭ್ಯ

# ಗರ್ಭಧಾರಣೆಯಲ್ಲಿ ಅಡೆತಡೆಗಳ ನಿವಾರಣೆಗೆ ಒಂದು ಆಶಾಕಿರಣ

**ಮೈಸೂರು:** ಇತ್ತೀಚಿನ ದಿನಗಳಲ್ಲಿ ಗರ್ಭಧಾರಣೆಯಲ್ಲಿ ಅಡೆತಡೆಗಳನ್ನು ಎದುರಿಸುತ್ತಿರುವ ಸಂತಾನಾಕಾಂಕ್ಷಿ ದಂಪತಿಗಳಲ್ಲಿ ಚಿಂತಾಜನಕವಾಗಿದೆ. ಕೆಲವು ದಶಕಗಳ ಹಿಂದೆ ಅಂದಾಜು ಹತ್ತರಲ್ಲಿ ಒಬ್ಬ ದಂಪತಿಯಂತೆ ಇದ್ದ ಈ ಸಂಖ್ಯೆಯು, ಇವಾಗ ಆರು ದಂಪತಿಗಳಲ್ಲಿ ಒಬ್ಬರ ಪ್ರಮಾಣಕ್ಕೆ ಏರಿದೆ.

ಮಣಿಪಾಲ ಆಸ್ಪತ್ರೆ ಮೈಸೂರು ಗರ್ಭಧಾರಣೆಯ ಸಾಧ್ಯತೆಗಳನ್ನು ಹೆಚ್ಚಿಸುವ ನವೀನ ವಿಧಾನವಾದ ಎಂಬ್ರಿಯೋ (ಭ್ರೂಣ) ಪೂಲಿಂಗ್ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಏಪ್ರಿಲ್ 08, 2025 ರಂದು ಮೈಸೂರಿನ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನು ಆಯೋಜಿಸಿದರು. ಡಾ. ನಿವೇದಿತಾ ವಿಶ್ವನಾಥ್ ಅಡಪ, ಸಂತಾನೋತ್ಪತ್ತಿ ಮತ್ತು ಐವಿಎಫ್ ನಿರ್ದೇಶಕಿ ಮತ್ತು ಕನ್ಸಲ್ಟೆಂಟ್ ಮಣಿಪಾಲ ಆಸ್ಪತ್ರೆ ಮೈಸೂರು ಮತ್ತು ಡಾ. ಉಪೇಂದ್ರ ಶೆಣೈ, ವೈದ್ಯಕೀಯ ಸೇವೆಗಳ ಮುಖ್ಯಸ್ಥ ಮಣಿಪಾಲ ಆಸ್ಪತ್ರೆ ಮೈಸೂರು, ಸಮ್ಮೇಳನದ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ, ಡಾ. ನಿವೇದಿತಾ ಅವರು – ವಿಶೇಷವಾಗಿ ಕಡಿಮೆ ಸಂಖ್ಯೆಯಲ್ಲಿ ಅಂಡಾಣುಗಳ ಮೀಸಲನ್ನು ಹೊಂದಿರುವ ಕಾರಣದಿಂದಾಗಿ ಗರ್ಭಧಾರಣೆಯಲ್ಲಿ ವಿಫಲತೆ ಮತ್ತು ಈ ಸಮಸ್ಯೆಗಳ ನಿವಾರಣೆಗೆ ಆಶಾದಾಯಕವಾದ ಎಂಬ್ರಿಯೋ (ಭ್ರೂಣ) ಪೂಲಿಂಗ್ ನ ಬಗ್ಗೆ ಬೆಳಕು ಚೆಲ್ಲಿದರು. ಈ ಕುರಿತು ಮಾತನಾಡುತ್ತ, ಗ್ರಭಾದಾರಣೆಯಲ್ಲಿ ತೊಡಕುಗಳು ಈಗ ವಯಸ್ಸಾದ ಮಹಿಳೆಯರಿಗೆ ಮಾತ್ರ ಸೀಮಿತವಾದ ಸಮಸ್ಯೆಯಾಗಿ ಉಳಿದಿಲ್ಲ. 30 ವರ್ಷ ವಯಸ್ಸಿನ ಮಹಿಳೆಯರೂ ಕೂಡ ಕಡಿಮೆ ಅಂಡಾಣು ಮೀಸಲು ಹೊಂದಿರುವುದನ್ನು ನಾವು ನೋಡುತ್ತಿದ್ದೇವೆ. ಕೆಲ ವರ್ಷಗಳ ಹಿಂದೆ ಅಪರೂಪವೆನ್ನಲಾಗುತ್ತಿದ




ಚಿತ್ರಣ, ಇಂದು ಸಾಮಾನ್ಯವಾಗಿದೆ. ಪರಿಸರ ಅಂಶಗಳು, ಅಂತಃ ಸ್ರಾವಕ (ಹಾರ್ಮೋನ್ ಸಂಭಂದಿತ) ಅಡ್ಡಿಗಳು, ಜೀವನಶೈಲಿ ಬದಲಾವಣೆಗಳು, ಆನುವಂಶಿಕ (ರಜಟಿಜಣಿಛಿ) ವೈಪರೀತ್ಯಗಳು – ಇವುಗಳಲ್ಲಿ ಯಾವುದಾದರೂ ಒಂದು ಅಥವಾ ಎಲ್ಲವೂ ಈ ಪ್ರವೃತ್ತಿಗೆ ಕಾರಣವಾಗಬಹುದು, ಎಂದು ಅವರು ಹೇಳಿದರು.

**ಏನಿದು ಭ್ರೂಣ ಪೂಲಿಂಗ್?:** ಕಡಿಮೆ ಅಂಡಾಣು ಮೀಸಲು ಹೊಂದಿರುವ ಮಹಿಳೆಯರಲ್ಲಿ ಗರ್ಭಧಾರಣೆಯ ಸಾಧ್ಯತೆಗಳನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾದ ನೂತನ ವಿಧಾನವೇ ಭ್ರೂಣ ಪೂಲಿಂಗ್. ಒಂದೇ ಚಕ್ರವನ್ನು ಅವಲಂಬಿಸುವ ಸಾಂಪ್ರದಾಯಿಕ ಖಗಿಈ ಗಿಂತ ಭಿನ್ನವಾಗಿ, ಭ್ರೂಣ ಪೂಲಿಂಗ್ ಅಂಡಾಣುಗಳನ್ನು ಸಂಗ್ರಹಿಸುವುದು ಮತ್ತು ಬಹು ಖಗಿಈ ಚಕ್ರಗಳಲ್ಲಿ ಭ್ರೂಣಗಳನ್ನು ರಚಿಸುವುದನ್ನು ಒಳಗೊಂಡಿರುತ್ತದೆ. ಸಾಕಷ್ಟು ಆರೋಗ್ಯಕರ ಭ್ರೂಣಗಳು ವರ್ಗಾವಣೆಗೆ ಲಭ್ಯವಾಗುವವರೆಗೆ ಈ ಭ್ರೂಣಗಳನ್ನು ಫ್ರೀಜ್ ಮಾಡಲಾಗುತ್ತದೆ. ಈ ಸಂಚಿತ ವಿಧಾನವು ವೈದ್ಯರಿಗೆ ಆಯ್ಕೆ ಮಾಡಲು ಭ್ರೂಣಗಳ ದೊಡ್ಡ ಪೂಲ್ ಅನ್ನು ಒದಗಿಸುತ್ತದೆ, ಇದರಿಂದಾಗಿ ಯಶಸ್ವಿ ಗರ್ಭಧಾರಣೆಯ ಸಾಧ್ಯತೆ ಹೆಚ್ಚುತ್ತದೆ. ಕಡಿಮೆ ಅಂಡಾಣು ಎಣಿಕೆ ಹೊಂದಿರುವ ಯುವ ವಯಸ್ಸಿನ ಮಹಿಳೆಯರಿಗೆ ಸೂಕ್ತ: ಈ ವಿಧಾನವು ವಿಶೇಷವಾಗಿ ಕಡಿಮೆ ಅಂಡಾಣುಗಳ ಮೀಸಲು ಹೊಂದಿರುವ ಯುವ ವಯಸ್ಸಿನ ಮಹಿಳೆಯರಿಗೆ ಪ್ರಯೋಜನಕಾರಿಯಾಗಿದೆ, ಈ ಮಹಿಳೆಯರು ಯುವ ವಯಸ್ಕರು ಆಗಿರುವುದರಿಂದ ಅಂಡಾಣುಗಳ ಗುಣಮಟ್ಟ ಉತ್ತಮವಾಗಿರುತ್ತದೆ ಆದ್ದರಿಂದ ಗರ್ಭಧರಿಸುವ ಅವಕಾಶಗಳೂ ಸಹ ಹೆಚ್ಚುತ್ತದೆ.

ಮಣಿಪಾಲ ಆಸ್ಪತ್ರೆ ಮೈಸೂರಿನಲ್ಲಿ ಭ್ರೂಣ ಪೂಲಿಂಗ್ ಆಯ್ಕೆ ಮಾಡಿಕೊಳ್ಳುವ ದಂಪತಿಗಳಲ್ಲಿ ಸ್ಥಿರವಾದ ಏರಿಕೆ ಕಂಡುಬಂದಿದೆ. ಹೆಚ್ಚುತ್ತಿರುವ ಜಾಗೃತಿಯೊಂದಿಗೆ ಹೆಚ್ಚಿನ ದಂಪತಿಗಳು ಸಂತಾನ ಪಡೆಯುವ ಕನಸನ್ನು ನನಸಾಗಿಸಿಕೊಳ್ಳಲು ಈ ವಿಧಾನಕ್ಕೆ ವಾಲುತ್ತಿದ್ದಾರೆ ಎಂಬ ಪ್ರಮುಖ ಮಾಹಿತಿಯನ್ನು ಹಂಚಿಕೊಳ್ಳುತ್ತ, ಡಾ. ನಿವೇದಿತಾ ''ಎಂಬ್ರಿಯೊ ಪೂಲಿಂಗ್ ಮೂಲಕ ನಾವು ಗರ್ಭಧಾರಣೆಯ ಸಾಧ್ಯತೆಗಳ ಹೆಚ್ಚಿನ ಭರವಸೆಯನ್ನು ನೀಡುತ್ತಿದ್ದೇವೆ. ಐದು ವರ್ಷಗಳ ಹಿಂದೆ, ಕಡಿಮೆ ಗುಣಮಟ್ಟದ ಅಂಡಾಣು ಅಥವಾ ಕಡಿಮೆ ಅಂಡಾಣು ಮೀಸಲು ಹೊಂದಿರುವ ಅನೇಕ ಮಹಿಳೆಯರಿಗೆ ಗರ್ಭಧಾರಣೆಗಾಗಿ ದಾನಿ ಅಂಡಾಣುಗಳ ಸಹಾಯ ಹೊರತುಪಡಿಸಿ ಬೇರೆ ದಾರಿಯಿಲ್ಲ. ಇಂದು, ಈ ವಿಧಾನದಿಂದಾಗಿ, ಅವರು ತಮ್ಮದೇ ಆದ ಭ್ರೂಣಗಳ ಮೂಲಕ ಗರ್ಭಧರಿಸಬಹುದು. ಈಗ ದಂಪತಿಗಳು ಹೆಚ್ಚಿನ ಮಾಹಿತಿಯುಳ್ಳವರಾಗಿದ್ದು, ತಮ್ಮದೇ ಆದ ಜೈವಿಕ ಅಂಶಗಳನ್ನು ಹೊಂದಿರುವ ಮಗುವನ್ನು ಪಡೆಯಲು ಅನುವು ಮಾಡಿಕೊಡುವ ಆಯ್ಕೆಗಳನ್ನು ಸಕ್ರಿಯವಾಗಿ ಹುಡುಕುತ್ತಿದ್ದಾರೆ. ಎಂಬ್ರಿಯೊ ಪೂಲಿಂಗ್ ಅವರಿಗೆ ಆ ಅವಕಾಶವನ್ನು ನೀಡುತ್ತದೆ,'' ಎಂದು ಅವರು ಹೇಳಿದರು. ಮಣಿಪಾಲ ಆಸ್ಪತ್ರೆ ಮೈಸೂರು, ಈ ಆಧುನಿಕ ಚಿಕಿತ್ಸೆಯನ್ನು ಸುಲಭವಾಗಿ, ಕೈಗೆಟುಕುವಂತೆ ಮಾಡುತ್ತಿದ್ದು, ಸಂತಾನಾಸೆ ಉಳ್ಳ ಹೆಚ್ಚಿನ ಕುಟುಂಬಗಳಿಗೆ ಈ ಹೊಸ ವಿಧಾನದಿಂದ ನವೀಕೃತ ಭರವಸೆಯನ್ನು ನೀಡಲು ಬದ್ಧವಾಗಿದೆ.

#### ಪ್ರಯೋಜನಗಳು

**ವಂಶವಾಹಿನಿಗಳ ಸಂರಕ್ಷಣೆ: ದಾನಿ ಅಂಡಾಣುಗಳಿಗಿಂತ ಭಿನ್ನವಾಗಿ, ಈ ವಿಧಾನವು ದಂಪತಿಗಳು ತಮ್ಮದೇ ಆದ ವಂಶವಾಹಿಗಳನ್ನು ಹೊಂದಿರುವ ಭ್ರೂಣದಿಂದ ಗರ್ಭಧರಿಸಲು ಅನುವು ಮಾಡಿಕೊಡುತ್ತದೆ. ಹೆಚ್ಚಿನ ಯಶಸ್ಸಿನ ದರಗಳು: ಹಲವಾರು ಚಕ್ರಗಳಿಂದ ಭ್ರೂಣಗಳನ್ನು ಒಟ್ಟುಗೂಡಿಸುವ ಮೂಲಕ, ಗರ್ಭಧಾರಣೆಯ ಸಾಧ್ಯತೆಗಳು ಗಮನಾರ್ಹವಾಗಿ ಹೆಚ್ಚಾಗುತ್ತವೆ. ವೆಚ್ಚ-ಪರಿಣಾಮಕಾರಿ: ಭ್ರೂಣ ಪೂಲಿಂಗ್ ಅಡಿಯಲ್ಲಿ ಬಹು ಖಗಿಈ ಚಕ್ರಗಳನ್ನು ಒಟ್ಟುಗೂಡಿಸುವುದರಿಂದ ಆರ್ಥಿಕ ಹೊರೆ ಕಡಿಮೆಯಾಗುತ್ತದೆ.**

## ಕುಣಗಳ್ಳಿ ಮತ್ತೆ 4 ನಾಡ ಬಂದೂಕು ವಶ

**ಯಳಂದೂರು:** ಕುಣಗಳ್ಳಿ ಗ್ರಾಮದಲ್ಲಿ ಮಂಗಳವಾರ ಮತ್ತೆ 4 ಅಕ್ರಮ ನಾಡಬಂದೂಕುಗಳು ಪತ್ತೆಯಾಗಿದ್ದು ಈ ಸಂಬಂಧ ನಾಲ್ವರನ್ನು ಬಂಧಿಸಲಾಗಿದೆ. ತಾಲೂಕಿನ ಅಗರ-ಮಾಂಬಳ್ಳಿ ಪೊಲೀಸ್ ಠಾಣೆಯ ವ್ಯಾಪ್ತಿಗೆ ಒಳಪಟ್ಟಿರುವ ಈ ಗ್ರಾಮದಲ್ಲಿ ಅಕ್ರಮವಾಗಿ ನಾಡಬಂದೂಕುಗಳನ್ನು ಹಿಡಿದು ಬಿಆರ್‌ಟಿ ಹುಲಿ ರಕ್ಷಿತ ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿ ಮಂಗಳವಾರ ಬೆಳಗಿನ ಜಾವ ಕಾಡುಪ್ರಾಣಿಗಳ ಬೇಟೆಯಾಡಲು ತೆರಳುತ್ತಿದ್ದ ವ್ಯಕ್ತಿಗಳ ಮೇಲೆ ಖಚಿತ ದಾಳಿ ಮೇರೆಗೆ ಪೊಲೀಸರು ದಾಳಿ ಮಾಡಿದ್ದಾರೆ. ಈ ಸಂಬಂಧ ಗ್ರಾಮದ ಪ್ರದೀಪ್, ರಾಮು, ಕೃಷ್ಣ, ದೇವರಾಜು ಎಂಬುವರನ್ನು ಬಂಧಿಸಲಾಗಿದ್ದು ನಾಲ್ವರ ಬಳಿ ಇದ್ದ ಅಕ್ರಮ ಬಂದೂಕುಗಳನ್ನು ವಶಪಡಿಸಿಕೊಳ್ಳಲಾಗಿದ್ದು ಇವರ ಮೇಲೆ ದೂರು ದಾಖಲಿಸಿ ಮುಂದಿನ ಕ್ರಮ ವಹಿಸಲಾಗಿದೆ. ಈ ಕಾರ್ಯಾಚರಣೆಯಲ್ಲಿ ಸಿಪಿಐ ಕೆ. ಶ್ರೀಕಾಂತ್, ಪಿಎಸ್‌ಐ ಎಸ್. ಕೆ. ಆಕಾಶ್ ಎಎಸ್‌ಐ ಚಿಕ್ಕಸ್ವಾಮಿ, ಮುಖ್ಯಪೇದೆ ಸುಕ್ರನಾಯಕ್, ಶಂಕರಮೂರ್ತಿ, ಶಿವಕುಮಾರ್, ಅಭಿಷೇಕ್, ಉಸ್ಮಾನ್, ಶಿವು ಹಾಗೂ ಶ್ರೀಶೈಲ ಭಾಗವಹಿಸಿದ್ದರು.



## ಕೋದಂಡರಾಮಸ್ವಾಮಿ ರಥೋತ್ಸವ

**ಕೋಲಾರ:** ವಕ್ಕಲೇರಿ ಗ್ರಾಮದ ಕೋದಂಡರಾಮ ಸ್ವಾಮಿಯ ಬ್ರಹ್ಮರಥೋತ್ಸವವು ಭಾನುವಾರ ಶ್ರದ್ಧಾಭಕ್ತಿಗಳಿಂದ ನೆರವೇರಿತು. ಬೆಳಗ್ಗೆ ಕೋದಂಡರಾಮಸ್ವಾಮಿಯ ಮೂರ್ತಿಗಳಿಗೆ ನಾನಾ ಬಗೆಯ ಹೂವುಗಳಿಂದ ಅಲಂಕರಿಸಲಾಗಿತ್ತು. ನಂತರ ಸೀತಾರಾಮ ಕಲ್ಯಾಣೋತ್ಸವು ಧಾರ್ಮಿಕ ಆಚರಣೆ ಮೂಲಕ ನೆರವೇರಿಸಿದ ನಂತರ ಅಲಂಕೃತ ರಥದಲ್ಲಿ ಕೋದಂಡರಾಮಸ್ವಾಮಿ ಉತ್ಸವಮೂರ್ತಿಯನ್ನು ಕುಳ್ಳರಿಸಿ ಗ್ರಾಮದ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯ ಒಕ್ಕಲಿಗ ಸಂಘದ ಮಾಜಿ ನಿರ್ದೇಶಕ ವಕ್ಕಲೇರಿ ರಾಮು ಮಾತನಾಡಿ ಪ್ರತಿವರ್ಷದಂತೆ ಶ್ರೀ ಕೋದಂಡರಾಮಸ್ವಾಮಿ ಬ್ರಹ್ಮರಥೋತ್ಸವದಲ್ಲಿ ಭಕ್ತರು ಸ್ವಾಮಿ ದರ್ಶನ ಪಡೆದಿದ್ದಾರೆ. ಧಾರ್ಮಿಕ ಕಾರ್ಯಕ್ರಮಗಳು ಹೆಚ್ಚು ನಡೆದಾಗ ಮಾತ್ರ, ಸಮಾಜದಲ್ಲಿ ಶಾಂತಿ, ನೆಮ್ಮದಿ ಸಾಧ್ಯವಾಗುತ್ತದೆ ಮುಂದಿನ ದಿನಗಳಲ್ಲಿ ಉತ್ತಮ ಮಳೆಯನ್ನು ಕರುಣಿಸಿ ರೈತರು ಜೀವನ ಉತ್ತಮವಾಗಲಿ ಎಂದು ಇದೇ ಸಂದರ್ಭದಲ್ಲಿ ದೇವರಲ್ಲಿ ಪ್ರಾರ್ಥಿಸಲಾಗಿದೆ ಎಂದು ತಿಳಿಸಿದರು.

ಶ್ರೀರಾಮನವಮಿ ಕೇವಲ ದೇವರ ಕಾರ್ಯ ಮಾತ್ರವಲ್ಲ, ನಮ್ಮ ಬದುಕಿನ ಆದರ್ಶವಾಗಿಯೂ ನಾವು ಆಚರಿಸುತ್ತೇವೆ, ರಾಮನ ಮಹಿಮೆ, ಪ್ರಜಾಪ್ರೇಮ ನಮಗೆ ಆದರ್ಶವಾಗಿದ್ದು, ಪ್ರತಿ ವರ್ಷವೂ ಅದ್ದೂರಿಯಿಂದ ಆಚರಿಸಿಕೊಂಡು ಬರುತ್ತಿರುವುದಾಗಿ ತಿಳಿಸಿ, ಅನ್ನದಾನಕ್ಕೆ ಚಾಲನೆ ನೀಡಲಾಯಿತು. ಕೋದಂಡರಾಮಸ್ವಾಮಿ ದೇವಾಲಯದ ಅರ್ಚಕರಾದ ರಾಜು, ಸುಬ್ರಮಣಿ, ಭಾರ್ಗವ, ಜಿಪಂ ಮಾಜಿ ಅಧ್ಯಕ್ಷೆ ಚೌಡೇಶ್ವರಿ ರಾಮು, ಮುಖಂಡರಾದ ಯಶೋಧಮ್ಮ, ಕನ್ವಿನರ್ ಮಹೋಹರಗೌಡ, ಬಿ.ಎನ್. ಮುನಿರಾಜು, ಗ್ರಾ.ಪಂ ಸದಸ್ಯೆ ವಿಜಯಲಕ್ಷ್ಮಿ ಮಂಜುನಾಥ್, ಮಾರಿಕಾಂಭ ಯುವಕರ ಸಂಘದ ಪದಾಧಿಕಾರಿಗಳು, ಟೈಲರ್ ಮುನಿಯಪ್ಪ, ವಿನಾಯಕ ಭಕ್ತ ಮಂಡಳಿ, ಡೈರಿ ವಿ.ಎಸ್.ನಾಗರಾಜ್, ಎಸ್ ಟಿಡಿ ಶೀನಪ್ಪ,ಲೋಕೇಶ್ ಇದ್ದರು.



## ಕೋಲಾರ ಜಿಲ್ಲೆಯಲ್ಲಿ ರಾಮನವಮಿ

**ಕೋಲಾರ:** ಮರ್ಯಾದಾ ಪುರುಷೋತ್ತಮ ಶ್ರೀರಾಮನ ಸ್ಮರಣೆ, ಪಾನಕ,ಮಜ್ಜಿಗೆ,ಕೋಸಂಬರಿ ವಿತರಣೆಯ ಮೂಲಕ ಶ್ರೀರಾಮನವಮಿಯನ್ನು ಜಿಲ್ಲೆಯಾದ್ಯಂತ ಶ್ರದ್ಧಾಭಕ್ತಿಗಳಿಂದ ಆಚರಿಸಲಾಯಿತು.

ಕೋಲಾರ ಜಿಲ್ಲೆಗೂ ಶ್ರೀರಾಮ, ಹನುಮನಿಗೂ ವಿಶೇಷ ನಂಟು ಜಿಲ್ಲೆಯಲ್ಲಿ ಹನುಮನ ದೇಗುಲವಿಲ್ಲದ ಊರೇ ಇಲ್ಲ, ಪ್ರತಿ ರಸ್ತೆಯಲ್ಲೂ ಹನುಮನ ದೇಗುಲಗಳು ರಾರಾಜಿಸುವ ಮೂಲಕ ಶ್ರೀರಾಮ,ಹನುಮರ ಪೂಜೆ ನಿರಂತರವಾಗಿ ನಡೆದಿದೆ.

ಶ್ರೀರಾಮನವಮಿ ಅಂಗವಾಗಿ ಎಲ್ಲಾ ದೇವಾಲಯಗಳು, ರಸ್ತೆ ಬದಿಯಲ್ಲಿ ವಿವಿಧ ಸಂಘಟನೆಗಳು, ವ್ಯಾಪಾರಿಗಳು ಬಿಸಿಲ ತಾಪಕ್ಕೆ ದಣಿದು ಸಾಗುವವರಿಗೆ ಪಾನಕ,ಮಜ್ಜಿಗೆ,ಕೋಸಂಬರಿ ವಿತರಿಸುವ ಮೂಲಕ ಶ್ರೀರಾಮನಮಿಯನ್ನು ಹೆಚ್ಚಿನ ಸಡಗರದಿಂದ ಆಚರಿಸಿದರು.

ಎಪಿಎಂಸಿ, ನಗರದ ಹೊರವಲಯದ ತೋಟಗಾರಿಕಾ ಮಹಾವಿದ್ಯಾಲಯದ ಬಳಿ, ಕೀಲುಕೋಟೆ, ದೊಡ್ಡಪೇಟೆ, ರಾಮದೇವರಗುಡಿ ಬೀದಿ, ಕಿಲಾರಿಪೇಟೆ ವೇಣುಗೋಪಾಲಸ್ವಾಮಿ ದೇವಾಲಯ, ನಗರದ ಪಿಸಿ ಬಡಾವಣೆಯ ಶ್ರೀರಾಮ ಕಾಂಡಿಮೆಂಟ್ಸ್‌ನ ಸ್ನೇಹಿತರು, ಪ್ರಭಾತ್ ಚಿತ್ರಮಂದಿರದ ಬಳಿ ಭಾಸ್ಕರ್ ಸ್ನೇಹಿತರು, ರೇಣುಕಾ ಯಲ್ಲಮ್ಮ ದೇವಾಲಯದ ಮುಂಭಾಗ ಗಣೇಶ್ ಸ್ನೇಯಿತರು, ಡೂಂಲೈಟ್ ವೃತ್ತ ಸೇರಿದಂತೆ ಪ್ರಮುಖ ವೃತ್ತ ಮತ್ತು ರಸ್ತೆಗಳಲ್ಲಿ ಪೆಂಡಾಲ್ ಹಾಕಿ ಸಾರ್ವಜನಿಕರಿಗೆ ಮಜ್ಜಿಗೆ, ಪಾನಕ, ಕೋಸಂಬರಿ ವಿತರಿಸಿದರು.

ಬ್ರಾಹ್ಮಣರ ಬೀದಿಯ ರಾಮದೇವರ ಗುಡಿ ಶ್ರೀರಾಮನವಮಿ ಅಂಗವಾಗಿ ನಗರದ ಬಸ್‌ನಿಲ್ದಾಣದ ಸಮೀಪವಿರುವ ಶ್ರೀರಾಮದೇವರ ಗುಡಿಯಲ್ಲಿ ಸ್ವಾಮಿಗೆ ಅಭಿಷೇಕ, ವಿಶೇಷ ಪೂಜೆ, ಅಲಂಕಾರ ಮಾಡಲಾಗಿತ್ತು. ಇಡೀ ದೇವಾಲಯವನ್ನು ಹೂಗಳಿಂದ ಅಲಂಕರಿಸಲಾಗಿದ್ದು, ಇಂದು ಬೆಳಗ್ಗೆ ಪಾನಕ,ಮಜ್ಜಿಗೆ, ಕೋಸಂಬರಿ ವಿತರಣೆ ಭರದಿಂದ ನಡೆಯಿತು.

ಕೋಲಾರ ಹೊರವಲಯದ ತೋಟಗಾರಿಕಾ ಮಹಾವಿದ್ಯಾಲಯದ ಸಮೀಪ ನಿರ್ಮಾಣಗೊಂಡಿರುವ ಬೃಹತ್ ಶ್ರೀರಾಮ ಚಂದ್ರ ಮೂರ್ತಿಗೆ ಹಾಗೂ ಆಂಜನೇಯಸ್ವಾಮಿಗೆ ಶ್ರೀರಾಮನವಮಿ ಅಂಗವಾಗಿ ವಿಶೇಷ ಪೂಜೆ ಏರ್ಪಡಿಸಿದ್ದು, ಪಾನಕ,ಹೆಸರುಬೇಳೆ,ಮಜ್ಜಿಗೆ ವಿನಿಯೋಗ ಕಾರ್ಯಕ್ರಮಕ್ಕೆ ನಡೆಯಿತು. ನಗರದ ದೊಡ್ಡಪೇಟೆಯ ಶ್ರೀರಾಮ ದೇವಸ್ಥಾನ, ವೆಂಕಟರಮಣಸ್ವಾಮಿ, ಬ್ರಾಹ್ಮಣರ ಬೀದಿಯ ದೊಡ್ಡ ಆಂಜನೇಯಸ್ವಾಮಿ, ಕುರುಬರಪೇಟೆಯ ಪಂಚಮುಖಿ ಗಣಪತಿ, ನಗರದೇವತೆ ಕೋಲಾರಮ್ಮ ದೇವಾಲಯ, ಕೊಂಡರಾಜನಹಳ್ಳಿ ಆಂಜನೇಯಸ್ವಾಮಿ, ಪಾಲಸಂದ್ರಂ ಎಸ್ಪಿ ನಿವಾಸದ ಮುಂದಿನ ಆಂಜನೇಯಸ್ವಾಮಿ ದೇವಾಲಯ, ಪಿಸಿ ಬಡಾವಣೆಯ ಕೋದಂಡರಾಮಸ್ವಾಮಿ ದೇವಾಲಯಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು.

ಭಕ್ತರು ದೇವಾಲಯಗಳಲ್ಲಿ ದೇವರ ದರ್ಶನಕ್ಕಾಗಿ ಮುಂಜಾನೆಯಿಂದಲೇ ಸಾಲುಗಟ್ಟಿ ನಿಂತಿದ್ದರು. ಅಭಿಷೇಕ, ಮಹಾಸುದರ್ಶನ ಹೋಮ, ರಾಮತಾರಕ ಹೋಮ, ರಾಮಾಯಣ ಪಾರಾಯಣ, ವೇದ ಪಾರಾಯಣ, ಮಹಾಮಂಗಳಾರತಿ ನೆರವೇರಿದವು. ಹಲವು ಭಕ್ತರು ಉಪವಾಸ ವ್ರತ ಆಚರಿಸಿ ದೇವರಿಗೆ ಪೂಜೆ ಸಲ್ಲಿಸಿದ ಬಳಿಕ ಪಾನಕ, ಕೋಸಂಬರಿ, ಮಜ್ಜಿಗೆ ಸೇವಿಸಿದರು. ಭಜನಾ ಮಂಡಳಿಗಳು ರಾತ್ರಿ ಶ್ರೀರಾಮ ಭಜನೆ, ಹನುಮಾನ್ ಕೀರ್ತನೆ, ಸಂಗೀತ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.



## ಅತ್ಯುತ್ತಮ ಫಲಿತಾಂಶದತ್ತ ಟೈಮ್ಸ್ ಪಿಯು ಕಾಲೇಜು

**ತಿಪಟೂರು:** ನಗರದ ಟೈಮ್ಸ್ ಪಿಯು ಕಾಲೇಜು ಈ ಬಾರಿಯ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.97ರಷ್ಟು ಫಲಿತಾಂಶ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದೆ ಎಂದು ಪ್ರಾಂಶುಪಾಲ ಪ್ರದೀಪ್ ತಿಳಿಸಿದ್ದಾರೆ. ಒಟ್ಟು 94 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದು ಅದರಲ್ಲಿ 57 ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿ, 32 ಪ್ರಥಮ ಶ್ರೇಣಿ ಹಾಗೂ ಇಬ್ಬರು ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗುವ ಮೂಲಕ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿನಿ ಜೆ.ಜೆ. ಮಧುಶ್ರೀ ಕನ್ನಡದಲ್ಲಿ 98, ಇಂಗ್ಲೀಷ್ 94, ಭೌತಶಾಸ್ತ್ರ 99, ರಸಾಯನಶಾಸ್ತ್ರ 95, ಗಣಿತ 99, ಜೀವಶಾಸ್ತ್ರ 96, ಶರ್ಮೈನ್ ಕೌನ್‌ಸೈನ್ ಭೌತಶಾಸ್ತ್ರ 100, ರಸಾಯಾನಶಾಸ್ತ್ರ 96, ಗಣಿತ 100, ಜೀವಶಾಸ್ತ್ರ 92, ಹಿಂದಿ 96, ಇಂಗ್ಲೀಷ್ 96 ಅಂಕಗಳನ್ನು ಪಡೆಯುವ ಮೂಲಕ ಅತ್ಯುತ್ತಮ ಸಾಧನೆ ಮಾಡಿದ್ದಾರೆ. ಹಾಗೆಯೇ ವಿದ್ಯಾರ್ಥಿಗಳಾದ ಎಂ.ವೈ. ವಿನಯ್ ಗಣಿತಶಾಸ್ತ್ರದಲ್ಲಿ 100, ಎಚ್.ಜೆ. ಜಾನವಿ 100 ಅಂಕಗಳನ್ನು ಪಡೆದುಕೊಂಡಿದ್ದಾರೆ. ಜಿ.ರಮ್ಯಾ 565, ಎ.ಎಂ. ವಂದಿತಾ 564 ಅಂಕಗಳನ್ನು ಪಡೆದುಕೊಂಡಿದ್ದಾರೆ. ಈ ಬಾರಿ ಕಾಲೇಜಿಗೆ ಅತ್ಯುತ್ತಮ ಫಲಿತಾಂಶ ತಂದುಕೊಡುವ ಮೂಲಕ ಸಂಸ್ಥೆಗೆ, ಕಾಲೇಜಿಗೆ ಹಾಗೂ ಪೋಷಕರಿಗೆ ಕೀರ್ತಿ ತಂದಿದ್ದಾರೆ. ಹಾಗೆಯೇ ನಮ್ಮ ಉಪನ್ಯಾಸಕ ವರ್ಗದವರ ಪರಿಶ್ರಮವೂ ಇದಕ್ಕೆ ಮುಖ್ಯ ಕಾರಣವಾಗಿದ್ದು ಸಾಧನೆ ಮಾಡಿರುವ ಎಲ್ಲಾ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅಭಿನಂದನಾರ್ಹರು ಎಂದು ಪ್ರಾಂಶುಪಾಲರು ಸಂತಸ ವ್ಯಕ್ತಪಡಿಸಿದ್ದಾರೆ.

## ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಪ್ರಗತಿ ಬಾಲಕಿಯರ ಸಾಧನೆ

**ವಿಜಯಪುರ:** 2024-25 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಗತಿ ಬಾಲಕಿಯರ ಪದವಿ ಪೂರ್ವ ಕಾಲೇಜು 96.6 % ಫಲಿತಾಂಶವನ್ನು ಪಡೆದಿದ್ದು, 32 ವಿದ್ಯಾರ್ಥಿನಿಯರು ಅತ್ಯುನ್ನತ ಹಾಗೂ 76 ವಿದ್ಯಾರ್ಥಿನಿಯರು ಪ್ರಥಮ ಶ್ರೇಣಿಯನ್ನು ಪಡೆದಿರುತ್ತಾರೆ. ಪಿಸಿಎಮ್‌ಸಿ ವಿಭಾಗವು ಶೇಕಡ 100ರಷ್ಟು ಫಲಿತಾಂಶವನ್ನು ಸಾಧಿಸಿದೆ. ಭೌತಶಾಸ್ತ್ರ, ಗಣಿತಶಾಸ್ತ್ರ, ಜೀವಶಾಸ್ತ್ರ, ಇತಿಹಾಸ, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಹಾಗೂ ಹಿಂದಿ ವಿಷಯಗಳಲ್ಲಿ ಶೇಕಡ ನೂರರಷ್ಟು ಫಲಿತಾಂಶ ಪಡೆದಿದ್ದು ,ಕನ್ನಡ ಮತ್ತು ವ್ಯವಹಾರ ಅಧ್ಯಯನದಲ್ಲಿ 100 ಕ್ಕೆ 100 ಅಂಕಗಳನ್ನು ವಿದ್ಯಾರ್ಥಿನಿಯರು ಪಡೆದಿರುತ್ತಾರೆ. ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ನಿಖಿತಾ. ಎಚ್. ಎಸ್ 96.8% (581/600) ಪಡೆದು ಕಾಲೇಜಿಗೆ ಹೆಮ್ಮೆ ತಂದಿರುತ್ತಾರೆ. ಸಾಧನೆಗೈದ ವಿದ್ಯಾರ್ಥಿನಿಯರನ್ನು ಆಡಳಿತ ಮಂಡಳಿ, ಪ್ರಾಂಶುಪಾಲರು ಅಭಿನಂದಿಸಿದ್ದಾರೆ.

## ಪ್ರಗತಿ ಬಾಲಕಿಯರ ಸಾಧನೆ

**ವಿಜಯಪುರ:** 2024-25 ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಗತಿ ಬಾಲಕಿಯರ ಪದವಿ ಪೂರ್ವ ಕಾಲೇಜು 96.6 % ಫಲಿತಾಂಶವನ್ನು ಪಡೆದಿದ್ದು, 32 ವಿದ್ಯಾರ್ಥಿನಿಯರು ಅತ್ಯುನ್ನತ ಹಾಗೂ 76 ವಿದ್ಯಾರ್ಥಿನಿಯರು ಪ್ರಥಮ ಶ್ರೇಣಿಯನ್ನು ಪಡೆದಿರುತ್ತಾರೆ. ಪಿಸಿಎಮ್‌ಸಿ ವಿಭಾಗವು ಶೇಕಡ 100ರಷ್ಟು ಫಲಿತಾಂಶವನ್ನು ಸಾಧಿಸಿದೆ. ಭೌತಶಾಸ್ತ್ರ, ಗಣಿತಶಾಸ್ತ್ರ, ಜೀವಶಾಸ್ತ್ರ, ಇತಿಹಾಸ, ಅರ್ಥಶಾಸ್ತ್ರ, ವ್ಯವಹಾರ ಅಧ್ಯಯನ, ಹಾಗೂ ಹಿಂದಿ ವಿಷಯಗಳಲ್ಲಿ ಶೇಕಡ ನೂರರಷ್ಟು ಫಲಿತಾಂಶ ಪಡೆದಿದ್ದು ,ಕನ್ನಡ ಮತ್ತು ವ್ಯವಹಾರ ಅಧ್ಯಯನದಲ್ಲಿ 100 ಕ್ಕೆ 100 ಅಂಕಗಳನ್ನು ವಿದ್ಯಾರ್ಥಿನಿಯರು ಪಡೆದಿರುತ್ತಾರೆ. ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ನಿಖಿತಾ. ಎಚ್. ಎಸ್ 96.8% (581/600) ಪಡೆದು ಕಾಲೇಜಿಗೆ ಹೆಮ್ಮೆ ತಂದಿರುತ್ತಾರೆ.

## ಆದರ್ಶ ದಂಪತಿ, ಮೈಸೂರು ಮಾಣಿಕ್ಯರತ್ನ ಪ್ರಶಸ್ತಿ ಪ್ರದಾನ

**ಮೈಸೂರು :** ಕರ್ನಾಟಕ ರಾಜ್ಯ ವೈಚಾರಿಕ ಚಿಂತಕರ ವೇದಿಕೆ ಹಾಗೂ ನಮೋ ಯೋಗ ಭವನ ಮೈಸೂರು ವತಿಯಿಂದ ವಿಶ್ವ ಮಹಿಳಾ ದಿನಾಚರಣೆ ಹಾಗೂ ಮೈಸೂರು ಮಾಣಿಕ್ಯ ರತ್ನ ಪ್ರಶಸ್ತಿ ಹಾಗೂ ಆದರ್ಶ ದಂಪತಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ನಡೆಯಿತು .

ಕಾರ್ಯಕ್ರಮದ ಉದ್ಘಾಟನೆಯನ್ನು ಶ್ರೀಮತಿ ಅನಿತಾ ಎಸ್ ಬಿ ಕಾರ್ಯನಿರ್ವಾಹಕ ಇಂಜಿನಿಯರ್ ಎನ್ ಆರ್ ಮೊಹಲ್ಲ ಚೆಸ್ಕಾಂ ವಿಭಾಗ ಮೈಸೂರು ಇವರು ನೆರವೇರಿಸಿದರು ಅಧ್ಯಕ್ಷತೆಯನ್ನು ಡಾ.ರಾಣಿ ಪ್ರಭಾ ಅವರು ವಹಿಸಿದ್ದರು ಪ್ರಾಸ್ತವಿಕ ನುಡಿಯನ್ನು ವೇದಿಕೆಯ ಅಧ್ಯಕ್ಷರಾದ ಶ್ರೀಕ್ಯಾತನಹಳ್ಳಿ ಪ್ರಕಾಶ್ ನುಡಿದರು. ಮೈಸೂರು ಮಾಣಿಕ್ಯ ರತ್ನ ಪ್ರಶಸ್ತಿಯನ್ನು ಡಾಕ್ಟರ್ ದೀಪಿಕಾ ಮಾಧವ ಪಾಂಡುರಂಗಿ ಶ್ರೀಮತಿ ಪದ್ಮಶ್ರೀ ರಾವ್ ಶ್ರೀಮತಿ ನೀಲಮ್ಮ ಶ್ರೀಮತಿ ಜಯಶ್ರೀ ಶಿವರಾಮ್ ಶ್ರೀಮತಿ ರೂಪ ಶ್ರೀಮತಿ ಕವಿತಾ ಶಿರೂರು ಶ್ರೀಮತಿ ಮೀನಾಕ್ಷಿ ಚಟ್ನಿ, ಶ್ರೀಮತಿ ಲಲಿತ ಕುಮಾರಿ ಚೂಡಾಮಣಿ ಇವರು ಪಡೆದುಕೊಂಡರು ಹಾಗೂ ಶ್ರೀಮತಿ ಸ್ವಾತಿ ಮತ್ತು ಶ್ರೀ ಸತ್ಯ ದಂಪತಿಗಳಿಗೆ ಹಾಗೂ ಶ್ರೀಮತಿ ಚಂದ್ರಕಲಾ ಮತ್ತು ದೊರೆ ಸ್ವಾಮಿ ದಂಪತಿಗಳಿಗೆ ಆದರ್ಶ ದಂಪತಿ ಬಿರುದು ನೀಡಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ವೇದಿಕೆಯ ಸಂಚಾಲಕರಾದ ಡಾ ರವಿಶಂಕರ್ ಎಸ್ ಜಿ ಉಪಸ್ಥಿತರಿದ್ದರು. ಡಾ. ವಿನೋದ ಸ್ವಾಗತಿಸಿದರು ಡಾಕ್ಟರ್ ಕಾವೇರಿ ನಿರೂಪಿಸಿದರು . ಪನ್ನಗ ವಿಜಯಕುಮಾರ್ ತಂಡ ಪ್ರಾರ್ಥಿಸಿದರು.ಗೀತಾ ಶ್ರೀಧರ್ ಅವರು ವಂದಿಸಿದರು .



## ಮೊತ್ತ ಗ್ರಾಮದಲ್ಲಿ ಅದ್ದೂರಿಯಾಗಿ ನೆರವೇರಿದ ಬಸವೇಶ್ವರ ಕೊಂಡೋತ್ಸವ



**ಎಚ್ ಡಿ ಕೋಟೆ:** ಎಚ್ ಡಿ ಕೋಟೆ ತಾಲೂಕಿನ ಮೊತ್ತ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಸಹ ಬಸವೇಶ್ವರ ಸ್ವಾಮಿಯ ಕೊಂಡೋತ್ಸವ ಅದ್ದೂರಿಯಾಗಿ ನೆರವೇರಿತು, ಯುಗಾದಿ ಹಬ್ಬದ ನಂತರ ಆಚರಿಸಲ್ಪಡುವ ಈ ಕೊಂಡೋತ್ಸವವು ಭಕ್ತಿ ಭಾವದಿಂದ ನೆರವೇರಿತು,

ಕೊಂಡೋತ್ಸವದ ಹಿನ್ನೆಲೆ ಸೋಮವಾರ ರಾತ್ರಿ ದೇವಸ್ಥಾನದ ಮುಂಭಾಗ ಮೊತ್ತ ಗ್ರಾಮದ ಶ್ರೀ ಶನೇಶ್ವರ ಸ್ವಾಮಿ ಭಕ್ತ ಮಂಡಳಿ ವತಿಯಿಂದ ಶನಿ ಪ್ರಭಾವ ಅಥವಾ ರಾಜಾ ವಿಕ್ರಮ ಎಂಬ ಪೌರಾಂಬಿಕ ನಾಟಕವನ್ನು ಏರ್ಪಡಿಸಲಾಗಿತ್ತು,

ಇಂದು ಮುಂಜಾನೆಯಿಂದಲೇ ಗಂಗಾ ಪೂಜೆ ಮಾಡಿ, ಸತ್ತಿಗೆ ಸೂರಿಪಾನಿ ಮಂಗಳವಾದ್ಯಗಳು, ವೀರಗಾಸೆ ಕುಣಿತ ನಂದಿಧ್ವಜಗಳೊಂದಿಗೆ ಶ್ರೀ ಬಸವೇಶ್ವರ ಸ್ವಾಮಿಯ ವಿಗ್ರಹವನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು, ನಂತರ ದೇವಸ್ಥಾನದ ಭಾಗದಲ್ಲಿ ಕೊಂಡೋತ್ಸವ ಹಮ್ಮಿಕೊಂಡಿದ್ದು ದೇವರ ಗುಡ್ಡಪ್ಪಂದಿರು ಸೇರಿ ಭಕ್ತರು ಸುಡು ಬಿಸಿಲನ್ನು ಲೆಕ್ಕಿಸದೆ ಕೊಂಡ ಹಾಯ್ದು ಭಕ್ತಿ ಭಾವ ಮೆರೆದರು,

ಇದಾದ ಬಳಿಕ ಕೊಂಡೋತ್ಸವದಲ್ಲಿ ಪಾಲ್ಗೊಂಡ ಸಾವಿರಾರು ಭಕ್ತರಿಗೆ ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆ ಏರ್ಪಡಿಸಲಾಗಿತ್ತು, ಗ್ರಾಮದ ರೈತರು ತಮ್ಮ ದನ ಕರುಗಳನ್ನು ದೇವಸ್ಥಾನದ ಬಳಿ ಕರೆತಂದು ಪೂಜೆ ಸಲ್ಲಿಸಿದರು. ಈ ವೇಳೆ ಗ್ರಾಮದ ಯಜಮಾನರುಗಳಾದ ಪುಟ್ಟೇಗೌಡ, ಪ್ರಕಾಶ್, ಕರಿಯಯ್ಯ, ಶಿವಮಲ್ಲಪ್ಪ, ಕರಿಯಪ್ಪ ಗೌಡ, ತಮ್ಮಣ್ಣ, ರವಿ, ಉಮೇಶ್ ಕೋಟೆ, ಚಂದ್ರು, ಶಿವಮೂರ್ತಿ, ಬಸವಮೂರ್ತಿ, ಗುರುಸ್ವಾಮಪ್ಪ, ನಂಜುಂಡಸ್ವಾಮಿ, ಸೋಮಣ್ಣ, ಮಲ್ಲು, ಶಿವಣ್ಣ, ಚನ್ನಬಸಪ್ಪ ಸೇರಿ ಮೊತ್ತ ಗ್ರಾಮಸ್ಥರು ಸೇರಿ ಕಟ್ಟೆಮನಗನಹಳ್ಳಿ ಹಾಲ್ತಾಳುಂಡಿ, ಅಂತರಸಂತೆ ನೂರಲಕುಪ್ಪೆ ಸೇರಿ ಅಕ್ಕಪಕ್ಕದ ಸಾವಿರಾರು ಗ್ರಾಮಸ್ಥರು ಭಾಗಿಯಾಗಿದ್ದರು.

### ಶಾಸಕ ಪ್ರದೀಪ್ ಈಶ್ವರ್ ಹೇಳಿಕೆ

# ಸಮಸ್ಯೆಗಳಿಗೆ ಶೀಘ್ರವೇ ಪರಿಹಾರ

**ಚಿಕ್ಕಬಳ್ಳಾಪುರ :** ಜಿಲ್ಲಾಸ್ಪತ್ರೆ ಎದುರಿನ 8ನೇ ವಾರ್ಡ್ ನಿವಾಸಿಗಳ ಏಕೈಕ ಸಮಸ್ಯೆ ವೈಜ್ಞಾನಿಕವಾಗಿ ಒಳಚರಂಡಿ ಮಾಡಿಲ್ಲ ಸರಿಮಾಡಿಸಿಕೊಡಿ ಎಂದು ಕೇಳಿದ್ದಾರೆ. ಇದೊಂದು ದಶಕಗಳ ಸಮಸ್ಯೆಯಾಗಿದ್ದು ಶೀಘ್ರವೇ ಪರಿಹಾರ ಕಾಣಿಸುವಂತೆ ಇಂಜನಿಯರ್ ಅವರಿಗೆ ಶಾಸಕ ಪ್ರದೀಪ್ ಈಶ್ವರ್ ಸೂಚನೆ ನೀಡಿದ್ದು ನಿವಾಸಿಗಳ ಸಂತೋಷಕ್ಕೆ ಕಾರಣವಾಗಿತ್ತು.

ನಗರದ 8 ವಾರ್ಡಿನಲ್ಲಿ ಮಂಗಳವಾರ ನಮಸ್ತೆ ಚಿಕ್ಕಬಳ್ಳಾಪುರ ಕಾರ್ಯಕ್ರಮವನ್ನು ಮುಂದುವರೆಸಿದ ಶಾಸಕ ಪ್ರದೀಪ್ ಈಶ್ವರ್ ಮನೆಮನೆಗೆ ತೆರಳಿ ಜನರ ಕಷ್ಟಗಳಿಗೆ ಕಿವಿಯಾದರು.ಯುಜಿಡಿ ಸಮಸ್ಯೆ ಪರಿಹಾರ ಮಾಡಲು ಹೆಚ್ಚು ಅನುದಾನ ಬೇಕಿದೆ.ಏನಾದರೂ ಹೇಳಿದರೆ ಕನೆಕ್ಟ್ ಮಾಡಲು ಆಗುತ್ತಿಲ್ಲ,ಮಿಸ್ಸಿಂಗ್ ಲಿಂಕ್ ಇದೆ ಅಂತಾರೆ.ಇದು ಬಹಳ ಚಾಲೆಂಜಿಂಗ್ ಇದನ್ನು ಪರಿಹಾರ ಮಾಡಲು ತುಂಬಾ ವರ್ಷಗಳು ಬೇಕು.ಆದರೂ ಕೂಡ ಇಲ್ಲಿನ ಯುಜಿಡಿ ಸಮಸ್ಯೆಯನ್ನು ತಾತ್ಕಾಲಿಕವಾಗಿ ಪರಿಹರಿಸಿ ಚರಂಡಿಯ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡಲು ನಗರಸಭೆ ಆಡಳಿತಕ್ಕೆ ಶಾಸಕರು ತಾಕೀತು ಮಾಡಿದರು.

ನಂತರ 22ನೇ ವಾರ್ಡ್ನಲ್ಲಿ ಮನೆಮನೆಗೂ ಭೇಟಿ ನೀಡಿದ ಶಾಸಕ ಪ್ರದೀಪ್ ಈಶ್ವರ್ ಜನತೆಯ ಅಹವಾಲು ಆಲಿಸಿದರು.ಈ ವೇಳೆ ನಿವಾಸಿಗಳು ಸ್ಮಶಾನಕ್ಕೆ ಹೋಗಲು ರಸ್ತೆ ಮಾಡಿಸಿಕೊಡಿ, ಕಂದವಾರದಿಂದ ಹರಿದು ಬರುವ ನೀರು ರಾಜಕಾಲುವೆ ಮೂಲಕ ಅಮಾನಿ ಗೋಪಾಲಕೃಷ್ಣಕೆರೆ ತಲುಪುವಂತೆ ಮಾಡಿರುವ ರಾಜಕಾಲುವೆ ಕಾಮಗಾರಿ ಅರ್ಧಕ್ಕೆ ನಿಂತಿದ್ದು ಇದನ್ನು ಪೂರ್ಣಗೊಳಿಸಿ,ಇಲ್ಲವಾದಲ್ಲಿ ಮಳೆಗಾಲದಲ್ಲಿ ಮನೆಗಳಿಗೆ ನೀರು ನುಗ್ಗುವುದು ಖಚಿತ ಎಂದು ಇಲ್ಲಿನ ನಿವಾಸಿಗಳು ಶಾಸಕರಿಗೆ ಅವಲತ್ತುಕೊಂಡರು. ಶಾಸಕ ಪ್ರದೀಪ್ ಈಶ್ವರ್ ಆದಷ್ಟು ಬೇಗ ಪರಿಹಾರ ಮಾಡಿಕೊಡಲು ಮುಂದಾಗುತ್ತೇನೆ ಎಂದರು.

ಮನೆಮನೆ ಭೇಟಿಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್ ನಗರಸಭೆಯ 99 ವಾಣಿಜ್ಯ ಮಳಿಗೆಗಳ ಹರಾಜು ಪ್ರಕ್ರಿಯೆಯನ್ನು ಶಾಸಕ ಪ್ರದೀಪ್ ಈಶ್ವರ್ ತಡೆದಿದ್ದಾರೆ ಎಂದು ಹೇಳಿಕೊಳ್ಳುವುದರಲ್ಲಿ ಅರ್ಥವೇ ಇಲ್ಲ.ನಾನು ಹಾಗೆ ಮಾಡಲು ಮುಂದಾದರೆ ಮುಂದಿನ 2 ವರ್ಷಗಳ ಕಾಲ ತಡೆಯಬಹುದಲ್ಲ ಎನ್ನುವ ಮೂಲಕ ನನಗೂ ಇದಕ್ಕೂ ಸಂಬಂಧವೇ ಇಲ್ಲ ಎಂದು ಚರ್ಚೆಗಳಿಗೆ ತೆರೆ ತೆಳೆದರು.

ಈ ಸಂದರ್ಭದಲ್ಲಿ ನಗರಸಭೆ ಪೌರಾಯುಕ್ತ ಮನ್ಸೂರ್ ಅಲಿ,ಮುಖಂಡರಾದ ಕೆ ಎಂ ಮುನೇಗೌಡ,ಡ್ಯಾನ್ಸ್ ಶ್ರೀನಿವಾಸ್,ಡೈರಿ ಗೋಪಿ,ವಕೀಲರಾದ ದಾವೂದ್,ನಾಗೇಶ್ ರೆಡ್ಡಿ,ರಕ್ಷಿತ್‌ರೆಡ್ಡಿ,ಮುದಾಸಿರ್ ಇತರರು ಉಪಸ್ಥಿತರಿದ್ದರು.



**ನಾನು ಶಾಸಕ ಆದ ಮೇಲೆ ಬಿಜೆಪಿಯ ಮುಖಂಡರನ್ನು ನಿದ್ದೆ ಮಾಡಲು ಬಿಟ್ಟಿಲ್ಲ.ಬಿಜೆಪಿಯಲ್ಲಿ ನನಗೆ ಇಷ್ಟವಾದ ನಾಯಕರಾದ ವಿಜಯೇಂದ್ರ, ಆರ್. ಅಶೋಕ್,ಪ್ರತಾಪ್ ಸಿಂಹ ಹೀಗೆ ಸಾಲುಸಾಲು ಪಟ್ಟಿಯಿದೆ.ಪ್ರತಾಪ್ ಸಿಂಹ ಅವರಂತೂ ನನ್ನ ಮೇಲೆ 4 ಮಾನನಷ್ಟ ಪ್ರಕರಣ ದಾಖಲಿಸಿದ್ದಾರೆ.ಡಿಬೇಟ್ ಗೆ ಬಾ ಎಂದರೆ ಕೇಸು ಹಾಕುವ ಇವರು,ಇವರು ಫೈರ್‌ಬಾಂಡ್ ಅಂತೆ.ಬ್ರಾಂಡ್‌ಗಳನ್ನು ಫೈರ್ ಮಾಡುವವನು ನಾನೇ ಎನ್ನುವ ಮೂಲಕ ಶಾಸಕರು ಕಾಲೆಳೆದರು.**

## ಸಬ್ ಇನ್ಸ್‌ಪೆಕ್ಟರ್ ಆಕಾಶ್‌ಗೆ ಅಭಿನಂದನೆ



**ಯಳಂದೂರು :** ಪಟ್ಟಣ ಪೊಲೀಸ್ ಠಾಣೆಗೆ ನೂತನವಾಗಿ ಆಗಮಿಸಿರುವ ಸಬ್ ಇನ್ಸ್‌ಪೆಕ್ಟರ್ ಎಸ್.ಕೆ. ಆಕಾಶ್‌ರನ್ನು ತಾಲೂಕು ಕರ್ನಾಟಕ ರಕ್ಷಣೆ ವೇದಿಕೆ (ಪ್ರವೀಣ್ ಶೆಟ್ಟಿ) ಬಣದಿಂದ ಸೋಮವಾರ ಸಂಜೆ ಅಭಿನಂದನೆ ಸಲ್ಲಿಸಲಾಯಿತು.

ಹಾಸನ ಗ್ರಾಮಾಂತರ ಪೊಲೀಸ್ ಠಾಣೆಯಿಂದ ಯಳಂದೂರು ಪೊಲೀಸ್ ಠಾಣೆಗೆ ವರ್ಗಾವಣೆಯಾಗಿ ಬಂದಿರುವ ಪಿಎಸ್‌ಐ ಎಸ್.ಕೆ.ಆ ಕಾಶ್ ಅಧಿಕಾರ ಸ್ವೀಕರಿಸಿದ್ದಾರೆ.

ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಸಾರ್ವಜನಿಕರ ಅನುಕೂಲವಾಗುವ ರಸ್ತೆ ಸಂಚಾರದ ನಿಯಮ, ರಕ್ಷಣೆ, ವಾಹನಗಳ ನಿಲ್ಲಿಸುವ ವ್ಯವಸ್ಥೆ, ಗ್ರಾಮಗಳಿಗೆ ಸೂಕ್ತ ಪೊಲೀಸ್ ಸಿಬ್ಬಂಧಿಗಳ ನಿಯೋಜನೆ ಮಾಡುವ ಮೂಲಕ ಕಾನೂನು ಸುವ್ಯವಸ್ಥೆಯನ್ನು ಸಂರಕ್ಷಣೆ ಮಾಡುವ ಕೆಲಸವನ್ನು ಮಾಡಬೇಕೆಂದು ಸಲಹೆಗಳನ್ನು ನೀಡಿದರು.

ಈ ಸಂಧರ್ಭದಲ್ಲಿ ಕನ್ನಡ ರಕ್ಷಣಾ ವೇದಿಕೆಯ ಜಿಲ್ಲಾ ಉಪಾಧ್ಯಕ್ಷ ವೈ.ಕೆ. ಮೋಳೆನಾಗರಾಜು, ಬಿಳಿಗಿರಿರಂಗನಾಥಸ್ವಾಮಿ ದೇವಸ್ಥಾನ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಜೆ. ಶ್ರೀನಿವಾಸ್, ಕೃಷಿಕ ಸಮಾಜದ ತಾಲೂಕು ಅಧ್ಯಕ್ಷ ಗೌಡಹಳ್ಳಿ ರವಿ, ಪಟ್ಟಣ ಪಂಚಾಯಿತಿ ನಾಮನಿರ್ದೇಶನ ಸದಸ್ಯ ಬಳೇಪೇಟೆ ಲಿಂಗರಾಜಮೂರ್ತಿ, ವೆಂಕಟೇಶ್, ಯರಿಯೂರು ಕುಮಾರ್, ಅಂಬಳೆ ಕುಮಾರ್, ಶ್ರೀನಿವಾಸ್, ಗುರುಲಿಂಗು, ಅಮ್ಜದ್‌ಖಾನ್ ಸೇರಿದಂತೆ ಅನೇಕರು ಹಾಜರಿದ್ದರು.

# ಸಂಜೆ ಟಿಪ್ಸ್

## ಜಿಯೋ ಫೈನಾನ್ಸ್‌ನಿಂದ ಷೇರುಗಳು, ಮ್ಯೂಚುವಲ್ ಫಂಡ್ ಮೇಲೆ ಸಾಲ ಸೌಲಭ್ಯ

ಜಿಯೋ ಫೈನಾನ್ಸ್ ಲಿಮಿಟೆಡ್ (ಜೆಎಫ್‌ಎಲ್) ಲೋನ್ ಅಗೇನ್ಸ್ಟ್ ಸೆಕ್ಯುರಿಟೀಸ್ (ಎಲ್ಎಎಸ್) ಕ್ಷೇತ್ರಕ್ಕೆ ಕಾಲಿಟ್ಟಿದೆ. ಡಿಮ್ಯಾಟ್ ಖಾತೆಯಲ್ಲಿರುವ ಷೇರುಗಳು ಮತ್ತು ಮ್ಯೂಚುವಲ್ ಫಂಡ್ ಗಳಂತಹ ಸೆಕ್ಯುರಿಟಿಗಳನ್ನು ಅಡವಿಡುವ ಮೂಲಕ, ಗ್ರಾಹಕರು ಅವುಗಳನ್ನು ಮಾರಾಟ ಮಾಡದೆ ಸಾಲಗಳನ್ನು ತೆಗೆದುಕೊಳ್ಳಲು ಇದು ನೆರವಾಗುತ್ತದೆ. ಈ ಪ್ರಕ್ರಿಯೆಯು ಸಂಪೂರ್ಣವಾಗಿ ಡಿಜಿಟಲ್, ಸುರಕ್ಷಿತ ಮತ್ತು ಒಟಿಪಿ ಆಧಾರಿತವಾಗಿದೆ ಎಂದು ಕಂಪನಿ ಹೇಳಿಕೊಂಡಿದೆ. ಜಿಯೋ ಫೈನಾನ್ಸ್ ಅಪ್ಲಿಕೇಶನ್ ಮೂಲಕ ಕೇವಲ 10 ನಿಮಿಷಗಳಲ್ಲಿ 1 ಕೋಟಿ ರೂ.ವರೆಗಿನ ಸಾಲವನ್ನು ತೆಗೆದುಕೊಳ್ಳಬಹುದು. ಜಿಯೋ ಫೈನಾನ್ಸ್ ಲಿಮಿಟೆಡ್ (ಜೆಎಫ್‌ಎಲ್) ಎನ್ನುವುದು ಜಿಯೋ ಫೈನಾನ್ಷಿಯಲ್ ಸರ್ವೀಸಸ್ ಲಿಮಿಟೆಡ್‌ನ ಎನ್‌ಬಿಎಫ್‌ಸಿ (ಬ್ಯಾಂಕೇತರ ಹಣಕಾಸು ಕಂಪನಿ) ಶಾಖೆಯಾಗಿದೆ. ಕಂಪನಿಯು ಇದನ್ನು ಡಿಜಿಟಲ್-ಫಸ್ಟ್ ಹಣಕಾಸು ಸೇವೆಗಳಿಗೆ ಒನ್-ಸ್ಟಾಪ್ ತಾಣ ಎಂದು ವಿವರಿಸುತ್ತಿದೆ. ಗ್ರಾಹಕರ ಹಣಕಾಸಿನ ಅಗತ್ಯಗಳನ್ನು ಪೂರೈಸಲು ಇದನ್ನು ವಿನ್ಯಾಸಗೊಳಿಸಲಾಗಿದೆ. ಇದು ಷೇರುಗಳ ಮೇಲಿನ ಸಾಲ ಮತ್ತು ಮ್ಯೂಚುವಲ್ ಫಂಡ್‌ಗಳ ಮೇಲಿನ ಸಾಲದಂತಹ ಸೇವೆಗಳನ್ನು ಒಳಗೊಂಡಿದೆ. ಸಾಲದ ಬಡ್ಡಿದರಗಳು ಗ್ರಾಹಕರ ವೈಯಕ್ತಿಕ ರಿಸ್ಕ್ ಪ್ರೊಫೈಲ್‌ಗೆ ಅನುಗುಣವಾಗಿರುತ್ತವೆ. ಕಂಪನಿಯು ಇವುಗಳನ್ನು ಕಡಿಮೆ ಮಾಡಲು ಪ್ರಯತ್ನಿಸಿದೆ. ಬಡ್ಡಿದರಗಳು ಶೇ 9.99 ರಿಂದ ಪ್ರಾರಂಭವಾಗುತ್ತವೆ. ಈ ಸಾಲಗಳು ಗರಿಷ್ಠ ಮೂರು ವರ್ಷಗಳ ಅವಧಿಯದ್ದಾಗಿರುತ್ತವೆ ಮತ್ತು ಯಾವುದೇ ಮುಕ್ತಾಯ ಶುಲ್ಕಗಳನ್ನು ಒಳಗೊಂಡಿರುವುದಿಲ್ಲ. ಜಿಯೋ ಫೈನಾನ್ಸ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಸಿಇಒ ಕುಸಾಲ್ ರಾಯ್ ಮಾತನಾಡಿ, ಸೆಕ್ಯುರಿಟೀಸ್ ಮೇಲಿನ ಸಾಲದ ಪ್ರಾರಂಭವು ನಮ್ಮ ವಿಶಾಲ ಡಿಜಿಟಲ್ ಕಾರ್ಯತಂತ್ರದ ಭಾಗವಾಗಿದೆ. ಇದು ಗ್ರಾಹಕರು ಹಣಕಾಸು ಸೇವೆಗಳನ್ನು ಪ್ರವೇಶಿಸುವ ವಿಧಾನವನ್ನು ಪರಿವರ್ತಿಸುವ ಗುರಿಯನ್ನು ಹೊಂದಿದೆ. ಹಣಕಾಸು ಸೇವೆಗಳನ್ನು ವೇಗವಾಗಿ ಮತ್ತು ಗ್ರಾಹಕ ಕೇಂದ್ರಿತವಾಗಿಸುವ ನಮ್ಮ ಧ್ಯೇಯದಲ್ಲಿ ಒಂದು ಪ್ರಮುಖ ಹೆಜ್ಜೆ ಇದಾಗಿದೆ ಎಂದರು.

## ಉದ್ದಿನವಡೆ

### ಪಾಕ ಶಾಲೆ



**ಬೇಕಿರುವ ಸಾಮಗ್ರಿ**

ಉದ್ದಿನ ಬೇಳೆ ಒಂದು ಕಪ್, ಶುಂಠಿ ಸ್ವಲ್ಪ, ಹಸಿಮೆಣಸಿನ ಕಾಯಿ ಎರಡು, ಕರಿಬೇವಿನ ಎಲೆ ಸ್ವಲ್ಪ, ಕೊತ್ತಂಬರಿ ಸೊಪ್ಪು ಸ್ವಲ್ಪ, ಕಾಳು ಮೆಣಸು ಏಳೆಂಟು, ಉಪ್ಪು ರುಚಿಗೆ ತಕ್ಕಷ್ಟು, ಎಣ್ಣೆ ಕರಿಯಲು, ಅಡುಗೆ ಸೋಡಾ ಚಿಟಿಕೆ.

### ಮಾಡುವ ವಿಧಾನ

ಉದ್ದಿನ ಬೇಳೆಯನ್ನು ಎರಡರಿಂದ ಮೂರು ಗಂಟೆ ನೀರಿನಲ್ಲಿ ನೆನೆಸಿ. ನಂತರ ನೀರನ್ನು ಬಸಿಯಿರಿ, ಮಿಕ್ಸಿ ಜಾರಿಗೆ ಹಾಕಿ ನುಣ್ಣಗೆ ರುಬ್ಬಿ ಕೊಳ್ಳಿ.

ಹಿಟ್ಟು ಗಟ್ಟಿಯಾಗಿ ಇರಲಿ. ಒಂದು ಪಾತ್ರೆಯಲ್ಲಿ ಉದ್ದಿನ ಹಿಟ್ಟು ಹಾಕಿ, ಅದಕ್ಕೆ ಸಣ್ಣದಾಗಿ ಹೆಚ್ಚಿದ ಶುಂಠಿ, ಕರಿಬೇವಿನ ಎಲೆ, ಕೊತ್ತಂಬರಿ ಸೊಪ್ಪು, ಹಸಿ ಮೆಣಸಿನಕಾಯಿ, ರುಚಿಗೆ ತಕ್ಕಷ್ಟು ಉಪ್ಪು, ಕಾಳು ಮೆಣಸು, ಚಿಟಿಕೆ ಅಡಿಗೆ ಸೋಡ ಹಾಕಿ ಚೆನ್ನಾಗಿ ಮಿಶ್ರನ ಮಾಡಿ. ಬಾಣಲೆಯಲ್ಲಿ ಎಣ್ಣೆ ಬಿಸಿಯಾಗಲು ಇಟ್ಟು, ಕೈಯನ್ನು ನೀರಿನಲ್ಲಿ ಒದ್ದೆ ಮಾಡಿ ಕೊಂಡು, ಉದ್ದಿನ ಹಿಟ್ಟಿನ ಮಿಶ್ರಣವನ್ನು ಉಂಡೆಯಾಗಿ ಮಾಡಿಕೊಂಡು ಅದನ್ನು ವಡೆಯಾಕಾರದಲ್ಲಿ ಮಧ್ಯೆ ಸಣ್ಣ ತೂತು ಮಾಡಿ ಬಿಸಿ ಎಣ್ಣೆಯಲ್ಲಿ ಕರಿಯಿರಿ.

## ಜಯಾ ಬಚ್ಚನ್ ಮೇಲೆ ನೆಟ್ಟಿಗರು ಫುಲ್ ಗರಂ



ಮನೋಜ್ ಕುಮಾರ್ ಅವರ ಪ್ರಾರ್ಥನಾ ಸಭೆಯಲ್ಲಿ ಅಭಿಮಾನಿಯೊಂದಿಗೆ ಜಯಾ ಬಚ್ಚನ್ ಉದ್ವಿಗ್ನವಾಗಿ ಕಾಣಿಸಿಕೊಂಡರು. ಘಟನೆಯ ವಿಡಿಯೋ ವೈರಲ್ ಆಗುತ್ತಿದ್ದು, ಆನ್ ಲೈನ್‌ನಲ್ಲಿ ಮಿಶ್ರ ಪ್ರತಿಕ್ರಿಯೆಗಳನ್ನು ಹುಟ್ಟುಹಾಕುತ್ತಿದೆ. ಕೆಲವು ನೆಟಿಜನ್‌ಗಳು ಜಯಾ ಅವರ ನಡವಳಿಕೆಯನ್ನು ಟೀಕಿಸಿದರೆ, ಇನ್ನು ಕೆಲವರು ಅವರನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ. ಭಾನುವಾರ ದಿವಂಗತ ಮನೋಜ್ ಕುಮಾರ್ ಅವರ ಪ್ರಾರ್ಥನಾ ಸಭೆಯಲ್ಲಿ ಜಯಾ ಬಚ್ಚನ್ ಮತ್ತು ಬಾಲಿವುಡ್‌ನ ಹಲವಾರು ಸದಸ್ಯರು ಭಾಗವಹಿಸಿದ್ದರು. ಆದಾಗ್ಯೂ, ಅನಿರೀಕ್ಷಿತ ಕ್ಷಣವೊಂದು ಎಲ್ಲರ ಗಮನ ಸೆಳೆಯಿತು – ಬಚ್ಚನ್ ಮತ್ತು ಹಿರಿಯ ನಟನೊಂದಿಗೆ ಫೋಟೋ ತೆಗೆದುಕೊಳ್ಳಲು ಪ್ರಯತ್ನಿಸಿದ ಹಿರಿಯ ಅಭಿಮಾನಿಯ ನಡುವಿನ ಸಂವಾದ ಸಾಮಾಜಿಕ ಜಾಲತಾಣದಲ್ಲಿ ಕಿಡಿ ಹೊತ್ತಿಸಿದೆ. ಬಚ್ಚನ್ ಆ ಮಹಿಳೆಯನ್ನು ಎದುರಿಸುತ್ತಿದ್ದಂತೆ ಅಸಮಾಧಾನಗೊಂಡಂತೆ ಕಾಣಿಸಿಕೊಂಡರು, ಈ ಕ್ಷಣವನ್ನು ಅನೇಕರು ಸೆರೆಹಿಡಿದಿದ್ದಾರೆ ಇದೀಗ ಇಂಟರ್ನೆಟ್‌ನಲ್ಲಿ ವ್ಯಾಪಕವಾಗಿ ಪ್ರಸಾರವಾಗುತ್ತಿದೆ.ಇನ್‌ಸ್ಟಾಗ್ರಾಮ್‌ನಲ್ಲಿ ಹರಿದಾಡುತ್ತಿರುವ ವೀಡಿಯೊವೊಂದು ಜಯಾ ಬಚ್ಚನ್ ಅವರ ವರ್ತನೆಯನ್ನು ನೆಟ್ಟಿಗರು ಕಂಡಿಸುವಂತೆ ಮಾಡುತ್ತಿದೆ. ಜಯಾ ಬಚ್ಚನ್ ಸಭೆಯಲ್ಲಿ ನಿಂತು ಇತರ ಮಹಿಳೆಯರೊಂದಿಗೆ ಸಂಭಾಷಣೆಯಲ್ಲಿ ತೊಡಗಿದ್ದಾಗ, ಹಸಿರು ಸೀರೆಯುಟ್ಟ ವೃದ್ಧ ಮಹಿಳೆಯೊಬ್ಬರು ಅವರ ಭುಜವನ್ನು ನಿಧಾನವಾಗಿ ತಟ್ಟಿದ್ದಾರೆ. ಹಿಂದೆ ತಿರುಗಿ ನೋಡಿದ ಜಯಾ ಬಚ್ಚನ್ ಅವರು ಅಭಿಮಾನಿಯನ್ನು ಗದರಿದ್ದಾರೆ. ವೃದ್ಧಾ ಅಭಿಮಾನಿಯನ್ನು ಗದರುತ್ತಿದ್ದಂತೆ ಸ್ಥಳದಲ್ಲೆ ನಿಂತು ಫೋಟೋ ಕ್ಲಿಕ್ಕಿಸುತ್ತಿದ್ದ ವೃದ್ದೆಯ ಪತಿ ಜಯಾ ಬಚ್ಚನ್ ಅವರನ್ನು ತಡೆದು ವಾರಿಗೆ ಕ್ಷಮೆಯಾಚಿಸಿದ್ದಾರೆ. ಮಹಿಳಾ ಅಭಿಮಾನಿ ತನ್ನನ್ನು ಮುಟ್ಟಿದರು ಎಂಬ ಕಾರಣದಕ್ಕೆ ಜಯಾ ಬಚ್ಚನ್ ಅಸಮಾಧಾನಗೊಂಡಿದ್ದು ವಿಡಿಯೋದಲ್ಲಿ ಸ್ಪಷ್ಟವಾಗಿ ಕಾಣುತ್ತಿದೆ. ಸದ್ಯ ಈ ದೃಶ್ಯಗಳು ಸಾಮಾಜಿಕ ಜಾಲತಾಣದಲ್ಲಿ ಬೆಂಕಿಯಂತೆ ಹರಡುತ್ತಿದೆ, ಜಯಾ ಬಚ್ಚನ್ ಅವರ ಈ ವರ್ತನೆಯನ್ನು ಕಂಡು ಅಭಿಮಾನಿಗಳು ಶಾಕ್ ಆಗಿದ್ದು, ಜಯಾ ಅವರನ್ನು ಕಟುವಾಗಿ ಟೀಕಿಸುತ್ತಿದ್ದಾರೆ. ಈ ವಿಡಿಯೋಗೆ ಸದ್ಯ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿದ್ದು, ಈ ವಿಡಿಯೋ ನೋಡಿದ ಕೆಲವು ನೆಟ್ಟಿಗರಂತೂ ಜಯಾ ಬಚ್ಚನ್ ಅವರ ವಿರುದ್ಧ ತಿರುಗಿ ಬಿದ್ದಿದ್ದಾರೆ. ದುಡ್ಡು ಇದ್ದ ಮಾತ್ರಕ್ಕೆ ಇಷ್ಟು ದುರಹಂಕಾರ ಒಳ್ಳೆಯದಲ್ಲಾ ಎಂಬ ಮಾತು ಸಾಮಾಜಿಕ ಜಾಲತಾಣದಲ್ಲಿ ಸದ್ಯ ದೊಡ್ಡ ಚರ್ಚೆಯನ್ನೆ ಸೃಷ್ಟಿಸಿಬಿಟ್ಟಿದೆ. ವಯಸ್ಸಿನಲ್ಲಿ ದೊಡ್ಡವರಾದ ವೃದ್ದೆಯ ಕೈ ಮುಗಿದು ಕ್ಷಮೆ ಕೇಳುವಂತೆ ಮಾಡಿದ ಜಯಾ ಬಚ್ಚನ್ ಅವರ ನಡವಳಿಕೆಯ ಬಗ್ಗೆ ಸದ್ಯ ತೀವ್ರ ಟೀಕೆ ವ್ಯಕ್ತವಾಗುತ್ತಿದೆ.

## ಕಲ್ಲಂಗಡಿ ಬೀಜಗಳ ಪ್ರಯೋಜನಗಳು



**ಹೆಲ್ತ್ ಟಿಪ್ಸ್**

**ಹೃದಯಕ್ಕೆ ಪ್ರಯೋಜನಕಾರಿ:** ಕಲ್ಲಂಗಡಿ ಬೀಜಗಳು ಹೃದಯಕ್ಕೆ ಒಳ್ಳೆಯದು ಎಂದು ಪರಿಗಣಿಸಲಾಗುತ್ತದೆ. ಇವುಗಳಲ್ಲಿ ಉತ್ತಮ ಕೊಬ್ಬು, ಮೆಗ್ನೀಸಿಯಮ್ ಮತ್ತು ಒಮೆಗಾ-3, ಒಮೆಗಾ-6 ಇದ್ದು, ಇದು ಹೃದಯವನ್ನು ಆರೋಗ್ಯವಾಗಿಡಲು ಸಹಾಯ ಮಾಡುತ್ತದೆ.

**ಜೀರ್ಣಕ್ರಿಯೆ ಸುಧಾರಿಸುತ್ತದೆ:** ಕಲ್ಲಂಗಡಿ ಫೈಬರ್‌ನಿಂದ ಸಮೃದ್ಧವಾಗಿರುವ ಹಣ್ಣು. ನೀವು ಕಲ್ಲಂಗಡಿ ಬೀಜಗಳನ್ನು ಸೇವಿಸಿದರೆ ಅದು ದೇಹಕ್ಕೆ ಹೆಚ್ಚಿನ ಫೈಬರ್ ಒದಗಿಸುತ್ತದೆ ಮತ್ತು ಜೀರ್ಣಾಂಗ ವ್ಯವಸ್ಥೆಯನ್ನು ಸುಧಾರಿಸುತ್ತದೆ. ಇದು ಮಲಬದ್ಧತೆಯ ಸಮಸ್ಯೆಯನ್ನು ಪರಿಹರಿಸುತ್ತದೆ.

**ಚರ್ಮಕ್ಕೆ ಪ್ರಯೋಜನಕಾರಿ:** ಕಲ್ಲಂಗಡಿ ಬೀಜಗಳು ಜೀವಸತ್ವಗಳು ಮತ್ತು ಉತ್ಕರ್ಷಣ ನಿರೋಧಕಗಳಿಂದ ಸಮೃದ್ಧವಾಗಿದ್ದು, ಇದು ಚರ್ಮಕ್ಕೆ ಪ್ರಯೋಜನಕಾರಿಯಾಗಿದೆ. ಉತ್ತಮ ಕೊಬ್ಬಿನ ಅಂಶ ಇರುವುದರಿಂದ ಚರ್ಮವು ವಯಸ್ಸಾಗುವುದನ್ನು ದೂರವಿಡುತ್ತದೆ.

**ಮಧುಮೇಹದಲ್ಲಿ ಪ್ರಯೋಜನಗಳು:** ಕಲ್ಲಂಗಡಿ ಬೀಜಗಳು ಪ್ರೋಟೀನ್ ಅನ್ನು ಹೊಂದಿರುತ್ತವೆ. ಮಧುಮೇಹ ರೋಗಿಗಳು ಸಹ ಕಲ್ಲಂಗಡಿ ಬೀಜಗಳನ್ನು ಸುಲಭವಾಗಿ ಸೇವಿಸಬಹುದು. ಇದರಲ್ಲಿ ಕಂಡುಬರುವ ಮೆಗ್ನೀಸಿಯಮ್ ಸಹ ಪ್ರಯೋಜನಕಾರಿಯಾಗಿದೆ.

**ಶಕ್ತಿಯನ್ನು ಹೆಚ್ಚಿಸುತ್ತದೆ:** ಕಲ್ಲಂಗಡಿ ಬೀಜಗಳು ಜೀವಸತ್ವಗಳು ಮತ್ತು ಖನಿಜಗಳಿಂದ ಸಮೃದ್ಧವಾಗಿವೆ. ಇದು ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಬೀಜಗಳನ್ನು ತಿನ್ನುವುದರಿಂದ ದಿನವಿಡೀ ಸಕ್ರಿಯವಾಗಿರಲು ಸಹಾಯ ಮಾಡುತ್ತದೆ.

**ರೋಗನಿರೋಧಕ ಶಕ್ತಿಹೆಚ್ಚಿಸುತ್ತದೆ:** ಕಲ್ಲಂಗಡಿ ಬೀಜಗಳಲ್ಲಿ ಸತು ಮತ್ತು ಮೆಗ್ನೀಸಿಯಮ್ ಸಮೃದ್ಧವಾಗಿದ್ದು, ಇದು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಇದು ದೇಹವನ್ನು ಅನೇಕ ರೋಗಗಳಿಂದ ದೂರವಿಡುತ್ತದೆ. ನೀವು ಅದರೊಂದಿಗೆ ಕಲ್ಲಂಗಡಿ ಬೀಜಗಳನ್ನು ಸಹ ತಿನ್ನಬೇಕು.

## ಕೊನೆಯುಸಿರು ಇರೋವರೆಗೂ ಸುದೀಪ್ ಸರ್ ಋಣ ಮರೆಯೋದಿಲ್ಲ: ಲಾಂಗ್ ವಿವಾದದ ಬಗ್ಗೆ ವಿನಯ್ ಮಾತು



ಮಚ್ಚು ಹಿಡಿದು ರೀಲ್ಸ್ ಮಾಡಿದ್ದ ಪ್ರಕರಣದ ಕುರಿತು ಕೊನೆಗೂ ವಿನಯ್ ಗೌಡ ಮೌನ ಮುರಿದಿದ್ದಾರೆ. ಜೈಲಿನಿಂದ ಆಚೆ ಬಂದ ಬಳಿಕ ಈ ಸಂಕಷ್ಟದ ಸಂದರ್ಭದಲ್ಲಿ ಬೆನ್ನಿಗೆ ನಿಂತ ಕಿಚ್ಚ ಸುದೀಪ್‌ಗೆ ವಿನಯ್ ಧನ್ಯವಾದ ತಿಳಿಸಿದ್ದಾರೆ. ಕೊನೆ ಉಸಿರು ಇರೋವರೆಗೂ ಅವರ ಋಣ ಮರೆಯೋದಿಲ್ಲ ಎಂದಿದ್ದಾರೆ.

ಲಾಂಗ್ ಹಿಡಿದು ರೀಲ್ಸ್ ಮಾಡಿದ್ದ ಕೇಸ್ ಕುರಿತು ವಿನಯ್ ಗೌಡ ಮಾತನಾಡಿ ನಾನು ನಿರೀಕ್ಷೆನೇ ಮಾಡಿರಲಿಲ್ಲ, ಹಾಗೇ ರೀಲ್ಸ್ ಮಾಡೋದು ತಪ್ಪು ಅಂತ ಮೊದಲೇ ಗೊತ್ತಿದ್ರೆ ಮಾಡ್ತಿರಲಿಲ್ಲ. ಆ ರೀಲ್ಸ್ ಅಷ್ಟು ವೈರಲ್ ಆಗಿ ತೊಂದರೆ ಆಗುತ್ತೆ ಎಂದು ತಿಳಿದಿರಲಿಲ್ಲ. ತಿಳಿಯದೇ ಆಗಿರೋ ತಪ್ಪಿಗೆ ಕರ್ನಾಟಕದ ಜನತೆಯ ಬಳಿ ಕ್ಷಮೆ ಕೇಳಿದ್ದೀನಿ. ಇದರಿಂದ ನಮ್ಮ ಫ್ಯಾಮಿಲಿ ಹಾಗೂ ನನ್ನ ಮಗನಿಗೆ ನೋವು ಮಾಡಿದ್ದೀನಿ. ಪ್ರಚಾರಕ್ಕೆ ಎಂದು ಮಾಡಿದ ಲಾಂಗ್ ಹಿಡಿದ ರೀಲ್ಸ್‌ನಿಂದ ತೊಂದರೆ ಆಯ್ತು. ನನ್ನ ಜೀವನದಲ್ಲಿ ಪೊಲೀಸ್ ಸ್ಟೇಷನ್ ನೋಡದೇ ಇರೋನು, ಇದರಿಂದ ಜೈಲಿಗೆ ಹೋಗಿ ಬರುವಂತೆ ಆಯ್ತು. ನಮ್ಮ ಕುಟುಂಬದಲ್ಲಿಯೂ ಯಾರು ಪೊಲೀಸ್ ಠಾಣೆ ಮೆಟ್ಟಿಲು ಹತ್ತಿಲ್ಲ ಎಂದು ಬೇಸರದಿಂದ ಮಾತನಾಡಿದ್ದಾರೆ.

ಈ ಪ್ರಕರಣದ ವೇಳೆ, ಸುದೀಪ್ ಸರ್ ನಮ್ಮ ಫ್ಯಾಮಿಲಿ ಜೊತೆ ನಿಂತರು. ಈ ಕೇಸ್ ಬಗ್ಗೆ ಮನೆಯಲ್ಲಿ ಏನು ಗೊತ್ತಿರಲಿಲ್ಲ. ನನಗೆ ಜೈಲು ಅಂದಾಗ ಮನೆಯಲ್ಲಿ ಶಾಕ್ ಆಗಿದ್ದರು. ಆ ಟೈಮ್‌ನಲ್ಲಿ ಸುದೀಪ್ ಸರ್ ಕರೆ ಮಾಡಿ ನನ್ನ ಬಗ್ಗೆ ವಿಚಾರಿಸಿದ್ದಾರೆ. ಕಾನೂನು ಪ್ರಕಾರ ಏನು ಮಾಡಬೇಕು ಅದರಂತೆ ಸುದೀಪ್ ನಿಂತು ನಮಗೆ ಬೆಂಬಲಿಸಿದ್ದಾರೆ. ಆ ದಿನ ನಮ್ಮ ಕುಟುಂಬದ ಜೊತೆ ನಿಂತು ಸಹಾಯ ಮಾಡಿದ್ದಾರೆ. ಕೊನೆ ಉಸಿರು ಇರೋವರೆಗೂ ಅವರ ಋಣ ನಾನು ಮರೆಯೋದಿಲ್ಲ. ಈ ನಿಯತ್ತು ಕೊನೆವರೆಗೂ ಇರುತ್ತದೆ ಎಂದಿದ್ದಾರೆ.

ಸುದೀಪ್ ಸರ್ ಅವರು ಕೊಟ್ಟ ಮಾತು ಉಳಿಸಿಕೊಂಡಿದ್ದಾರೆ. ಅವರು ನಟಿಸುತ್ತಿರೋ 'ಬಿಲ್ಲ ರಂಗ ಬಾಷಾ' ಚಿತ್ರದಲ್ಲಿ ನನಗೆ ಅವಕಾಶ ಕೊಟ್ಟಿದ್ದಾರೆ ಎಂದು ವಿನಯ್ ಮಾಹಿತಿ ಹಂಚಿಕೊಂಡಿದ್ದಾರೆ.

ಇನ್ನೂ ಲಾಂಗ್ ಹಿಡಿದು ರೀಲ್ಸ್ ಮಾಡಿದಕ್ಕೆ ಶಸ್ತ್ರಾಸ್ತ್ರ ಕಾಯ್ದೆಯಡಿ ವಿನಯ್ ಹಾಗೂ ರಜತ್ ರನ್ನು ಬಂಧಿಸಲಾಗಿತ್ತು. ಮಾ.28ರಂದು ಕೋರ್ಟ್ ಅವರಿಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಬೇಲ್ ಪ್ರತಿ ಪೊಲೀಸರಿಗೆ ತಡವಾಗಿ ಸಿಕ್ಕ ಹಿನ್ನೆಲೆ ಮಾ.29ರಂದು ಜೈಲಿನಿಂದ ವಿನಯ್ ಮತ್ತು ರಜತ್‌ರನ್ನು ರಿಲೀಸ್ ಮಾಡಲಾಯಿತು.

## ಕರ್ಪೂರ ನೀರಿನ ಸ್ನಾನದ ಪ್ರಯೋಜನಗಳು

**ಬ್ಯೂಟಿ ಟಿಪ್ಸ್**



**ಸೋಂಕಿನ ಅಪಾಯ ಕಡಿಮೆ ಮಾಡುತ್ತದೆ :** ಕರ್ಪೂರವು ನೈಸರ್ಗಿಕ ನಂಜುನಿರೋಧಕ ಗುಣಗಳನ್ನು ಹೊಂದಿರುವುದರಿಂದ, ಕರ್ಪೂರ ನೀರಿನಿಂದಸ್ನಾನ ಮಾಡಿದಾಗ, ಅದು ಚರ್ಮದಲ್ಲಿ ಅಡಗಿರುವ ಬ್ಯಾಕ್ಟೀರಿಯಾವನ್ನು ಸ್ವಚ್ಛಗೊಳಿಸುತ್ತದೆ. ಈ ರೀತಿಯಾಗಿ ಚರ್ಮದ ಸೋಂಕಿನ ಅಪಾಯ ಕಡಿಮೆಯಾಗುತ್ತದೆ ಮತ್ತು ಚರ್ಮವು ಸ್ವಚ್ಛವಾಗುತ್ತದೆ.

**ಒತ್ತಡದಿಂದ ಪರಿಹಾರ :** ಜೀವನದಲ್ಲಿ ಒತ್ತಡವನ್ನು ತಪ್ಪಿಸುವುದು ಕಷ್ಟ. ತುಂಬಾ ಒತ್ತಡಕ್ಕೊಳಗಾಗಿದ್ದರೆ, ಕರ್ಪೂರ ನೀರಿನಿಂದ ಸ್ನಾನ ಮಾಡಿ. ಕರ್ಪೂರದ ಘಮವು ನರಮಂಡಲವನ್ನು ಸಡಿಲಗೊಳಿಸುತ್ತದೆ ಮತ್ತು ಆಯಾಸ, ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡುತ್ತದೆ.

**ಹೊಳೆಯುವ ಚರ್ಮ:** ಕರ್ಪೂರ ನೀರುಚರ್ಮದ ಆರೋಗ್ಯಕ್ಕೂ ಪ್ರಯೋಜನಕಾರಿ. ಕರ್ಪೂರ ನೀರಿನಿಂದ ಸ್ನಾನ ಮಾಡುವುದರಿಂದ ಮೊಡವೆಗಳ ಸಮಸ್ಯೆ ಕಡಿಮೆಯಾಗುವುದಲ್ಲದೆ, ಡೆಡ್ ಸೆಲ್ ಪದರವನ್ನು ತೆರವುಗೊಳಿಸುತ್ತದೆ. ಇದು ಚರ್ಮಕ್ಕೆ ಹೊಳಪನ್ನು ತರುತ್ತದೆ.

**ದೇಹದ ನೋವಿನಿಂದ ಪರಿಹಾರ :** ದಿನದ ಆಯಾಸವನ್ನು ಹೋಗಲಾಡಿಸಲು, ಕರ್ಪೂರ ನೀರಿನಲ್ಲಿ ಸ್ನಾನ ಮಾಡಬಹುದು. ಇದು ನಿಮ್ಮ ಚರ್ಮವನ್ನು ತಂಪಾಗಿಸುತ್ತದೆ ಮತ್ತು ದೇಹದಿಂದ ಒತ್ತಡವನ್ನು ಕಡಿಮೆ ಮಾಡುತ್ತದೆ. ಅದೇ ರೀತಿ, ಕರ್ಪೂರದ ಘಮ ಮನಸ್ಸನ್ನು ಶಾಂತಗೊಳಿಸುತ್ತದೆ. ಇದು ನೋವಿನಿಂದ ತ್ವರಿತ ಪರಿಹಾರವನ್ನು ನೀಡುತ್ತದೆ.

**ನಿಮ್ಮ ಸ್ನಾನದ ನೀರನ್ನು ಈ ರೀತಿ ತಯಾರಿಸಿ :** ಬಕೆಟ್‌ನಲ್ಲಿ ನಿಮ್ಮ ಆಯ್ಕೆಯ ಪ್ರಕಾರ ತಣ್ಣನೆಯ ಅಥವಾ ಉಗುರು ಬೆಚ್ಚಗಿನ ನೀರನ್ನು ತೆಗೆದುಕೊಳ್ಳಿ. ನಂತರ ಈ ನೀರಿಗೆ 3-4 ತುಂಡು ಕರ್ಪೂರ ಸೇರಿಸಿ. ನಂತರ ಈ ನೀರಿನಿಂದ ಸ್ನಾನ ಮಾಡಿ.

## ಕಲಬುರಗಿಯಲ್ಲಿ ಐಸಿಐಸಿಐ ಪ್ರುಡೆನ್ಷಿಯಲ್ ಮ್ಯೂಚುವಲ್ ಫಂಡ್ ಶಾಖೆ ಉದ್ಘಾಟನೆ




ಭಾರತದ ಪ್ರಮುಖ ಮ್ಯೂಚುವಲ್ ಫಂಡ್ ಸಂಸ್ಥೆಯಾದ ಐಸಿಐಸಿಐ ಪ್ರುಡೆನ್ಷಿಯಲ್ ಮ್ಯೂಚುವಲ್ ಫಂಡ್ ಸಂಸ್ಥೆಯು ಕಲಬುರಗಿಯ ಸ್ಟೇಷನ್ ಬಜಾರ್ ನ ಎಸ್.ವಿ. ಪಟೇಲ್ ಚೌಕ್ ನ ಕಂಡೂರ್ ಮಾಲ್ ಬಿಲ್ಡಿಂಗ್ ನಲ್ಲಿ ತನ್ನ ಮೊದಲ ಶಾಖೆಯನ್ನು ಉದ್ಘಾಟಿಸಿದೆ.ಈ ಶಾಖೆಯನ್ನು ಐಸಿಐಸಿಐ ಪ್ರುಡೆನ್ಷಿಯಲ್ ಮ್ಯೂಚುವಲ್ ಫಂಡ್ ನ ರೀಜನಲ್ ಹೆಡ್- ರಿಟೇಲ್ ಶ್ರೀ ಪ್ರದೀಪ್ ಎಚ್ ಡಿ ಮತ್ತು ರಿಟೇಲ್ ಸೇಲ್ಸ್ ಡಿಸ್ಟ್ರಿಬ್ಯೂಷನ್ ಕರ್ನಾಟಕ ರೀಜನಲ್ ಹೆಡ್ ಶ್ರೀ ಅಪ್ಪಚ್ಚು ತಮ್ಮಯ್ಯ ಅವರು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಕ್ಲಸ್ಟರ್ ಹೆಡ್ ಶ್ರೀ ನಾಗರಾಜ್ ಜಕ್ಕಣ್ಣವರ್, ಕಲಬುರಗಿ ಬ್ರಾಂಚ್ ಹೆಡ್ ಶ್ರೀ ಆನಂದ್ ಜೈನ್, ಮತ್ತು ಐಪ್ರುಎಂಎಫ್ ನ ನ ಇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಐಸಿಐಸಿಐ ಪ್ರುಡೆನ್ಷಿಯಲ್ ಎಂಎಫ್ ನ ರೀಜನಲ್ ಹೆಡ್ – ರಿಟೇಲ್ ಸೇಲ್ಸ್ ಡಿಸ್ಟ್ರಿಬ್ಯೂಷನ್ ಕರ್ನಾಟಕ ಶ್ರೀ ಅಪ್ಪಚ್ಚು ತಮ್ಮಯ್ಯ ಅವರು, ''ನಾವು ಗ್ರಾಹಕರಿಗೆ ಉತ್ತಮ ಅನುಭವವನ್ನು ಒದಗಿಸಲು ಮತ್ತು ಸರಳವಾಗಿ ಹಾಗೂ ಸುಲಭವಾಗಿ ಆರ್ಥಿಕ ಉತ್ಪನ್ನಗಳನ್ನು ಒದಗಿಸಲು ಶ್ರಮಿಸುತ್ತೇವೆ. ಈ ನಿಟ್ಟಿನಲ್ಲಿ ಈ ಶಾಖೆಯ ಉದ್ಘಾಟನೆಯು ಒಂದು ಮಹತ್ವದ ಹೆಜ್ಜೆಯಾಗಿದೆ. ಈ ಸ್ಥಳವು ನಮ್ಮ ಪ್ರಮುಖ ಅಭಿವೃದ್ಧಿ ಮಾರುಕಟ್ಟೆಗಳಲ್ಲಿ ಒಂದಾಗಿದ್ದು, ನಮ್ಮ ವಿಸ್ತರಣಾ ಸಾಧನೆಯಲ್ಲಿ ಮಹತ್ವದ ಮೈಲಿಗಲ್ಲಾಗಿದೆ'' ಎಂದು ಹೇಳಿದರು.

ಕಳೆದ ಎರಡೂವರೆ ದಶಕಗಳಲ್ಲಿ ಐಸಿಐಸಿಐ ಪ್ರುಡೆನ್ಷಿಯಲ್ ಮ್ಯೂಚುವಲ್ ಫಂಡ್ ಸಂಸ್ಥೆಯು ಒಟ್ಟು ರೂ. 9.14 ಲಕ್ಷ ಕೋಟಿ (ಮಾರ್ಚ್ 31, 2025 ರಂತೆ) ಅಸೆಟ್ಸ್ ಅಂಡರ್ ಮ್ಯಾನೇಜ್ ಮೆಂಟ್ ಅನ್ನು ಹೊಂದಿದ್ದು, ಫಂಡ್ ಮ್ಯಾನೇಜ್‌ಮೆಂಟ್ ಕ್ಷೇತ್ರದಲ್ಲಿ ಪ್ರಮುಖ ಸಂಸ್ಥೆಗಳಲ್ಲೊಂದಾಗಿ ಹೊರಹೊಮ್ಮಿದೆ. 12.4 ಮಿಲಿಯನ್ ಗಿಂತಲೂ ಹೆಚ್ಚು ಗ್ರಾಹಕರಿಗೆ ಸೇವೆ ಸಲ್ಲಿಸುತ್ತಿರುವ ಈ ಫಂಡ್ ಹೌಸ್ 480ಕ್ಕೂ ಹೆಚ್ಚು ಶಾಖೆಗಳನ್ನು ಹೊಂದಿದೆ ಮತ್ತು ಈಕ್ವಿಟಿ, ಸಾಲ, ಹೈಬ್ರಿಡ್ ಮತ್ತು ಕಮಾಡಿಟಿ ಆಫರಿಂಗ್ ವಿಭಾಗಗಳಲ್ಲಿ ಪ್ರಮುಖ ಸ್ಥಾನದಲ್ಲಿದೆ. ಅವರ ಹಲವಾರು ಉತ್ಪನ್ನಗಳು ಕಾಲಾಂತರದಲ್ಲಿ ಕೆಟಗರಿ ಬಿಲ್ಡರ್ ಆಗಿ ಮಾರ್ಪಟ್ಟಿದ್ದು, ಹೂಡಿಕೆದಾರರ ಆರ್ಥಿಕ ಕನಸುಗಳನ್ನು ವಾಸ್ತವವಾಗಿಸಲು ಸಹಾಯ ಮಾಡುತ್ತಿವೆ.

ಹೂಡಿಕೆದಾರರು ಶಾಖೆಗಳಿಗೆ ಭೇಟಿ ನೀಡುವುದರ ಜೊತೆಗೆ ಐಪ್ರುಟಚ್ ಎಂಬ ಆಪ್ ಡೌನ್‌ಲೋಡ್ ಮಾಡಿಕೊಂಡು ಹೂಡಿಕೆ, ಸ್ವಿಚ್, ರಿಡೀಮ್ ಅಥವಾ ಇತರ ಯಾವುದೇ ವಹಿವಾಟು ಅಥವಾ ಕಾರ್ಯಾಚರಣೆ ಮಾಡಬಹುದು.

ಈ ಹೊಸ ಶಾಖೆಯ ವಿಳಾಸ ಹೀಗಿದೆ: ಗ್ರೌಂಡ್ ಫ್ಲೋರ್, ಶಾಪ್ ನಂ: 8-10, ಕಂಡೂರ್ ಮಾಲ್ ಬಿಲ್ಡಿಂಗ್, ಎಸ್.ವಿ. ಪಟೇಲ್ ಚೌಕ್, ಸ್ಟೇಷನ್ ಬಜಾರ್, ಕಲಬುರಗಿ, ಕರ್ನಾಟಕ 585 102.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಈ ದಿನ ದೃಷ್ಟಿ ದೋಷ, ನಂಬಿಕೆ ದ್ರೋಹ, ಸ್ವಯಂಕೃತ ಅಪರಾಧ, ಪರರಿಗೆ ಸಹಾನುಭೂತಿ ತೋರುವಿರಿ.

**ವೃಷಭ:** ಈ ದಿನ ಪ್ರಭಾವಿ ಜನರ ಭೇಟಿ, ರೋಗಭಾದೆ, ಆಪ್ತರನ್ನ ದ್ವೇಷಿಸುವಿರಿ, ಸಣ್ಣ ಪುಟ್ಟ ಕಲಹ, ಒತ್ತಡ ಜಾಸ್ತಿ.

**ಮಿಥುನ:** ಗುರಿಗೆ ಶ್ರಮಪಡುವಿರಿ, ಹಿರಿಯರ ಸಲಹೆ ಒಳಿತು, ಮಹಿಳೆಯರಿಗೆ ಹೆಚ್ಚು ಶ್ರಮ.

**ಕಟಕ:** ಕುಟುಂಬದಲ್ಲಿ ಪ್ರೀತಿ, ಅಧಿಕಾರಿಗಳಿಗೆ ಬಡ್ತಿ, ಮನಶಾಂತಿ, ಆಹಾರ ಸೇವನೆಯಲ್ಲಿ ಎಚ್ಚರ.

**ಸಿಂಹ:** ಕ್ರಯ ವಿಕ್ರಯಗಳಿಂದ ಲಾಭ, ಶತ್ರು ನಾಶ, ಯತ್ನಕಾರ್ಯಗಳಲ್ಲಿ ವಿಳಂಬ, ವಸ್ತ್ರ ವ್ಯಾಪಾರಿಗಳಿಗೆ ಲಾಭ.

**ಕನ್ಯಾ:** ಮನಸ್ಸಿನ ಹತೋಟಿ ಕಳೆದುಕೊಳ್ಳುವಿರಿ, ದಂಡ ಕಟ್ಟುವಿರಿ, ಮನಕ್ಲೇಶ, ಅವಕಾಶ ಕೈ ತಪ್ಪುವುದು.

**ತುಲಾ:** ಮೋಸದ ಕುತಂತ್ರಕ್ಕೆ ಬೀಳುವಿರಿ, ಮಾನಹಾನಿ, ದುಗುಡ, ನಿರುದ್ಯೋಗಿಗಳಿಗೆ ಉದ್ಯೋಗ.

**ವೃಶ್ಚಿಕ:** ಕೈಗೊಂಡ ಕೆಲಸಗಳಲ್ಲಿ ಜಯ, ಅತಿಯಾದ ಆತ್ಮವಿಶ್ವಾಸ ಒಳ್ಳೆಯದಲ್ಲ, ಪತಿ ಪತ್ನಿಯರಲ್ಲಿ ಸಾಮರಸ್ಯ.

**ಧನಸ್ಸು:** ಸ್ವಂತ ಉದ್ಯಮಿಗಳಿಗೆ ಲಾಭ, ಸುಖ ಭೋಜನ, ವಸ್ತ್ರ ಖರೀದಿ, ಸ್ನೇಹಿತರು ಸಕಾಲದಲ್ಲಿ ನೆರವು ನೀಡುವರು.

**ಮಕರ:** ಬೇಡದ ವಿಷಯಗಳಿಂದ ದೂರವಿರಿ, ಷೇರು ವ್ಯವಹಾರಗಳಲ್ಲಿ ಲಾಭ, ಶರೀರದಲ್ಲಿ ತಳಮಳ, ವೈದ್ಯರ ಭೇಟಿ.

**ಕುಂಭ:** ದುಡುಕು ಸ್ವಭಾವ, ವಾಹನದಿಂದ ತೊಂದರೆ, ಹಿತ ಶತ್ರು ಭಾದೆ, ಪುಣ್ಯಕ್ಷೇತ್ರ ದರ್ಶನ.

**ಮೀನ:** ಹೇಳಿಕೆ ಮಾತಿನಿಂದ ಕಷ್ಟಕ್ಕೆ ಸಿಲುಕುವಿರಿ, ಭೂ ಲಾಭ, ವೃತ್ತಿ ಜೀವನದಲ್ಲಿ ಬದಲಾವಣೆ, ಅಧಿಕ ಖರ್ಚು.

## ಅಂತರರಾಷ್ಟ್ರೀಯ ASMR ದಿನ




ಏಪ್ರಿಲ್ 9 ರಂದು ಅಂತರರಾಷ್ಟ್ರೀಯ ASMR ದಿನವನ್ನು ಆಚರಿಸುತ್ತಿದ್ದೇವೆ. ASMR ನ ಅದ್ಭುತ ಪ್ರಯೋಜನಗಳನ್ನು ಶ್ಲಾಘಿಸಲು ಮತ್ತು ಅದರ ಬಗ್ಗೆ ಸಾಮಾನ್ಯ ಜಾಗೃತಿ ಮೂಡಿಸಲು ಇದು ವಾರ್ಷಿಕ ಆಚರಣೆಯಾಗಿದೆ. ASMRಎಂದರೆ 'ಸ್ವಾಯತ್ತ ಸಂವೇದನಾ ಮೆರಿಡಿಯನ್ ಪ್ರತಿಕ್ರಿಯೆ'. ಇದು ಕೆಲವು ದೃಶ್ಯ ಮತ್ತು ಶ್ರವಣ ಪ್ರಚೋದಕಗಳಿಗೆ ಸಂವೇದನಾ ಪ್ರತಿಕ್ರಿಯೆಯಾಗಿದೆ. ಜನರು ಸಾಮಾನ್ಯವಾಗಿ ಇದನ್ನು ನಿಮ್ಮ ಕೂದಲಿನ ಮೂಲಕ ಯಾರಾದರೂ ತಮ್ಮ ಬೆರಳುಗಳನ್ನು ಚಲಾಯಿಸುವುದರಿಂದ ಉಂಟಾಗುವ ಕಚಗುಳಿ ಎಂದು ವಿವರಿಸುತ್ತಾರೆ.

ಕೂದಲು ಅಥವಾ ಚರ್ಮದ ಮಸಾಜ್ ಪಡೆಯಲು ಯಾರು ಇಷ್ಟಪಡುವುದಿಲ್ಲ ಸಂವೇದನೆಯು ಉಲ್ಲಾಸಕರ ಮತ್ತು ಅದ್ಭುತವಾಗಿದೆ. ಆದರೆ ಪ್ರತಿಯೊಬ್ಬರೂ ಈ ಅದ್ಭುತ ಶೀತಗಳನ್ನು ಇನ್ನೊಬ್ಬ ವ್ಯಕ್ತಿ ಅಥವಾ ವೃತ್ತಿಪರರಿಂದ ಪಡೆಯಲು ಸಮಯ ಅಥವಾ ಸಂಪನ್ಮೂಲಗಳನ್ನು ಹೊಂದಿರುವುದಿಲ್ಲ. ಆದರೆ ಅಂತಹ ಪ್ರಚೋದನೆಯನ್ನು ಶಾಂತ ದೃಶ್ಯಗಳು ಮತ್ತು ಶಬ್ದಗಳ ಮೂಲಕವೂ ಸಾಧಿಸಬಹುದಾದರೆ ಏನು ಜನರು ಈ ಸಂವೇದನೆಯನ್ನು ಜುಮ್ಮೆನಿಸುವಿಕೆ ಎಂದು ವಿವರಿಸುತ್ತಾರೆ. ಆಡಿಯೋ ಮತ್ತು ದೃಶ್ಯಗಳ ಮೂಲಕ ಜನರು ಅನುಭವಿಸುವ ಈ ಜುಮ್ಮೆನಿಸುವಿಕೆಗಳನ್ನು ವಿವರಿಸಲು ನಾವು ASMRಎಂಬ ಪದವನ್ನು ಬಳಸಿದ್ದೇವೆ, ಅದು ಒಬ್ಬ ವ್ಯಕ್ತಿಯು ಆನಂದ ಮತ್ತು ಆಳವಾದ ವಿಶ್ರಾಂತಿಯನ್ನು ಅನುಭವಿಸುವಂತೆ ಮಾಡುತ್ತದೆ. ASMR ವ್ಯಕ್ತಿನಿಷ್ಠವಾಗಿದೆ ಮತ್ತು ಕೆಲವು ಜನರ ಮೇಲೆ ಬಹಳ ಪರಿಣಾಮಕಾರಿಯಾಗಿದೆ, ಆಗಾಗ್ಗೆ ಅವರನ್ನು ನಿದ್ರಿಸಲು ಕಾರಣವಾಗುತ್ತದೆ. ASMRನ ಅಧಿಕೃತ ಮೂಲವನ್ನು ಅಕ್ಟೋಬರ್ 19, 2007 ರಿಂದ ಗುರುತಿಸಬಹುದು. ಸರಿ ಏನು ಬೇಕಾದರೂ ಎಂಬ ಬಳಕೆದಾರಹೆಸರು ಹೊಂದಿರುವ ಯಾರಾದರೂ ಸ್ಟೆಡಿ ಹೆಲ್ತ್‌ನಲ್ಲಿ ಪ್ರಶ್ನೆಯನ್ನು ಪೋಸ್ಟ್ ಮಾಡಿದಾಗ ಇದೆಲ್ಲವೂ ಪ್ರಾರಂಭವಾಯಿತು. ಸ್ಟೆಡಿ ಹೆಲ್ತ್ ಆರೋಗ್ಯ ಸಂಬಂಧಿತ ವಿಷಯಗಳಿಗೆ ಆನ್‌ಲೈನ್ ಚರ್ಚಾ ವೇದಿಕೆಯಾಗಿದೆ.

# ಮಣಿಪುರದಲ್ಲಿ ವಕ್ಫ್ ಕಾಯ್ದೆ ವಿರುದ್ಧ ಹಿಂಸಾತ್ಮಕ ಪ್ರತಿಭಟನೆ

**ಇಂಫಾಲ:** ಮಣಿಪುರದ ಥೌಬಾಲ್ ಜಿಲ್ಲೆಯ ಮುಸ್ಲಿಮ್ ಪ್ರಾಬಲ್ಯದ ಪ್ರದೇಶವಾಗಿರುವ ಲಿಲಾಂಗ್ ನಲ್ಲಿ ವಕ್ಫ್ ಕಾಯ್ದೆಯನ್ನು ವಿರೋಧಿಸಿ ಹಿಂಸಾತ್ಮಕ ಪ್ರತಿಭಟನೆಗಳು ನಡೆದಿದ್ದು, ಲಿಲಾಂಗ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಅನಿರ್ದಿಷ್ಟಾವಧಿ ಕರ್ಫ್ಯೂ ಜಾರಿಗೊಳಿಸಲಾಗಿದೆ. ಮುನ್ನೆಚ್ಚರಿಕೆ ಕ್ರಮವಾಗಿ ಇಂಫಾಲ ಪೂರ್ವ ಜಿಲ್ಲೆಯಲ್ಲಿ ಹೆಚ್ಚಿನ ಭದ್ರತೆಯನ್ನು ಏರ್ಪಡಿಸಲಾಗಿದೆ. ರವಿವಾರ ರಾತ್ರಿ ದೊಣ್ಣೆಗಳು ಮತ್ತು ಕಲ್ಲುಗಳೊಂದಿಗೆ ಸಜ್ಜಿತರಾಗಿದ್ದ ಸುಮಾರು ಏಳೆಂಟು ಸಾವಿರ ಜನರಿದ್ದ ಗುಂಪು ಲಿಲಾಂಗ್‌ನಲ್ಲಿ ಬಿಜೆಪಿ ಅಲ್ಪಸಂಖ್ಯಾತ ಮೋರ್ಚಾದ ಮಣಿಪುರ ಘಟಕದ ಅಧ್ಯಕ್ಷ ಮುಹಮ್ಮದ್ ಅಸ್ಕರ್ ಅಲಿ ಅವರ ನಿವಾಸದ ಮೇಲೆ ದಾಳಿ ನಡೆಸಿ ಬೆಂಕಿ ಹಚ್ಚಿತ್ತು. ಅಲಿ ರವಿವಾರ ತನ್ನ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳಲ್ಲಿ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಬೆಂಬಲಿಸಿದ್ದರು. ಇದು ಜನರನ್ನು ರೊಚ್ಚಿಗೆಬ್ಬಿಸಿತ್ತು ಎನ್ನಲಾಗಿದೆ. ಘಟನೆಯ ಬಳಿಕ ಸಾಮಾಜಿಕ ಮಾಧ್ಯಮಗಳಲ್ಲಿ ತನ್ನ ಮೊದಲಿನ ಹೇಳಿಕೆಗಾಗಿ ಕ್ಷಮೆಯನ್ನು ಯಾಚಿಸಿರುವ ಅಲಿ, ವಕ್ಫ್ ಕಾಯ್ದೆಯನ್ನು ಖಂಡಿಸಿದ್ದಾರೆ.




# ನೈಟ್‌ಕ್ಲಬ್‌ನ ಛಾವಣಿ ಕುಸಿದು ಕನಿಷ್ಠ 79 ಮಂದಿ ಸಾವು

**ಸ್ಯಾಂಟೊ ಡೊಮಿಂಗೊ:** ಡೊಮಿನಿಕನ್ ರಾಜಧಾನಿಯಲ್ಲಿ ಮಂಗಳವಾರ ಐಕಾನಿಕ್ ನೈಟ್ ಕ್ಲಬ್‌ನ ಛಾವಣಿ ಕುಸಿದಿದ್ದರಿಂದ ಕನಿಷ್ಠ 79 ಜನರು ಸಾವನ್ನಪ್ಪಿದ್ದಾರೆ. ಈ ದುರಂತದಲ್ಲಿ ಸುಮಾರು 160ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಪ್ರತಿಷ್ಠಿತ ನೈಟ್ ಕ್ಲಬ್‌ನಲ್ಲಿ ನಡೆಯುತ್ತಿದ್ದ ಮೆರೆಂಗ್ಯೂ ಸಂಗೀತ ಕಚೇರಿಯಲ್ಲಿ ರಾಜಕಾರಣಿಗಳು, ಕ್ರೀಡಾಪಟುಗಳು ಮತ್ತು ಇತರರು ಭಾಗವಹಿಸಿದ್ದರು ಎಂದು ತಿಳಿದು ಬಂದಿದೆ. ಸ್ಯಾಂಟೊ ಡೊಮಿಂಗೊದಲ್ಲಿನ ಒಂದು ಅಂತಸ್ತಿನ ಜೆಟ್ ಸೆಟ್ ನೈಟ್‌ಕ್ಲಬ್‌ನ ಅವಶೇಷಗಳಡಿಯಲ್ಲಿ ಬದುಕುಳಿದವರಿಗಾಗಿ ರಕ್ಷಣಾ ಸಿಬ್ಬಂದಿ ಹುಡುಕಾಟ ನಡೆಸುತ್ತಿದ್ದಾರೆ ಎಂದು ತುರ್ತು ಕಾರ್ಯಾಚರಣೆಗಳ ನಿರ್ದೇಶಕ ಜುವಾನ್ ಮ್ಯಾನುಯೆಲ್ ಮೆಂಡೆಜ್ ಹೇಳಿದ್ದಾರೆ. ನಾವು ಅವಶೇಷಗಳನ್ನು ತೆರವುಗೊಳಿಸುವುದರ ಜತೆಗೆ ಅದರಲ್ಲಿ ಸಿಲುಕಿಕೊಂಡವರಿಗಾಗಿ ಹುಡುಕಾಟ ನಡೆಸುತ್ತಿದ್ದೇವೆ ಎಂದು ಮಂಗಳವಾರ ರಾತ್ರಿ ಮಾಧ್ಯಮಗಳೊಂದಿಗೆ ಮಾತನಾಡಿ ತಿಳಿಸಿದ್ದಾರೆ. ನೈಟ್ ಕ್ಲಬ್‌ನ ಛಾವಣಿ ಕುಸಿದು ಸುಮಾರು 12 ಗಂಟೆಗಳ ನಂತರ ರಕ್ಷಣಾ ಸಿಬ್ಬಂದಿಗಳು ಅವಶೇಷಗಳಡಿಯಿಂದ ಬದುಕುಳಿದವರನ್ನು ಹೊರತೆಗೆಯುತ್ತಿದ್ದಾರೆ. ಅಗ್ನಿಶಾಮಕ ದಳದವರು ಮುರಿದ ಕಾಂಕ್ರೀಟ್‌ನ ಬ್ಲಾಕ್‌ಗಳನ್ನು ತೆಗೆದು ಹಾಕುತ್ತಿದ್ದಾರೆ. ರಕ್ಷಣಾ ಸಿಬ್ಬಂದಿ ಕ್ಲಬ್‌ನಲ್ಲಿನ ಮೂರು ಪ್ರದೇಶಗಳಿಗೆ ಆದ್ಯತೆ ನೀಡುತ್ತಿದ್ದಾರೆ ಎಂದು ಮೆಂಡೆಜ್ ಮಾಹಿತಿ ನೀಡಿದ್ದಾರೆ. ಅವಶೇಷಗಳ ಅಡಿ ಸಿಲುಕಿದವರ ಆರ್ತನಾದ ಹೊರ ಬರುತ್ತಿದ್ದು, ಕಾಪಾಡಿ ಕಾಪಾಡಿ ಎಂಬ ಶಬ್ದ ಕೇಳಿ ಬರುತ್ತಿದೆ ಎಂದು ರಕ್ಷಣಾ ಕಾರ್ಯಾಚರಣೆ ಸಿಬ್ಬಂದಿ ಹೇಳುತ್ತಿದ್ದಾರೆ ಎಂದು ವರದಿಯಾಗಿದೆ.

## 20 ಲಕ್ಷ ಟಾಟಾ ನ್ಯೂ ಎಚ್ ಡಿ ಎಫ್‌ಸಿ ಬ್ಯಾಂಕ್ ಕಾರ್ಡ್ ವಿತರಣೆ

**ದೆಹಲಿ:** ಟಾಟಾ ನ್ಯೂ ಮತ್ತು ಎಚ್ ಡಿ ಎಫ್ ಸಿ ಬ್ಯಾಂಕ್ ಇಂದು ಒಂದು ದೊಡ್ಡ ಸಾಧನೆಯ ವಿಚಾರವನ್ನು ಘೋಷಿಸಿದ್ದು, ಟಾಟಾ ನ್ಯೂ ಎಚ್ ಡಿ ಎಫ್ ಸಿ ಬ್ಯಾಂಕ್ ಕ್ರೆಡಿಟ್ ಕಾರ್ಡ್ 20 ಲಕ್ಷಕ್ಕೂ ಹೆಚ್ಚು ಕಾರ್ಡ್ ಗಳನ್ನು ವಿತರಿಸಿದ ಸಾಧನೆ ಮಾಡಿವೆ. ಈ ಕಾರ್ಡ್ ಭಾರತದಲ್ಲಿ ಜನಪ್ರಿಯ ರಿವಾರ್ಡ್ ಕ್ರೆಡಿಟ್ ಕಾರ್ಡ್ಗಳಲ್ಲಿ ಒಂದಾಗಿ ತನ್ನ ಜನಪ್ರಿಯತೆ ಹೆಚ್ಚಿಸಿಕೊಂಡಿದೆ. ಈ ಯಶಸ್ಸು ದೇಶಾದ್ಯಂತ ಗ್ರಾಹಕರಿಗೆ ಮೌಲ್ಯ ಮತ್ತು ಸರಳ ರಿವಾರ್ಡ್ ವ್ಯವಸ್ಥೆಯನ್ನು ನೀಡುವಲ್ಲಿ ಕಾರ್ಡ್ ನ ಗೆಲುವನ್ನು ತೋರಿಸುತ್ತದೆ. 2022ರ ಆಗಸ್ಟ್ ನಲ್ಲಿ ಬಿಡುಗಡೆ ಆದ ಈ ಕ್ರೆಡಿಟ್ ಕಾರ್ಡ್, ಭಾರತದಲ್ಲಿ ಅತ್ಯಂತ ಸರಳ ಮತ್ತು ಪಾರದರ್ಶಕ ರಿವಾರ್ಡ್ ವ್ಯವಸ್ಥೆಯನ್ನು ಒದಗಿಸಿ ಗ್ರಾಹಕರ ಪ್ರೀತಿಗೆ ಪಾತ್ರವಾಗಿದೆ. 2025ರ ಮೂರನೇ ತ್ರೈಮಾಸಿಕದಲ್ಲಿ ಹೊಸದಾಗಿ ವಿತರಿಸಲಾದ ಕಾರ್ಡ್ ಗಳಲ್ಲಿ 13%ಕ್ಕಿಂತ ಹೆಚ್ಚು ಪಾಲನ್ನು ಪಡೆದು, ಇದು ದೇಶದ ಗ್ರಾಹಕರ ವಿಶ್ವಾಸ ಮತ್ತು ನಂಬಿಕೆಯನ್ನು ಗಳಿಸಿದೆ. ಈ ಕುರಿತು ಮಾತನಾಡಿರುವ ಟಾಟಾ ಡಿಜಿಟಲ್ ನ ಮುಖ್ಯ ವ್ಯಾಪಾರ ಅಧಿಕಾರಿ ಗೌರವ್ ಹಜ್ರತಿ ಅವರು, ಗ್ರಾಹಕರಿಗೆ ರಿವಾರ್ಡ್ ಗಳನ್ನು ಹೆಚ್ಚು ಪಾರದರ್ಶಕವಾಗಿ ಮತ್ತು ಉಪಯುಕ್ತವಾಗಿ ಮಾಡುವ ಗುರಿಯನ್ನು ನಾವು ಹೊಂದಿದ್ದೇವೆ. 20 ಲಕ್ಷ ಟಾಟಾ ನ್ಯೂ ಎಚ್ ಡಿ ಎಫ್ ಸಿ ಬ್ಯಾಂಕ್ ಕ್ರೆಡಿಟ್ ಕಾರ್ಡ್ ಗಳ ವಿತರಣೆಯ ಮೈಲಿಗಲ್ಲು ಗ್ರಾಹಕರು ನಮ್ಮ ಮೇಲೆ ಇಟ್ಟಿರುವ ವಿಶ್ವಾಸವನ್ನು ತೋರಿಸುತ್ತದೆ. ನಮ್ಮ ಗ್ರಾಹಕರಿಗೆ ಇನ್ನಷ್ಟು ಮೌಲ್ಯವನ್ನು ನೀಡುವ ಗುರಿಯನ್ನು ಮುಂದುವರಿಸುತ್ತೇವೆ ಎಂದು ಹೇಳಿದರು. ಎಚ್ ಡಿ ಎಫ್ ಸಿ ಬ್ಯಾಂಕ್ ನ ಪಾವತಿ ವಿಭಾಗದ ಮುಖ್ಯಸ್ಥ ಪರಾಗ್ ರಾವ್ ಅವರು, ಭಾರತದ ಪ್ರಮುಖ ಕಾರ್ಡ್ ವಿತರಕರಾಗಿ, ಪ್ರತಿ ಗ್ರಾಹಕ ವರ್ಗಕ್ಕೆ ಉತ್ತಮ ಪಾವತಿ ಉತ್ಪನ್ನಗಳನ್ನು ಒದಗಿಸುವುದು ನಮ್ಮ ಗುರಿಯಾಗಿದೆ. ಟಾಟಾ ನ್ಯೂ ಎಚ್ ಡಿ ಎಫ್ ಸಿ ಬ್ಯಾಂಕ್ ಕ್ರೆಡಿಟ್ ಕಾರ್ಡ್ ಡಿಜಿಟಲ್ ಫಸ್ಟ್ ವಿಧಾನದ ಮೂಲಕ ದೈನಂದಿನ ಖರ್ಚಿನ ಜೊತೆಗೆ ರಿವಾರ್ಡ್ ಒದಗಿಸುತ್ತೇವೆ,'' ಎಂದು ಹೇಳಿದರು.

## ಇರಾನ್ ಜೊತೆ ನೇರ ಮಾತುಕತೆಗೆ ಸಜ್ಜಾದ ಅಮೆರಿಕ

**ವಾಷಿಂಗ್ಟನ್:** ಪರಮಾಣು ಒಪ್ಪಂದ ಕುರಿತು ಅಮರಿಕ ಇರಾನ್ ಜೊತೆ ನೇರ ಮಾತುಕತೆ ನಡೆಸಲಿದೆ. ಈ ವೇಳೆ, ಅವರಿಗೆ ಪರಮಾಣು ಶಸ್ತ್ರಾಸ್ತ್ರ ಕಾರ್ಯಕ್ರಮ ತ್ಯಜಿಸುವಂತೆ ಮನವೊಲಿಸಲಾಗುವುದು. ಒಂದು ವೇಳೆ ಅವರು ಒಪ್ಪದೇ ಹೋದಲ್ಲಿ ದೊಡ್ಡ ಅಪಾಯಕ್ಕೆ ಸಿಲುಕಲಿದ್ದಾರೆ ಎಂದು ಡೋನಾಲ್ಡ್ ಟ್ರಂಪ್ ಇರಾನ್‌ಗೆ ಎಚ್ಚರಿಸಿದ್ದಾರೆ.ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಭೇಟಿ ಬಳಿಕ ಮಾತನಾಡಿದ ಟ್ರಂಪ್, ಈ ಕುರಿತು ಶನಿವಾರ ಮಾತುಕತೆ ಆರಂಭವಾಗಲಿದೆ. ಟೆಹ್ರಾನ್ ಪರಮಾಣು ಶಸ್ತ್ರಾಸ್ತ್ರಗಳನ್ನು ಪಡೆಯಲು ಸಾಧ್ಯವಿಲ್ಲ. ಈ ಕುರಿತು ಅವರೊಂದಿಗೆ ನೇರವಾಗಿ ಮಾತುಕತೆ ನಡೆಸಿ, ಒಪ್ಪಂದ ಮಾಡಿಕೊಳ್ಳಲಾಗುವುದು ಎಂದರು. ಇರಾನ್ ಮೇಲಿನ ಅಮೆರಿಕ ಕಾರ್ಯಾಚರಣೆ ಕುರಿತು ವಿಶ್ವಸಂಸ್ಥೆಯಿಂದ ತಕ್ಷಣಕ್ಕೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಇತ್ತೀಚಿಗೆ ಟ್ರಂಪ್ ಇರಾನ್ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿಗೆ ಪತ್ರವನ್ನು ಬರೆದು, ನೇರ ಮಾತುಕತೆಗೆ ಮುಂದಾಗುವಂತೆ ತಿಳಿಸಿದ್ದರು. ಈಗಾಗಲೇ ಇರಾನ್ ಟ್ರಂಪ್ ಅವರ ಮೊದಲ ಮನವಿಯನ್ನು ತಿರಸ್ಕರಿಸಿದ್ದು, ಪರೋಕ್ಷ ಮಾತುಕತೆ ಸಾಧ್ಯತೆ ಕುರಿತ ಮಾತುಗಳು ಕೇಳಿ ಬರುತ್ತಿವೆ. ಆದರೆ, ಟ್ರಂಪ್ ಮಾತ್ರ ಇರಾನ್?ಗೆ ನಿರಂತವಾಗಿ ಮಾತುಕತೆಗೆ ಒಪ್ಪದಿದ್ದರೆ ದಾಳಿ ಮಾಡುವುದಾಗಿ ಎಚ್ಚರಿಕೆ ನೀಡುತ್ತಿದ್ದು, ಪ್ರತೀಕಾರದ ವಾರ್ನಿಂಗ್ ಕೊಟ್ಟಿದ್ದಾರೆ.ಟ್ರಂಪ್ ಮೊದಲ ಆಡಳಿತಾವಧಿಯಲ್ಲೇ, ಡೆಮಾಕ್ರಟಿಕ್ ಅಧ್ಯಕ್ಷ ಬರಾಕ್ ಒಬಾಮಾ ಆಡಳಿತ ಅವಧಿಯಲ್ಲಿ ಇರಾನ್ ಜೊತೆ ನಡೆಸಿದ್ದ ಐತಿಹಾಸಿಕ ಪರಮಾಣು ಒಪ್ಪಂದದಿಂದ ಅಮೆರಿಕ ಹಿಂದೆ ಸರಿದಿತ್ತು. ಇರಾನ್ ಜೊತೆಗಿನ ಒಪ್ಪಂದಕ್ಕೆ ಟ್ರಂಪ್ ನಡೆಸುತ್ತಿರುವ ಪ್ರಯತ್ನಕ್ಕೆ ಇಸ್ರೇಲ್ ಪ್ರಧಾನಿ ಬೆಂಬಲಿಸಿದ್ದು, ಇಸ್ರೇಲ್ ಮತ್ತು ಅಮೆರಿಕ, ಇರಾನ್ ಯಾವುದೇ ಪರಮಾಣು ಅಭಿವೃದ್ಧಿ ಮಾಡದಂತೆ ನೋಡಿಕೊಳ್ಳುವ ಗುರಿ ಹೊಂದಿರುವುದಾಗಿ ತಿಳಿಸಿದೆ.

## ಆಂಧ್ರ ಪ್ರದೇಶದ ಕಿಯಾ ಘಟಕದಲ್ಲಿ 900 ಕಾರ್ ಇಂಜಿನ್ ಗಳೇ ಕಣ್ಮರೆ!

**ಪೆನುಗೊಂಡ:** ಇಲ್ಲಿನ ಕಿಯಾ ಘಟಕದಲ್ಲಿ ಬರೋಬ್ಬರಿ 900 ಕಾರು ಇಂಜಿನ್‌ಗಳು ಕಳ್ಳತನವಾಗಿರುವ ಪ್ರಕರಣ ಬಯಲಾಗಿದೆ. ಶ್ರೀ ಸತ್ಯ ಸಾಯಿ ಜಿಲ್ಲೆಯ ಪೆನುಕೊಂಡದಲ್ಲಿರುವ ಕಿಯಾ ಘಟಕದಲ್ಲಿ ನಡೆದಿರುವ ಈ ಬೃಹತ್ ಕಳ್ಳತನ ಪ್ರಕರಣ ತಡವಾಗಿ ಬೆಳಕಿಗೆ ಬಂದಿದ್ದು, ಇದು ಗಂಭೀರ ಆತಂಕವನ್ನು ಸೃಷ್ಟಿಸಿದೆ.ಆರಂಭದಲ್ಲಿ ಕಿಯಾ ಮಂಡಳಿ ಆತಂರಿಕವಾಗಿ ಈ ಕಳ್ಳತನ ಪ್ರಕರಣ ತನಿಖೆಗೆ ಮುಂದಾಯಿತು. ಆದರೆ, ಇದು ಬಗೆಹರಿಯದ ಹಿನ್ನೆಲೆ ಅವರು ಮಾರ್ಚ್ 19ರಂದು ಪೊಲೀಸರ ಮೊರೆ ಹೋಗಿದ್ದಾರೆ. ಆದರೆ, ಅಧಿಕೃತ ದೂರಿನ ಬಳಿಕವೇ ಈ ಪ್ರಕರಣ ಕುರಿತು ತನಿಖೆ ಕೈಗೆತ್ತಿಕೊಳ್ಳಲು ಸಾಧ್ಯ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ ಬೆನ್ನಲ್ಲೇ ಕಿಯಾ ಪ್ರತಿನಿಧಿಗಳು ಅಧಿಕೃತ ದೂರು ಸಲ್ಲಿಸಿದ್ದಾರೆ. ಇದೀಗ ಪೊಲೀಸರು ಕ್ರಮಕ್ಕೆ ಮುಂದಾಗಿದ್ದಾರೆ. ಇದಕ್ಕಾಗಿ ವಿಶೇಷ ತಂಡವನ್ನು ಜಿಲ್ಲಾಡಳಿತ ಪೊಲೀಸರು ರಚಿಸಿದ್ದು, ತನಿಖೆ ಸಾಗಿದೆ.ವಿವಿಧ ಸ್ಥಳಗಳಿಂದ ಕಿಯಾದ ಬಿಡಿ ಭಾಗಗಳು ಬರುತ್ತವೆ. ಕಾರ್ ಇಂಜಿನ್ ತಮಿಳುನಾಡಿನಿಂದ ಬರುತ್ತದೆ ಎಂದು ಕಿಯಾ ಮೂಲಗಳು ತಿಳಿಸಿವೆ. ತಮಿಳುನಾಡಿನಿಂದ ಬರುವಾಗ ಕಾರಿನ ಇಂಜಿನ್?ಗಳು ನಾಪತ್ತೆಯಾಗಿವೆಯಾ ಅಥವಾ ಪೆನುಕೊಂಡಾಗೆ ಬಂದ ಬಳಿಕ ಇವು ಕಣ್ಮರೆಯಾಗಿವೆಯಾ ಎಂಬ ಎರಡು ದಿಕ್ಕಿನಲ್ಲಿ ತನಿಖೆ ಸಾಗಿದೆ. ಈ ತನಿಖೆ ಹೆಚ್ಚು ಸಂಕೀರ್ಣತೆಯಿಂದ ಕೂಡಿದ್ದು, ಶೀಘ್ರದಲ್ಲಿ ಈ ಕುರಿತು ಪೊಲೀಸರು ಮಾಧ್ಯಮಗೋಷ್ಠಿ ನಡೆಸಿ ವಿವರ ನೀಡುವ ಸಾಧ್ಯತೆ ಇದೆ. ಸದ್ಯ ಕಿಯಾ ಘಟಕದಲ್ಲಿ ನಡೆದಿರುವ ಇಷ್ಟು ದೊಡ್ಡ ಮಟ್ಟದ ಕಳ್ಳತನ ಪ್ರಕರಣ ಸಾಕಷ್ಟು ಅನುಮಾನ ಮತ್ತು ಅಚ್ಚರಿಗೆ ಕಾರಣವಾಗಿದೆ.

## ಬಡ್ಡಿದರ 25 ಅಂಕ ಇಳಿಸಿದ ಆರ್‌ಬಿಐ

# ರಿಪೋ ದರ ಶೇ. 6ಕ್ಕೆ ಇಳಿಕೆ

**ನವದೆಹಲಿ:** ನಿರೀಕ್ಷೆಯಂತೆ ಭಾರತೀಯ ರಿಸರ್ವ್ ಬ್ಯಾಂಕ್ ತನ್ನ ರಿಪೋ ದರಗಳನ್ನು 25 ಮೂಲಾಂಕಗಳಷ್ಟು ಕಡಿತಗೊಳಿಸಿದೆ. ಮೊನ್ನೆ ಮತ್ತು ನಿನ್ನೆ ನಡೆದ ಆರ್ ಬಿಐ ಮಾನಿಟರಿ ಪಾಲಿಸಿ ಕಮಿಟಿ ಸಭೆಯಲ್ಲಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಇಂದು ಬೆಳಗ್ಗೆ 10 ಗಂಟೆಗೆ ಸುದ್ದಿಗೋಷ್ಠಿ ನಡೆಸಿದ ಆರ್ ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಅವರು ಕಮಿಟಿ ನಿರ್ಧಾರಗಳನ್ನು ಪ್ರಕಟಿಸುತ್ತಾ, ರಿಪೋ ದರವನ್ನು ಶೇ. 6.25ರಿಂದ ಶೇ 6ಕ್ಕೆ ಇಳಿಸಿರುವುದನ್ನು ತಿಳಿಸಿದರು. ಆರ್ ಬಿಐನಿಂದ ಇದು ಸತತ ಎರಡನೇ ರಿಪೋ ದರ ಇಳಿಕೆ ಆಗಿದೆ. ಫೆಬ್ರುವರಿಯಲ್ಲಿ ನಡೆದ ಎಂಪಿಸಿ ಸಭೆಯಲ್ಲೂ 25 ಮೂಲಾಂಕಗಳಷ್ಟು ಬಡ್ಡಿದರವನ್ನು ಇಳಿಸಲಾಗಿತ್ತು. ಈಗ ಮತ್ತೊಮ್ಮೆ ಕಡಿತಗೊಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ.



**ಏನಿದು ರಿಪೋ ದರ:** ರಿಪೋ ರೇಟ್ ಎಂದರೆ ರೀಪರ್ಚೇಸ್ ಅಗ್ರೀಮೆಂಟ್ ರೇಟ್ ಎಂದಿದೆ. ಇಲ್ಲಿ ಬ್ಯಾಂಕುಗಳಿಗೆ ಫಂಡಿಂಗ್ ಅವಶ್ಯಕತೆ ಬಿದ್ದಾಗ ಅವರು ಸರ್ಕಾರಿ ಬಾಂಡ್ ಗಳನ್ನು ಆರ್ ಬಿಐನಲ್ಲಿ ಅಡವಿಟ್ಟು ಸಾಲ ಪಡೆಯಬಹುದು. ಆದರೆ, ಅಡವಿಡಲಾದ ಬಾಂಡ್ ಅಥವಾ ಸೆಕ್ಯೂರಿಟಿಗಳನ್ನು ಪೂರ್ವನಿಗದಿತ ದರಕ್ಕೆ ಮರುಖರೀದಿ ಮಾಡಲಾಗುವುದೆಂದು ಒಪ್ಪಂದ ಮಾಡಿಕೊಳ್ಳಲಾಗುತ್ತದೆ. ಅದಕ್ಕೆ ರೀಪರ್ಚೇಸ್ ಅಗ್ರೀಮೆಂಟ್ ರೇಟ್ ಎಂದು ಕರೆಯುವುದು.

**ಕ್ರೆಡಿಟ್ ಸ್ಕೋರ್ ಹೊಸ ನಿಯಮಗಳ ಪ್ರಯೋಜನಗಳೇನು:** ಸರಳವಾಗಿ ತಿಳಿಸುವುದಾದರೆ, ಆರ್ ಬಿಐನಿಂದ ಸಾಲ ಪಡೆಯಲು ಬ್ಯಾಂಕುಗಳು ತೆರಬೇಕಿರುವ ಬಡ್ಡಿದರವೇ ರಿಪೋ ರೇಟ್. ಹಣದುಬ್ಬರವನ್ನು ನಿಯಂತ್ರಿಸಲು ಆರ್ ಬಿಐ ಬಳಿ ಇರುವ ಪ್ರಬಲ ಅಸ್ತ್ರ ಇದು.

ಬೆಲೆ ಏರಿಕೆ ಆಗುತ್ತಿದೆ ಎನಿಸಿದರೆ ಆಗ ಬ್ಯಾಂಕಿಂಗ್ ಕ್ಷೇತ್ರದಲ್ಲಿ ಹಣದ ಹರಿವು ಕಡಿಮೆ ಮಾಡಲು ಆರ್ ಬಿಐ ರಿಪೋ ದರವನ್ನು ಹೆಚ್ಚಿಸುತ್ತದೆ. ಹಣದುಬ್ಬರ ನಿಯಂತ್ರಣದಲ್ಲಿದ್ದರೆ, ಮತ್ತು ಆರ್ಥಿಕತೆಗೆ ಪುಷ್ಟಿ ಸಿಗುವ ಅವಶ್ಯಕತೆ ಇದೆ ಎನಿಸಿದಲ್ಲಿ ಆಗ ಬ್ಯಾಂಕಿಂಗ್ ವಲಯಕ್ಕೆ ಹೆಚ್ಚು ಹಣದ ಹರಿವು ಬೇಕಾಗುತ್ತದೆ. ಆಗ ರಿಪೋ ದರವನ್ನು ಆರ್‌ಬಿಐ ಇಳಿಸುತ್ತದೆ.

ಸಂಜಯ್ ಮಲ್ಹೋತ್ರಾ ಅವರು ಆರ್ ಬಿಐ ಗವರ್ನರ್ ಆಗಿ ನೇಮಕವಾದ ಬಳಿಕ ಇದು ಎರಡನೇ ಎಂಪಿಸಿ ಸಭೆಯಾಗಿದೆ. ಹೊಸ ಹಣಕಾಸು ವರ್ಷದ ಮೊದಲ ಎಂಪಿಸಿ ಸಭೆಯೂ ಇದಾಗಿದೆ. ಜಾಗತಿಕ ಅನಿಶ್ಚಿತ ಸ್ಥಿತಿ, ಸುಂಕ ಸಮರದ ಈ ಕಾಲಘಟ್ಟದಲ್ಲಿ ಆರ್ ಬಿಐ ನೀತಿ ನಿರ್ಧಾರಕ್ಕೆ ಸಾಕಷ್ಟು ಸವಾಲಿನ ಸ್ಥಿತಿ ಇದೆ.

ರಿಪೋ ದರ ಕಡಿತಗೊಳಿಸುವ ಜೊತೆಗೆ, ಎಸ್ ಡಿಎಫ್ ಮತ್ತು ಎಂಎಸ್ಎಫ್ ದರಗಳನ್ನೂ ತುಸು ಇಳಿಸಲಾಗಿದೆ. ಪಾಲಿಸಿ ನಿಲುವನ್ನು ನ್ಯೂಟ್ರಲ್‌ನಿಂದ ಅಕಾಮೊಡೇಟಿವ್‌ಗೆ ಬದಲಿಸಲಾಗಿದೆ.

# ಚೀನಾದ ಮೇಲೆ 104% ಸುಂಕ ವಿಧಿಸುವುದಾಗಿ ಘೋಷಿಸಿದ ಅಮೆರಿಕ

**ದೆಹಲಿ:** ಸುಂಕದ ವಿಷಯದಲ್ಲಿ ಅಮೆರಿಕ ಮತ್ತು ಚೀನಾ ನಡುವೆ ಟ್ರೇಡ್ ವಾರ್ ಅದ್ದರೆ ವ್ಯಾಪಾರ ಯುದ್ಧ ನಡೆಯುತ್ತಿದೆ. ಮಂಗಳವಾರ ಚೀನಾದ ಮೇಲೆ ಒಟ್ಟು ಶೇ.104ರಷ್ಟು ಸುಂಕವನ್ನು ವಿಧಿಸುವುದಾಗಿ ಅಮೆರಿಕ ಘೋಷಿಸಿದೆ. ಚೀನಾದ ಮೇಲಿನ ಅಮೆರಿಕದ ಹೊಸ ಸುಂಕಗಳು ಬುಧವಾರದಿಂದಲೇ ಜಾರಿಗೆ ಬರಲಿವೆ. ಈ ಮಾಹಿತಿಯನ್ನು ಶ್ವೇತಭವನ ಖಚಿತಪಡಿಸಿದೆ. ಮಂಗಳವಾರ ಚೀನಾ ಹೆಚ್ಚುವರಿಯಾಗಿ ಶೇ.50ರಷ್ಟು ಸುಂಕ ವಿಧಿಸುವ ಅಮೆರಿಕದ ಬೆದರಿಕೆಗೆ ತಿರುಗೇಟು ನೀಡಿದ್ದು, ಅಮೆರಿಕ ಸುಂಕ ಯುದ್ಧ ಅಥವಾ ವ್ಯಾಪಾರ ಯುದ್ಧವನ್ನು ನಡೆಸುವ ಉದ್ದೇಶ ಹೊಂದಿದ್ದರೆ, ಚೀನಾ ಕೊನೆಯವರೆಗೂ ಹೋರಾಡಲು ಸಿದ್ಧವಾಗಿದೆ ಎಂದು ಹೇಳಿದೆ.



ಚೀನಾದ ಮೇಲಿನ ಶೇ.104ರಷ್ಟು ಸುಂಕಗಳನ್ನು ಅಮೆರಿಕದ ಸಮಯ ಬೆಳಗ್ಗೆ 12:01ಕ್ಕೆ ಜಾರಿಗೆ ತರಲಾಗುವುದು ಎಂದು ಶ್ವೇತಭವನ ದೃಢಪಡಿಸಿದೆ ಎಂದು ಸಿಎನ್‌ಬಿಸಿ ವರದಿ ಮಾಡಿದೆ. ಮಂಗಳವಾರದೊಳಗೆ ಬೀಜಿಂಗ್ ಅಮೆರಿಕದ ಸರಕುಗಳ ಮೇಲಿನ ಪ್ರತೀಕಾರದ ಸುಂಕವನ್ನು ತೆಗೆದುಹಾಕದಿದ್ದರೆ, ಬುಧವಾರ ಚೀನಾದ ಮೇಲಿನ ಅಸ್ತಿತ್ವದಲ್ಲಿರುವ ಸುಂಕವನ್ನು ಶೇ.50ರಷ್ಟು ಹೆಚ್ಚಿಸುವುದಾಗಿ ಟ್ರಂಪ್ ಸೋಮವಾರ ಎಚ್ಚರಿಕೆ ನೀಡಿದ್ದರು. ಅದೇ ದಿನ ಚೀನಾ ತನ್ನ ಸುಂಕಗಳನ್ನು ತೆಗೆದುಹಾಕಲು ಮಧ್ಯಾಹ್ನ 12 ಗಂಟೆಯವರೆಗೂ ಗಡುವು ನೀಡುವುದಾಗಿ ಟ್ರಂಪ್ ಹೇಳಿದ್ದರು. ಏತನ್ಮಧ್ಯೆ ಬೀಜಿಂಗ್ ತನ್ನ 34% ಪ್ರತೀಕಾರದ ಸುಂಕಗಳನ್ನು ರದ್ದುಗೊಳಿಸುವುದಿಲ್ಲವೆಂದು ಪ್ರತಿಜ್ಞೆ ಮಾಡಿದೆ.

ವಿಶ್ವದ ಎರಡು ಬಲಿಷ್ಠ ರಾಷ್ಟ್ರಗಳ ನಡುವಿನ ಈ ವ್ಯಾಪಾರ ಯುದ್ಧವೂ ಜಾಗತಿಕ ಮಾರುಕಟ್ಟೆಯ ಮೇಲೆ ದೊಡ್ಡ ಪರಿಣಾಮ ಬೀರುವ ಸಾಧ್ಯತೆ ಇದೆ. ಉಭಯ ದೇಶಗಳ ನಡುವೆ ಇದು ಹೀಗೆಯೇ ಮುಂದುವರೆದರೆ ಭಾರತವೂ ಸೇರಿದಂತೆ ಅನೇಕ ದೇಶಗಳ ಮೇಲೆ ದೊಡ್ಡ ಮಟ್ಟದ ಪರಿಣಾಮ ಉಂಟಾಗುವ ಸಾಧ್ಯತೆ ಇದೆ. ಭಾರತವೂ ಸೇರಿದಂತೆ ಜಗತ್ತಿನ ಬಹುತೇಕ ಎಲ್ಲಾ ರಾಷ್ಟ್ರಗಳ ಮೇಲೂ ಅಮೆರಿಕದ ಡೊನಾಲ್ಡ್ ಟ್ರಂಪ್ ಸುಂಕ ಹೇರಿದ್ದಾರೆ. ಏಪ್ರಿಲ್ 2ರಂದು ಲಿಬರೇಷನ್ ಡೇ ಎಂದು ಘೋಷಿಸಿ ಶ್ವೇತ ಭವನದಲ್ಲಿ ಎಲ್ಲಾ ದೇಶಗಳು ಅಮೆರಿಕದ ವಸ್ತುಗಳ ಮೇಲೆ ಹಾಕುತ್ತಿರುವ ಸುಂಕದ ಪ್ರಮಾಣ, ಅದಕ್ಕೆ ಟ್ರಂಪ್ ನಿಗದಿ ಮಾಡಿರುವ ಟಾರಿಫ್‌ನ ಲೆಕ್ಕದ ಪಟ್ಟಿಯನ್ನು ತೋರಿಸಿದ್ದರು.

# ಪಂಜಾಬ್ ಮಾಜಿ ಸಚಿವನ ಮನೆ ಮೇಲೆ ಗ್ರೆನೇಡ್ ದಾಳಿ

**ಜಲಂಧರ್(ಪಂಜಾಬ್):** ಮಾಜಿ ಸಚಿವ ಹಾಗೂ ಬಿಜೆಪಿ ನಾಯಕ ಮನೋರಂಜನ್ ಕಾಲಿಯಾ ಮನೆ ಮೇಲೆ ಗ್ರೆನೇಡ್ ದಾಳಿ ನಡೆದಿದೆ. ಬೆಳಗಿನ ಜಾವ 1:15 ಗಂಟೆ ಸುಮಾರಿಗೆ ಈ ಗ್ರೆನೇಡ್ ಸ್ಫೋಟ ಸಂಭವಿಸಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಹಾನಿಯಾಗಿಲ್ಲ ಎಂದು ವರದಿಯಾಗಿದೆ. ಆದರೆ, ಸ್ಫೋಟದ ತೀವ್ರತೆಗೆ ಮನೆ, ಬಾಗಿಲುಗಳು, ಒಳಗೆ ನಿಲ್ಲಿಸಿದ್ದ ಕಾರಿನ ಕಿಟಕಿಗಳು ಮತ್ತು ಇತರ ವಸ್ತುಗಳಿಗೆ ಹಾನಿಗೊಳಗಾಗಿವೆ.



ಸ್ಫೋಟದಿಂದ ಉಂಟಾದ ಭಾರೀ ಶಬ್ದಕ್ಕೆ ಇಡೀ ಪ್ರದೇಶದ ಜನರು ತಮ್ಮ ಮನೆಯಿಂದ ಹೊರಗೆ ಬಂದಿದ್ದರು. ಈ ಸಂಬಂಧ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಘಟನಾ ಸ್ಥಳಕ್ಕೆ ವಿಧಿವಿಜ್ಞಾನ ತಂಡವನ್ನು ಕರೆಸಲಾಗಿದ್ದು, ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ. ಈ ಕುರಿತು ಮಾತನಾಡಿರುವ ಮನೋರಂಜನ್ ಕಾಲಿಯಾ, ಬೆಳಗಿನ ಜಾವ 1:15ರ ಸುಮಾರಿಗೆ ಯಾರೋ ಮನೆ ಬಾಗಿಲು ತಟ್ಟಿ ಮನೆಯೊಳಗೆ ಸ್ಫೋಟ ಸಂಭವಿಸಿದೆ ಎಂದು ಹೇಳಿದರು. ಮನೆಯ ಹೊರಗೆ ಟ್ರಾನ್ಸ್‌ಫಾರ್ಮರ್ ಅಳವಡಿಸಲಾಗಿದ್ದು, ಅದು ಕೆಲವೊಮ್ಮೆ ಓವರ್ ಲೋಡ್‌ನಿಂದ ಸ್ಫೋಟಗೊಳ್ಳುತ್ತದೆ. ಬಹುಶಃ ಟ್ರಾನ್ಸ್‌ಫಾರ್ಮರ್ ಸ್ಫೋಟಗೊಂಡಿರಬಹುದು ಅಥವಾ ಹೊರಗೆ ಗುಡುಗು, ಸಿಡಿಲು ಇರಬಹುದು ಎಂದು ಭಾವಿಸಿದ್ದೆ. ಆದರೆ ಮನೆಯಲ್ಲಿ ಸ್ಫೋಟ ಸಂಭವಿಸಿದೆ ಎಂದು ಗೊತ್ತಾದ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದೆ. ನಂತರ ಪೊಲೀಸರು ಸ್ಥಳಕ್ಕೆ ಧಾವಿಸಿದರು ಎಂದು ತಿಳಿಸಿದರು.

# ಬಿಜೆಡಿಯಲ್ಲಿ ಮುಂದುವರಿದ ಆಂತರಿಕ ಕಲಹ

**ಭುವನೇಶ್ವರ:** ವಕ್ಫ್ ತಿದ್ದುಪಡಿ ಮಸೂದೆ, 2025ರ ಕುರಿತು ದಿಢೀರನೆ ತನ್ನ ನಿಲುವು ಬದಲಿಸಿದ ಬಿಜು ಜನತಾ ದಳ ಪಕ್ಷದ ನಡೆಯ ವಿರುದ್ಧ ಪಕ್ಷದಲ್ಲೇ ಅಸಮಾಧಾನ ಭುಗಿಲೆದ್ದಿದ್ದು, ಆಂತರಿಕ ಕಲಹ ಸ್ಫೋಟಗೊಂಡಿದೆ. ಮೊದಲಿಗೆ ವಕ್ಫ್ ತಿದ್ದುಪಡಿ ಮಸೂದೆಯನ್ನು ವಿರೋಧಿಸುವ ನಿಲುವು ತೆಗೆದುಕೊಂಡಿದ್ದ ಬಿಜು ಜನತಾ ದಳ, ನಂತರ, ರಾಜ್ಯಸಭೆಯಲ್ಲಿ ತಮ್ಮ ಮನಸಾಕ್ಷಿಯಂತೆ ಮಸೂದೆಯ ಮೇಲೆ ಮತ ಚಲಾಯಿಸುವ ಅಧಿಕಾರವನ್ನು ತನ್ನ ಸಂಸದರಿಗೆ ನೀಡಿತ್ತು. ಬಿಜು ಜನತಾ ದಳ ಪಕ್ಷದ ಈ ನಿಲುವಿನ ವಿರುದ್ಧ ಪಕ್ಷದೊಳಗೇ ತೀವ್ರ ಟೀಕೆ ವ್ಯಕ್ತವಾಗಿದೆ.



ವಕ್ಫ್ ತಿದ್ದುಪಡಿ ಮಸೂದೆಯ ಕುರಿತು ಪಕ್ಷವು ತನ್ನ ನಿಲುವನ್ನು ಬದಲಿಸಿದ್ದಕ್ಕಾಗಿ ಮಾಜಿ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ರ ಆಪ್ತ ಹಾಗೂ ಮಾಜಿ ಅಧಿಕಾರಿ ವಿ.ಕೆ.ಪಾಂಡ್ಯನ್ ರನ್ನು ಬಿಜೆಡಿ ಪಕ್ಷದ ರಾಜ್ಯಸಭಾ ಸಂಸದ ದೇಬಾಶಿಶ್ ಸಮಂತರಾಯ್ ಬಹಿರಂಗವಾಗಿಯೇ ದೂಷಿಸಿದ್ದಾರೆ. ಮತದಾನದ ವೇಳೆ ರಾಜ್ಯಸಭೆಗೆ ಗೈರಾಗಿದ್ದ ಸಮಂತರಾಯ್, ವಕ್ಫ್ ತಿದ್ದುಪಡಿ ಮಸೂದೆಯ ಕುರಿತ ಪಕ್ಷದ ನಿಲುವಿನ ಕುರಿತು ಗೊಂದಲವುಂಟಾಗಿತ್ತು ಎಂದು ಹೇಳಿದ್ದು, 10 ತಿಂಗಳ ಹಿಂದೆಯೇ ರಾಜಕೀಯದಿಂದ ನಿವೃತ್ತರಾಗಿರುವುದಾಗಿ ಪಾಂಡ್ಯನ್ ಅಧಿಕೃತವಾಗಿ ಪ್ರಕಟಿಸಿದ್ದರೂ, ಈಗಲೂ ಮಾಜಿ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಪರವಾಗಿ ನಿರ್ಧಾರಗಳನ್ನು ಕೈಗೊಳ್ಳುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಪಾಂಡ್ಯನ್ ಒಬ್ಬರೇ ಪ್ರಾದೇಶಿಕ ಪಕ್ಷವಾದ ಬಿಜು ಜನತಾ ದಳವನ್ನು ನಾಶಗೊಳಿಸಿದ್ದಾರೆ ಎಂದೂ ಅವರು ಅಪಾದಿಸಿದ್ದಾರೆ.

# ಎರಡು ದಿನಗಳ 84ನೇ ಕಾಂಗ್ರೆಸ್ ಅಧಿವೇಶನ ಆರಂಭ; ಬೃಹತ್ ಸಾಂಸ್ಥಿಕ ಪುನರ್‌ರಚನೆಗೆ ಪಕ್ಷ ಸಜ್ಜು

**ಅಹ್ಮದಾಬಾದ್:** ಬಿಜೆಪಿಯ ಭದ್ರಕೋಟೆ ಎಂದೇ ಪರಿಗಣಿಸಲಾಗಿರುವ ಗುಜರಾತಿನ ಅಹ್ಮದಾಬಾದ್ ನಲ್ಲಿ 64 ವರ್ಷಗಳ ಬಳಿಕ ಕಾಂಗ್ರೆಸ್ ನ ಎರಡು ದಿನಗಳ 84ನೇ ಅಧಿವೇಶನ ಮಂಗಳವಾರದಿಂದ ಆರಂಭಗೊಂಡಿದೆ.



ಗುಜರಾತಿನಲ್ಲಿ ಈ ಹಿಂದೆ 1961ರಲ್ಲಿ ಭಾವನಗರದಲ್ಲಿ ಕಾಂಗ್ರೆಸ್ ಅಧಿವೇಶನ ನಡೆದಿತ್ತು. ಮಂಗಳವಾರ ಅಹ್ಮದಾಬಾದ್ ನಲ್ಲಿ ಸಮಾವೇಶಗೊಂಡ ಕಾಂಗ್ರೆಸ್ ಪಕ್ಷದ ಉನ್ನತ ನಾಯಕರು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ಪ್ರತಿಪಾದಿಸಿದ್ದ ಸಾಮಾಜಿಕ ನ್ಯಾಯದ ಮಾರ್ಗದಲ್ಲಿ ಸಾಗುವುದಾಗಿ ಪ್ರತಿಜ್ಞೆ ಮಾಡಿದರು. ಇಲ್ಲಿಯ ಸರ್ದಾರ್ ವಲ್ಲಭಭಾಯಿ ಪಟೇಲ್ ರಾಷ್ಟ್ರೀಯ ಸ್ಮಾರಕದಲ್ಲಿ ನಡೆದ ವಿಸ್ತೃತ ಕಾಂಗ್ರೆಸ್ ಕಾರ್ಯಕಾರಿ ಸಮಿತಿ(ಸಿಡಬ್ಲ್ಯುಎಸ್) ಸಭೆಯ ಬಳಿಕ ಸುದ್ದಿಗಾರರಿಗೆ ವಿವರಗಳನ್ನು ನೀಡಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ ಅವರು, ಪಕ್ಷವು ಈ ವರ್ಷವನ್ನು ಸಂಘಟನೆಯ ಸಂಪೂರ್ಣ ಪುನರರಚನೆಗಾಗಿ ಮೀಸಲಿರಿಸಿದೆ ಮತ್ತು ಸಭೆಯಲ್ಲಿ ಈ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು ಎಂದು ತಿಳಿಸಿದರು.

'ನಾವು ಬೃಹತ್ ಸಾಂಸ್ಥಿಕ ಪುನರ?ರಚನೆಯನ್ನು ಮಾಡಲಿದ್ದೇವೆ. ನಮ್ಮ ಪ್ರಧಾನ ಕಾರ್ಯದರ್ಶಿಗಳು ಮತ್ತು ಉಸ್ತುವಾರಿಗಳು ಅದಕ್ಕಾಗಿ ಮಾರ್ಗಸೂಚಿಗಳನ್ನು ಸಿದ್ಧಪಡಿಸುತ್ತಿದ್ದಾರೆ' ಎಂದು ತಿಳಿಸಿದ ವೇಣುಗೋಪಾಲ್, ಪಕ್ಷದ ಜಿಲ್ಲಾ ಘಟಕಗಳ ಅಧ್ಯಕ್ಷರಿಗೆ ಹೆಚ್ಚಿನ ಅಧಿಕಾರಗಳನ್ನು ನೀಡುವ ಕ್ರಮಗಳನ್ನು ಶೀಘ್ರವೇ ಜಾರಿಗೊಳಿಸಲಾಗುವುದು ಎಂದು ಒತ್ತಿ ಹೇಳಿದರು.

# ಬೆಂಕಿ ಅವಘಡ; ಪವನ್ ಕಲ್ಯಾಣ್ ಕಿರಿಯ ಪುತ್ರನಿಗೆ ತೀವ್ರ ಗಾಯ

**ಸಿಂಗಾಪುರ:** ಶಾಲೆಯಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಆಂಧ್ರಪ್ರದೇಶದ ಉಪಮುಖ್ಯಮಂತ್ರಿ ಪವನ್ ಕಲ್ಯಾಣ್ ಅವರ ಕಿರಿಯ ಪುತ್ರ ಮಾರ್ಕ್ ಶಂಕರ್ ಪವನೋವಿಚ್ ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ. ಮಂಗಳವಾರ ಬೆಳಿಗ್ಗೆ 9:45 ರ ಸುಮಾರಿಗೆ ರಿವರ್ ವ್ಯಾಲಿ ಶಾಪ್‌ಹೌಸ್‌ನಲ್ಲಿರುವ ಶಾಲೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ತಕ್ಷಣವೇ ಶಾಲೆಯಿಂದ ಎಲ್ಲರನ್ನೂ ಹೊರಗೆ ಕಳುಹಿಸಲಾಗಿದೆ. ಅಷ್ಟರಲ್ಲಿ ಹಲವರಿಗೆ ಗಾಯಗಳಾಗಿವೆ ಎಂದು ತಿಳಿದು ಬಂದಿದೆ. ಮಾರ್ಕ್ ಶಂಕರ್ ಪವನೋವಿಚ್‌ಗೆ ಕೈ ಕಾಲುಗಳಿಗೆ ಗಾಯಗಳಾಗಿದ್ದು, ಹೊಗೆಯಿಂದ ಉಸಿರಾಟದ ತೊಂದರೆ ಉಂಟಾಗಿದೆ ಎಂದು ತಿಳಿದು ಬಂದಿದೆ.



ಸದ್ಯ ಮಾರ್ಕ್ ಶಂಕರ್ ಪವನೋವಿಚ್ ಅವರನ್ನು ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ನೀಡಲಾಗುತ್ತಿದೆ. ಮಗನ ಆರೋಗ್ಯ ವಿಚಾರಿಸಲು ಪವನ್ ಕಲ್ಯಾಣ್ ಸಿಂಗಾಪುರಕ್ಕೆ ತೆರಳಿದ್ದಾರೆ. ಸಿಂಗಾಪುರದಲ್ಲಿ ಮಕ್ಕಳ ಶಿಬಿರ ನಡೆಯುತ್ತಿದ್ದ ಕಟ್ಟಡದ ಎರಡನೇ ಮತ್ತು ಮೂರನೇ ಮಹಡಿಯಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಘಟನೆಯಲ್ಲಿ 15 ಮಕ್ಕಳು ಸೇರಿದಂತೆ ಒಟ್ಟು 19 ಜನರು ಗಾಯಗೊಂಡಿದ್ದಾರೆ. ಬೆಂಕಿ ಅವಘಡಕ್ಕೆ ಕಾರಣವೇನೆಂದು ಸ್ಪಷ್ಟವಾಗಿಲ್ಲ ಮತ್ತು ಅಧಿಕಾರಿಗಳು ಘಟನೆಯ ಕಾರಣವನ್ನು ಹುಡುಕುತ್ತಿದ್ದಾರೆ.

ಪವನ್ ಕಲ್ಯಾಣ್ ಅವರ ಪುತ್ರನಿಗೆ ಬೆಂಕಿ ಅಪಘಾತವಾದುದನ್ನು ಜನ ಸೇನಾ ಪಾರ್ಟಿ ಟ್ವೀಟ್ ಮೂಲಕ ತಿಳಿಸಿದೆ. ರಾಜ್ಯದ ಉಪಮುಖ್ಯಮಂತ್ರಿ ಶ್ರೀ ಪವನ್ ಕಲ್ಯಾಣ್ ಅವರ ಕಿರಿಯ ಪುತ್ರ ಮಾರ್ಕ್ ಶಂಕರ್ ಸಿಂಗಾಪುರದಲ್ಲಿ ನಡೆದ ಬೆಂಕಿ ಅವಘಡದಲ್ಲಿ ಸಿಲುಕಿಕೊಂಡಿದ್ದಾರೆ. ಮಾರ್ಕ್ ಶಂಕರ್ ಓದುತ್ತಿದ್ದ ಶಾಲೆಯಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಅಪಘಾತದಲ್ಲಿ ಅವರ ಕೈ ಮತ್ತು ಕಾಲುಗಳಿಗೆ ಗಾಯಗಳಾಗಿವೆ. ಹೊಗೆಯಿಂದ ಉಸಿರಾಡಿದ ಪರಿಣಾಮವೂ ಅವರಿಗೆ ಉಂಟಾಗಿದೆ. ಮಾರ್ಕ್ ಶಂಕರ್ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಟ್ವೀಟ್‌ನಲ್ಲಿ ತಿಳಿಸಲಾಗಿದೆ.

# ಮ್ಯಾನ್ಮಾರ್‌ನಲ್ಲಿ ಭೂಕಂಪ ರಕ್ಷಣಾ ಪ್ರಯತ್ನಕ್ಕೆ ಸೈಬೋರ್ಗ್ ಸಹಾಯ

**ನವದೆಹಲಿ:** ಮಾರ್ಚ್ 28 ರಂದು 7.7 ತೀವ್ರತೆಯ ಭೂಕಂಪದ ನಂತರ ಶೋಧ ಮತ್ತು ರಕ್ಷಣಾ ಪ್ರಯತ್ನಗಳಿಗೆ ಸಹಾಯ ಮಾಡಲು ಸಿಂಗಾಪುರವು ಇತ್ತೀಚೆಗೆ ಸೈಬೋರ್ಗ್ ಜಿರಳೆಗಳನ್ನು ಮ್ಯಾನ್ಮಾರ್ಗೆ ನಿಯೋಜಿಸಿತು.

ನನ್ಯಾಂಗ್ ತಾಂತ್ರಿಕ ವಿಶ್ವವಿದ್ಯಾಲಯ ಮತ್ತು ಕ್ಲಾಸ್ ಎಂಜಿನಿಯರಿಂಗ್ ಮತ್ತು ಪರಿಹಾರಗಳ ಸಹಯೋಗದೊಂದಿಗೆ ಹೋಮ್ ಟೀಮ್ ಸೈನ್ಸ್ ಅಂಡ್ ಟೆಕ್ನಾಲಜಿ ಏಜೆನ್ಸಿ (ಎಚ್ಟಿಎಕ್ಸ್) ಅಭಿವೃದ್ಧಿಪಡಿಸಿದ 10 ಕೀಟ-ಹೈಬ್ರಿಡ್ ರೋಬೋಟ್ಗಳನ್ನು ಮಾರ್ಚ್ 30 ರಂದು ಸಿಂಗಾಪುರ ನಾಗರಿಕ ರಕ್ಷಣಾ ಪಡೆ (ಎಸ್ಸಿಡಿಎಫ್) ಆಪರೇಷನ್ ಲಯನ್ಹಾರ್ಟ್ ತುಕಡಿಗೆ ಸೇರಿಸಲಾಯಿತು.

ಮಾನವೀಯ ಕಾರ್ಯಾಚರಣೆಯಲ್ಲಿ ಸೈಬೋರ್ಗ್‌ಗಳನ್ನು ಬಳಸಿರುವುದು ವಿಶ್ವದ ಎಲ್ಲಿಯೂ ಇದೇ ಮೊದಲು, ಮತ್ತು ಕೀಟ-ಹೈಬ್ರಿಡ್ ರೋಬೋಟ್ ಗಳನ್ನು ಈ ಕ್ಷೇತ್ರದಲ್ಲಿ ನಿಯೋಜಿಸಿರುವುದು ಇದೇ ಮೊದಲು

ಸೈಬೋರ್ಗ್ ಜಿರಳೆಗಳನ್ನು ಮೊದಲು ಮಾರ್ಚ್ 31 ರಂದು ಕುಸಿದ ಆಸ್ಪತ್ರೆಯಲ್ಲಿ ನಿಯೋಜಿಸಲಾಯಿತು, ನಂತರ ಏಪ್ರಿಲ್ 3 ರಂದು ರಾಜಧಾನಿ ನೈಪಿಟಾವ್ನಲ್ಲಿ ಮತ್ತೆ ಎರಡು ಬಾರಿ ನಿಯೋಜಿಸಲಾಯಿತು.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಮುಜುಗರ ಆಗುವ ಒಂದು ದೃಶ್ಯ ಕೂಡ 'ವಿದ್ಯಾಪತಿ' ಇಲ್ಲ

ನಟಿ ಮಲ್ಲೈಕಾ ವಸುಪಾಲ್ ಅವರು ವೃತ್ತಿಜೀವನದ ಆರಂಭದಲ್ಲಿ ಕಾಮಿಡಿ ಸಿನಿಮಾಗಳನ್ನೇ ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಮೊದಲು 'ಉಪಾಧ್ಯಕ್ಷ' ಸಿನಿಮಾದಲ್ಲಿ ನಟಿಸಿದ ಅವರು ಈಗ 'ವಿದ್ಯಾಪತಿ' ಚಿತ್ರದಲ್ಲಿ ನಟಿಸಿದ್ದಾರೆ. ಈ ಸಿನಿಮಾದಲ್ಲಿ ಅವರು ನಾಗಭೂಷಣ್ ಜೊತೆ ತೆರೆ ಹಂಚಿಕೊಂಡಿದ್ದಾರೆ. ಬ್ಯಾಕ್ ಟು ಬ್ಯಾಕ್ ಕಾಮಿಡಿ ಸಿನಿಮಾ ಆರಿಸಿಕೊಂಡಿರುವ ಅವರಿಗೆ ಈ ಪ್ರಕಾರದ ಚಿತ್ರಗಳ ಮೇಲೆ ನಂಬಿಕೆ ಇದೆ. ಉತ್ತಮವಾದ ಕಾಮಿಡಿ ಸಿನಿಮಾಗಳು ಎಂದಿಗೂ ಸೋತಿಲ್ಲ ಎಂದು ಅವರು ಹೇಳಿದ್ದಾರೆ. 'ಉಪಾಧ್ಯಕ್ಷ' ಸಿನಿಮಾ ಹಿಟ್ ಆಯಿತು. ಈಗ 'ವಿದ್ಯಾಪತಿ' ಕೂಡ ಜನರಿಗೆ ಇಷ್ಟ ಆಗಲಿದೆ ಎಂಬ ನಂಬಿಕೆ ಮಲ್ಲೈಕಾ ವಸುಪಾಲ್ ಅವರಿಗೆ ಇದೆ. 'ಜನರು ಉಪಾಧ್ಯಕ್ಷ ಚಿತ್ರವನ್ನು ಹೇಗೆ ಸ್ವೀಕರಿಸುತ್ತಾರೆ ಎಂಬುದು ರಿಲೀಸ್ ಸಮಯದಲ್ಲಿ ನಮಗೂ ಗೊತ್ತಿರಲಿಲ್ಲ. ಜನರು ತುಂಬ ಚೆನ್ನಾಗಿ ಸ್ವೀಕರಿಸಿದರು. ನನಗೆ ಅನಿಸುವ ಪ್ರಕಾರ ಕಾಮಿಡಿ ಸಿನಿಮಾಗಳು ಯಾವತ್ತೂ ಸೋತಿಲ್ಲ' ಎಂದು ಮಲ್ಲೈಕಾ ವಸುಪಾಲ್ ಹೇಳಿದ್ದಾರೆ. 'ನಮ್ಮ ವಿದ್ಯಾಪತಿ ಸಿನಿಮಾ ತುಂಬ ಕ್ಲೀನ್ ಕಾಮಿಡಿ. ಮಕ್ಕಳಿಗೆ ಇಷ್ಟ ಆಗುತ್ತದೆ. ಯಾವುದೇ ಡಬಲ್ ಮೀನಿಂಗ್ ಜೋಕ್ ಇಲ್ಲ. ಮಕ್ಕಳಿಂದ ದೊಡ್ಡವರ ತನಕ ಎಲ್ಲರೂ ಆರಾಮಾಗಿ ಕುಳಿತುಕೊಂಡು ನೋಡಬಹುದು. ಮುಜುಗರ ಆಗುವಂತಹ ಒಂದು ಸೀನ್ ಕೂಡ ಈ ಸಿನಿಮಾದಲ್ಲಿ ಇಲ್ಲ. ಗಂಭೀರವಾದ ವಿಚಾರವನ್ನು ಕಾಮಿಡಿ ಮೂಲಕ ಹೇಳಿದ್ರೆ ಆ ಪ್ರಯತ್ನ ಎಂದಿಗೂ ಸೋಲುವುದಿಲ್ಲ' ಎಂದಿದ್ದಾರೆ ಮಲ್ಲೈಕಾ ವಸುಪಾಲ್.

# 'ಒದೆಲ 2' ಟ್ರೇಲರ್

ಹಾರರ್ ಕಥೆ ಇರುವ ತೆಲುಗಿನ 'ಒದೆಲ 2' ಸಿನಿಮಾದ ಟ್ರೇಲರ್ ಬಿಡುಗಡೆ ಆಗಿದೆ. ಈ ಸಿನಿಮಾದಲ್ಲಿ ನಟಿ ತಮನ್ನಾ ಭಾಟಿಯಾ ಹಾಗೂ ನಟ ವಸಿಷ್ಠ ಸಿಂಹ ಅವರು ಮುಖ್ಯ ಭೂಮಿಕೆ ನಿಭಾಯಿಸಿದ್ದಾರೆ. ಸಖತ್ ಅದ್ದೂರಿಯಾಗಿ ಈ ಸಿನಿಮಾ ಮೂಡಿಬಂದಿದೆ ಎಂಬುದಕ್ಕೆ ಟ್ರೇಲರ್ ಸುಳಿವು ನೀಡಿದೆ. ಅಚ್ಚರಿ ಮೂಡಿಸುವ ಗ್ರಾಫಿಕ್ಸ್, ಅದ್ದೂರಿ ಮೇಕಿಂಗ್‌ನ ಝಲಕ್ ಈ ಟ್ರೇಲರ್‌ನಲ್ಲಿ ಕಾಣಿಸಿದೆ. ತಮನ್ನಾ ಭಾಟಿಯಾ ಮತ್ತು ವಸಿಷ್ಠ ಸಿಂಹ ಅವರು ಈ ಸಿನಿಮಾದಲ್ಲಿ ಮುಖಾಮುಖಿ ಆಗುತ್ತಿದ್ದಾರೆ. ಚಿತ್ರಮಂದಿರದಲ್ಲಿ ಹಾರರ್ ಪ್ರಿಯರಿಗೆ ಭರ್ಜರಿ ಮನರಂಜನೆ ಸಿಗುವ ಲಕ್ಷಣ ಕಾಣಿಸಿದೆ.

ಅಶೋಕ್ ತೇಜ ಅವರು 'ಒದೆಲ 2' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಸಂಪತ್ ನಂದಿ ಕತೆ ಬರೆದಿದ್ದಾರೆ. ಪಾತ್ರವರ್ಗದಲ್ಲಿ ತಮನ್ನಾ ಭಾಟಿಯಾ, ವಸಿಷ್ಠ ಸಿಂಹ ಜೊತೆ ಕನ್ನಡದ ನಟ ಶರತ್ ಲೋಹಿತಾಶ್ವ ಕೂಡ ಇದ್ದಾರೆ. 'ಅಧ್ಯಕ್ಷ' ಸಿನಿಮಾ ನಟಿ ಹೆಭಾ ಪಟೇಲ್ ಸಹ ಈ ಸಿನಿಮಾದಲ್ಲಿ ನಟಿಸಿದ್ದಾರೆ. 'ಒದೆಲ 2' ಸಿನಿಮಾದ ಟ್ರೇಲರ್ ಬಿಡುಗಡೆಯಾಗಿ ಸದ್ದು ಮಾಡುತ್ತಿದೆ.

ತಮನ್ನಾ ಭಾಟಿಯಾ ಅವರು ಈವರೆಗೂ ಗ್ಲಾಮರ್ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದೇ ಹೆಚ್ಚು. ಆದರೆ 'ಒದೆಲ 2' ಸಿನಿಮಾದಲ್ಲಿ ಅವರಿಗೆ ಬೇರೆ ರೀತಿಯ ಪಾತ್ರವಿದೆ. ದುಷ್ಟಶಕ್ತಿಯ ವಿರುದ್ಧ ಹೋರಾಡುವ ಶಿವ ಶಕ್ತಿ ಎಂಬ ಪಾತ್ರಕ್ಕೆ ಅವರು ಬಣ್ಣ ಹಚ್ಚಿದ್ದಾರೆ. ಅವರಿಗೆ ಸವಾಲು ಹಾಕುವ ದುಷ್ಟಶಕ್ತಿಯಾಗಿ ವಸಿಷ್ಠ ಸಿಂಹ ಅವರು ನಟಿಸಿದ್ದಾರೆ. ತಮನ್ನಾ ಭಾಟಿಯಾ ಅವರ ನಾಗ ಸಾಧು ಗೆಟಪ್ ಗಮನ ಸೆಳೆದಿದೆ. ಈ ಟ್ರೇಲರ್‌ಗೆ ಪ್ರೇಕ್ಷಕರಿಂದ ಪಾಸಿಟಿವ್ ಪ್ರತಿಕ್ರಿಯೆ ಸಿಕ್ಕಿದೆ.

ಏಪ್ರಿಲ್ 11ರಂದು 'ಒದೆಲ 2' ಸಿನಿಮಾ ಬಿಡುಗಡೆ ಆಗಲಿದೆ. ಕನ್ನಡದ ಪ್ರತಿಭಾವಂತ ಸಂಗೀತ ನಿರ್ದೇಶಕ ಅಜನೀಶ್ ಲೋಕನಾಥ್ ಅವರು ಈ ಸಿನಿಮಾಗೆ ಸಂಗೀತ ನೀಡಿದ್ದಾರೆ. ಟ್ರೇಲರ್‌ನಲ್ಲಿ ಹಿನ್ನೆಲೆ ಸಂಗೀತಕ್ಕೆ ಜನರು ಫಿದಾ ಆಗಿದ್ದಾರೆ.

2022ರಲ್ಲಿ ವಸಿಷ್ಠ ಸಿಂಹ ನಟಿಸಿದ 'ಒದೆಲ ರೈಲ್ವೇ ಸ್ಟೇಷನ್' ಸಿನಿಮಾ ಹಿಟ್ ಆಗಿತ್ತು. ಅದರ ಸೀಕ್ವೆಲ್ ಆಗಿ 'ಒದೆಲ 2' ಸಿನಿಮಾ ಮೂಡಿಬಂದಿದೆ. ಈ ಬಾರಿ ಪಾತ್ರವರ್ಗಕ್ಕೆ ತಮನ್ನಾ ಭಾಟಿಯಾ ಎಂಟ್ರಿ ನೀಡಿದ್ದಾರೆ.


ತಮನ್ನಾ, ವಸಿಷ್ಠ ಸಿಂಹ ಮುಖಾಮುಖಿ

# ಡೆವಿಲ್ ಡಿಫರೆಂಟ್

## ಅಪ್‌ಡೇಟ್ ಕೊಟ್ಟ ವಿನಯ್

'ಬಿಗ್ ಬಾಸ್' ಖ್ಯಾತಿಯ ವಿನಯ್ ಗೌಡ ಅವರು ದರ್ಶನ್ ನಟನೆಯ 'ಡೆವಿಲ್' ಚಿತ್ರದಲ್ಲಿ ವಿಲನ್ ಆಗಿ ನಟಿಸುತ್ತಿದ್ದಾರೆ. ಇತ್ತೀಚೆಗೆ ಮೈಸೂರಿನಲ್ಲಿ ನಡೆದ ಚಿತ್ರೀಕರಣದಲ್ಲಿ ಭಾಗಿಯಾಗಿದ್ದರ ಬಗ್ಗೆ ವಿನಯ್ ಮಾತನಾಡಿದ್ದಾರೆ. ಡೆವಿಲ್ ತುಂಬಾ ಡಿಫರೆಂಟ್ ಆಗಿರುತ್ತದೆ ಎಂದು ಹೇಳಿದ್ದಾರೆ. ದರ್ಶನ್ ಸರ್ ಯಾರನ್ನು ಹತ್ತಿರಕ್ಕೆ ಬಿಟ್ಟುಕೊಳ್ಳುತ್ತಿಲ್ಲ. ಅವರು ಅಷ್ಟು ಯಾರೊಂದಿಗೂ ಬೆರೆಯುತ್ತಿಲ್ಲ. ಕೆಲಸ ಮಾಡ್ತಾ ಅವರ ಪಾಡಿಗೆ ಅವರು ಇರುತ್ತಾರೆ. ಶೂಟಿಂಗ್ ಸ್ಥಳದಲ್ಲಿ ದರ್ಶನ್ ಸರ್ ಅವರೊಂದಿಗೆ ಮಾತನಾಡಿದ್ದೀನಿ. ಸೀನ್‌ಗಳ ಬಗ್ಗೆ ಚರ್ಚಿಸಿ ನಟಿಸಿದ್ವಿ. 'ಡೆವಿಲ್'ನಲ್ಲಿ ದರ್ಶನ್ ಸರ್ ನನಗೆ ಹೊಡೆಯೋ ಸೀನ್ ಇತ್ತು. ಅದನ್ನು ತುಂಬಾ ಪ್ರೊಫೆಷನಲ್ ಆಗಿ ನಿರ್ದೇಶಕ ಪ್ರಕಾಶ್ ಸರ್ ಶೂಟ್ ಮಾಡಿದ್ದಾರೆ. ಅದು ಬಿಟ್ಟರೆ ದರ್ಶನ್ ಸರ್ ಜೊತೆ ವೈಯಕ್ತಿಕ ಯಾವುದೇ ಮಾತು ಆಡಿಲ್ಲ. 'ಡೆವಿಲ್' ಸಿನಿಮಾ ತುಂಬಾ ಡಿಫರೆಂಟ್ ಆಗಿರುತ್ತದೆ. ಪ್ರತಿಯೊಂದು ಸೀನ್ ಕೂಡ ಹೀಗೆ ಬರಬೇಕು ಎಂದು ಮಾಡಿಕೊಂಡೆ ಸಿನಿಮಾ ಮಾಡ್ತಿದ್ದಾರೆ. ಅದರ ಬಗ್ಗೆ ಜಾಸ್ತಿ ಬಿಟ್ಟು ಕೊಡೋಕೆ ಆಗೋದಿಲ್ಲ. ಅಂದಹಾಗೆ, ದರ್ಶನ್‌ಗೆ ನಾಯಕಿಯಾಗಿ ರಚನಾ ರೈ ಕಾಣಿಸಿಕೊಂಡಿದ್ದಾರೆ. ನವಗ್ರಹ ನಟಿ ಶರ್ಮಿಳಾ ಮಾಂಡ್ರೆ ಕೂಡ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ತಾರಕ್ ಡೈರೆಕ್ಟರ್ ಮಿಲನಾ ಪ್ರಕಾಶ್ ಈ ಚಿತ್ರಕ್ಕೆ ನಿರ್ದೇಶನ ಮಾಡ್ತಿದ್ದಾರೆ.





# ಸಿನಿಮಾಗೆ ಮಾತ್ರವಲ್ಲ, ನನ್ನ ಜೀವನಕ್ಕೂ ಡಾಲಿ ಕೊಡುಗೆ ಜಾಸ್ತಿ ಇದೆ

'ವಿದ್ಯಾಪತಿ' ಸಿನಿಮಾದಲ್ಲಿ ಕಥಾನಾಯಕಿಯ ಹೆಸರು ವಿದ್ಯಾ. ಆಕೆ ಸೂಪರ್ ಸ್ಟಾರ್ ಆಗಿರುತ್ತಾಳೆ. ಆಕೆಯ ಗಂಡನೇ ವಿದ್ಯಾಪತಿ. ಸ್ಟಾರ್ ನಟಿಯ ಗಂಡನ ಪಾತ್ರದಲ್ಲಿ ನಾಗಭೂಷಣ ಅವರು ಅಭಿನಯಿಸಿದ್ದಾರೆ. ಕಥೆಯ ಎಳೆ ಏನು ಎಂಬುದು ಟ್ರೇಲರ್ ಮೂಲಕ ಗೊತ್ತಾಗಿದೆ. ಹೆಂಡತಿಯ ಹೆಸರು ಹೇಳಿಕೊಂಡು ಗಂಡ ಶೋಕಿ ಮಾಡುತ್ತಾನೆ. ಆಮೇಲೆ ವಿಲನ್ ಎಂಟ್ರಿ ಆಗುತ್ತದೆ. ಖಳನಾಯಕನನ್ನು ಮಟ್ಟಹಾಕಲು ವಿದ್ಯಾಪತಿ ಕರಾಟೆ ಕಲಿಯುತ್ತಾನೆ. ಈ ಎಲ್ಲ ಪ್ರಸಂಗಗಳನ್ನು ಈ ಸಿನಿಮಾದಲ್ಲಿ ತಮಾಷೆಯಾಗಿ ತೋರಿಸಲಾಗಿದೆ. ಡಾಲಿ ಧನಂಜಯ ಅವರು 'ವಿದ್ಯಾಪತಿ' ಸಿನಿಮಾಗೆ ಬಂಡವಾಳ ಹೂಡಿದ್ದಾರೆ. ಗೆಳೆಯನ ಬಗ್ಗೆ ನಾಗಭೂಷಣ ಅವರು ಮಾತನಾಡಿದ್ದಾರೆ. ಈ ಸಿನಿಮಾದಲ್ಲಿ ಡಾಲಿ ಧನಂಜಯ ಅವರು ಒಂದು ಪಾತ್ರ ಕೂಡ ಮಾಡಿದ್ದಾರೆ. ಟ್ರೇಲರ್‌ನಲ್ಲಿ ಆ ಪಾತ್ರ ಹೈಲೈಟ್ ಆಗಿದೆ. 'ಹೀಗೆ ಬಂದು ಹಾಗೆ ಹೋಗುವ ಅತಿಥಿ ಪಾತ್ರ ಅದಲ್ಲ. ಆ ಪಾತ್ರಕ್ಕೂ ಒಂದು ತೂಕ ಇದೆ. ಎಷ್ಟು ತೋರಿಸಬೇಕೋ ಅಷ್ಟನ್ನು ಟ್ರೇಲರ್‌ನಲ್ಲಿ ತೋರಿಸಿದ್ದೇವೆ. ಮಾರ್ಷಲ್ ಆರ್ಟ್ಸ್ ಫೈಟರ್ ಆಗಿ ಅವರು ಕಾಣಿಸಿಕೊಳ್ಳುತ್ತಾರೆ. ಆ ಪಾತ್ರ ತುಂಬಾ ಚೆನ್ನಾಗಿ ಇದ್ದಿದ್ದರಿಂದ ಡಾಲಿ ಅವರು ನಟಿಸಿದ್ದಾರೆ. ಆ ಪಾತ್ರದಿಂದ ಕಥೆಗೆ ಮೇಜರ್ ಟ್ವಿಸ್ಟ್ ಸಿಗುತ್ತದೆ' ಎಂದು ನಾಗಭೂಷಣ ಅವರು ಹೇಳಿದ್ದಾರೆ.

'ಸಿನಿಮಾದಲ್ಲಿ ಮಾತ್ರವಲ್ಲದೇ ನನ್ನ ನಿಜ ಜೀವನದಲ್ಲೂ



ಡಾಲಿಯ ಕೊಡುಗೆ ಬಹಳ ಇದೆ. ನಾವಿಬ್ಬರು 'ಬಡವ ರಾಸ್ಕಲ್' ಸಿನಿಮಾ ಮಾಡಿದೆವು. ಬಳಿಕ ಅವನು ಟಗರು ಪಲ್ಯ ಸಿನಿಮಾ ನಿರ್ಮಾಣ ಮಾಡಿದ. ವಿದ್ಯಾಪತಿ ಸಿನಿಮಾಗೂ ಬಂಡವಾಳ ಹೂಡಿದ್ದಾನೆ. ಇದಕ್ಕಿಂತ ದೊಡ್ಡ ಕೊಡುಗೆ ಏನು ಇರಲು ಸಾಧ್ಯ? ಡಾಲಿ ರೀತಿಯ ಒಬ್ಬ ಗೆಳಯ ಇದ್ದರೆ ನೀವು ಅಂದುಕೊಂಡಿದ್ದನ್ನು ಸಾಧಿಸಬಹುದು. ಈ ಮಾತನ್ನು ನಾನು ಅನೇಕ ಬಾರಿ ಹೇಳುತ್ತೇನೆ' ಎಂದಿದ್ದಾರೆ ನಾಗಭೂಷಣ.

ಈ ಮೊದಲು ನಾಗಭೂಷಣ ಅವರು 'ಟಗರು ಪಲ್ಯ' ಸಿನಿಮಾದಲ್ಲಿ ಹಳ್ಳಿ ಹುಡುಗನ ಪಾತ್ರ ಮಾಡಿದ್ದರು. ಈಗ 'ವಿದ್ಯಾಪತಿ' ಸಿನಿಮಾದಲ್ಲಿ ಸಖತ್ ಸ್ಟೈಲಿಶ್ ಆಗಿ ಕಾಣಿಸಿಕೊಳ್ಳುತ್ತಿದ್ದಾರೆ. 'ಪಾತ್ರ ಭಿನ್ನವಾಗಿದೆ. ಅದಕ್ಕಾಗಿ ಗೆಟಪ್ ಬದಲಾಯಿಸಿದ್ದೇನೆ. ಕೂದಲಿಗೆ ಬಣ್ಣ ಹಾಕಿಸಿದೆ. ರಿಯಲ್ ಲೈಫ್‌ನಲ್ಲಿ ನಾನು ಚಿನ್ನ ಧರಿಸುವವನಲ್ಲ. ಆದರೆ ಈ ಪಾತ್ರಕ್ಕಾಗಿ ಕೈತುಂಬ ಉಂಗುರು, ಚೈನ್ ಹಾಕಿಸಿದರು. ನೋಡಿದ ಕೂಡಲೇ ಜನರಿಗೆ ಬದಲಾವಣೆ ಕಾಣುತ್ತದೆ. ನನಗೆ ಇದು ಚಾಲೆಂಜಿಂಗ್ ಆಗಿತ್ತು. ನಾವಲ್ಲದ ರೀತಿಯ ಪಾತ್ರ ಮಾಡುವುದು ಸವಾಲಿನ ಕೆಲಸ' ಎಂದು ನಾಗಭೂಷಣ ಅವರು ಹೇಳಿದ್ದಾರೆ. ಈವರೆಗೂ ಕಾಮಿಡಿ ಸಿನಿಮಾಗಳ ಮೂಲಕವೇ ನಾಗಭೂಷಣ ಅವರು ಹೆಸರು ಮಾಡಿದ್ದಾರೆ. ಹಾಸ್ಯದ ಸಿನಿಮಾಗಳ ಮೇಲೆ ಅವರಿಗೆ ನಂಬಿಕೆ ಇದೆ. 'ನಾವು ಏನೇ ಹೇಳಿದರೂ ಅದನ್ನು ಹಾಸ್ಯದ ಜೊತೆ ಹೇಳಿದರೆ ಜನರು ಕೇಳುತ್ತಾರೆ. ದೊಡ್ಡ ಫಿಲಾಸಫಿ ಹೇಳುತ್ತೇನೆ ಎಂದು ಜನರಿಗೆ ಬೋರು ಹೊಡೆಸಿದರೆ ಯಾರೂ ನೋಡಲ್ಲ. ಚಾರ್ಲಿ ಚಾಪ್ಲಿನ್ ದೊಡ್ಡ ದೊಡ್ಡ ಫಿಲಾಸಫಿ ಹೇಳಿದ್ದಾರೆ. ಆದರೆ ಅವರು ಬೋರು ಹೊಡೆಸಿಲ್ಲ. ನಮ್ಮ ವಿದ್ಯಾಪತಿ ಸಿನಿಮಾದಲ್ಲಿ ಕೂಡ ಒಂದು ಒಳ್ಳೆಯ ಮೆಸೇಜ್ ಇದೆ. ಹೆಚ್ಚು ಹಾಸ್ಯದ ಸಿನಿಮಾಗಳು ಬರಬೇಕು' ಎಂದಿದ್ದಾರೆ ನಾಗಭೂಷಣ. 'ಪಾತ್ರಕ್ಕಾಗಿ ಸ್ವಲ್ಪ ಕರಾಟೆ ಕಲಿತೆ. ಈ ಸಿನಿಮಾದಲ್ಲಿ ಗರುಡ ರಾಮ್ ಅವರು ವಿಲನ್. ಅವರಿಗೆ ನಾನು ಹೊಡೆಯುತ್ತೇನೆ ಎಂದರೆ ಜನರಿಗೆ ಸ್ವಲ್ಪವಾದರೂ ನಂಬಿಕೆ ಬರುವಂತೆ ಇರಬೇಕು. ಅದಕ್ಕಾಗಿ ಕರಾಟೆ ಕಲಿತೆ. ಈಗ ಮಕ್ಕಳನ್ನು ಎಲ್ಲರೂ ಕರಾಟೆ ಕ್ಲಾಸ್‌ಗೆ ಸೇರಿಸುತ್ತಾರೆ. ಹಾಗಾಗಿ ಮಕ್ಕಳಿಗೆ ಈ ಸನ್ನಿವೇಶಗಳು ಇಷ್ಟ ಆಗುತ್ತದೆ' ಎಂದು ನಾಗಭೂಷಣ ಅವರು ಹೇಳಿದ್ದಾರೆ.

## ಆರ್ಯನ ಆರ್ಭಟಕ್ಕೆ ಚೆನ್ನೈ ಉಡೀಸ್

# ಪಂಜಾಬ್‌ಗೆ 18 ರನ್‌ಗಳ ಜಯ

**ಮೊಹಲಿ:** ಯುವಪ್ರತಿಭೆ ಪ್ರಿಯಾಂಶ್ ಆರ್ಯ ಸಿಡಿಲಬ್ಬರದ ಶತಕದಾಟದ ನೆರವಿನಿಂದ ಚೆನ್ನೈ ವಿರುದ್ಧ ಪಂಜಾಬ್ 18 ರನ್‌ಗಳ ಜಯಗಳಿಸಿದೆ. ಸತತ ಸೋಲುಗಳಿಂದ ಕಂಗೆಟ್ಟಿರುವ ಚೆನ್ನೈ ಸೂಪರ್‌ಕಿಂಗ್ಸ್ ಮತ್ತೊಂದು ಸೋಲಿನೊಂದಿಗೆ ಚೆನ್ನೈ ಅಭಿಮಾನಿಗಳಿಗೆ ನಿರಾಸೆ ಮೂಡಿಸಿದೆ.

ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಪಂಜಾಬ್ ಕಿಂಗ್ಸ್ 20 ಓವರ್‌ಗೆ 6 ವಿಕೆಟ್ ನಷ್ಟಕ್ಕೆ 219 ರನ್ ಗಳಿಸಿತು. ಬೃಹತ್ ಮೊತ್ತದ ಗುರಿ ಬೆನ್ನತ್ತಿದ ಚೆನ್ನೈ ಸೂಪರ್ ಕಿಂಗ್ಸ್ 20 ಓವರ್‌ಗೆ 5 ವಿಕೆಟ್ ನಷ್ಟಕ್ಕೆ 201 ರನ್ ಅಷ್ಟೇ ಗಳಿಸಿ ಸೋಲನುಭವಿಸಿತು.

ಪ್ರಿಯಾಂಕ್ ಆರ್ಯನ ಶತಕದ ಆಟ (103 ರನ್, 42 ಬಾಲ್, 7 ಫೋರ್, 9 ಸಿಕ್ಸರ್) ಪಂಜಾಬ್ ಗೆಲುವಿಗೆ ನೆರವಾಯಿತು. ಮಧ್ಯಮ ಕ್ರಮಾಂಕದಲ್ಲಿ ಆಡಿದ ಬ್ಯಾಟರ್‌ಗಳೂ ನಿರಾಸೆ ಮೂಡಿಸಿದರು. ಆದರೆ, ಕೆಳ ಕ್ರಮಾಂಕದ ಬ್ಯಾಟರ್‌ಗಳಾದ ಶಶಾಂಕ್ ಸಿಂಗ್ (52), ಮಾರ್ಕೊ ಜಾನ್ಸೆನ್ (34) ತಂಡದ ಮೊತ್ತ 200 ಗಡಿ ದಾಟಲು ನೆರವಾದರು.

ಚೆನ್ನೈ ಪರ ಖಲೀಲ್ ಅಹ್ಮದ್, ಆರ್.ಅಶ್ವಿನ್ ತಲಾ 2 ವಿಕೆಟ್ ಪಡೆದರು. ಮುಕೇಶ್ ಚೌಧರಿ, ನೂರ್ ಅಹ್ಮದ್ ತಲಾ 1 ವಿಕೆಟ್ ಪಡೆದರು.

ಪಂಜಾಬ್ ನೀಡಿದ 220 ರನ್ ಗುರಿ ಬೆನ್ನತ್ತಿದ ಚೆನ್ನೈ ಸೋಲನುಭವಿಸಿತು. ಕ್ಯಾಪ್ಟನ್ ರುತುರಾಜ್ ಗಾಯಕ್ವಾಡ್ ಕೇವಲ 1 ರನ್ ಗಳಿಸಿದ್ದು, ತಂಡಕ್ಕೆ ಆಘಾತ ನೀಡಿತು. ರಚಿನ್ ರವೀಂದ್ರ 36 ರನ್ ಗಳಿಸಿ ಔಟಾದರು. ಈ ವೇಳೆ ಜೊತೆಯಾದ ಡಿವೋನ್ ಕಾನ್ವೆ ಮತ್ತು ಶಿವಂ ದುಬೆ ಜವಾಬ್ದಾರಿಯುತ ಆಟವು ತಂಡಕ್ಕೆ ಗೆಲುವಿನ ಭರವಸೆ ಮೂಡಿಸಿತ್ತು. ಕಾನ್ವೆ 49 ಬಾಲ್‌ಗೆ 6 ಫೋರ್, 2 ಸಿಕ್ಸರ್‌ನೊಂದಿಗೆ 69 ರನ್ ಗಳಿಸಿದರು. 42 ರನ್ ಗಳಿಸಿದ್ದ ದುಬೆ ದೊಡ್ಡ ಹೊಡೆತ ಕೊಡಲು ಹೋಗಿ ಕ್ಲೀನ್ ಬೌಲ್ಡ್ ಆದರು. ಬಳಿಕ ಕ್ರೀಸ್‌ಗೆ ಬಂದ ಧೋನಿ 3 ಸಿಕ್ಸರ್ 1 ಫೋರ್ ಹೊಡೆದು ಭರವಸೆ ಮೂಡಿಸಿದ್ದರು. ಈ ಮಧ್ಯೆ ಕಾನ್ವೆ ರಿಟರ್ಡ್ ಔಟ್ ತೆಗೆದುಕೊಂಡರು. ಮ್ಯಾಚ್ ಕುತೂಹಲಕಾರಿಯಾಗಿದ್ದ ಹೊತ್ತಿನಲ್ಲೇ 12 ಬಾಲ್‌ಗೆ 27 ರನ್ ಗಳಿಸಿದ್ದ ಧೋನಿ ಔಟಾಗಿದ್ದು, ಅಭಿಮಾನಿಗಳಲ್ಲಿ ನಿರಾಸೆ ಮೂಡಿಸಿತು. ಕೊನೆಗೆ ಚೆನ್ನೈ 201 ರನ್ ಗಳಿಸಿ ಸೋಲೊಪ್ಪಿಕೊಂಡಿತು.



## ತನ್ನ ಚೊಚ್ಚಲ ಐಪಿಎಲ್‌ನಲ್ಲೇ ಸ್ಫೋಟಕ ಶತಕ

# ಎಬಿಡಿ, ಕೊಹ್ಲಿ ದಾಖಲೆ ಪುಡಿಗಟ್ಟಿದ 24ರ ಯುವಕ

ಮಲ್ಲನ್‌ಪುರ್: ಉದಯೋನ್ಮುಖ ಪ್ರತಿಭೆಗಳಿಗೆ ದೊಡ್ಡ ವೇದಿಕೆಯಾಗಿರುವ ಇಂಡಿಯನ್ ಪ್ರೀಮಿಯರ್ ಲೀಗ್‌ನ 18ನೇ ಆವೃತ್ತಿಯಲ್ಲಿ ಹೊಸ ಹೊಸ ಪ್ರತಿಭೆಗಳು ಬೆಳಕಿಗೆ ಬರಲಾರಂಭಿಸಿವೆ. ಪಂಬಾಬ್ ಕಿಂಗ್ಸ್ ತಂಡದ ಆರಂಭಿಕ ಆಟಗಾರ ಪ್ರಿಯಾಂಶ್ ಆರ್ಯ ತಾನು ಪ್ರವೇಶಿಸಿದ ಚೊಚ್ಚಲ ಆವೃತ್ತಿಯಲ್ಲೇ ಸ್ಫೋಟಕ ಶತಕ ಸಿಡಿಸಿ ದಿಗ್ಗಜರ ದಾಖಲೆಗಳನ್ನ ನುಚ್ಚುನೂರು ಮಾಡಿದ್ದಾರೆ.

ಹೌದು. ಮಲ್ಲನ್‌ಪುರದ ಮಹಾರಾಜ ಯಾದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಸ್ಟೇಡಿಯಂನಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ನಡೆಯುತ್ತಿರುವ ಪಂದ್ಯದಲ್ಲಿ ಕೇವಲ 39 ಎಸೆತಗಳಲ್ಲಿ ಶತಕ ಸಿಡಿಸುವ ಮೂಲಕ ಐಪಿಎಲ್‌ನಲ್ಲಿ ಸ್ಫೋಟಕ ಶತಕ ಸಿಡಿಸಿದ ಟಾಪ್-5 ಬ್ಯಾಟರ್‌ಗಳ ಪಟ್ಟಿ ಸೇರಿದ್ದಾರೆ. ಇದರೊಂದಿಗೆ ಎಬಿ ಡಿವಿಲಿಯರ್ಸ್, ವಿರಾಟ್ ಕೊಹ್ಲಿ ಅವರಂತಹ ದಿಗ್ಗಜರ ದಾಖಲೆಗಳನ್ನ ಪುಡಿಗಟ್ಟಿದ್ದಾರೆ. ಆರ್‌ಸಿಬಿ ತಂಡದ ಮಾಜಿ ಆಟಗಾರ ಎಬಿ ಡಿವಿಲಿಯರ್ಸ್ 2016ರಲ್ಲಿ ಗುಜರಾತ್ ಲಯನ್ಸ್ ವಿರುದ್ಧ 43 ಎಸೆತಗಳಲ್ಲಿ ವೇಗದ ಶತಕ ಸಿಡಿಸಿದ್ರೆ, ವಿರಾಟ್ ಕೊಹ್ಲಿ 2016ರಲ್ಲೇ ಪಂಜಾಬ್ ಕಿಂಗ್ಸ್ ವಿರುದ್ಧ 47 ಎಸೆತಗಳಲ್ಲಿ ವೇಗದ ಶತಕ ಪೂರೈಸಿದ್ದರು.



**ಐಪಿಎಲ್‌ನಲ್ಲಿ ಸ್ಫೋಟಕ ಶತಕ ಸಿಡಿಸಿದ ಟಾಪ್-5 ಬ್ಯಾಟರ್ಸ್**

**ಕ್ರಿಸ್ ಗೇಲ್ – 30 ಎಸೆತ**
**ಯೂಸುಫ್ ಪಠಾಣ್ – 37 ಎಸೆಯ**
**ಡೇವಿಡ್ ಮಿಲ್ಲರ್ – 38 ಎಸೆತ**
**ಟ್ರಾವಿಸ್ ಹೆಡ್ – 39 ಎಸೆತ**
**ಪ್ರಿಯಾಂಶ್ ಆರ್ಯ – 39 ಎಸೆತ**

ಪಂಜಾಬ್ ಪರ ಆರಂಭಿಕ ಆಟಗಾರನಾಗಿ ಕಣಕ್ಕಿಳಿದ ಪ್ರಿಯಾಂಶ್ 19 ಎಸೆತಗಳಲ್ಲಿ 5 ಬೌಂಡರಿ, 4 ಸಿಕ್ಸರ್‌ಗಳೊಂದಿಗೆ ಅರ್ಧಶತಕ ಸಿಡಿಸಿದ್ರೆ, 39 ಎಸೆತಗಳಲ್ಲಿ 7 ಬೌಂಡರಿ, 9 ಭರ್ಜರಿ ಸಿಕ್ಸರ್‌ಗಳೊಂದಿಗೆ ಶತಕ ಪೂರೈಸಿದರು. 245.23 ಸ್ಟ್ರೈಕ್ ರೇಟ್‌ನಲ್ಲಿ ಬ್ಯಾಟ್ ಬೀಸಿದ ಪ್ರಿಯಾಂಶ್ ಆರ್ಯ ಒಟ್ಟಾರೆ ತಾನು ಎದುರಿಸಿದ 42 ಎಸೆತಗಳಲ್ಲಿ 103 ರನ್ (9 ಸಿಕ್ಸರ್, 7 ಬೌಂಡರಿ) ಬಾರಿಸಿ ಔಟಾದರು. ಇದು ತಾನು ಐಪಿಎಲ್‌ನಲ್ಲಿ ಸಿಡಿಸಿದ ಚೊಚ್ಚಲ ಶತಕವಾಗಿದೆ.

## ಶಿವಮೊಗ್ಗ ಡಿಸಿಸಿ ಬ್ಯಾಂಕ್, ಅಧ್ಯಕ್ಷ ಮಂಜುನಾಥ

# ಗೌಡ ನಿವಾಸದ ಮೇಲೆ ಇಡಿ ದಾಳಿ

**ಬೆಂಗಳೂರು/ ಶಿವಮೊಗ್ಗ :** ಶಿವಮೊಗ್ಗ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ಮೇಲೆ ಜಾರಿ ನಿರ್ದೇಶನಾಲಯ ದಾಳಿ ಮಾಡಿ ದಾಖಲೆಗಳನ್ನು ಪರಿಶೀಲಿಸುತ್ತಿದೆ. ಶಿವಮೊಗ್ಗ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ ಗೌಡ ನಿವಾಸ ಸೇರಿದಂತೆ 8 ಕಡೆ ಇಡಿ ದಾಳಿ ನಡೆಸಿದೆ. ಬೆಂಗಳೂರಿನ ಚಾಮರಾಜಪೇಟೆಯ ಅಪೆಕ್ಸ್ ಬ್ಯಾಂಕ್ ಮೇಲೂ ದಾಳಿ ನಡೆದಿದೆ. ಕೋಟ್ಯಂತರ ರೂ ಹಣ ದುರ್ಬಳಕೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ 2018 ರಲ್ಲಿ ಡಿಸಿಸಿ ಬ್ಯಾಂಕ್ ವಿರುದ್ಧ ಪ್ರಕರಣ ದಾಖಲಾಗಿತ್ತು. ಆ ಸಂದರ್ಭದಲ್ಲಿ ಮಂಜುನಾಥ ಗೌಡ ಅವರನ್ನು ಎಸಿಬಿ ಬಂಧನ ಮಾಡಿತ್ತು. ಆದರೆ ಚಾರ್ಜ್ ಶೀಟ್ ಅಲ್ಲಿ ಮಂಜುನಾಥ್ ಗೌಡ ಹೆಸರನ್ನು ಕೈಬಿಡಲಾಗಿತ್ತು. ಬಳಿಕ ಇಡಿ ಇಸಿಐಆರ್ ದಾಖಲು ಮಾಡಿ ತನಿಖೆ ನಡೆಸಲು ಮುಂದಾಗಿತ್ತು. ಇಡಿ ತನಿಖೆಗೆ ಮುಂದಾಗುತ್ತಿದ್ದಂತೆ ಮಂಜುನಾಥ್ ಗೌಡ ಹೈಕೋರ್ಟ್‌ನಿಂದ ತಡೆಯಾಜ್ಞೆ ತಂದಿದ್ದರು. ಇಡಿ ಕಾನೂನು ಹೋರಾಟದ ಬಳಿಕ ಹೈಕೋರ್ಟ್ ತಡೆಯಾಜ್ಞೆ ತೆರವು ಮಾಡಿತ್ತು.



## ಕೃಷಿಹೊಂಡದಲ್ಲಿ ಮುಳುಗಿ ಅಕ್ಕ, ತಂಗಿಯ ದಾರುಣ ಸಾವು

**ಚಿಕ್ಕಬಳ್ಳಾಪುರ:** ಕೃಷಿಹೊಂಡದಲ್ಲಿ ಕಾಲು ಜಾರಿಬಿದ್ದು ಅಕ್ಕ ತಂಗಿ ಇಬ್ಬರು ದಾರುಣವಾಗಿ ಸಾವನ್ನಪ್ಪಿರುವ ಘಟನೆ ಚಿಕ್ಕಬಳ್ಳಾಪುರ ಜಿಲ್ಲೆಯ ಚೇಳೂರು ತಾಲೂಕಿನ ಕುರಪ್ಪಲ್ಲಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರಾಧಾ(17), ಸಾಹಿತಿ(14) ಮೃತ ದುರ್ದೈವಿಗಳು. ಬೇಸಿಗೆ ರಜೆ ಇದ್ದ ಕಾರಣ ತಾಯಿಯ ಜೊತೆ ತೋಟದಲ್ಲಿ ಕೆಲಸ ಮಾಡುವಾಗ ಕೃಷಿ ಹೊಂಡಕ್ಕೆ ಅಳವಡಿಸಿದ್ದ ಪೈಪ್ ಸರಿ ಮಾಡಲು ಹೋಗಿ ಅಕ್ಕ ತಂಗಿ ಇಬ್ಬರು ಕಾಲು ಜಾರಿ ಬಿದ್ದಿದ್ದಾರೆ.

ತಂದೆ ಇಲ್ಲದೇ ಇಬ್ಬರು ಮಕ್ಕಳೇ ಜೀವನಾಧಾರ ಅಂತ ಬದುಕು ಕಟ್ಟಿಕೊಂಡಿದ್ದ ತಾಯಿಯ ಆಕ್ರಂದನ ಈಗ ಮುಗಿಲುಮುಟ್ಟಿದೆ. ಚೇಳೂರು ಪೊಲೀಸರು ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.



## ಬಿಡದಿಯಲ್ಲಿ ವಿಮಾನ ನಿಲ್ದಾಣ ಮಾಡ್ತಿಲ್ಲ, ಅಲ್ಲಿ ಶಿವಕುಮಾರ್ ಲೇಔಟ್ ಮಾಡ್ತಿದ್ದಾರೆ

**ಬೆಂಗಳೂರು:** ನಾವು ಬಿಡದಿಯಲ್ಲಿ ಎರಡನೇ ವಿಮಾನ ನಿಲ್ದಾಣ ಮಾಡುತ್ತಿಲ್ಲ. ಅಲ್ಲಿ ಡಿ.ಕೆ. ಶಿವಕುಮಾರ್ ಲೇ ಔಟ್ ಮಾಡ್ತಿದ್ದಾರೆ. ಗ್ರೇಟರ್ ಬಿಡದಿ ಸೈಟ್ ಮಾಡುತ್ತಿದ್ದಾರೆ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದ್ದಾರೆ.

ಬಿಡದಿ ಸೂಕ್ತವಲ್ಲ ಎಂದು ಈ ಹಿಂದೆ ಟೆಕ್ನಿಕಲ್ ಟೀಂ ವರದಿ ವಿಚಾರವಾಗಿ ಮಾತನಾಡಿದ ಅವರು, ಕನಕಪುರದ ಹಾರೋಹಳ್ಳಿ ಬಳಿ ಒಂದು ಜಾಗ ನೋಡಲಾಗಿದೆ. ಕುಣಿಗಲ್ ರಸ್ತೆ ಬಳಿ ಒಂದು ಜಾಗ ನೋಡಿದ್ದೇವೆ. ವಿಧಾನಸೌಧಕ್ಕೆ 50 ಕಿ.ಮೀ ದೂರ ಇದೆ ಎಂದರು.

ಎರಡನೇ ವಿಮಾನ ನಿಲ್ದಾಣಕ್ಕಾಗಿ ಕೇಂದ್ರ ಅಧ್ಯಯನ ತಂಡದ ಭೇಟಿ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ನಿನ್ನೆ, ಇವತ್ತು, ನಾಳೆ ಅವರು ಇರುತ್ತಾರೆ. ಮೂರು ದಿನ ಇದ್ದು ಸ್ಥಳ ಪರಿಶೀಲನೆ ಮಾಡುತ್ತಾರೆ. ವೀಕ್ಷಣೆ ಮಾಡಿ ದೆಹಲಿಗೆ ಹೋಗುತ್ತಾರೆ. ಜಾಗಗಳ ಬಗ್ಗೆ ರಿಪೋರ್ಟ್ ಕೊಡುತ್ತಾರೆ ಎಂದು ತಿಳಿಸಿದರು.

ದೆಹಲಿಯಿಂದ ನಮಗೆ ಸ್ಥಳ ವರದಿ ಬರಬೇಕು, ಆಮೇಲೆ ನಾವು ಸಮಗ್ರ ಯೋಜನಾ ವರದಿ ಮಾಡಬೇಕಾಗುತ್ತದೆ. ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ದೊಡ್ಡ ದೊಡ್ಡ ಕಂಪನಿಗಳು ಯಾವುದು ಎನ್ನುವುದನ್ನು ನೋಡಬೇಕಾಗುತ್ತದೆ. ಆಮೇಲೆ ಕ್ಯಾಬಿನೆಟ್‌ನಲ್ಲಿ ಚರ್ಚಿಸಬೇಕು, ಕ್ಯಾಬಿನೆಟ್ ಒಪ್ಪಿಗೆ ಬಳಿಕ ಅಂತಿಮ ಆಗಲಿದೆ ಎಂದು ಸ್ಪಷ್ಟಪಡಿಸಿದರು.



## ನೀರಿನ ಬಾಟಲ್ ಖರೀದಿಸುವ ಮುನ್ನ ಎಚ್ಚರ

**ಬೆಂಗಳೂರು:**ಕರ್ನಾಟಕ ರಾಜ್ಯ ಸರ್ಕಾರ ಗೋಬಿ ಮಂಚೂರಿಗೆ, ಕಾಟನ್ ಕ್ಯಾಂಡಿಗಳಿಗೆ ಹಾಕುವ ಕೃತಕ ಬಣ್ಣಗಳು ಸೇರಿದಂತೆ ಪ್ರತಿನಿತ್ಯ ಸೇವಿಸುವ ಸಾಕಷ್ಟು ಆಹಾರಗಳಲ್ಲಿನ ಕಲಬೆರಕೆಗಳಿಗೆ ನಿಷೇಧ ಹೇರುತ್ತಲೇ ಇದೆ. ಇದೀಗ ಬಾಟಲ್ ಮೂಲಕ ಪೂರೈಕೆ ಆಗುವ ಕುಡಿಯುವ ನೀರು ಶೇಕಡ 50ರಷ್ಟು ಕಳಪೆ ಎಂದು ಆಹಾರ ಇಲಾಖೆಯ ವರದಿ ತಿಳಿಸಿದೆ. ಈ ಕುರಿತು ವಿಕಾಸಸೌಧದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಹತ್ತರ ಸುದ್ದಿಗೋಷ್ಠಿ ನಡೆಸಿದ್ದಾರೆ. ಈಗಾಗಲೇ 296 ಕುಡಿಯುವ ನೀರಿನ ಬಾಟಲ್ ಮಾದರಿಗಳ ಟೆಸ್ಟ್ ಮಾಡಿದ್ದು, ಇದರಲ್ಲಿ 72 ಸುರಕ್ಷಿತ ಹಾಗೂ 95 ಮಾದರಿಗಳು ಅಸುರಕ್ಷಿತ ಎಂದು ವರದಿಯಾಗಿದೆ. ಇದಲ್ಲದೇ ಹಸಿರು ಬಟಾಣಿಗೆ ಹಸಿರು ಕಲರ್ ಬರಿಸಲು ಟೆಟ್ರಾರ್ಜಿನ್ ಕೆಮಿಕಲ್ ಬಳಸಿರುವ ಆತಂಕಕಾರಿ ವಿಷಯ ಹೊರಬಿದ್ದಿದೆ. ಕುಡಿಯುವ ನೀರಿನ ಬಾಲಿ ಮಾತ್ರವಲ್ಲದೇ ಖಾರ ಮಿಕ್ಚರ್, ಪನ್ನೀರ್ ಹಾಗೂ ಐಸ್‌ಕ್ರೀಂ ಘಟಕಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ತಯಾರಿಕಾ ಘಟಕಗಳಲ್ಲಿ ಲೋಪ ಕಂಡುಬಂದ ಹಿನ್ನೆಲೆ ನೋಟಿಸ್ ನೀಡಲಾಗಿರುವುದಾಗಿ ಗುಂಡೂರಾವ್ ಹೇಳಿಕೆ ನೀಡಿದ್ದಾರೆ.

## ಪ್ರಿಯಾಂಕ ಉತ್ತಮ ಸಾಧನೆ

**ಮೈಸೂರು:** ಮೈಸೂರಿನ ಶಾರದಾ ವಿಲಾಸ ಪದವಿ ಪೂರ್ವ ಕಾಲೇಜಿನ ಪ್ರಿಯಾಂಕ ಟಿ ಯು 600ಕ್ಕೆ 534 ಅಂಕ ಪಡೆದು ಉತ್ತಮ ಸಾಧನೆ ಮಾಡಿದ್ದಾರೆ. ವಿಜ್ಞಾನ ವಿಭಾಗ (ಪಿಸಿಎಂಸಿ) ವಿಭಾಗದಲ್ಲಿ ಕನ್ನಡ 96, ಇಂಗ್ಲೀಷ್ 94 , ಕಂಪ್ಯೂಟರ್ ಸೈನ್ಸ್ 95, ಭೌತಶಾಸ್ತ್ರ 89 , ರಸಾಯನಶಾಸ್ತ್ರ 76 , ಗಣಿತ 84 ಅಂಕ ಗಳಿಸಿದ್ದಾರೆ.



Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com